**ಸಂಪುಟ:** 05 **ಸಂಚಿಕೆ:** 32 **ಪುಟಗಳು:** 08 **ಬುಧವಾರ** 16 ಏಪ್ರಿಲ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

**ಮುಂಜಾನೆ ಮಾತು**

ದೇಶದ ಅತ್ಯುತ್ತಮ ಮಿದುಳುಗಳು ತರಗತಿಯ ಕೊನೆಯ ಬೆಂಚುಗಳಲ್ಲಿ ಕಂಡುಬರಬಹುದು.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಅಭಿವೃದ್ಧಿ ಅಧಿಕಾರಿ ಧರ್ಮೇಂದ್ರ ಕುಮಾರ್ ನಿವಾಸಕ್ಕೆ ಎಚ್ ಡಿ ರೇವಣ್ಣ ಭೇಟಿ



**ಉದಯವಾಹಿನಿ, ಅರಸೀಕೆರೆ**

ಉದಯ ವಾಹಿನಿ ವರದಿ

ಮಾಜಿ ಸಚಿವರು, ಜಾತ್ಯತೀತ ಜನತಾ ಪಕ್ಷದ ಹಿರಿಯ ಮುಖಂಡರು, ಹಾಸನ ಕೆಎಂಎಫ್ ಅಧ್ಯಕ್ಷರು ಆದ ಎಚ್ ಡಿ ರೇವಣ್ಣ ಅವರು ಖಾಸಗಿ ಕಾರ್ಯಕ್ರಮದ ನಿಮಿತ್ತ ಅರಸೀಕೆರೆ ತಾಲೂಕಿನ ಶ್ಯಾನೆಗೆರೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಧರ್ಮೇಂದ್ರ ಕುಮಾರ್ ರವರ ನಿವಾಸಕ್ಕೆ ಭೇಟಿ ನೀಡಿದ್ದರು. ಎಚ್.ಡಿ.ರೇವಣ್ಣ ಅವರು ಮಾತನಾಡಿ ಧರ್ಮೇಂದ್ರ ಕುಮಾರ್ ಅವರ ತಂದೆ ರಂಗಸ್ವಾಮಿಯವರು ನನ್ನ ಹಳೆಯ ಸ್ನೇಹಿತರು ಹೀಗಾಗಿ ಗ್ರಾಮದ ಧಾರ್ಮಿಕ ಕಾರ್ಯಕ್ರಮಕ್ಕೆ ನಾವು ಆಗಮಿಸಿದ್ದು ನಮಗೆ ವೈಯಕ್ತಿಕವಾಗಿ ಸಂತೋಷ ತಂದಿದೆ ಎಂದು ಎಚ್.ಡಿ.ರೇವಣ್ಣ ತಿಳಿಸಿದರು

## ಜಾರಕಿಹೊಳಿ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಕೆಗೆ ಹೈಕೋರ್ಟ್ ಅನುಮತಿ

**ಉದಯವಾಹಿನಿ, ಬೆಂಗಳೂರು**


ಕರ್ನಾಟಕ ಸಹಕಾರಿ ಅಪೆಕ್ಸ್ ಬ್ಯಾಂಕ್‌ನಿಂದ 439 ಕೋಟಿ ರೂ. ಸಾಲ ಪಡೆದು ಷರತ್ತುಗಳನ್ನು ಉಲ್ಲಂಘಿಸಿದ ಆರೋಪ ಪ್ರಕರಣದಲ್ಲಿ ಬಿಜೆಪಿ ಶಾಸಕ ಮತ್ತು ಮಾಜಿ ಸಚಿವ ರಮೇಶ್ ಜಾರಕಿಹೊಳಿ ವಿರುದ್ಧ ವಿಶೇಷ ನ್ಯಾಯಾಲಯದಲ್ಲಿ ಆರೋಪಪಟ್ಟಿ ಸಲ್ಲಿಸಲು ಕರ್ನಾಟಕ ಹೈಕೋರ್ಟ್‌ನಿಂದ ಸಿಐಡಿಗೆ ಅನುಮತಿ ನೀಡಲಾಗಿದೆ. ರಮೇಶ್ ಜಾರಕಿಹೊಳಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಪ್ರದೀಪ್ ಸಿಂಗ್ ಯೆರೂರ ಅವರಿದ್ದ ವಿಶೇಷ ನ್ಯಾಯಪೀಠ ಮಂಗಳವಾರ ಈ ಆದೇಶ ನೀಡಿದೆ. ಅಲ್ಲದೆ, ಸಿಐಡಿ ಪೊಲೀಸರು ನಡೆಸಿದ ತನಿಖೆಗೆ ಅರ್ಜಿದಾರರು ಸಹಕರಿಸಿದ್ದು, ತನಿಖೆ ಪೂರ್ಣಗೊಂಡಿದೆ. ಆರೋಪಪಟ್ಟಿ ಸಲ್ಲಿಕೆಗೆ ಸಿದ್ಧವಾಗಿದ್ದು, ವಿಶೇಷ ನ್ಯಾಯಾಲಯಕ್ಕೆ ಸಲ್ಲಿಸಬಹುದಾಗಿದೆ. ಆದರೆ, ವಿಶೇಷ ನ್ಯಾಯಾಲಯವು ಆರೋಪ ಪಟ್ಟಿ ಕುರಿತು ಮುಂದಿನ ಆದೇಶದವರೆಗೂ ಯಾವುದೇ ಕ್ರಮಕ್ಕೆ ಮುಂದಾಗುವಂತಿಲ್ಲಎಂದು ನ್ಯಾಯಪೀಠ ಆದೇಶಿಸಿದೆ. ವಿಚಾರಣೆ ವೇಳೆ ನ್ಯಾಯಾಲಯ ''ಜಾರಕಿಹೊಳಿ ಅವರನ್ನು ಪ್ರಕರಣ ಸಂಬಂಧ ಸಲ್ಲಿಕೆಯಾಗಲಿರುವ ಆರೋಪಪಟ್ಟಿಯಲ್ಲಿ ದೋಷಮುಕ್ತಗೊಳಿಸಲಾಗಿದೆಯೇ ಇಲ್ಲವೇ ಆರೋಪಿಯನ್ನಾಗಿ ಮಾಡಲಾಗಿದೆಯೇ,'' ಎಂದು ಸರಕಾರಿ ವಕೀಲರನ್ನು ಪ್ರಶ್ನಿಸಿತು. ಅದಕ್ಕೆ ವಕೀಲರು, ''ಪ್ರಕರಣ ಸಂಬಂಧ 2,000 ಪುಟಗಳ ಆರೋಪ ಪಟ್ಟಿ ಸಿದ್ಧಪಡಿಸಿದ್ದು, ಅರ್ಜಿದಾರರನ್ನು ಆರೋಪಿಯನ್ನಾಗಿಸಲಾಗಿದೆ'' ಎಂದು ವಿವರಿಸಿದರು.

## ಪ್ರವೀಣ್ ನೆಟ್ಟಾರು ಹತ್ಯೆ ಪ್ರಕರಣ; ಇನ್ನೂ ನಾಲ್ವರ ವಿರುದ್ಧ ಚಾರ್ಜ್‌ಶೀಟ್

**ಉದಯವಾಹಿನಿ, ಬೆಂಗಳೂರು**

2022ರಲ್ಲಿ ನಡೆದ ಹಿಂದೂ ಕಾರ್ಯಕರ್ತ ಪ್ರವೀಣ್ ನೆಟ್ಟಾರು ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಎನ್‌ಐಎ ಇನ್ನೂ 4 ಆರೋಪಿಗಳ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದೆ. ಇದುವರೆಗೂ ಈ ಪ್ರಕರಣದಲ್ಲಿ 21 ಆರೋಪಿಗಳನ್ನ ಬಂಧಿಸಲಾಗಿದ್ದು, ಓರ್ವ ಮೃತಪಟ್ಟಿದ್ದಾನೆ. 2022ರ ಜು.26ರಂದು ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ತಾಲ್ಲೂಕಿನ ಬೆಳ್ಳಾರೆಯಲ್ಲಿ ಪ್ರವೀಣ್ ನೆಟ್ಟಾರು ಹತ್ಯೆ ನಡೆದಿತ್ತು. ಅಬ್ದುಲ್ ರೆಹಮಾನ್, ನೌಷದ್, ಅಬ್ದುಲ್ ನಾಸೀರ್, ಅತೀಕ್ ಅಹ್ಮದ್ ವಿರುದ್ಧ ಎನ್‌ಐಎ ವಿಶೇಷ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲಾಗಿದೆ. ಈ ನಾಲ್ವರಲ್ಲಿ ಮೂವರು ತಲೆಮರೆಸಿಕೊಂಡಿದ್ದಾರೆ ಮತ್ತು ಅವರನ್ನು ಪತ್ತೆಹಚ್ಚಲು ಪ್ರಯತ್ನಗಳು ನಡೆಯುತ್ತಿವೆ ಎಂದು ಎನ್‌ಐಎ ತಿಳಿಸಿದೆ. ಹೀಗಾಗಿ, ಈ ಪ್ರಕರಣದ ಒಟ್ಟು ಆರೋಪಿಗಳ ಸಂಖ್ಯೆ 27ಕ್ಕೆ ಏರಿಕೆಯಾಗಿದೆ. ನಿಷೇಧಿತ ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾ (ಪಿಎಫ್‌ಐ) ಕಾರ್ಯಕರ್ತರು 2022 ರಲ್ಲಿ ಬಿಜೆಪಿ ಯುವ ಮೋರ್ಚಾ ಸದಸ್ಯ ಪ್ರವೀಣ್ ನೆಟ್ಟಾರು ಅವರನ್ನು ಹತ್ಯೆ ಮಾಡಿದ್ದಾರೆ ಎಂದು ಆರೋಪಿಸಲಾಗಿದ್ದು, ಎನ್‌ಐಎ ತನ್ನ ಎರಡನೇ ಪೂರಕ ಆರೋಪಪಟ್ಟಿಯಲ್ಲಿ ಅಬ್ದುಲ್ ನಾಸಿರ್, ನೌಶಾದ್, ಅಬ್ದುಲ್ ರೆಹಮಾನ್ ಮತ್ತು ಅತೀಕ್ ಅಹ್ಮದ್ ವಿರುದ್ಧ ಭಾರತೀಯ ದಂಡ ಸಂಹಿತೆ ಮತ್ತು ಕಾನೂನುಬಾಹಿರ ಚಟುವಟಿಕೆಗಳು (ತಡೆಗಟ್ಟುವಿಕೆ) ಕಾಯ್ದೆ, 1967ರ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಆರೋಪಪಟ್ಟಿ ಸಲ್ಲಿಸಿದೆ. ತಲೆಮರೆಸಿಕೊಂಡಿರುವ ಮೂವರು ಕರ್ನಾಟಕದ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳು ಮತ್ತು ತಮಿಳುನಾಡಿನ ಈರೋಡ್ ಜಿಲ್ಲೆಯಲ್ಲಿ ಮೂವರು ಪ್ರಮುಖ ಆರೋಪಿಗಳಿಗೆ ಆಶ್ರಯ ನೀಡಿದ್ದರು.

# ಲಾರಿ ಮುಷ್ಕರ ಬದುಕು ದುಸ್ತರ



**ಡೀಸೆಲ್ ಬೆಲೆ ಏರಿಕೆ ಖಂಡಿಸಿ, ವಿವಿಧ ಬೇಡಿಕೆಗಳ ಈಡೇರಿಕೆಗೆ ಲಾರಿ ಮಾಲೀಕರ ಸಂಘ ಕರೆ ನೀಡಿರುವ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಮೈಸೂರಿನಲ್ಲಿ ಉತ್ತಮ ಪ್ರತಿಕ್ರಿಯೆ ಸಿಕ್ಕಿದೆ. ಮಧ್ಯ ರಾತ್ರಿಯಿಂದಲೇ ಸುಮಾರು 9ಸಾವಿರಕ್ಕೂ ಹೆಚ್ಚು ಲಾರಿ, ಸರಕು ಸಾಗಾಣಿಕೆ ವಾಹನಗಳ ಸಂಚಾರ ಸ್ಥಗಿತಗೊಂಡಿದೆ. ನಮ್ಮ ಬೇಡಿಕೆ ಈಡೇರುವವರೆಗೂ ಮುಷ್ಕರ ವಾಪಸ್ ಪಡೆಯುವುದಿಲ್ಲ ಎಂದು ಮೈಸೂರು ಲಾರಿ ಮಾಲೀಕರ ಸಂಘ ಸ್ಪಷ್ಟಪಡಿಸಿದೆ.**

### ಲಾರಿ ಮುಷ್ಕರ ಕೈಬಿಡಲು ಸಾರಿಗೆ ಸಚಿವ ಮನವಿ



ಲಾರಿ ಮಾಲೀಕರ ಸಂಘದ ಪದಾಧಿಕಾರಿಗಳು, ಮುಖಂಡರೊಂದಿಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಮಾತುಕತೆ ನಡೆಸಿದ್ದು, ಮುಷ್ಕರ ಕೈಬಿಡುವಂತೆ ಮನವಿ ಮಾಡಿದ್ದಾರೆ. ಮುಷ್ಕರಕ್ಕೆ ಕರೆ ನೀಡಿರುವ ರಾಜ್ಯ ಲಾರಿ ಮಾಲೀಕರ, ಏಜೆಂಟರ ಸಂಘದ ಪದಾಧಿಕಾರಿಗಳು ಮತ್ತು ಮುಖಂಡರೊಂದಿಗೆ ಕರೆ ಮಾಡಿ ಅವರು ಮಾತುಕತೆ ನಡೆಸಿದರು. ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ಬೆಲೆ ಕಳೆದ ಹತ್ತು ವರ್ಷಗಳಲ್ಲಿ ಹಲವು ಬಾರಿ ಹೆಚ್ಚಳ ಮಾಡಿದೆ. ಕಚ್ಚಾತೈಲದ ಬೆಲೆ ಕಡಿಮೆಯಾಗಿದ್ದರೂ ದರ ಹೆಚ್ಚಿಸಿದ ಕೇಂದ್ರ ಸರ್ಕಾರದ ವಿರುದ್ಧ ಒಮ್ಮೆಯೂ ಮುಷ್ಕರ ಮಾಡಿಲ್ಲ. ರಾಜ್ಯ ಸರ್ಕಾರ 2 ಹೆಚ್ಚಿಸಿದೆ ಎಂದು ಕರೆ ನೀಡಿರುವುದರ ಉದ್ದೇಶ ಏನು ಎಂದು ಪದಾಧಿಕಾರಿಗಳನ್ನು ಸಚಿವರು ಪ್ರಶ್ನಿಸಿದರು. 2015ರಲ್ಲಿ ಡೀಸೆಲ್ ದರ ಲೀಟರ್‌ಗೆ 49.54 ಇತ್ತು. ಅದನ್ನು 91.05ಕ್ಕೆ ಕೇಂದ್ರ ಸರ್ಕಾರ ಹೆಚ್ಚಿಸಿದೆ. ಕೇಂದ್ರದ ಆರ್ಥಿಕ ನೀತಿಯಿಂದಾಗಿ ರಾಜ್ಯ ಸರ್ಕಾರಗಳು ಕೆಲವೊಂದು ತೆರಿಗೆಗಳನ್ನು ವಿಧಿಸುವ ಅನಿವಾರ್ಯಕ್ಕೆ ಒಳಗಾಗಿವೆ.

### ಲಾರಿ ಮಾಲೀಕರ ಬೇಡಿಕೆಗಳು

- ಡೀಸೆಲ್ ಮೇಲಿನ ತೆರಿಗೆ ಹೆಚ್ಚಳ ಆದೇಶವನ್ನ ಹಿಂಪಡೆಯಬೇಕು
- ಫಿಟ್ನೆಸ್ ಸರ್ಟಿಫಿಕೇಟ್ ಶುಲ್ಕ ಏರಿಕೆ ವಾಪಸ್ ಪಡೆಯುವುದು ಅವಶ್ಯ
- ರಾಜ್ಯದ ಹೆದ್ದಾರಿಗಳಲ್ಲಿ ಟೋಲ್ ಗಳಲ್ಲಿ ಹಣ ವಸೂಲಿ ನಿಲ್ಲಬೇಕು
- ಗಡಿಗಳಲ್ಲಿ ಆರ್‌ಟಿಓ ಚೆಕ್‌ಪೋಸ್ಟ್‌ಗಳನ್ನು ತೆರವು
- ಗೂಡ್ಸ್ ವಾಹನಗಳಿಗೆ ಬೆಂಗಳೂರು ಪ್ರವೇಶಕ್ಕೆ ವಿಧಿಸಿರುವ ನಿರ್ಬಂಧ ಆದೇಶ ಹಿಂಪಡೆಯಬೇಕು
- ಚಾಲಕರ ಮೇಲಿನ ಹಲ್ಲೆ, ದೌರ್ಜನ್ಯಗಳನ್ನು ನಿಲ್ಲಬೇಕು

### ಮಾತುಕತೆಗೆ ಸಿದ್ಧ

ಲಾರಿಗಳ ಮುಷ್ಕರದಿಂದ ತಕ್ಷಣಕ್ಕೆ ವ್ಯತ್ಯಯಗಳು ಆಗದಿದ್ದರೂ ಸಹ ಅನಿರ್ದಿಷ್ಟಾವಧಿಗೆ ಕರೆ ನೀಡಿರುವುದರಿಂದ 3-4 ದಿನಗಳಲ್ಲಿ ಮುಷ್ಕರದ ಬಿಸಿ ತಟ್ಟಬಹುದು. ಸರ್ಕಾರ ಮಾತುಕತೆಗೆ ಕರೆದರೆ ನಾವು ಸಿದ್ಧರಿದ್ದೇವೆ ಎಂದು ರಾಜ್ಯ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಜಿ.ಆರ್. ಷಣ್ಮುಖಪ್ಪ ತಿಳಿಸಿದ್ದಾರೆ. ಲಾರಿ ಮಾಲೀಕರು ರಾಜ್ಯಾದ್ಯಂತ ಮುಷ್ಕರಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಅಗತ್ಯ ವಸ್ತುಗಳ ಪೂರೈಕೆ ಮತ್ತು ಸಾಗಾಣೆಯ ಮೇಲೆ ಪರಿಣಾಮ ಬೀರಲಿದ್ದು ಇದು ಸರ್ಕಾರದ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.

**9ಸಾವಿರಕ್ಕೂ ಹೆಚ್ಚು ಲಾರಿಗಳ ಸಂಚಾರ ಸ್ಥಗಿತ**

**ಡೀಸೆಲ್ ಬೆಲೆ ಏರಿಕೆ, ಟೋಲ್ ದರ ಹೆಚ್ಚಳ; ಖಂಡನೆ**

**ಲಾರಿ ಮಾಲೀಕರ ಸಂಘ ಕರೆ ನೀಡಿರುವ ಅನಿರ್ದಿಷ್ಟಾವಧಿ ಮುಷ್ಕರ**

**ಮೈಸೂರಿನಲ್ಲಿ ಉತ್ತಮ ಪ್ರತಿಕ್ರಿಯೆ, ವ್ಯಾಪಾರ ವಹಿವಾಟು ಕುಸಿತ**

### ಲಾರಿ ಮಾಲೀಕರ ಸಂಘದ ಹೇಳಿದ್ದೇನು..

ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಟೋಲ್ ಗಳನ್ನು ಮಾಡಿದ್ದಾರೆ. ಅದರ ಅವಶ್ಯಕತೆ ಏನಿದೆ. ಟ್ಯಾಕ್ಸ್ ಕೊಡುತ್ತಿದ್ದೇವೆ. ಇದರ ಹೊರತಾಗಿಯೂ ನೀವು ಟೋಲ್ ಹಣ ಸಂಗ್ರಹಿಸುತ್ತಿರುವುದು ನಮಗೆ ಹೊರೆಯಾಗಿದೆ. ಇದನ್ನು ತೆಗೆಯಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.ರಾಜ್ಯದ ಎಲ್ಲಾ ಜಿಲ್ಲೆ, ತಾಲ್ಲೂಕು ಮಟ್ಟದಲ್ಲಿ ಲಾರಿ ಮಾಲೀಕರು ಒಗ್ಗಟ್ಟಾಗಿ ಹೋರಾಡುತ್ತಿದ್ದಾರೆ. ಇದು ಮುಗಿಯುವವರೆಗೂ ನಿಲ್ಲುವುದಿಲ್ಲ. ಸರ್ಕಾರ ಇದಕ್ಕೆ ಒತ್ತು ಕೊಟ್ಟು ಆದಷ್ಟು ಬೇಗ ಇದಕ್ಕೆ ಒಂದು ದಾರಿ ಮಾಡಿಕೊಡಬೇಕು ಎಂದು ಹೇಳಿದರು.

**ಉದಯವಾಹಿನಿ, ಬೆಂಗಳೂರು**

ಡೀಸೆಲ್ ಬೆಲೆ ಏರಿಕೆ ಖಂಡಿಸಿ, ವಿವಿಧ ಬೇಡಿಕೆಗಳ ಈಡೇರಿಕೆಗೆ ಲಾರಿ ಮಾಲೀಕರ ಸಂಘ ಕರೆ ನೀಡಿರುವ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಮೈಸೂರಿನಲ್ಲಿ ಉತ್ತಮ ಪ್ರತಿಕ್ರಿಯೆ ಸಿಕ್ಕಿದೆ. ಮಧ್ಯ ರಾತ್ರಿಯಿಂದಲೇ ಸುಮಾರು 9ಸಾವಿರಕ್ಕೂ ಹೆಚ್ಚು ಲಾರಿ, ಸರಕು ಸಾಗಾಣಿಕೆ ವಾಹನಗಳ ಸಂಚಾರ ಸ್ಥಗಿತಗೊಂಡಿದೆ.

ನಮ್ಮ ಬೇಡಿಕೆ ಈಡೇರುವವರೆಗೂ ಮುಷ್ಕರ ವಾಪಸ್ ಪಡೆಯುವುದಿಲ್ಲ ಎಂದು ಮೈಸೂರು ಲಾರಿ ಮಾಲೀಕರ ಸಂಘ ಸ್ಪಷ್ಟಪಡಿಸಿದೆ. ಮೈಸೂರು ಲಾರಿ ಮಾಲೀಕರ ಸಂಘದ ಕಾರ್ಯದರ್ಶಿ ಸ್ವಾಮಿ ಮಾತನಾಡಿ, ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ರಾಜ್ಯ ಲಾರಿ ಮಾಲೀಕರ ಸಂಘ ಕರೆ ನೀಡಿರುವ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಮೈಸೂರಿನಲ್ಲಿ ಉತ್ತಮ ಬೆಂಬಲ ದೊರೆತಿದೆ. ನಗರದಲ್ಲಿರುವ 9ಸಾವಿರಕ್ಕೂ ಹೆಚ್ಚು ಲಾರಿ, ಇತರ ಸರಕು ಸಾಗಣಿಕೆ ವಾಹನಗಳು ರಸ್ತೆಗಿಳಿಯದೆ ನಿಂತು ಮುಷ್ಕರಕ್ಕೆ ಬೆಂಬಲ ಸೂಚಿಸಿವೆ ಎಂದರು. ಡೀಸೆಲ್ ದರ ಕಡಿಮೆ ಮಾಡಬೇಕು, ರಾಜ್ಯ ಹೆದ್ದಾರಿ ಟೋಲ್ ದರ ರದ್ದುಗೊಳಿಸಬೇಕು, ಆರ್‌ಟಿಓ ಚೆಕ್‌ಪೋಸ್ಟ್ ರದ್ದುಗೊಳಿಸಬೇಕು. ಎಫ್‌ಸಿ ಶುಲ್ಕ ಕಡಿಮೆ ಮಾಡಬೇಕು ಎಂಬುದೂ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಮುಷ್ಕರ ನಡೆಸಲಾಗುತ್ತಿದೆ ಎಂದು ತಿಳಿಸಿದರು.

**1** ಡೀಸೆಲ್ ದರ ಕಡಿಮೆ ಮಾಡಬೇಕೆಂದು ಒತ್ತಾಯಿಸಿ ಲಾರಿ ಮಾಲೀಕರು ಮುಷ್ಕರ.

**2** ರಾಜ್ಯದ ಲಾರಿ ಮಾಲೀಕರ ಸಂಘಗಳ ಒಕ್ಕೂಟವು ಡೀಸೆಲ್ ದರ ಕಮಿಯ ಒತ್ತಾಯದೊಂದಿಗೆ ಮುಷ್ಕರಕ್ಕೆ ಮುಂದಾಗಿದೆ.

**3** ಏಕೆಂದರೆ ಕಳೆದ ವರ್ಷದಲ್ಲಿ ದರವು 5 ರೂ.ಹೆಚ್ಚಾಗಿದೆ.

ತುಮಕೂರು ಲಾರಿ ಮಾಲೀಕರ ಸಂಘದ ಅಧ್ಯಕ್ಷ ಮುಜಾಮಿಲ್ ಪಾಷಾ ಅವರ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು. ಹೆದ್ದಾರಿಗಳಲ್ಲಿ ಸಾಗುತ್ತಿದ್ದ ಲಾರಿಗಳನ್ನು ಸಂಘದ ಸದಸ್ಯರು ಅಡ್ಡಗಟ್ಟಿದರು. ಅಲ್ಲದೇ, ಬಂದ್‌ಗೆ ಬೆಂಬಲ ನೀಡುವಂತೆ ಲಾರಿ ಮಾಲೀಕರಲ್ಲಿ ಹಾಗೂ ಚಾಲಕರಲ್ಲಿ ಮನವಿ ಮಾಡಿದರು.

ಈ ಬಗ್ಗೆ ಲಾರಿ ಮಾಲೀಕ ಮಾತನಾಡಿ, ರಾಜ್ಯ ಸರ್ಕಾರ ಸುಮಾರು ಐದು ತಿಂಗಳಿನಿಂದ ಡೀಸೆಲ್ ಬೆಲೆ 5ರೂ ಏರಿಕೆ ಮಾಡಿದೆ. ಲಾರಿ ಮಾಲೀಕರಿಗೆ ಹೊಡೆತ ಬೀಳುತ್ತಿದೆ. ಸ್ಪೇರ್ ಪಾರ್ಟ್ಸ್ ಬೆಲೆ ಜಾಸ್ತಿಯಾಗುತ್ತಿದೆ. ಬಾರ್ಡರ್‌ನಲ್ಲಿ ಆರ್‌ಟಿಓ ಚೆಕ್‌ಪೋಸ್ಟ್ ತೆಗೆಯಬೇಕು.

ಜಿಎಸ್ಟಿ ಬಂದ ಮೇಲೆ ಎಲ್ಲಾವೂ ಆನ್‌ಲೈನ್ ಆಗಿದೆ. ನಮಗೆ ಚೆಕ್‌ಪೋಸ್ಟ್ ಬೇಕಾಗಿಲ್ಲ. ನಾವು ರೋಡ್ ಟ್ಯಾಕ್ಸ್ ಕಟ್ಟುತ್ತಿದ್ದೇವೆ. ನಮಗೆ ಟೋಲ್ ಏಕೆ ಬೇಕು.. ಅದನ್ನೂ ಕೂಡಾ ತೆರವುಗೊಳಿಸಬೇಕು ಎಂದು ರಾಜ್ಯಸರ್ಕಾರಕ್ಕೆ ಮನವಿ ಮಾಡುತ್ತೇವೆ ಎಂದರು.

**ಲಾರಿ ಮುಷ್ಕರಕ್ಕೆ ಕರೆ:** ಧಾರವಾಡ ಜಿಲ್ಲಾ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಗಿರೀಶ ಮಲನಾಡ್ ಮಾತನಾಡಿ, ಲಾರಿ ಮಾಲೀಕರ ಸಂಘಗಳ ಒಕ್ಕೂಟದ ಅಧ್ಯಕ್ಷ ಡಾ.ಷಣ್ಮುಖಪ್ಪ ಅವರನ್ನು ಸಿಎಂ ಸಿದ್ದರಾಮಯ್ಯ ಅವರು ಸಭೆಗೆ ಆಹ್ವಾನಿಸಿದ್ದಾರೆ. ನಮ್ಮ ಪ್ರಮುಖ ಐದು ಬೇಡಿಕೆ ಇದೆ. ಈ ಬೇಡಿಕೆಗಳಿಗೆ ದಾರಿ ತೋರಿಸುತ್ತಾರೆ ಎಂದು ನಾವು ಕಾಯುತ್ತಿದ್ದೇವೆ. ಭರವಸೆ ಈಡೇರಿಸಿದರೆ ಮುಷ್ಕರ ಹಿಂಪಡೆಯುತ್ತೇವೆ. ಅನಿರ್ದಿಷ್ಟಾವಧಿ ಲಾರಿ ಮುಷ್ಕರ ಮುಂದುವರೆಯಲಿದೆ ಎಂದು ತಿಳಿಸಿದರು.

## ಕಲಬುರಗಿಯಲ್ಲಿ ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರ ಸ್ಥಾಪನೆ


**ಉದಯವಾಹಿನಿ, ಕಲಬುರಗಿ**

ಉನ್ನತ ವಿದ್ಯಾಭ್ಯಾಸಕ್ಕೆ ಆರ್ಥಿಕ ನೆರವಿಲ್ಲದೆ ಸಂಕಷ್ಟದಲ್ಲಿರುವ ಯುವಜನತೆ ಸರ್ಕಾರದಿಂದ ಗುಡ್‌ನ್ಯೂಸ್ ಸಿಕ್ಕಿದೆ. ಯುವ ಸಮೂಹಕ್ಕೆ ಉದ್ಯೋಗದ ಜೊತೆಗೆ ವಿಶೇಷ ರೀತಿಯ ಕಲಿಕೆ ಒದಗಿಸಿಕೊಡುವ ನಿಟ್ಟಿನಲ್ಲಿ ಕಲಬುರಗಿಯಲ್ಲಿ ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರವನ್ನು ಸ್ಥಾಪಿಸಲಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಏಪ್ರಿಲ್ 16 ರಂದು ಉದ್ಘಾಟಿಸಲಿದ್ದಾರೆ.

**ಏನೆಲ್ಲ ಕೋರ್ಸ್ ಇರಲಿದೆ;** ಕೈಗಾರಿಕಾ ತರಬೇತಿ, ಯುವ ಮತ್ತು ಮಹಿಳೆಯರ ಸಬಲೀಕರಣ, ಪ್ರಾದೇಶಿಕ ಅಸಮತೋಲನ ನಿವಾರಣೆ, ಉದ್ಯೋಗ ಸೃಷ್ಟಿ, ವಿದೇಶಿ ಭಾಷಾ ಪ್ರಯೋಗಾಲಯಗಳ ಬಳಕೆ (ಜರ್ಮನಿ, ಜಪಾನ್), ವಿಶ್ವ ಕೌಶಲ್ಯ ಸ್ಪರ್ಧೆಗಳಿಗೆ ತರಬೇತಿ, ಜಾಗತಿಕ ಮಟ್ಟದಲ್ಲಿ ಉದ್ಯೋಗ ಅವಕಾಶ ಸೃಷ್ಟಿಸಿಕೊಡುವುದೇ ಕೇಂದ್ರ ಸ್ಥಾಪನೆಯ ಉದ್ದೇಶವಾಗಿದೆ. ಎಲೆಕ್ಟ್ರಿಕಲ್, ಎಲೆಕ್ಟ್ರಾನಿಕ್ಸ್, ಆಟೊಮೇಷನ್ ಮತ್ತು ರೋಬೋಟಿಕ್ಸ್, ಮಾಹಿತಿ ತಂತ್ರಜ್ಞಾನ, ಬ್ಯಾಂಕಿಂಗ್, ಹಣಕಾಸು, ವಿಮೆ, ರಿಟೇಲ್, ಆತಿಥ್ಯ ಮತ್ತು ಸೇವೆ (ಹಾಸ್ಪಿಟಾಲಿಟಿ ಮತ್ತು ಸರ್ವೀಸ್) ಮುಂತಾದ ಕ್ಷೇತ್ರಗಳಲ್ಲಿ ತರಬೇತಿ ಸಿಗಲಿದೆ.

**ಉದ್ಯೋಗ ಅವಕಾಶ ಸೃಷ್ಟಿ**

**ಕೇಂದ್ರ ಸ್ಥಾಪನೆ ಹಿಂದಿನ ಉದ್ದೇಶವೇನು:** ಯುವ ಸಮೂಹಕ್ಕೆ ಉದ್ಯೋಗಾವಕಾಶ ಹೆಚ್ಚಿಸುವ ಹಾಗೂ ಸ್ಥಳೀಯವಾಗಿ ಕೌಶಲ್ಯ ಕಲಿಸಿ, ಜಾಗತಿಕ ಮಟ್ಟದಲ್ಲಿ ಕೆಲಸ ಗಿಟ್ಟಿಸಲು ಸಜ್ಜಾಗಲು ತರಬೇತಿ ನೀಡುವ ಬಹುಕೌಶಲ್ಯ ಅಭಿವೃದ್ಧಿ ಕೇಂದ್ರಯನ್ನು ಕಲಬುರಗಿಯಲ್ಲಿ ಆರಂಭಿಸಲಾಗುತ್ತಿದೆ. ಇದರಿಂದ ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಅನುಕೂಲವಾಗಲಿದೆ. ಆಧುನಿಕ ತಂತ್ರಜ್ಞಾನದೊಂದಿಗೆ ಶ್ರೇಷ್ಠ ಗುಣಮಟ್ಟದ ಕೌಶಲ್ಯ ತರಬೇತಿ ನೀಡಿ, ಕೌಶಲ್ಯಾಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಇಲ್ಲಿ ತರಬೇತಿ ನೀಡಲಾಗುತ್ತಿದೆ.



**ಸ್ಕಿಲ್ ಲೋಕಲಿ, ವರ್ಕ್ ಗ್ಲೋಬಲಿ**

ನಮ್ಮ ಇಲಾಖೆಯ ಮುಖ್ಯ ಧ್ಯೇಯ ಎಂದರೆ ಸ್ಕಿಲ್ ಲೋಕಲಿ, ವರ್ಕ್ ಗ್ಲೋಬಲಿ ಎಂಬುದಾಗಿದೆ. ಯುವ ಸಮೂಹವನ್ನು ಈ ನಿಟ್ಟಿನಲ್ಲಿ ಸಬಲೀಕರಣಗೊಳಿಸುವುದೇ ನಮ್ಮ ಆದ್ಯತೆಯಾಗಿದೆ. ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರದ ಮಾರ್ಗದರ್ಶನ ಪಡೆದು ಬರುವ ವಿದ್ಯಾರ್ಥಿ ಯಾವುದೇ ಕೆಲಸ ಮಾಡಲು ಸಜ್ಜಾಗಿರುತ್ತಾನೆ. ವಿದ್ಯಾರ್ಥಿಗಳಿಗೆ ಇದೊಂದು ಉತ್ತಮ ವೇದಿಕೆಯಾಗಲಿದೆ. ಈ ರೀತಿಯ ಕೇಂದ್ರವನ್ನು ಮೈಸೂರಿನ ವರುಣಾ ಮತ್ತು ಕೊಪ್ಪಳದ ತಳಕಲ್‌ನಲ್ಲಿಯೂ ಆರಂಭಿಸಲಾಗುತ್ತದೆ. ಮುಂದಿನ ದಿನಗಳಲ್ಲಿ ಇದನ್ನು ವಿಸ್ತರಿಸುವ ಬಗ್ಗೆಯೂ ಚಿಂತನೆ ನಡೆದಿದೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.

ಇದರಿಂದ ವಿದ್ಯಾರ್ಥಿಗಳ ಭವಿಷ್ಯ ರೂಪಿಸಬಹುದಾಗಿದೆ ಎಂದು ಉನ್ನತ ಶಿಕ್ಷಣ ಇಲಾಖೆ ಪ್ರಕಟಣೆ ಹೊರಡಿಸಿದೆ. ಪ್ರತಿ ವರ್ಷ 2,500 ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗುತ್ತದೆ. ಮುಂದಿನ 5 ವರ್ಷಗಳಲ್ಲಿ 37,500 ವಿದ್ಯಾರ್ಥಿಗಳನ್ನು ತಯಾರು ಮಾಡಲಾಗುವುದು. ಯುವ ಸಮೂಹಕ್ಕೆ ಉದ್ಯೋಗ ಅವಕಾಶ ಸೃಷ್ಟಿ ಮಾಡಿಕೊಡಬೇಕೆಂಬ ನಮ್ಮ ಸರ್ಕಾರದ ಆಶಯ. ಒಟ್ಟಾರೆಯಾಗಿ, ಯುವ ಸಮೂಹಕ್ಕೆ ಉದ್ಯೋಗಾವಕಾಶ ಹೆಚ್ಚಿಸುವ ಹಾಗೂ ಸ್ಥಳೀಯವಾಗಿ ಕೌಶಲ್ಯ ಕಲಿಸಿ, ಜಾಗತಿಕ ಮಟ್ಟದಲ್ಲಿ ಕೆಲಸ ಗಿಟ್ಟಿಸಲು ಸಜ್ಜಾಗಲು ತರಬೇತಿ ನೀಡುವ ಬಹುಕೌಶಲ್ಯ ಅಭಿವೃದ್ಧಿ ಕೇಂದ್ರವನ್ನು ಕಲಬುರಗಿಯಲ್ಲಿ ಆರಂಭಿಸಲಾಗುತ್ತಿದೆ.

# ಮುಸ್ಲಿಮರಿಗೆ ಸಿದ್ದರಾಮಯ್ಯ ಸರ್ಕಾರದಿಂದ ಡಬಲ್ ಧಮಾಕಾ

■ ಗುತ್ತಿಗೆಯಲ್ಲಿ ರಿಸರ್ವ್ ಬಳಿಕ ಮೀಸಲಾತಿ ಕೋಟಾ ದ್ವಿಗುಣ ■ ಕಾಂಗ್ರೆಸ್ ವಿರುದ್ಧ ಬಿಜೆಪಿ ಕೆಂಡ! ■ ಸರ್ಕಾರದ ವಿರುದ್ಧ ಮತ್ತೊಂದು ಅಸ್ತ್ರ ಬಳಸಲು ಸಜ್ಜು

**ಉದಯವಾಹಿನಿ, ಬೆಂಗಳೂರು**

ಕೆಲ ದಿನಗಳ ಹಿಂದಷ್ಟೇ ಮುಸ್ಲಿಮರಿಗೆ ಸರ್ಕಾರಿ ಕಾಮಗಾರಿಗಳಲ್ಲಿ ಶೇ.4ರಷ್ಟು ಮೀಸಲಾತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರ ನೀಡಿತ್ತು. ಇದರ ಬೆನ್ನಲ್ಲೇ ಜಾತಿ ಗಣತಿಯ ವರದಿ ಕ್ಯಾಬಿನೆಟ್‌ನಲ್ಲಿ ಮಂಡನೆಯಾಗಿದ್ದು, ಅದರಂತೆ ಮುಸ್ಲಿಮರಿಗೆ ನೀಡಿದ್ದ ಮೀಸಲಾತಿಯನ್ನು ಡಬಲ್ ಮಾಡುವ ಬಗ್ಗೆ ಶಿಫಾರಸು ಮಾಡಿರುವ ಬಗ್ಗೆ ಚರ್ಚೆಯಾಗುತ್ತಿದೆ. ಇದು ಬಿಜೆಪಿ ಸೇರಿ ಹಿಂದೂ ಪರ ಸಂಘಟನೆಗಳ ಕೆಂಗಣ್ಣಿಗೆ ಗುರಿಯಾಗಿದ್ದು, ಸಿದ್ದರಾಮಯ್ಯ ಸರ್ಕಾ ರದ ವಿರುದ್ಧ ಮತ್ತೊಂದು ಅಸ್ತ್ರ ಬಳಸಲು ಮುಂದಾಗಿವೆ. ಈ ಹಿಂದೆ ಬಸವರಾಜ ಬೊಮ್ಮಾಯಿ ಸರ್ಕಾರ ಇದ್ದಾಗ ಮುಸ್ಲಿಮರ ಮೀಸಲಾತಿಯನ್ನು ಸಂಪೂರ್ಣವಾಗಿ ತೆಗೆದು ಬೇರೆ ಜಾತಿಗಳಿಗೆ ಹಂಚಲಾಗಿತ್ತು. ಆದರೆ, ಈಗ ಆಯೋಗ ಮುಸ್ಲಿಮರ ಮೀಸಲಾತಿಯನ್ನು ಡಬಲ್ ಮಾಡಲು ಶಿಫಾರಸು ಮಾಡಿರುವುದು ರಾಜ್ಯ ರಾಜಕೀಯದಲ್ಲಿ ತೀವ್ರ ಕುತೂಹಲಕ್ಕೆ ಕಾರಣವಾಗಿದೆ. ಜೊತೆಗೆ ವೋಟ್ ಬ್ಯಾಂಕ್ ರಾಜಕೀಯ ಹಾಗೂ ಮುಸ್ಲಿಂ ತುಷ್ಟೀಕರಣದ ಆರೋಪ ಕೂಡ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಕೇಳಿಬರುತ್ತಿದೆ.

**ರಾಜ್ಯ ರಾಜಕೀಯ ತೀವ್ರ ಕುತೂಹಲ**

ಹೌದು, ರಾಜ್ಯದಲ್ಲಿ ಮುಸ್ಲಿಮರ ಮೀಸಲಾತಿಯನ್ನು ಹೆಚ್ಚಿಸಲು ಡಾ ಜಯಪ್ರಕಾಶ್ ಹೆಗಡೆ ಆಯೋಗವೂ ಸರ್ಕಾರಕ್ಕೆ ಶಿಫಾರಸು ಮಾಡಿದೆ. ಜಾತಿ ಗಣತಿಯ ಆಧಾರದ ಮೇಲೆ ಮೀಸಲಾತಿ ಹೆಚ್ಚಳಕ್ಕೆ ಆಯೋಗವೂ ಶಿಫಾರಸು ಮಾಡಿದ್ದು, ಪ್ರವರ್ಗ 2ಬಿನಡಿ ಮುಸ್ಲಿಮರಿಗೆ ನೀಡಲಾಗುತ್ತಿದ್ದ ಶೇ.4ರಷ್ಟು ಮೀಸಲಾತಿಯನ್ನು ಶೇ.8ಕ್ಕೆ ಏರಿಸಲು ಸಲಹೆ ನೀಡಿದೆ. ಒಂದು ವೇಳೆ ಜಾತಿ ಗಣತಿ ಹಾಗೂ ಮೀಸಲಾತಿ ಶಿಫಾರಸನ್ನು ಸರ್ಕಾರ ಒಪ್ಪಿದರೆ ಮುಸ್ಲಿಮರ ಮೀಸಲಾತಿ ಡಬಲ್ ಆಗಲಿದೆ. ಕೆಲ ದಿನಗಳ ಹಿಂದಷ್ಟೇ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡಿದ್ದನ್ನು ತೀವ್ರವಾಗಿ ವಿರೋಧಿಸಿದ್ದ ಕೇಸರಿ ಪಡೆ, ಈಗ ಮತ್ತೆ ಸರ್ಕಾರದ ಮೇಲೆ ಮುಗಿಬೀಳಲು ಸಿದ್ಧತೆ ನಡೆಸಿದೆ. ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಜನಾಭಿಪ್ರಾಯ ಮೂಡಿಸಲು ಜಾತಿಗಣತಿ ಹಾಗೂ ಮುಸ್ಲಿಂ ಮೀಸಲಾತಿ ಅಸ್ತ್ರಗಳನ್ನು ಬಳಸಲು ಮುಂದಾಗಿದೆ.



**ಕರ್ನಾಟಕದಲ್ಲಿ ಈಗ ಮುಸ್ಲಿಮರೇ ನಂಬರ್ 1!**

ಕರ್ನಾಟಕದ ಜಾತಿ ಜನಗಣತಿ ಎಂದು ಕರೆಯಲ್ಪಡುವ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಶುಕ್ರವಾರ ಸಚಿವ ಸಂಪುಟದ ಮುಂದೆ ಮಂಡಿಸಲಾಗಿದೆ. ಕ್ಯಾಬಿನೆಟ್ ಜಾತಿ ಗಣತಿಯ ವರದಿಯನ್ನು ಒಪ್ಪಿಕೊಂಡಿದ್ದರೂ ಅದನ್ನು ಪಬ್ಲಿಕ್‌ಗೆ ರಿಲೀಸ್ ಮಾಡಿಲ್ಲ. ಆದರೆ, ಒಂದಿಷ್ಟು ಅಂಶಗಳು ಲೀಕ್ ಆಗಿದ್ದು, ಸಮೀಕ್ಷೆಯಲ್ಲಿನ 5.9 ಕೋಟಿ ಜನರ ಪೈಕಿ 75 ಲಕ್ಷಕ್ಕೂ ಅಧಿಕ ಮಂದಿ ಮುಸ್ಲಿಂ ಸಮುದಾಯಕ್ಕೆ ಸೇರಿದ್ದಾರೆ ಎಂದು ಹೇಳಲಾಗಿದೆ. ಅಂದರೆ ರಾಜ್ಯದ ಒಟ್ಟು ಜನಸಂಖ್ಯೆಯ ಶೇ.18.70ರಷ್ಟು ಮುಸ್ಲಿಮರು ಇದ್ದಾರೆ. ಈ ಹಿನ್ನೆಲೆ ಪ್ರವರ್ಗ-2ಬಿ ಅಡಿಯಲ್ಲಿ ಕೇವಲ ಮುಸ್ಲಿಮರಿಗೆ ನೀಡುತ್ತಿದ್ದ ಮೀಸಲಾತಿಯನ್ನು ಡಬಲ್ ಮಾಡಬೇಕು ಎಂದು ಆಯೋಗ ಶಿಫಾರಸು ಮಾಡಿದೆ. ಇದು ಬಿಜೆಪಿಗೆ ಹೊಸ ಅಸ್ತ್ರವನ್ನು ಒದಗಿಸಿದ್ದು, ಕಾಂಗ್ರೆಸ್ ಸರ್ಕಾರ ವೋಟ್ ಬ್ಯಾಂಕ್ ರಾಜಕೀಯ ಮಾಡುತ್ತಿದ್ದು, ಮುಸ್ಲಿಮರ ತುಷ್ಟೀಕರಣಕ್ಕೆ ಮುಂದಾಗಿದೆ ಎಂದು ಆರೋಪಿಸುತ್ತಿದೆ.

ಮುಸ್ಲಿಮರಿಗೆ ಮೀಸಲಾತಿ ಹಾಗೂ ಜಾತಿ ಗಣತಿ ವಿಚಾರದಲ್ಲಿ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ದೊಡ್ಡ ಅಭಿಯಾನವನ್ನು ನಡೆಸಲು ಕರ್ನಾಟಕ ಬಿಜೆಪಿ ಪ್ಲಾನ್ ಮಾಡುತ್ತಿದೆ. ಸೋಮವಾರವೇ ಈ ಬಗ್ಗೆ ಚರ್ಚಿಸಲು ಸಭೆಯನ್ನು ರಾಜ್ಯ ಬಿಜೆಪಿ ನಾಯಕರು ಕರೆದಿದ್ದರು. ಆದರೆ, ಜಾತಿ ಗಣತಿ ಬಗ್ಗೆ ಸಿದ್ದರಾಮಯ್ಯ ಸರ್ಕಾರ ಯಾವ ತೀರ್ಮಾನ ಕೈಗೊಳ್ಳುತ್ತದೆ ಎಂಬುದನ್ನು ನೋಡಿ ಮುಂದಿನ ಹೆಜ್ಜೆ ಇಡಲು ಬಿಜೆಪಿ ನಾಯಕರು ಮುಂದಾಗಿದ್ದಾರೆ ಎಂದು ತಿಳಿದುಬಂದಿದೆ. ಇದರ ಆರಂಭ ಎಂಬಂತೆ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ಅವರೇ ವಾಗ್ದಾಳಿಯನ್ನು ಶುರು ಮಾಡಿದ್ದಾರೆ. ಹರಿಯಾಣದಲ್ಲಿ ಸೋಮವಾರ ಮಾತನಾಡಿದ್ದ ಮೋದಿ ಸರ್ಕಾರಿ ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿ ನೀಡಿರುವುದನ್ನು ಪ್ರಸ್ತಾಪಿಸಿ ಸಿದ್ದು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.99 ₹/L | ಬಂಗಾರ: ₹9,518/Gram24ct ₹8,720/Gram22ct | ಬೆಳ್ಳಿ: ₹99.80/Gram

## ಹರಿದಾಸ ಮಂಜರಿ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾ ಚಾರ್ಯರ ನೇತೃತ್ವದಲ್ಲಿ ಏ. 17, ಗುರುವಾರ ಸಂಜೆ 5-30ಕ್ಕೆ ವಿದುಷಿ ಶ್ರೀಮತಿ ಮಾನಸ ಜಯರಾಜ್ ಕುಲಕರ್ಣಿ ಇವರಿಂದ ಹರಿದಾಸ ಮಂಜರಿ ಏರ್ಪಡಿಸಿದ್ದು, ಇವರ ಗಾಯನಕ್ಕೆ ಕೀ-ಬೋರ್ಡ್ ವಾದನದಲ್ಲಿ ಶ್ರೀ ಟಿ.ಎಸ್. ರಮೇಶ್, ತಬಲ ವಾದನದಲ್ಲಿ ಶ್ರೀ ಸರ್ವೋತ್ತಮ ಸಾಥ್ ನೀಡಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದ್ದಾರೆ.

ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು-560041

## ಎನ್.ಆರ್. ಕಾಲೋನಿಯ ಎಪಿಎಸ್ ಪಿಯು ಕಾಲೇಜಿನಲ್ಲಿ ಶೇ. 83 ರಷ್ಟು ಫಲಿತಾಂಶ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಎನ್.ಆರ್. ಕಾಲೋನಿಯ ಎಪಿಎಸ್ ಪಿಯು ಕಾಲೇಜಿನ ಕಲೆ, ವಿಜ್ಞಾನ ಮತ್ತು ವಾಣಿಜ್ಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದು, ಶೇ 83 ರಷ್ಟು ಫಲಿತಾಂಶ ದಾಖಲಿಸಿದ್ದಾರೆ. ಗಿರಿಧರ್ ಜೇಶಿ ಕಲಾ ವಿಭಾಗದಲ್ಲಿ 30ನೇ ಶ್ರೇಯಾಂಕ ಪಡೆದಿದ್ದು, ವಾಣಿಜ್ಯ ವಿಭಾಗದಲ್ಲಿ ನಿಖಿಲ್.ಟಿ ಶೇ 97 ರಷ್ಟು ಅಂಕ ಗಳನ್ನು ಗಳಿಸಿದ್ದಾರೆ. 29 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ನಲ್ಲಿ ಉತ್ತೀರ್ಣರಾಗಿದ್ದು, ಆಡಳಿತ ಮಂಡಳಿ ಟ್ರಸ್ಟಿಗಳು ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಅತ್ಯುತ್ತಮ ಸಾಧನೆಗಾಗಿ ಎಪಿಎಸ್ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ವಿದ್ಯಾರ್ಥಿಗಳಿಗೆ ಅಭಿನಂದೆ ಸಲ್ಲಿಸಿದೆ. ಪ್ರಥಮ ಪಿಯುಸಿಗೆ ಪ್ರವೇಶಾವಕಾಶ ಪ್ರಾರಂಭವಾಗಿದೆ ಎಂದು ಎಪಿಎಸ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ವಿಷ್ಣು ಭರತ್ ಅಲಂಪಲ್ಲಿ ತಿಳಿಸಿದ್ದಾರೆ.

## 6,000 ಕೋಟಿ ಆಸ್ತಿ ತೆರಿಗೆ ಸಂಗ್ರಹ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ಪ್ರಸಕ್ತ ಹಣಕಾಸು ವರ್ಷದಲ್ಲಿ ಪಾಲಿಕೆಯ ಆಸ್ತಿ ತೆರಿಗೆ ಸಂಗ್ರಹವು 6,000 ಕೋಟಿಯನ್ನು ಮೀರಲಿದೆ. ಆಸ್ತಿ ತೆರಿಗೆಯನ್ನು ಹೆಚ್ಚಿಸದಿರುವ ಕಾರಣ ಇದು




ಸಾಧ್ಯವಾಗಲಿದೆ ಎಂದು ಬಿಬಿಎಂಪಿ ವಿಶೇಷ ಆಯುಕ್ತ ಮುನೀಶ್ ಮೌನ್ಸಿಲ್ ತಿಳಿಸಿದ್ದಾರೆ. 2023-24ನೇ ಸಾಲಿಗಿಂತ 2024-25ನೇ ಸಾಲಿನಲ್ಲಿ 1,000 ಕೋಟಿಗಳಿಗಿಂತ ಹೆಚ್ಚಿನ ಮೊತ್ತದ ಆಸ್ತಿ ತೆರಿಗೆ ಸಂಗ್ರಹಣೆಯಾಗಿದೆ. 2023-24 ನೇ ಸಾಲಿನಲ್ಲಿ 3,918 ಕೋಟಿ ಆಸ್ತಿ ತೆರಿಗೆ ಸಂಗ್ರಹಣೆಯಾಗಿತ್ತು. ಒಂದು ಬಾರಿ ಪರಿಹಾರ ಯೋಜನೆ, ಬಾಕಿ ಮತ್ತು ಪ್ರಸ್ತುತ ತೆರಿಗೆ ಬಾಕಿಗಳ ಮೇಲೆ ವ್ಯವಸ್ಥಿತ ಕೆಲಸ ನಿರ್ವಹಣೆ, ತಂತ್ರಜ್ಞಾನ ಆಧಾರಿತ ಅನುಸರಣೆ, ಬಾಕಿ ಆಸ್ತಿ ತೆರಿಗೆಗಳ ವಸೂಲಾತಿಗೆ ಪರಿಣಾಮಕಾರಿ ಪ್ರಮಾಣಿತ ಕಾರ್ಯಾಚರಣೆ ವಿಧಾನಗಳು, ನಿಯಮಗಳನ್ನು ಜಾರಿಗೊಳಿಸಲಾಗಿತ್ತು. ಬಾಕಿ, ಆಸ್ತಿ ತೆರಿಗೆ ವಸೂಲಾತಿಗೆ ಮನೆ-ಮನೆಗಳಿಗೆ ನಿರಂತರವಾಗಿ ಭೇಟಿ. ಈ ಎಲ್ಲಾ ಅಂಶಗಳಿಂದ ಆಸ್ತಿ ತೆರಿಗೆ ಸಂಗ್ರಹ ಹೆಚ್ಚಳವಾಗಿದೆ ಎಂದು ಮೌನ್ಸಿಲ್ ತಿಳಿಸಿದ್ದಾರೆ.

## ನನ್ನನ್ನು ಮುಗಿಸಲು ಹೋದರೆ ಇಡೀ ರಾಜ್ಯ ಹೊತ್ತಿ ಉರಿಯಲಿದೆ: ಯತ್ನಾಳ್

• ಉದಯವಾಹಿನಿ, ಬೆಂಗಳೂರು


ನಾನು ಪ್ರವಾದಿ ಮಹಮ್ಮದ್ ಪೈಗಂಬರ್ ಬಗ್ಗೆ ಮಾತನಾಡಿಲ್ಲ. ಮಹಮ್ಮದ್ ಅಲಿ ಜಿನ್ನಾ ಎನ್ನಲು ಹೋಗಿ ಮಾತಿನ ವೇಗದಲ್ಲಿ ತಪ್ಪಾಗಿದೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಸ್ಪಷ್ಟನೆ ನೀಡಿದ್ದಾರೆ. ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮಾತಿನ ವೇಗದಲ್ಲಿ ತಪ್ಪಾಗಿದೆ. ನಾನು ಜಿನ್ನಾ ಅವರನ್ನು ಉಲ್ಲೇಖಿಸಲು ಬಯಸಿದ್ದೆ. ಆದರೆ, ಪ್ರವಾದಿ ಮುಹಮ್ಮದ್ ಅವರ ಹೆಸರು ಬಂದು ಬಿಟ್ಟಿತು. ರಾಜಕೀಯ ಲಾಭಕ್ಕಾಗಿ ಕಾಂಗ್ರೆಸ್ ನನ್ನ ಮಾತುಗಳನ್ನು ತಪ್ಪಾಗಿ ನಿರೂಪಿಸಿದೆ. ಇದು ಕೋಮು ಉದ್ವಿಗ್ನತೆಯನ್ನು ಹುಟ್ಟುಹಾಕುವ ಪ್ರಯತ್ನ. ವಿಜಯಪುರದಲ್ಲಿ ಗೂಂಡಾಗಿರಿ, ಹಫ್ತಾ ವಸೂಲಿ ಮಾಡಲು ಆಗದೇ ಹತಾಶರಾಗಿರುವ ಕಾಂಗ್ರೆಸಿಗರು ಪೈಗಂಬರ್‌ಗೆ ನೆಪ ಮಾಡಿಕೊಂಡು, ನನ್ನ ವಿರುದ್ಧ ಮಾತನಾಡುತ್ತಿದ್ದಾರೆ. ಹಿಂದೂ ಧರ್ಮದಲ್ಲಿ ಮತ್ತೊಂದು ಧರ್ಮವನ್ನು ಹೀಯಾಳಿಸುವ ಸಂಸ್ಕೃತಿ ಇಲ್ಲ. ನಮ್ಮ ಗುರು, ಹಿರಿಯರು ಕಲಿಸಿಲ್ಲ ಎಂದು ಹೇಳಿದರು.

ನನ್ನನ್ನು ಮುಗಿಸುವುದಾಗಿ ಬೆದರಿಕೆ ಒಡ್ಡಿರುವ ಆಡಿಯೋ ಬಗ್ಗೆ ಪೊಲೀಸರು ತನಿಖೆ ಮಾಡುತ್ತಿದ್ದಾರೆ, ಇದರ ಹಿಂದೆ ಯಾರಿದ್ದಾರೆ ಎನ್ನುವುದು ಶೀಘ್ರ ಗೊತ್ತಾಗಲಿದೆ. ನನ್ನನ್ನು ಮುಗಿಸಲು ಯಾರಿಗೂ ಆಗಲ್ಲ, ಇಡೀ ಕರ್ನಾಟಕದ ಹಿಂದೂಗಳು ನನ್ನ ಜೊತೆ ಇದ್ದಾರೆ. ನನ್ನನ್ನು ಮುಗಿಸಲು ಹೋದರೆ ರಾಜ್ಯದಲ್ಲಿ ಬೆಂಕಿ ಹೊತ್ತಿಕೊಳ್ಳುತ್ತದೆ ಎಂದು ತಿಳಿಸಿದರು. ಬಿಜೆಪಿಯ ಜನಾಕ್ರೋಶ ಯಾತ್ರೆ ಕುರಿತು ಮಾತನಾಡಿ, ಕಾಂಗ್ರೆಸ್ ಸರ್ಕಾರ ಜನರ ಸಮಸ್ಯೆಗಳನ್ನು ಪರಿಹರಿಸುವಲ್ಲಿ ವಿಫಲವಾಗಿದೆ. ಗ್ಯಾಸ್ ಮತ್ತು ಪೆಟ್ರೋಲ್ ಬೆಲೆಗಳು ಹೆಚ್ಚಾಗಿದೆ ಎಂದರು. ಗುತ್ತಿಗೆದಾರರು ಕಾಂಗ್ರೆಸ್ ಸರ್ಕಾರ ಭಾರೀ ಕಮಿಷನ್ ಪಡೆದು ಬಿಲ್‌ಗಳನ್ನು ತೆರವುಗೊಳಿಸುತ್ತಿಲ್ಲ ಎಂದು ಆರೋಪಿಸುತ್ತಿದ್ದಾರೆ. ಈ ಬಗ್ಗೆ ತನಿಖೆಯಾಗಲಿ, ಸತ್ಯಾಂಶ ಹೊರಬರಲಿ ಎಂದು ಹೇಳಿದರು. ಜಾತಿ ಜನಗಣತಿ ಸಮೀಕ್ಷೆಯನ್ನು ಟೀಕಿಸಿದ ಅವರು, ವರದಿ ದೋಷಪೂರಿತವಾಗಿದೆ ಎಂದು ತಿಳಿಸಿದರು.

## ಹಿರಿಯ ಪತ್ರಕರ್ತ ಎಸ್.ಕೆ ಶ್ಯಾಮಸುಂದರ್ ನಿಧನ: ಸಿಎಂ ಸಿದ್ದರಾಮಯ್ಯ ಸಂತಾಪ

• ಉದಯವಾಹಿನಿ, ಬೆಂಗಳೂರು

ಹಲವು ದಿನಗಳಿಂದ ತೀವ್ರ ಆರೋಗ್ಯದಿಂದ ಬಳಲುತ್ತಿದ್ದ ಹಿರಿಯ ಪತ್ರಕರ್ತ ಎಸ್. ಕೆ. ಶ್ಯಾಮಸುಂದರ್ ಅವರು ಸೋಮವಾರ ನಿಧನರಾಗಿದ್ದಾರೆ. ಶ್ಯಾಮಸುಂದರ್ ಅವರು ಬೆಂಗಳೂರಿನ ದಿಗ್ವಿಶ್ ಆಸ್ಪತ್ರೆಯಲ್ಲಿ ಹಲವು ದಿನಗಳಿಂದ ಚಿಕಿತ್ಸೆ



ಪಡೆಯುತ್ತಿದ್ದರು. ಆದರೆ, ಆರೋಗ್ಯ ಚೇತರಿಸದೇ ಕೋಮಾಗೆ ಜಾರಿದ್ದರು. ನಿರಂತರವಾಗಿ ಚಿಕಿತ್ಸೆ ನೀಡಿದರೂ ಯಾವುದೇ ಪ್ರಯೋಜನವಾಗಲಿಲ್ಲ. ಸೋಮರಾತ್ರಿ ರಾತ್ರಿ ಹೃದಯಾಘಾತದಿಂದ ಕೊನೆಯುಸಿರೆಳೆದಿದ್ದಾರೆ. ಶ್ಯಾಮಸುಂದರ್ ಅವರಿಗೆ 72 ವರ್ಷ ವಯಸ್ಸಾಗಿತ್ತು.

ಶ್ಯಾಮಸುಂದರ್ ಅವರು ಕನ್ನಡ ಪತ್ರಿಕೋದ್ಯಮಲ್ಲಿ ಸುಮಾರು 39 ವರ್ಷ ಅನುಭವವನ್ನು ಹೊಂದಿದ್ದರು. ಹಲವು ಮಾಧ್ಯಮ ಸಂಸ್ಥೆಗಳಲ್ಲಿ ಉನ್ನತ ಜವಾಬ್ದಾರಿಯನ್ನು ನಿರ್ವಹಿಸಿರುವ ಶ್ಯಾಮಸುಂದರ್ ಅವರು, ಕನ್ನಡ ಡಿಜಿಟಲ್ ಮಾಧ್ಯಮಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಪತ್ರಕರ್ತರ ಬಳಗದಲ್ಲಿ ಶಾಮಿ ಎಂದೇ ಪ್ರಸಿದ್ಧಿ ಪಡೆದಿದ್ದರು. ಅಲ್ಲದೆ, ಅವಿವಾಹಿತರಾಗಿದ್ದ ಶ್ಯಾಮಸುಂದರ್, ಜಗ್ಗೇಶ್ ನಟನೆಯ ಎದ್ದೇಳು ಮಂಜುನಾಥ ಸಿನಿಮಾದಲ್ಲಿ ಬ್ಯಾಂಕ್ ಮ್ಯಾನೇಜರ್ ಪಾತ್ರವನ್ನೂ ನಿರ್ವಹಿಸಿದ್ದರು. ಶ್ಯಾಮಸುಂದರ್ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂತಾಪ ಸೂಚಿಸಿದ್ದಾರೆ. ಮೃತರ ಆತ್ಮಕ್ಕೆ ಚಿರಶಾಂತಿ ದೊರಕಲಿ, ಅವರ ಕುಟುಂಬವರ್ಗಕ್ಕೆ ನೋವು ಭರಿಸುವ ಶಕ್ತಿ ಸಿಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆಂದು ಹೇಳಿದ್ದಾರೆ.

# ವಿವೇಕಾನಂದರ ಜೀವನಾಧಾರಿತ ವೀರ ಸಂನ್ಯಾಸಿಯ ಆತ್ಮ ಗೀತೆ ಪ್ರದರ್ಶನ

• ಉದಯವಾಹಿನಿ, ಬೆಂಗಳೂರು

ಪರಮ್ ಕಲ್ಚರ್ ವತಿಯಿಂದ ವೀರ ಸಂನ್ಯಾಸಿಯ ಆತ್ಮ ಗೀತೆ ಸ್ವಾಮಿ ವಿವೇಕಾನಂದರ ಜೀವನ, ಕೃತಿ ಆಧಾರಿತ ಅತ್ಯದ್ಭುತ ಮಲ್ಟಿಮೀಡಿಯಾ ಪ್ರದರ್ಶನವನ್ನು ಏ. 25 ರಂದು ಬೆಂಗಳೂರಿನ ಚೌಡಯ್ಯ ಮೆಮೋರಿಯಲ್ ಹಾಲ್‌ನಲ್ಲಿ ಆಯೋಜಿಸಲಾಗಿದೆ. ಒಟ್ಟು 2 ಗಂಟೆಗಳ ಕಾಲಾ ವಧಿಯ ಪ್ರದರ್ಶನವಾಗಿದ್ದು, ಸುಮಾರು 35ಕ್ಕೂ ಅಧಿಕ ಅಂತಾರಾಷ್ಟ್ರೀಯ ಖ್ಯಾತಿಯ ಕಲಾವಿದರು ಭಾಗಿಯಾಗಲಿದ್ದಾರೆ.

ಪ್ರಖ್ಯಾತ ಸಂಗೀತ ಸಂಯೋಜಕರಾದ ಪಂ. ಪ್ರವೀಣ್ ಡಿ. ರಾವ್, ಚಲನಚಿತ್ರ ನಿರ್ದೇಶಕರಾದ ಕಾರ್ತಿಕ್ ಸರಗೂರು ಸಾರಥ್ಯದಲ್ಲಿ ಕಾರ್ಯಕ್ರಮ ನಡೆಯುತ್ತಿದೆ. ಸಂಗೀತ, ನೃತ್ಯ, ನಾಟಕಗಳ ಮೂಲಕ ಸ್ವಾಮಿ ವಿವೇಕಾನಂದರ ಜೀವನ - ಚಿಂತನೆಗಳನ್ನು ವಿಜೃಂಭಣಾತ್ಮಕವಾಗಿ ತೋರಿಸುವ ಪ್ರಯತ್ನ


ಉದಯವಾಹಿನಿ ಚಿತ್ರ

ಇದಾಗಿದೆ. ಸ್ವಾಮಿ ವಿವೇಕಾನಂದರಿಂದಲೇ ಇಂಗ್ಲಿಷ್, ಬಂಗಾಳಿ, ಸಂಸ್ಕೃತದಲ್ಲಿ ರಚಿಸಲ್ಪಟ್ಟ ಹಾಡುಗಳನ್ನು ಹಾಗೂ ಕನ್ನಡ ಸಾರಸ್ವತ ಲೋಕದ ರತ್ನಗಳಾದ, ಜಿ.ಎಸ್.ಶಿವರುದ್ರಪ್ಪ, ಕುವೆಂಪು ಸೇರಿದಂತೆ ಹಲವು ಪ್ರಖ್ಯಾತ ಕವಿಗಳು ವಿವೇಕಾನಂದರ ಬಗ್ಗೆ ಬರೆದ ಹಾಡುಗಳನ್ನು ಸಾದರಪಡಿಸಲಾಗುತ್ತದೆ.

**ಏನಿದು ಪರಮ್ ವಿಜ್ಞಾನ ಮತ್ತು ಸಂಸ್ಕೃತಿ ಕೇಂದ್ರ?:** ಬೆಂಗಳೂರಿನ ಮಾಗಡಿರಸ್ತೆಯ ಚನ್ನೇನಹಳ್ಳಿಯಲ್ಲಿ ಸುಮಾರು 15 ಎಕರೆ ಜಾಗದಲ್ಲಿ ಪರಮ್ ವಿಜ್ಞಾನ, ಸಂಸ್ಕೃತಿ ಕೇಂದ್ರ ನಿರ್ಮಾಣಗೊಳ್ಳುತ್ತಿದೆ. ಈ ಕೇಂದ್ರವು, ಭಾರತದಲ್ಲಿ ರೂಪುಗೊಳ್ಳುತ್ತಿರುವ ಅತಿದೊಡ್ಡ ಮಲ್ಟಿ ಎಕ್ಸ್‌ಪೀರಿಯನ್ಸ್ ತಾಣವಾಗಿದೆ. ಇದು, ವಿಜ್ಞಾನ, ಇತಿಹಾಸ, ಕಲೆ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ವೇದಿಕೆಯನ್ನು ಒದಗಿಸಿ ಕೊಡಲಿದೆ. ಇಲ್ಲಿ, ವೈಜ್ಞಾನಿಕ ಆವಿಷ್ಕಾರಗಳೂ, ಸಾಂಸ್ಕೃತಿಕ ಕಲಿಕಾ ಸೌಲಭ್ಯಗಳೂ ಇರಲಿವೆ. ಪರಮ್ ವಿಜ್ಞಾನ ಮತ್ತು ಸಂಸ್ಕೃತಿ ಕೇಂದ್ರದಲ್ಲಿ, ಅಂತಾರಾಷ್ಟ್ರೀಯ ಮಟ್ಟದ ಸಮ್ಮೇಳನ ಭವನ, ಪ್ರದರ್ಶನ ಭವನ, ವಿಜ್ಞಾನ ಕೇಂದ್ರ, ಅತ್ಯುತ್ತಮ ಸೌಲಭ್ಯಗಳುಳ್ಳ ಅತಿಥಿ ಗೃಹಗಳು ನಿರ್ಮಾಣಗೊಳ್ಳುತ್ತಿವೆ.

ಈ ಕೇಂದ್ರದ ಮೂಲಕ ಸೇವಾ ಸಂಸ್ಥೆಯು ಯುವ ಮನಸ್ಸುಗಳಿಗೆ ಆಧುನಿಕ ವಿಜ್ಞಾನ, ಭಾರತೀಯ ಪ್ರಾಚೀನ ವಿಜ್ಞಾನ, ಇತಿಹಾಸ, ಸಂಸ್ಕೃತಿ, ಕಲೆಯ ಬಗ್ಗೆ ಆಸಕ್ತಿ ಮೂಡಿಸುವ ಉದ್ದೇಶ ಹೊಂದಿದೆ ಎನ್ನುತ್ತಾರೆ ಆಯೋಜನಕರು.

**ಬೇಡಿಕೆ ಮೇರೆಗೆ ಮತ್ತೊಮ್ಮೆ ಆಯೋಜನೆ**

ಜನವರಿಯಲ್ಲಿ ಪ್ರದರ್ಶಿಸಲ್ಪಟ್ಟಿದ್ದ ವೀರ ಸಂನ್ಯಾಸಿಯ ಆತ್ಮಗೀತೆ ಯು, ಆಗ ಕಂಡ ಅಭೂತಪೂರ್ವ ಯಶಸ್ಸಿನಿಂದಾಗಿ, ಪ್ರೇಕ್ಷಕರ ಬೇಡಿಕೆಯ ಮೇರೆಗೆ ಈಗ ಮರುಪ್ರದರ್ಶನ ಕಾಣುತ್ತಿದೆ. ಸ್ವಾಮಿ ವಿವೇಕಾನಂದರ ತತ್ತ್ವ - ಆದರ್ಶಗಳನ್ನು ಮನೆ ಮನೆಗೂ ತಲುಪಿಸುವ ಸಲುವಾಗಿ ಪರಮ್ ಇಂತಹದ್ದೊಂದು ಅದ್ಭುತ ಕಾರ್ಯಕ್ರಮವನ್ನು ಮತ್ತೆ ಆಯೋಜಿಸಿದೆ. ಬೇಸಿಗೆಯ ರಜೆಯಲ್ಲಿ ಮಕ್ಕಳಿಗೂ ತೋರಿಸಬಹುದಾದಂತಹ, ಕುಟುಂಬ ಸಮೇತ ಆಸ್ವಾದಿಸುವಂತಹ ಕಾರ್ಯಕ್ರಮ ಇದಾಗಿದೆ.

# ಸಿಸಿಬಿ ಕಾರ್ಯಾಚರಣೆ-ನಗದು ಸೇರಿ 6.80 ಕೋಟಿ ಮೌಲ್ಯದ ಮಾದಕ ವಸ್ತು ಜಪ್ತಿ

## ಎನ್‌ಡಿಪಿಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ಸ್ಥಳದ ಮೇಲೆ ದಾಳ ಮಾಡಿ ಕೇರಳ ಮೂಲದ ಡ್ರಗ್ ಪೆಡ್ಲರ್ ಬಂಧನ

• ಉದಯವಾಹಿನಿ, ಬೆಂಗಳೂರು

ಸಿಸಿಬಿ ಮಾದಕ ದ್ರವ್ಯ ನಿಗ್ರಹ ದಳದ ಪೊಲೀಸರು ಒಬ್ಬ ವಿದೇಶಿ ಪ್ರಜೆ, 9 ಮಂದಿ ಕೇರಳ ರಾಜ್ಯದವರನ್ನು ಬಂಧಿಸಿ ನಗದು ಸೇರಿದಂತೆ 6.80 ಕೋಟಿ ಬೆಲೆಯ ಮಾದಕ ವಸ್ತುಗಳು, ಬೈಕ್ ಎರಡು ಕಾರುಗಳು, ಲ್ಯಾಪ್‌ಟಾಪ್, 12 ಮೊಬೈಲ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಸಿವಿಲ್ ಎಂಜಿನಿಯರ್ ಸೆರೆ-ಕೇರಳ ರಾಜ್ಯದ ಸಿವಿಲ್ ಎಂಜಿನಿಯರು ಸಿಸಿಬಿ ಪೊಲೀಸರು ಬಂಧಿಸಿ ನಗದು ಸೇರಿದಂತೆ 4.25 ಕೋಟಿ ಮೌಲ್ಯದ ಗಾಂಜಾ ವಶಪಡಿಸಿ ಕೊಂಡಿದ್ದಾರೆ. ಎಲೆಕ್ಟ್ರಾನಿಕ್ ಸಿಟಿ 2ನೇ ಹಂತದ ಡಿಮಾರ್ಟ್ ಹಿಂಭಾಗ ಗಾಂಜಾ ಮಾರಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ಮೇರೆಗೆ ಸಿಸಿಬಿ ಪೊಲೀಸರು ಎನ್‌ಡಿಪಿಎಸ್ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ಸ್ಥಳದ ಮೇಲೆ ದಾಳ ಮಾಡಿ ಕೇರಳ ಮೂಲದ ಡ್ರಗ್ ಪೆಡ್ಲರನ್ನು ಬಂಧಿಸಿ ಒಂದು ಕೆಜಿ ಹೈಡ್ರೋಪೋನಿಕ್ ಗಾಂಜಾ ವಶಕ್ಕೆ ಪಡಿಸಿಕೊಂಡಿದ್ದಾರೆ.

ಆತನ ಮನೆ ಮೇಲೆ ದಾಳಿ ಮಾಡಿ 2 ಕೆಜಿ 554 ಗ್ರಾಂ ಹೈಡ್ರೋಪೋನಿಕ್ ಗಾಂಜಾ, 26 ಲಕ್ಷ ನಗದು, ಒಂದು ಮೊಬೈಲ್ ಫೋನ್ ವಶ ಪಡಿಸಿಕೊಂಡಿದ್ದು, ಇವುಗಳ ಒಟ್ಟು ಮೌಲ್ಯ 4, 52,54,500 ರೂ ಗಳೆಂದು ಅಂದಾಜಿಸಲಾಗಿದೆ.

ಆರೋಪಿಯು ಬೆಂಗಳೂರಿನಲ್ಲಿ ಸಿವಿಲ್ ಎಂಜಿನಿಯರ್ ಆಗಿ ಕೆಲಸ ಮಾಡಿಕೊಂಡಿದ್ದು, ಬೊಮ್ಮಸಂದ್ರದ ಅಪಾರ್ಟ್‌ಮೆಂಟ್‌ವೊಂದರಲ್ಲಿ ಬಾಡಿಗೆಗೆ ವಾಸವಾಗಿದ್ದಾನೆ. ಕೇರಳದಿಂದ ಕಡಿಮೆ ಬೆಲೆಗೆ ಹೈಡ್ರೋಪೋನಿಕ್ ಗಾಂಜಾ ಖರಿದಿಸಿಕೊಂಡು



ಉದಯವಾಹಿನಿ ಚಿತ್ರ

ಬಂದು ಸ್ನೇಹಿತನೊಂದಿಗೆ ಸೇರಿಕೊಂಡು ಐಟಿ ಉದ್ಯೋಗಿಗಳು ಹೆಚ್ಚಾಗಿ ವಾಸವಿರುವ ಎಲೆಕ್ಟ್ರಾನಿಕ್ ಸಿಟಿ, ಬೊಮ್ಮಸಂದ್ರ ಕಡೆಗಳಲ್ಲಿ ಡ್ರಗ್ ಪೆಡಿಂಗ್ ನಲ್ಲಿ ತೊಡಗಿಸಿಕೊಂಡಿರುವುದು ಹೆಚ್ಚಿನ ವಿಚಾರಣೆ ಯಿಂದ ಗೊತ್ತಾಗಿದೆ.

**ಹೆಚ್ಚಿನ ಹಣಗಳಿಸುವ ದುರುದ್ದೇಶ**

**ವಿದೇಶಿ ಪ್ರಜೆ ಸೆರೆ:** ಡ್ರಗ್ ಪೆಡ್ರಿಂಗ್‌ನಲ್ಲಿ ತೊಡಗಿದ್ದ ವಿದೇಶಿ ಪ್ರಜೆಯನ್ನು ಬಂಧಿಸಿ,2 ಕೋಟಿ ಮೌಲ್ಯದ 1 ಕೆ.ಜಿ ಎಂಡಿಎಂಎ ಕ್ರಿಸ್ಟಲ್, ಮೊಬೈಲ್ ಫೋನ್, ದ್ವಿಚಕ್ರ ವಾಹನ ಸೇರಿದಂತೆ ಇನ್ನಿತರ ವಸ್ತುಗಳನ್ನು ವಶಪಡಿಸಿಕೊಂಡಿದ್ದರೆ.

ಆರೋಪಿಯು 2012ನೇ ಸಾಲಿನಲ್ಲಿ ಬಿಜಿನೆಸ್ ವೀಸಾ ಪಡೆದು ಭಾರತಕ್ಕೆ ಬಂದಿದ್ದು, ಮೋಜಿನ ಜೀವನ ನಡೆಸುವ ಸಲುವಾಗಿ ಮತ್ತು ಕಡಿಮೆ ಸಮಯದಲ್ಲಿ ಹೆಚ್ಚಿನ ಹಣ ಗಳಿಸುವ ದುರುದ್ದೇಶದಿಂದ ನಗರದಲ್ಲಿ ನೆಲೆಸಿರುವ ಪರಿಚಯಸ್ಥನಿಂದ ಎಂಡಿಎಂಎ ಕ್ರಿಸ್ಟಲ್‌ಗಳನ್ನು ಕಡಿಮೆ ಬೆಲೆಗೆ ಖರೀದಿಸಿ, ಹೆಚ್ಚಿನ ಬೆಲೆಗೆ ಕಾಲೇಜು ವಿದ್ಯಾರ್ಥಿಗಳಿಗೆ, ಐಟಿ-ಬಿಟಿ ಉದ್ಯೋಗಿಗಳಿಗೆ ಮಾರಾಟ ಮಾಡಿ ಅಕ್ರಮ ಹಣ ಸಂಪಾದನೆಯಲ್ಲಿ ತೊಡಗಿರುವುದು ಗೊತ್ತಾಗಿದೆ. ಅಲ್ಲದೆ ಆರೋಪಿಯು ನಕಲಿ ದಾಖಲೆ ಸೃಷ್ಟಿಸಿಕೊಂಡು ಭಾರತದಲ್ಲಿ ಅಕ್ರಮವಾಗಿ ನೆಲೆಸಿರುವುದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿರುತ್ತದೆ. ಕೇರಳದ 8 ಮಂದಿ ಡ್ರಗ್‌ಪೆಡರ್ ಸೆರೆ ಲಾಡ್ಜ್‌ವೊಂದರಲ್ಲಿ ನೆಲೆಸಿದ್ದ ಕೇರಳ ರಾಜ್ಯದ ಮಂದಿ ಡ್ರಗ್ ಪೆಡರ್ಗಳನ್ನು ಸಿಸಿಬಿ ಪೊಲೀಸರು ಬಂಧಿಸಿ 27 ಲಕ್ಷ ಮೌಲ್ಯದ 110 ಗ್ರಾಂ ಎಂಡಿಎಂಎ ಕ್ರಿಸ್ಟಲ್, 10 ಮೊಬೈಲ್ ಫೋನ್‌ಗಳು, 1 ಟ್ಯಾಬ್ ಹಾಗೂ ಕೃತ್ಯಕ್ಕೆ ಉಪಯೋಗಿಸಿದ್ದ 2 ಕಾರ್ಡ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಯಲಹಂಕ ನ್ಯೂ ಟೌನ್ ಪೊಲೀಸ್ ಠಾಣಾ ವ್ಯಾಪ್ತಿಯ ಅಟ್ಟೂರು ಲೇಔಟ್ ನಲ್ಲಿರುವ ಲಾಡ್ಜ್‌ವೊಂದರಲ್ಲಿ ಕೇರಳ ರಾಜ್ಯದ 8 ಡ್ರಗ್ ಪೆಡ್ಲರ್‌ಗಳು ಮಾದಕ ವಸ್ತು ಮಾರಾಟ ಮಾಡುತ್ತಿದ್ದಾರೆಂಬ ಖಚಿತ ಮಾಹಿತಿ ಮೇರೆಗೆ ಸಿಸಿಬಿ ಪೊಲೀಸರು ದಾಳಿ ಮಾಡಿ ಬಂಧಿಸಿದ್ದಾರೆ. ಡ್ರಗ್ ಪೆಡ್ಲರ್‌ಗಳನ್ನು ವಿಚಾರಣೆ ಮಾಡಿದಾಗ ಕೆಲಸಕ್ಕಾಗಿ ಬೆಂಗಳೂರಿಗೆ ಬಂದಿದ್ದು, ಮೋಜಿನ ಜೀವನ ನಡೆಸುವ ಸಲುವಾಗಿ ಮತ್ತು ಕಡಿಮೆ ಸಮಯದಲ್ಲಿ ಹೆಚ್ಚಿನ ಹಣ ಗಳಿಸುವ ಉದ್ದೇಶದಿಂದ ನಗರದಲ್ಲಿ ನೆಲೆಸಿರುವ ವಿದೇಶಿ ಡ್ರಗ್ ಪೆಡ್ಲರ್‌ಗಳಿಂದ ಕಡಿಮೆ ಬೆಲೆಗೆ ಮಾದಕ ವಸ್ತು ಖರೀದಿ ಮಾಡಿ, ಕಾಲೇಜು ವಿದ್ಯಾರ್ಥಿಗಳಿಗೆ, ಐಟಿ-ಬಿಟಿ ಉದ್ಯೋಗಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡಿ ಅಕ್ರಮ ಹಣ ಸಂಪಾದನೆಯಲ್ಲಿ ತೊಡಗಿರುವುದು ಗೊತ್ತಾಗಿದೆ.

ಈ ಕಾರ್ಯಾಚರಣೆಯನ್ನು ಸಿಸಿಬಿ ಘಟಕದ ಮಾದಕ ದ್ರವ್ಯ ನಿಗ್ರಹ ದಳದ ಅಧಿಕಾರಿ, ಸಿಬ್ಬಂದಿಯವರ ತಂಡವು ಯಶಸ್ವಿಯಾಗಿ ಕೈಗೊಂಡಿರುತ್ತಾರೆ.

**ಆತನ ಪತ್ತೆ ಕಾರ್ಯ ಮುಂದು**

ಆರೋಪಿಯು ಡ್ರಗ್ ಪೆಡ್ಡಿಂಗ್ ಬಗ್ಗೆ ಯಾರಿಗೂ ಅನುಮಾನ ಬಾರದಂತೆ ಡಬಲ್ ಲೇಯರ್ ಏರ್ಟೈಟ್ ಪ್ಲಾಸ್ಟಿಕ್ ಕವರ್‌ಗಳಲ್ಲಿ 100 ಗ್ರಾಂ ನಂತೆ ಸಣ್ಣ ಸಣ್ಣ ಪ್ಯಾಕೇಟ್‌ಗಳನ್ನಾಗಿ ಮಾಡಿ ಬ್ಯಾಗ್‌ನಲ್ಲಿಟ್ಟುಕೊಂಡು ಸಾಫ್ಟ್‌ವೇರ್ ಉದ್ಯೋಗಿಯಂತೆ ಡ್ರಗ್ ಪೆಡ್ಡಿಂಗ್ ನಲ್ಲಿ ತೊಡಗಿದ್ದುದು ಪೊಲೀಸರ ತನಿಖೆಯಿಂದ ತಿಳಿದು ಬಂದಿದೆ. ಒಂದು ಗ್ರಾಂ ಹೈಡ್ರೋಪೋನಿಕ್ ಗಾಂಜಾವನ್ನು 12 ಸಾವಿರದಂತೆ ಮಾರಾಟ ಮಾಡಿ ಅಕ್ರಮ ಹಣ ಸಂಪಾದನೆಯಲ್ಲಿ ತೊಡಗಿದ್ದನು. ಈತನ ಮತ್ತೊಬ್ಬ ಸಹಚರ ತಲೆಮರೆಸಿಕೊಂಡಿದ್ದು, ಆತನ ಪತ್ತೆ ಕಾರ್ಯ ಮುಂದುವರೆದಿದೆ.

**ಯಾವುದೇ ಪಾಸ್‌ಪೋರ್ಟ್ ಇಲ್ಲ**

ಬೇಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಿದೇಶಿ ಡ್ರಗ್ ಪೆಡರ್ ಮಾದಕ ವಸ್ತು ಮಾರಾಟ, ಸಾಗಾಟ ಮಾಡುತ್ತಿರುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ಸಿಸಿಬಿ ಪೊಲೀಸರು ದಾಳಿ ಮಾಡಿ ಆತನನ್ನು ಬಂದಿಸಿ ವಿಚಾರಣೆಗೆ ಒಳ ಪಡಿಸಿದಾಗ ಆತನ ಬಳಿ ಯಾವುದೇ ಪಾಸ್‌ಪೋರ್ಟ್ ಇಲ್ಲದಿರುವುದು ಗೊತ್ತಗಿದೆ.

# ಮುಡಾ ಪ್ರಕರಣ ಸಿಎಂಗೆ ತಾತ್ಕಾಲಿಕ ರಿಲೀಫ್

• ಉದಯವಾಹಿನಿ, ಬೆಂಗಳೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮುಡಾದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕುಟುಂಬದ ಸದಸ್ಯರು ನಿವೇಶನ ಪಡೆದಿರುವ ಪ್ರಕರಣ ಸಂಬಂಧ ತನಿಖೆ ಪೂರ್ಣಗೊಳಿಸಿ ಮೇ.7 ರೊಳಗೆ ಅಂತಿಮ ವರದಿ ಸಲ್ಲಿಸುವಂತೆ ಲೋಕಾಯುಕ್ತ ಅಧಿಕಾರಿಗಳಿಗೆ ಜನಪ್ರತಿನಿಧಿಗಳ ನ್ಯಾಯಾಲಯ ಆದೇಶ ನೀಡಿದೆ. ಆದರೆ ಈ ಹಿಂದೆ ಮೈಸೂರು ಲೋಕಾಯುಕ್ತ ತನಿಖಾ ತಂಡ ಸಲ್ಲಿಸಿದ್ದ ಬಿ ರಿಪೋರ್ಟ್ ವರದಿ ಕುರಿತು ಯಾವುದೇ ಅಂತಿಮ ಆದೇಶವನ್ನು ನೀಡದಿರುವ ನ್ಯಾಯಾಲಯ ಮೇ 7ರೊಳಗೆ ಅಂತಿಮ ವರದಿ ಬಂದ ಬಳಿಕ ಆದೇಶ ನೀಡುವುದಾಗಿ ತೀರ್ಪು ನೀಡಿದೆ.



ಜೊತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಒಂದಿಷ್ಟು ಹಿನ್ನಡೆ ಎಂದೇ ಹೇಳಲಾಗಿರುವ ಜಾರಿ ನಿರ್ದೇಶನಾಲಯ(ಇ.ಡಿ) ತಕರಾರು ಅರ್ಜಿ ಸಲ್ಲಿಸಬಹುದೆಂದು ಆದೇಶ ನೀಡಿದೆ. ಲೋಕಾಯುಕ್ತ ಅಂತಿಮ ವರದಿ ಬಂದ ನಂತರವೇ ಮುಖ್ಯಮಂತ್ರಿ ಸಿದ್ದರಾಮಯ್ಯ, ಕುಟುಂಬದ ಸದಸ್ಯರು ತನಿಖಾ ವಿಚಾರಣೆಯನ್ನು ಎದುರಿಸಬೇಕೇ ? ಬೇಡವೇ ಎಂಬುದನ್ನು ಆದೇಶದಲ್ಲಿ ತಿಳಿಸುವುದಾಗಿ ಹೇಳಿದೆ. ವಾದವನ್ನು ಆಲಿಸಿ ಮಂಗಳವಾರಕ್ಕೆ ಕಾಯ್ದಿರಿಸಿದ್ದ ತೀರ್ಪನ್ನು ಪ್ರಕಟಿಸಿದ ಬೆಂಗಳೂರು ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯದ ನ್ಯಾಯಮೂರ್ತಿ ಗಜಾನನ ಭಟ್ ಅವರು ಲೋಕಾಯುಕ್ತ ಅಂತಿಮ ವರದಿ ಬಂದ ನಂತರವೇ ಬಿ ರಿಪೋರ್ಟ್ ಬಗ್ಗೆ ಆದೇಶ ನೀಡುವುದಾಗಿ ಪ್ರಕಟಿಸಿದೆ.

ಲೋಕಾಯುಕ್ತ ಪೊಲೀಸರು ಈವರೆಗೆ ಕೇವಲ ಮಧ್ಯಂತರ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ. ಅಂತಿಮ ವರದಿ ಬಂದಿಲ್ಲವಾದರೂ ಲೋಕಾಯುಕ್ತ ಪೊಲೀಸರು ತನಿಖೆಯನ್ನು ಮುಂದುವರೆಸಿ ಮೇ 7ರೊಳಗೆ ಅಂತಿಮ ವರದಿಯನ್ನು ಸಲ್ಲಿಸಬೇಕೆಂದು ತಾಕೀತು ಮಾಡಿದೆ.

**ಮೇ 7ರವರೆಗೆ ಇ.ಡಿ ತನಿಖೆ ಬೇಡ**

ಅಲ್ಲಿಯವರೆಗೂ ತನಿಖೆ ಮುಂದುವರೆಯಲಿ ಎಂದು ಸೂಚಿಸಿದರು. ನೊಂದ ವ್ಯಕ್ತಿಯಂತೆ ಇ.ಡಿ ಕೂಡ ತಕರಾರರು ಅರ್ಜಿಯನ್ನು ಸಲ್ಲಿಸಲು ಕಾನೂನಿನಲ್ಲಿ ಅವಕಾಶವಿದೆ. ಹೀಗಾಗಿ ಇ.ಡಿ ಪರ ವಕೀಲರ ಅರ್ಜಿಯನ್ನು ನಾವು ಮಾನ್ಯ ಮಾಡುತ್ತೇವೆ. ಯಾವುದೇ ವ್ಯಕ್ತಿ ಕೂಡ ಪ್ರಶ್ನಿಸಲು ಅವಕಾಶ ಇರುವುದರಿಂದ ಬೇಡ ಎನ್ನಲು ಸಾಧ್ಯವಿಲ್ಲ. ಆದರೆ ಮೇ 7ರವರೆಗೆ ಇ.ಡಿ ತನಿಖೆ ಬೇಡ ಎಂದು ನಿರ್ದೇಶನ ನೀಡಿದರು.

ತನಿಖೆಯನ್ನು ಪೂರ್ಣಗೊಳಿಸಿ ಅಂತಮ ವರದಿ ಬರುವವರೆಗೂ ನಾವು ಯಾವುದೇ ಆದೇಶ ನೀಡಲು ಸಾಧ್ಯವಿಲ್ಲ. ಹೀಗಾಗಿ ತನಿಖೆ ಮುಂದುವರೆಯಲ್ಲಿ ನಂತರವೇ ನಾವು ಆದೇಶ ನೀಡುತ್ತೇವೆ.

# ಮತ್ತೊಂದು ಬ್ರಹ್ಮಾಂಡ ಭ್ರಷ್ಟಾಚಾರದ ಬಗ್ಗೆ ಕಾಂಗ್ರೆಸ್ ಶಾಸಕನ ಸ್ಫೋಟಕ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಭ್ರಷ್ಟಾಚಾರದಲ್ಲಿ ನಂ 1 ಆಗಿದೆ ಎಂದು ಸಿಎಂ ಅವರ ಆರ್ಥಿಕ ಸಲಹೆಗಾರರೇ ನೀಡಿದ ಹೇಳಿಕೆಯ ಮುಜುಗರದಿಂದ ರಾಜ್ಯಸರ್ಕಾರ ಇನ್ನೂ ಹೊರಬಂದಿಲ್ಲ. ಇದರ ನಡುವೆ ಆಡಳಿತ ಪಕ್ಷದ ಮತ್ತೊಬ್ಬ ಶಾಸಕ ಬಹಿರಂಗ ವೇದಿಕೆಯಲ್ಲಿ ಕೈ ಮುಗೀತೀನಿ, ಕಾಲಿಗೆ ಬೀಳ್ತಿನಿ, ಹಣ ವಸೂಲಿ ಮಾಡುವುದನ್ನು ನಿಲ್ಲಿಸಿ ಎಂದು ಬೇಡಿಕೊಂಡಿದ್ದಾರೆ.

ದಾವಣಗೆರೆ ಜಿಲ್ಲೆಯ ಮಾಯಕೊಂಡ ಕ್ಷೇತ್ರದ ಶಾಸಕ ಕೆ.ಎಸ್.ಬಸಂತಪ್ಪ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡುವ ವೇಳೆ ಬ್ರಹ್ಮಾಂಡ ಭ್ರಷ್ಟಾಚಾರದ ಕುರಿತು ಸ್ಫೋಟಕ ಮಾಹಿತಿ ನೀಡಿದ್ದಾರೆ.

ರಾಜ್ಯದಲ್ಲಿ ಪೌರ ಕಾರ್ಮಿಕರನ್ನು ಖಾಯಂಗೊಳಿಸಲು ಸಿಎಂ ಸಿದ್ದರಾಮಯ್ಯ ಆದೇಶಿಸಿದ್ದಾರೆ. ಇದರಿಂದ ಒಂದೆಡೆ ಸಂತೋಷ, ಮತ್ತೊಂದೆಡೆ ಕಣ್ಣೀರು ಬರುತ್ತದೆ ಎಂದಿದ್ದಾರೆ. ಪೌರ ಕಾರ್ಮಿಕರ ನೇಮಕಾತಿಗೆ ಆದೇಶಗಳು ಬರುತ್ತಿದ್ದಂತೆ 2 ಲಕ್ಷ, 1 ಲಕ್ಷ, 5 ಲಕ್ಷ


ಉದಯವಾಹಿನಿ ಚಿತ್ರ


ಹಣ ವಸೂಲಿ ಮಾಡಲಾಗುತ್ತಿದೆ. ನಮ್ಮ ಸರ್ಕಾರ ಎಂದಿಗೂ ಭ್ರಷ್ಟಾಚಾರವನ್ನು ಬೆಂಬಲಿಸುವುದಿಲ್ಲ. ನಿಮಗೆ ಕೈ ಮುಗಿಯುತ್ತೇನೆ, ಕಾಲಿಗೆ ಬೀಳುತ್ತೇನೆ. ದುಡ್ಡು ವಸೂಲಿ ಮಾಡುವುದನ್ನು ನಿಲ್ಲಿಸಿ ಎಂದು ವೇದಿಕೆಯಲ್ಲಿದ್ದ ಅಧಿಕಾರಿಗಳಿಗೆ ಕೈ ಮುಗಿದು ಬೇಡಿಕೊಂಡಿದ್ದಾರೆ.

ಶುದ್ಧ ಆಡಳಿತ ಕೊಡುತ್ತೇವೆ ಎಂದು ಭಾರೀ ಪ್ರಚಾರ ಮಾಡಿದ್ದರು. ಅಧಿಕಾರಕ್ಕೆ ಬಂದ ಕಾಂಗ್ರೆಸ್ ನಲ್ಲಿ ಆಡಳಿತ ಪಕ್ಷದ ಶಾಸಕರೇ ಭ್ರಷ್ಟಾಚಾರದ ವಿರುದ್ಧ ಹೇಳಿಕೆಗಳನ್ನು ನೀಡುತ್ತಿರುವುದು ಕೆಲವು ಅನುಮಾನಗಳನ್ನು ಹುಟ್ಟುಹಾಕಿದೆ.

# ಡಿ.ಕೆ.ಶಿವಕುಮಾರ್ ಸಮರ್ಪಿಸಿಕೊಂಡ ವ್ಯಕ್ತಿ

• ಉದಯವಾಹಿನಿ, ಬೆಂಗಳೂರು

ಶಿಲ್ಪಿ ರೂಪಿಸಿದ ಮೂರ್ತಿ ಹೇಗೆ ಪೂಜೆಗೆ ಅರ್ಹವೋ ಹಾಗೆ ವ್ಯಕ್ತಿಯೂ ಕೂಡ ಪೂಜೆ, ಅಧಿಕಾರ ಸೇರಿದಂತೆ ಎಲ್ಲಾ ರೀತಿಯಲ್ಲೂ ಅರ್ಹರಾಗುತ್ತಾರೆ ಎಂದು ಡಾ.ಶ್ರೀ ನಿರ್ಮಲಾನಂದನಾಥ ಮಹಾಸ್ವಾಮೀಜಿಯವರು ತಿಳಿಸಿದರು. ಆದಿಚುಂಚನಗಿರಿ ಮಹಾಸಂಸ್ಥಾನ ಮಠ ಮಹಾಲಕ್ಷ್ಮಿ ಬಡಾವಣೆಯಲ್ಲಿ ನೂತನವಾಗಿ ನಿರ್ಮಿಸಿರುವ ಅಭಯ ಆಂಜನೇಯ ಸ್ವಾಮಿ, ಪ್ರಸನ್ನ ಮಹಾಗಣಪತಿ, ಮಾತಾ ಲಲಿತಾಂಬಿಕಾ ದೇವಾಲಯದ ಕುಂಭಾಭಿಷೇಕ, ಮಹೋತ್ಸವ, ಲೋಕಾರ್ಪಣಾ ಸಮಾರಂಭದ ಅಂಗವಾಗಿ ಹಮ್ಮಿಕೊಂಡಿದ್ದ ಮಾತಾ, ಲಲಿತ, ಸಹಸ್ರನಾಮ, ಪಾರಾಯಣ, ಸತ್ಸಂಗ ಪ್ರವಚನ ಹಾಗೂ ಧಾರ್ಮಿಕ


ಉದಯವಾಹಿನಿ ಚಿತ್ರ

ಸಭೆಯ ದಿವ್ಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೇವಲ ಉಪಮುಖ್ಯಮಂತ್ರಿ ಮಾತ್ರವಲ್ಲ, ತಮ್ಮನ್ನು ತಾವು ಸಮರ್ಪಿಸಿಕೊಂಡ ವ್ಯಕ್ತಿ. ಹಲವಾರು ನೋವು, ಕಷ್ಟ ಸಹಿಸಿಕೊಂಡು ಮೂರ್ತಿಯಾಗಿ, ಶಿಲೆಯಾಗಿ, ವ್ಯಕ್ತಿಯಾಗಿ ನಿಂತಿದ್ದಾರೆ. ಅವರು ಇಲ್ಲಿ ಬಂದು ಮಾತನ್ನಾಡಿದ್ದು ಬಹಳ ಸಂತೋಷವಾಗಿದೆ ಎಂದು ಹೇಳಿದರು.

# ಮುಂದುವರೆಯಲಿರುವ ಬೇಸಿಗೆ ಮಳೆ

• ಉದಯವಾಹಿನಿ, ಬೆಂಗಳೂರು

ಕಳೆದ ಮೂರು ವಾರಗಳಿಂದ ರಾಜ್ಯದಲ್ಲಿ ಚದುರಿದಂತೆ ಮುಂಗಾರುಪೂರ್ವ ಮಳೆಯಾಗುತ್ತಿದ್ದು, ಇನ್ನು ಮೂರು ದಿನಗಳ ಕಾಲ ಮುಂದುವರೆಯಲಿದೆ. ರಾಜ್ಯದ ಒಳ ನಾಡಿನಲ್ಲಿ ಟ್ರಫ್ ನಿರ್ಮಾಣವಾಗಿರುವ ಹಿನ್ನಲೆ ಯಲ್ಲಿ ಭಾಗಶಃ ಮೋಡ ಕವಿದ ವಾತಾವರಣವಿದ್ದು ಅಲ್ಲಲ್ಲಿ ಸಂಜೆ ಅಥವಾ ರಾತ್ರಿ ವೇಳೆ ಮಳೆಯಾಗುವ ಮುನ್ಸೂಚನೆಗಳಿವೆ. ರಾಜಧಾನಿ ಬೆಂಗಳೂರು, ರಾಮ ನಗರ ಸೇರಿದಂತೆ ದಕ್ಷಿಣ ಒಳನಾಡಿನ ಹಲವು ಕಡೆಗಳಲ್ಲಿ ಚದುರಿದಂತೆ ಮಳೆಯಾಗಿದೆ. ಕೆಲವೆಡೆ ಸಾಧಾರಣದಿಂದ ಹಗುರ ಮಳೆಯಾಗಿದ್ದರೆ ಮತ್ತೆ ಕೆಲವೆಡೆ ಬಿರುಗಾಳಿ, ಮಿಂಚು ಗುಡುಗಿನ ಆರ್ಭಟ ದೊಂದಿಗೆ ಮಳೆಯಾಗಿದೆ.

ದಕ್ಷಿಣ ಒಳನಾಡು, ಕರಾವಳಿ ಭಾಗದ ಕೆಲವೆಡೆ ಮಳೆಯಾಗುವ ಸಾಧ್ಯತೆಯಿದ್ದು, ಉತ್ತರ ಒಳನಾಡಿನಲ್ಲಿ ಹಣ ಹವೆ ಮುಂದುವರೆಯಲಿದೆ. ಆದರೆ ರಾಜ್ಯದಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆಗಳು ಸದ್ಯಕ್ಕಿಲ್ಲ. ಬೇಸಿಗೆ ಮಳೆಯಾಗಿರುವುದರಿಂದ ಬೆಂಗಳೂರು ಸುತ್ತಮುತ್ತ ಭಾಗಃ ಮೋಡ ಕವಿದ ವಾತಾವರಣ ಇರಲಿದ್ದು, ಸಂಜೆ, ರಾತ್ರಿ ವೇಳೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಗಳಿವೆ. ಕೆಲವೆಡೆ ಮಾತ್ರ ಮಿಂಚು ಗುಡುಗು, ಬಿರುಗಾಳಿ ಸಹಿತ ಮಳೆ ಯಾಗುವ ಸಾಧ್ಯತೆ ಹೆಚ್ಚಾಗಿದೆ. ಬೆಂಗಳೂರಿನಲ್ಲಿ ಕಳೆದ ಮೂರ್ನಾಲ್ಕು ದಿನಗಳಿಂದ ಮೋಡಕವಿದ ವಾತಾವರಣ ವಿದ್ದು, ಅಲ್ಲಲ್ಲಿ ಸಾಧಾರಣ ಮಳೆಯಾಗುತ್ತಿದೆ.




ಬನಶಂಕರಿ, ಜೆಪಿನಗರ, ಮೆಜಿಸ್ಟಿಕ್ ಹಲವೆಡೆ ಮಳೆಯಾಗಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಹಾವೇರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮ ರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕ ಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ಶಿವಮೊಗ್ಗ, ತುಮಕೂರು, ವಿಜಯನಗರದಲ್ಲಿ ಮಳೆಯಾಗಲಿದೆ. ಯಾದಗಿರಿ, ವಿಜಯಪುರ, ರಾಯಚೂರು, ಗದಗ, ಧಾರವಾಡ, ಬೀದರ್ ಬೆಳಗಾವಿ, ಬಾಗಲಕೋಟೆಯಲ್ಲಿ ಒಣಹವೆ ಮುಂದುವರೆಯಲಿದೆ. ಕಲಬುರಗಿಯಲ್ಲಿ 40.6 ಡಿಗ್ರಿ ಸೆಲ್ಸಿಯಸ್ ಅತ್ಯಂತ ಗರಿಷ್ಠ ಉಷ್ಣಾಂಶ ದಾಖಲಾಗಿದೆ. ಶಿಗ್ಗಾಂವ್, ನಾಪೋಕ್ಲು, ತಿಪಟೂರು, ಬೆಂಗಳೂರಿನಲ್ಲಿ ಮಳೆಯಾಗಿದೆ.

## ಸಾಮಾಜಿಕ ನ್ಯಾಯವೆಂಬ ಪವಿತ್ರ ಪರಿಕಲ್ಪನೆಯನ್ನು ರಾಜಕೀಯ ಲಾಭಕ್ಕೆ ಬಳಸಿಕೊಳ್ಳುವುದು ಆತ್ಮವಂಚನೆಯಲ್ಲವೇ?

# ಒಣ ಪ್ರತಿಷ್ಠೆ ಬದಿಗಿಟ್ಟು ವೈಜ್ಞಾನಿಕ ಸಮೀಕ್ಷೆ ನಡೆಸಿ: ಆರ್. ಅಶೋಕ್

• ಉದಯವಾಹಿನಿ, ಬೆಂಗಳೂರು

ಹಿಂದುಳಿದ ವರ್ಗಗಳ ಆಯೋಗದ ಕಾಂತರಾಜು ವರದಿ ಬಗ್ಗೆ ನಾಡಿನ ಜನತೆಗೆ ಇರುವ ತಕರಾರು



ಮತ್ತು ಅನುಮಾನ ಇರುವ ಕಾರಣ, ಇನ್ನಾದರೂ ಒಣ ಪ್ರತಿಷ್ಠೆ, ಸ್ವಹಿತಾಸಕ್ತಿ ಬದಿಗಿಟ್ಟು ಎಲ್ಲರೂ ಒಪ್ಪುವಂತಹ ವೈಜ್ಞಾನಿಕ ಸಮೀಕ್ಷೆ ನಡೆಸಿ ಹೊಸ ವರದಿ ಪಡೆಯಲು ಸಿಎಂ ಸಿದ್ದರಾಮಯ್ಯ ಅವರು ಮುಂದಾಗಬೇಕು ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಆಗ್ರಹಿಸಿದ್ದಾರೆ. ಈ ಕುರಿತು ತಮ್ಮ ಅಧಿಕೃತ ಸಾಮಾಜಿಕ ಜಾಲ ತಾಣ ಎಕ್ಸ್‌ನಲ್ಲಿ ಸುಧೀರ್ಘವಾದ ಪೋಸ್ಟ್ ಮಾಡಿರುವ ಅಶೋಕ್ ಅವರು. ಎಲ್ಲರೂ ಒಪ್ಪು ವಂತಹ ವೈಜ್ಞಾನಿಕ ಸಮೀಕ್ಷೆ ನಡೆಸಿ ಹೊಸ ವರದಿ ಪಡೆಯಲು ತಮ್ಮ ತಕರಾರೇನು? ಸಿಎಂ ಸಿದ್ದರಾಮಯ್ಯನವರು ಪ್ರಾಮಾಣಿಕ, ಪಾರದರ್ಶಕ ನಿರ್ಧಾರ ತೆಗೆದುಕೊಳ್ಳಲಿ ಎಂದು ಒತ್ತಾಯಿಸಿದ್ದಾರೆ. ತಮ್ಮ ಪೋಸ್ಟ್‌ನಲ್ಲಿ ಸರ್ಕಾರಕ್ಕೆ ಸಾಲು ಸಾಲು ಪ್ರಶ್ನೆಗಳನ್ನು ಮಾಡಿರುವ ಅವರು, ಡಿಸಿಎಂ ಡಿ.ಕೆ.ಶಿವಕುಮಾರ್ ಅವರೊಂದಿಗೆ ಆಗಿದೆ ಎನ್ನಲಾದ ಅಧಿ ಕಾರ ಹಂಚಿಕೆ ಒಪ್ಪಂದವನ್ನ ಹೇಗಾದರೂ ಮಾಡಿ ಮುಂದೂಡಲು, ಅಧಿಕಾರ ಹಂಚಿಕೆ ಒಪ್ಪಂದದಿಂದ ತಪ್ಪಿಸಿಕೊಳ್ಳಲು ಜಾತಿ ಜನಗಣತಿ ವರದಿಯನ್ನು ತಂತ್ರವಾಗಿ ಬಳಸಿಕೊಳ್ಳಲಾಗುತ್ತಿದೆಯೇ? ಡಿಸಿಎಂ.ಡಿ.ಕೆ. ಶಿವಕುಮಾರ್ ಅವರನ್ನು ಇಕ್ಕಟ್ಟಿಗೆ ಸಿಲುಕಿಸಲು ತಾವು ಈ ವರದಿ ಜಾರಿ ಬಾಣ ಬಿಟ್ಟಿರುವ ಬಗ್ಗೆ ಕಾಂಗ್ರೆಸ್ ಪಕ್ಷದಲ್ಲೇ ಚರ್ಚೆ ನಡೆಯುತ್ತಿದೆ. ಇದರ ಬಗ್ಗೆ ಏನು ಹೇಳುತ್ತೀರಿ? ಎಂದು ಪ್ರಶ್ನಿಸಿದ್ದಾರೆ.

ಜಾತಿಗಣತಿಯನ್ನು ರಾಜಕೀಯ ದಾಳವಾಗಿ ಬಳಸುವುದು ದಲಿತರಿಗೆ, ಹಿಂದುಳಿದ ವರ್ಗಗಳಿಗೆ, ತಳ ಸಮುದಾಯಗಳಿಗೆ ಮಾಡುವ ಅವಮಾನವಲ್ಲವೇ? ಸಾಮಾಜಿಕ ನ್ಯಾಯ ವೆಂಬ ಪವಿತ್ರ ಪರಿಕಲ್ಪನೆಯನ್ನು ರಾಜಕೀ ಯ ಲಾಭಕ್ಕೆ ಬಳಸಿಕೊಳ್ಳುವುದು ಆತ್ಮವಂಚನೆಯಲ್ಲವೇ?, ಜಾತಿ ಜನಗಣತಿ ವರದಿಯ ದತ್ತಾಂಶಗಳು ಮಾಧ್ಯಮಗಳಲ್ಲಿ ಸೋರಿಕೆಯಾಗಲು ಕಾರಣ ವೇನು? ಇದು ಸರ್ಕಾರದ ಲೋಪವೋ ಅಥವಾ ಉದ್ದೇಶಪೂರ್ವಕವಾಗಿಯೇ ವರದಿಯ ಅಂಕಿ-ಅಂಶಗಳನ್ನು ಮಾಧ್ಯಮಗಳಿಗೆ ಸೋರಿಕೆ ಮಾಡಲಾಗುತ್ತಿದೆಯೇ? ಕೇವಲ ವೀರಶೈವ ಲಿಂಗಾಯತ ಒಕ್ಕಲಿಗ ಜನಾಂಗಕ್ಕೆ ಸೇರಿದ ಉಪಜಾತಿಗಳನ್ನು ಬೇರ್ಪಡಿಸಲಾಗಿದೆ. ಇದೇ ಮಾನದಂಡ ಮುಸ್ಲಿಂ, ಕ್ರಿಶ್ಚಿಯನ್ ಧರ್ಮಗಳಿಗೆ ಏಕೆ ಅನುಸರಿಸಿಲ್ಲ? ಇದರ ಹಿಂದಿನ ಹುನ್ನಾರ ಏನು? ಎಂದು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಜಾತಿ ಜನ ಗಣತಿ ವರದಿಗೆ ಆಯೋಗದ ಕಾರ್ಯ ದರ್ಶಿ ಸಹಿ ಮಾಡಿಲ್ಲ ಎನ್ನುವ ಅನು ಮಾನವಿದೆ. ಇದು ನಿಜವೇ? ಒಂದು ವೇಳೆ ಸಹಿ ಮಾಡಿಲ್ಲವಾದರೆ ಯಾಕೆ ಮಾಡಿಲ್ಲ? ಸೀಲ್ಡ್ ಬಾಕ್ಸ್‌ನ ಲ್ಲಿದ್ದ ಮೂಲ ಪ್ರತಿ, ಹಸ್ತಪ್ರತಿ ಲಭ್ಯವಿಲ್ಲವೆಂದು ಹಿಂದುಳಿದ ವರ್ಗಗಳು ಶಾಶ್ವತ ಯೋಗದ ಅಧ್ಯಕ್ಷರಾಗಿದ್ದ ಜಯಪ್ರಕಾಶ್ ಹೆಗ್ಡೆ ಅವರು ಹೇಳಿದ್ದರು.



ಸಂಕಟ ಬಂದಾಗ ವೆಂಕಟರಮಣ ಎಂಬಂತೆ ಸಿಎಂ ಸಿದ್ದರಾಮಯ್ಯ ಅವರು ತಮ್ಮ ಕುರ್ಚಿಗೆ ಕಂಟಕ ಬಂದಾಗಲೇ ಜಾತಿ ಜನಗಣತಿ ವರದಿ ಎಂಬ ಮಂಕು ಬೂದಿ ಎರಚಿ ಜನರ ಗಮನ ಬೇರೆಡೆ ಸೆಳೆಯುವ ಪ್ರಯತ್ನ ಮಾಡೋ ಕುತಂತ್ರ ಈಗ ಗುಟ್ಟಾಗಿ ಏನು ಉಳಿದಿಲ್ಲ, ಇತ್ತೀಚೆಗೆ ನಡೆದ ಎಐಸಿಸಿ ಅಧಿವೇಶನದ ಸಂದರ್ಭದಲ್ಲಿ, ದೆಹಲಿ ಪ್ರವಾಸದ ವೇಳೆ ಸಿಎಂ ಸಿದ್ದರಾಮಯ್ಯನವರಿಗೆ ಭಾರಿ ಹಿನ್ನಡೆ ಆಗಿದೆ. ಹನಿಟ್ರ್ಯಾಪ್ ಸೇರಿದಂತೆ ಸರ್ಕಾರದ ಸಾಲು ಸಾಲು ವೈಫಲ್ಯಗಳ ಬಗ್ಗೆ, ಎಡವಟ್ಟುಗಳು ವಿಚಾರವಾಗಿ ಹೈಕಮಾಂಡ್ ಸಿದ್ದರಾಮಯ್ಯನವರ ಬಣದ ಕಿವಿ ಹಿಂಡಿದೆ.

ಆದ್ದರಿಂದಲೇ ಈಗ ಸಿದ್ದರಾಮಯ್ಯನವರು ದಿಢೀರನೆ ಜಾತಿ ಜನಗಣತಿ ಜಪ ಮಾಡುತ್ತಿದ್ದಾರೆ ಎನ್ನುವ ಗುಸುಗುಸು ಕಾಂಗ್ರೆಸ್ ವಲಯದಲ್ಲೇ ಕೇಳಿಬರುತ್ತಿದೆ ಎಂದು ಆರೋಪಿಸಿದ್ದಾರೆ.

**ಸಕಾರಾತ್ಮಕ ಹೆಜ್ಜೆ ಇಟ್ಟರೂ ಅದಕ್ಕೆ ನಮ್ಮ ಪಕ್ಷದ ಬೆಂಬಲ**

ನಾನು ಈಗಾಗಲೇ ಹಲವಾರು ಬಾರಿ ಹೇಳಿರುವಂತೆ ನಮ್ಮ ಸಮಾಜದಲ್ಲಿರುವ ತಳಸಮುದಾಯಗಳ ಅಭ್ಯುದಯಕ್ಕೆ ಯಾವುದೇ ಸಕಾರಾತ್ಮಕ ಹೆಜ್ಜೆ ಇಟ್ಟರೂ ಅದಕ್ಕೆ ನಮ್ಮ ಪಕ್ಷದ ಬೆಂಬಲವಿದೆ. ಆದರೆ ರಾಜಕೀಯ ಹಾವು ಏಣಿ ಆಟದಲ್ಲಿ ಕೆಳಗೆ ಬಿದ್ದಾಗಲೆಲ್ಲ, ಅಧಿಕಾರದ ಚದುರಂಗದಾಟದಲ್ಲಿ ಮುಗ್ಗರಿಸಿದಾಗಲೆಲ್ಲ ಮೇಲೇಳುವುದಕ್ಕೆ ತಳಸಮುದಾಯಗಳನ್ನು ದಾಳವಾಗಿ ಬಳಸುವುದಕ್ಕೆ ನಮ್ಮ ವಿರೋಧವಿದೆ. ಕಾಂತರಾಜು ಆಯೋಗದ ವರದಿ ಅವೈಜ್ಞಾನಿಕ, ಅಪೂರ್ಣ, ಅವಾಸ್ತವಿಕ, ಅಪ್ರಸ್ತುತ ಎನ್ನುವುದು ಬಹುತೇಕರ ಅಭಿಪ್ರಾಯ. ಇದಕ್ಕೆ ಅನೇಕ ಕಾರಣಗಳೂ ಇವೆ. ಈ ಹಿನ್ನಲೆಯಲ್ಲಿ ರಾಜ್ಯದ ಜನತೆಯ ಪರವಾಗಿ ಸಿಎಂ ಸಿದ್ದರಾಮಯ್ಯನವರ ಮುಂದೆ ಕೆಲವು ಗಂಭೀರವಾದ ಪ್ರಶ್ನೆಗಳನ್ನು ಇಡುತ್ತಿದ್ದೇನೆ ಎಂದರು.

# ಜಾತಿ -ಜಾತಿ ಅಂತ ಮಂಗ್ಯಾಗಳ ರೀತಿ ಕಿತ್ತಾಡಬೇಡಿ: ಪ್ರತಾಪ್ ಸಿಂಹ

• ಉದಯವಾಹಿನಿ, ಮೈಸೂರು

ಜಾತಿ ಸಂಖ್ಯೆ ಕಡಿಮೆಯಾಯಿತು ಎಂದು ಮಂಗ್ಯಾಗಳ ತರ ಕಿತ್ತಾಡಬೇಡಿ, ಹಿಂದೂಗಳಾಗಿ ಈ ಜಾತಿ ಗಣತಿ ನೋಡಿ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಕಿವಿಮಾತು ಹೇಳಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಅವರು, ಜಾತಿಗಣತಿ ಸಂಖ್ಯೆ ಹೊರ ಹಾಕಿ ಸಿಎಂ ಸಿದ್ದರಾಮಯ್ಯ ತನ್ನ ಪಕ್ಷ, ಪ್ರತಿಪಕ್ಷ ಇಬ್ಬರನ್ನು ಕುರಿ ಮಾಡಿದ್ದಾರೆ. ವಾಸ್ತವ ವಿಚಾರಗಳನ್ನು ಮರೆ ಮಾಚಲು ಸಿದ್ದರಾಮಯ್ಯ ಜಾತಿ ಜನಗಣತಿಯನ್ನು ಮುನ್ನೆಲೆಗೆ ಬಿಟ್ಟಿದ್ದಾರೆ. ಸಿಎಂ ಸಿದ್ದರಾಮಯ್ಯ ಜಾತಿಗಳನ್ನು ಒಡೆಯುತ್ತಿಲ್ಲ, ಒಟ್ಟಾರೆಯಾಗಿ ಅವರು ಹಿಂದೂ ಧರ್ಮವನ್ನು ಒಡೆಯುತ್ತಿದ್ದಾರೆ ಎಂದು ಹೇಳಿದರು. ಲಿಂಗಾಯತರು, ಒಕ್ಕಲಿಗರು, ಒಬಿಸಿ ಜನಸಂಖ್ಯೆ ಕಡಿಮೆ ಆಯ್ತು ಅನ್ನೋದಷ್ಟೆ ನೋಡಬೇಡಿ. ಒಟ್ಟಾರೆ ಹಿಂದೂಗಳ ಸ್ಥಿತಿ ಏನಾಗಿದೆ ನೋಡಿ. ನಮ್ಮ ಜಾತಿ ಸಂಖ್ಯೆ ಕಡಿಮೆ ಆಯ್ತು ಅಂತಾ ಪರಸ್ಪರ ಮಂಗ್ಯಾಗಳ ರೀತಿ ಕಿತ್ತಾಡಬೇಡಿ. ಹಿಂದೂಗಳಾಗಿ ಈ ಜಾತಿ ಗಣತಿ ನೋಡಿ. ಯಾರ ಮನೆಗೆ ಬಂದು ಜಾತಿ ಗಣತಿ ಮಾಡಿದ್ದಾರೆ ? ಸಿಎಂ ಎಲ್ಲರನ್ನು ಕುರಿ ಮಾಡುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಆಗ ಅಹಿಂದ ಅಂತಾ ಆಗ ಒಂದು ವರ್ಗ ಒಡೆದರು. ಈಗ ಜಾತಿಗಣತಿ ಹೆಸರಲ್ಲಿ ಇಡೀ ಹಿಂದೂ ಧರ್ಮ ಒಡೆಯುತ್ತಿದ್ದಾರೆ. ಗ್ಯಾರಂಟಿ ಯೋಜನೆಗಳು ಹಳ್ಳ ಹಿಡಿದಿವೆ. ಗ್ಯಾರಂಟಿ ಯೋಜನೆಗಳು ಹಳ್ಳ ಹಿಡಿದಿವೆ. ಬೆಲೆ ಏರಿಕೆಯಾಗಿದೆ. ಮುಡಾ ಹಗರಣ, ವಾಲ್ಮೀಕಿ ಹಗರಣ ನಡೆದಿದೆ. ಇವೆಲ್ಲವನ್ನು ಮರೆ ಮಾಚಲು ಜಾತಿಗಣತಿ ಬಿಚ್ಚಿಟ್ಟಿದ್ದಾರೆ. ಕುರ್ಚಿ ಉಳಿಸಿಕೊಳ್ಳಲು ಸಿದ್ದರಾಮಯ್ಯ ಮಾಡುತ್ತಿರುವ ನಾಟಕ ಇದು. ಲಿಂಗಾಯತರಿಗೆ, ಒಕ್ಕಲಿಗರು, ಒಬಿಸಿ ಎಲ್ಲದರಲ್ಲೂ ಉಪಜಾತಿ ಲೆಕ್ಕ ಹಾಕಲಾಗಿದೆ. ಮುಸ್ಲಿಂ, ಕ್ರಿಶ್ಚಿಯನ್‌ರಲ್ಲಿ ಉಪಜಾತಿ ಯಾಕೆ ಲೆಕ್ಕ ಹಾಕಿಲ್ಲ ಎಂದು ಪ್ರಶ್ನಿಸಿದರು. ನಿಮ್ಮ ಪಕ್ಷದಲ್ಲೇ ಜಾತಿಗಣತಿ ಗೊಂದಲ ಇದೆ. ಒಂದು ಕಡೆ ಡಿಕೆ ಶಿವಕುಮಾರ್ ಒಕ್ಕಲಿಗ ಶಾಸಕರ ಸಭೆ ಮಾಡುತ್ತಿದ್ದಾರೆ. ಮತ್ತೊಂದು ಕಡೆ ಶ್ಯಾಮನೂರು ಶಿವಶಂಕರಪ್ಪ ಲಿಂಗಾಯತರ ಸಭೆ ಕರೆದಿದ್ದಾರೆ ಎಂದು ಹೇಳಿದರು.

**ಹಿಂದೂಗಳ ಸ್ಥಿತಿ ಏನಾಗಿದೆ ನೋಡಿ**



## ಅತ್ಯಾಚಾರ: ಪ್ರಭಾವಿಗಳಿಗೂ ಶಿಕ್ಷೆಯಾಗಲಿ

• ಉದಯವಾಹಿನಿ, ಬೆಳಕವಾಡಿ



ಜನವಾದಿ ಮಹಿಳಾ ಸಂಘಟನೆ ಯಾವಾಗಲೂ ಸಮಾನತೆ, ಪ್ರಜಾಪ್ರಭುತ್ವ ಮಹಿಳೆಯರ ವಿಮೋಚನೆಗಾಗಿ ಹೋರಾಡುತ್ತಿದೆ ಎಂದು ಕೇರಳದ ಮಾಜಿ ಸಚಿವೆ, ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷೆ ಪಿ.ಕೆ. ಶ್ರೀಮತಿ ಟೀಚರ್ ತಿಳಿಸಿದರು. ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆ ವತಿಯಿಂದ ಸಾಂಸ್ಕೃತಿಕ ನಾಯಕ ಬಸವಣ್ಣ, ಮಂಟೇಸ್ವಾಮಿ ಹಾಗೂ ಡಾ. ಬಿ. ಆರ್. ಅಂಬೇಡ್ಕರ್ ಸ್ಮರಣಾರ್ಥ ಮುಟ್ಟನಹಳ್ಳಿ ಗ್ರಾಮದ ದೊಡ್ಡಮ್ಮತಾಯಿ ತೋಪಿನ ಆವರಣದಲ್ಲಿ ಮಂಗಳವಾರ ನಡೆದ 'ಸಾಮಾಜಿಕ ನ್ಯಾಯಕ್ಕಾಗಿ ಸಾಂಸ್ಕೃತಿಕ ಜಾಥಾ'ವನ್ನು ಉದ್ಘಾಟಿಸಿ ಅವರು ಮಾತನಾಡಿದರು. 40 ವರ್ಷಗಳಿಂದ ದೇಶದಲ್ಲಿರುವ ಅಸಮಾನತೆ ವಿರುದ್ಧ ಹೋರಾಟ ಮಾಡುತ್ತಾ ಬಂದಿದ್ದೇವೆ. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಕೊಟ್ಟಿರುವ ಸಮಾನತೆಯನ್ನು ನಾವು ಹೇಗೆ ಪಡೆದಿದ್ದೇವೆ, ಅಂಬೇಡ್ಕರ್ ದಲಿತನ ಮನೆಯಲ್ಲಿ ಹುಟ್ಟಿದ್ದಾರೆ ಎಂಬ ಕಾರಣಕ್ಕೆ ಸರ್ಕಾರ ನಡೆಸುತ್ತಿರುವ ಅನೇಕ ನಾಯಕರು ಅಂಬೇಡ್ಕರ್ ಅವರನ್ನು ಅವಮಾನಿಸುವ ಮಾತುಗಳನ್ನಾಡುತ್ತಿದ್ದಾರೆ ಎಂದು ಆರೋಪಿಸಿದರು. ಉದ್ಯೋಗ ಖಾತ್ರಿ ಯೋಜನೆಯಡಿ 100ರಲ್ಲಿ 99 ಮಂದಿ ಮಹಿಳೆಯರು ಕೆಲಸ ಮಾಡುತ್ತಿದ್ದಾರೆ.

ಅಂಗನವಾಡಿ, ಮಧ್ಯಾಹ್ನದ ಬಿಸಿಯೂಟ, ಆಶಾ ಕಾರ್ಯಕರ್ತೆಯಾಗಿ ಮಹಿಳೆಯರು ಕೆಲಸ ಮಾಡುತ್ತಿದ್ದಾರೆ. ಆದರೆ ಕೂಲಿ ಬಹಳ ಕಡಿಮೆಯಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು. 5 ವರ್ಷದ ಬಾಲಕಿ ಮೇಲೆ ಅತ್ಯಾಚಾರ, ಕೊಲೆ ಮಾಡಿದ ಕಾರ್ಮಿಕನನ್ನು ಪೊಲೀಸರು ಎನ್ ಕೌಂಟರ್ ಮಾಡಿ ಸಾಯಿಸಿದ್ದಾರೆ. ಆದರೆ ಅನೇಕ ನಾಯಕರು, ಶಾಸಕರು, ಮಂತ್ರಿಗಳು, ಸಂಸದರು ಮಹಿಳೆಯರು, ಮಕ್ಕಳ ಮೇಲೆ ಅತ್ಯಾಚಾರ ಮಾಡಿದ್ದಾರೆ. ಅವರ ಮೇಲೆ ಯಾವುದೇ ಕಾನೂನು ಕ್ರಮ ವತ್ತು ಎಫ್‌ಐಆರ್ ದಾಖಲಾಗುತ್ತಿಲ್ಲ. ಇಂತವರಿಗೆ ಸರ್ಕಾರವೇ ಬೆಂಬಲ, ರಕ್ಷಣೆ ನೀಡುತ್ತಿದೆ ಎಂದು ಕಿಡಿಕಾರಿದರು.


> ಮಂಟೇಸ್ವಾಮಿ, ಮಹದೇಶ್ವರ, ಸಿದ್ದಪ್ಪಾಜಿ, ರಾಚಪ್ಪಾಜಿ, ದೊಡ್ಡಮ್ಮತಾಯಿ ಅವರ ಸಮಾಜದ ಸುಧಾರಣೆ, ಮೌಢ್ಯ ಹೋಗಲಾಡಿಸುವ ಕೆಲಸಗಳನ್ನು ಮುನ್ನೆಲೆಗೆ ತರುವುದಕ್ಕೆ ನಾವು ಮುಂದಾಗೋಣ
>
> – ದೇವಿ, ಜನವಾದಿ ಮಹಿಳಾ ಸಂಘಟನೆ ರಾಜ್ಯ ಪ್ರಧಾನ ಕಾರ್ಯದರ್ಶಿ

### ಸಂವಿಧಾನ ಎಲ್ಲಾ ಜಾತಿ ಒಂದೇ ಎಂದು ಹೇಳುವಾಗ ಜಾತಿ ಗಣತಿ ಯಾಕೆ ಬೇಕು?

## ದೇಶದಲ್ಲಿ ಜಾತಿ ಭಿನ್ನಾಭಿಪ್ರಾಯ ಇರಬಾರದು

• ಉದಯವಾಹಿನಿ, ರಾಮನಗರ

ಸಂವಿಧಾನ ಎಲ್ಲಾ ಜಾತಿ ಒಂದೇ ಎಂದು ಹೇಳುವಾಗ ಜಾತಿ ಗಣತಿ ಯಾಕೆ ಬೇಕು? ಎಂದು ಬೆಂಗಳೂರು ಗ್ರಾಮಾಂತರ ಸಂಸದ, ಖ್ಯಾತ ಹೃದ್ರೋಗ ತಜ್ಞ ಡಾ. ಸಿಎನ್ ಮಂಜುನಾಥ್ ಪ್ರಶ್ನೆ ಮಾಡಿದ್ದಾರೆ. ರಾಮನಗರದಲ್ಲಿ ನಡೆದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಡಾ.ಸಿಎನ್ ಮಂಜುನಾಥ್ ಅವರು, ಡಾ.ಬಿಆರ್ ಅಂಬೇಡ್ಕರ್ ಅವರು ದೇಶದಲ್ಲಿ ಜಾತಿ ಭಿನ್ನಾಭಿಪ್ರಾಯ ಇರಬಾರದು ಎಂದರು. ಸಂವಿಧಾನ ಕೂಡ ಹೇಳುತ್ತೆ ಜಾತಿ ಬಗ್ಗೆ ಮಾತನಾಡ ಬಾರದೆಂದು. ಹೀಗಾಗಿ, ಜಾತಿ ಗಣತಿ ಯಾಕೆ ಎಂಬುದು ಗೊತ್ತಿಲ್ಲ. ಈ ವಿಚಾರವನ್ನ ಜನಾಭಿಪ್ರಾಯಕ್ಕೆ ಬಿಡಬೇಕು ಎಂದರು.



ಭಾರತ ಜ್ಯಾತ್ಯಾತೀತ ರಾಷ್ಟ್ರವಾಗಿದೆ. ಜಾತಿಗಣತಿಗೆ ಯಾವುದೇ ಮಹತ್ವವಿಲ್ಲ, ಸಾಮಾಜಿಕ, ಶೈಕ್ಷಣಿಕವಾಗಿ ಬಂದ ಗಣತಿಯನ್ನ ಜಾತಿಗೆ ಹೋಲಿಕೆ ಮಾಡಬಾರದು. ಸಂವಿಧಾನ ಎಲ್ಲಾ ಜಾತಿ ಒಂದೇ ಎಂದು ಹೇಳುವಾಗ ಜಾತಿ ಗಣತಿ ಯಾಕೆ ಬೇಕು? ಇದರಿಂದ ಜಾತಿಜಾತಿಗಳ ನಡುವೆ ವೈಮನಸ್ಸು, ಕಂದಕಗಳು ಇನ್ನು ಜಾಸ್ತಿ ಆಗುತ್ತದೆ ಎಂದು ತಿಳಿಸಿದರು.

**ಎಲ್ಲಾ ಜಾತಿಯಲ್ಲೂ ಬಡವರಿದ್ದಾರೆ:** ಎಲ್ಲಾ ಜಾತಿಗಳಲ್ಲೂ ಬಡವರು ಇದ್ದಾರೆ. ಜಾತಿಗಣತಿ ವಿಧಾನಸಭೆ, ವಿಧಾನಪರಿಷತ್ ನಲ್ಲಿ ಚರ್ಚೆ ಆಗಬೇಕು. ಸಾಮಾಜಿಕ ಕಳಕಳಿ, ತಜ್ಞರ ಜೊತೆ ಚರ್ಚೆ ಆಗಬೇಕು. ವಿಧಾನಸಭೆಯ ಕಮಿಟಿ ಮಾಡಬೇಕು. ಆತುರದ ನಿರ್ಧಾರದ ಸರಿ ಅಲ್ಲ ಎಂದು ಸಂಸದರು ಅಭಿಪ್ರಾಯಪಟ್ಟಿದ್ದಾರೆ.

**ಸಂವಿಧಾನವೇ ನಮ್ಮ ದೇಶದ ಏಕೈಕ ರಾಷ್ಟ್ರೀಯ ಗ್ರಂಥ:** ಪ್ರಪಂಚದ ಅನೇಕ ರಾಷ್ಟ್ರಗಳು, ನಾಯಕರು ಹೆಚ್ಚು ಗೌರವ ನೀಡುವುದು ನಮ್ಮ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನಕ್ಕೆ. ನಮ್ಮ ದೇಶದ ಏಕೈಕ ರಾಷ್ಟ್ರೀಯ ಗ್ರಂಥ. ಭಾರತಕ್ಕೆ ಸಂವಿಧಾನ ಎನ್ನುವ ಆತ್ಮ ನೀಡಿದ ಪರಮಾತ್ಮ ಡಾ.ಬಿ.ಆರ್.ಅಂಬೇಡ್ಕರ್ ಅವರು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಬಣ್ಣಿಸಿದರು.

ನಗರದ ದೊಮ್ಮಲೂರಿನಲ್ಲಿ ಬಾಬಾ ಸಾಹೇಬ್ ಡಾ. ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಯನ್ನು ಡಿಸಿಎಂ ಡಿ ಕೆ ಶಿವಕುಮಾರ್ ಅವರು ಸೋಮವಾರ ಅನಾವರಣಗೊಳಿಸಿ ಮಾತನಾಡಿದರು. ಸಮಾಜದ ಎಲ್ಲಾ ವರ್ಗಗಳಿಗೆ ಸಾಮಾಜಿಕ ನ್ಯಾಯ ದೊರೆಯಬೇಕು ಎಂದು ಸಂವಿಧಾನ ಕೊಟ್ಟ ಧೀಮಂತ ವ್ಯಕ್ತಿ. ನಾವು ಅಂಬೇಡ್ಕರ್ ಅವರ ಪ್ರತಿಮೆಗೆ ಪೂಜೆ ಮಾಡುವುದಕ್ಕಿಂತ ಪ್ರತಿಭೆಗೆ ಪೂಜೆ ಮಾಡಬೇಕು. ಜನಸಂಖ್ಯೆಯ ಆಧಾರದ ಮೇಲೆ ನಮ್ಮ ಕರ್ನಾಟಕದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳಿಗೆ ಜನಸಂಖ್ಯೆಯ ಆಧಾರದ ಮೇಲೆ ಅನುದಾನ ಮೀಸಲಿಡಲಾಗಿದೆ. ಗುತ್ತಿಗೆಯಲ್ಲಿ ಅವಕಾಶ ನೀಡಲಾಗಿದೆ. ಪಾವಗಡದ ಸೌರ ಪಾರ್ಕ್ ನಿರ್ಮಾಣದ ವೇಳೆಯಲ್ಲಿಯೂ ಮೀಸಲಾತಿ ನೀಡಲಾಯಿತು. ಈ ಮೂಲಕ ಅಂಬೇಡ್ಕರ್ ಅವರ ಆಶಯಗಳಿಗೆ ಗೌರವ ನೀಡಿದ್ದೇವೆ. ಶೋಷಿತರನ್ನು ಉದ್ಯಮಿಗಳನ್ನಾಗಿ ಮಾಡುವುದು ನಮ್ಮ ಉದ್ದೇಶ ಎಂದರು.

ಸಂವಿಧಾನ ರಕ್ಷಣೆಯ ಬಗ್ಗೆ ಏಕೆ ನಾವೆಲ್ಲರು ಇಷ್ಟು ಮಾತನಾಡುತ್ತೇನೆ ಎಂದರೆ, ನಾವು ಮಾತನಾಡಲು ರಕ್ಷಣೆ ನೀಡುತ್ತದೆ. ಬದುಕಿಗೆ, ಆಸ್ತಿಗೆ ಸೇರಿದಂತೆ ನಮ್ಮ ಜೀವನದ ಪ್ರತಿಯೊಂದು ಹಂತದಲ್ಲಿಯೂ ಸಂವಿಧಾನ ರಕ್ಷಣೆ ನೀಡುತ್ತದೆ. ನ್ಯಾಯ ಒದಗಿಸುವುದೇ ನಮ್ಮ ಸಂವಿಧಾನದ ಮೂಲಮಂತ್ರ. ಸಂವಿಧಾನವೇ ನಮ್ಮ ತಂದೆ, ತಾಯಿ, ಸಂವಿಧಾನವೇ ಬಂಧು ಬಳಗ, ಅಂಬೇಡ್ಕರ್ ಅವರ ಮಾತಿಗೆ ತಪ್ಪಿ ನಡೆದರೆ ಮೆಚ್ಚನಾ ಪರಮಾತ್ಮನು ಎಂದು ಹೇಳಿದರು. ಅಸ್ಪೃಶ್ಯತೆ ನಿರ್ಮೂಲನೆ ಮಾಡಲು ಸಾಕಷ್ಟು ಹೋರಾಟ ನಡೆಸಿದವರು ಬಾಬಾ ಸಾಹೇಬರು. ನಮ್ಮ ನಾಯಕರಾದ ರಾಹುಲ್ ಗಾಂಧಿ ಅವರು ಸಂಸದರಾಗಿ ಪ್ರಮಾಣ ವಚನ ಸ್ವೀಕಾರ ಮಾಡುವಾಗ ಸಂವಿಧಾನದ ಪ್ರತಿ ಹಿಡಿದುಕೊಂಡು ಇತಿಹಾಸ ಸೃಷ್ಟಿ ಮಾಡಿದರು. ನಾನು ಕೆಪಿಸಿಸಿ ಅಧ್ಯಕ್ಷನಾಗಿ ಅಧಿಕಾರವಹಿಸಿಕೊಂಡಾಗ ಹಿರಿಯ ನಾಯಕರಾದ ರೆಹಮಾನ್ ಖಾನ್ ಅವರಿಂದ ಸಂವಿಧಾನ ಪೀಠಿಕೆ ಓದಿಸಿ ಅಧಿಕಾರ ಸ್ವೀಕಾರ ಮಾಡಿದೆ ಎಂದರು.



> ಕಾಂಗ್ರೆಸ್ ಪಕ್ಷ ಬಾಬಾ ಸಾಹೇಬರಿಗೆ ಸಂವಿಧಾನ ಕರಡು ಸಮಿತಿಯ ಅಧ್ಯಕ್ಷರನ್ನಾಗಿ ಮಾಡಿತು. ಚುನಾವಣೆ ಸೋತಾಗ ಅಂಬೇಡ್ಕರ್ ಅವರನ್ನು ರಾಜ್ಯಸಭೆಗೆ ಆಯ್ಕೆ ಮಾಡಿ ಕಾನೂನು ಮಂತ್ರಿಯನ್ನಾಗಿ ಮಾಡಿದಾಗ ಅವರು ಕೇವಲ ಪರಿಶಿಷ್ಟರ ಪರವಾಗಿ ಕೆಲಸ ಮಾಡಲಿಲ್ಲ. ಸಮಾಜದ ಎಲ್ಲರ ಪರವಾಗಿ ಕೆಲಸ ಮಾಡಿದರು. ಕುವೆಂಪು ಅವರು ಹೇಳಿದಂತೆ ಸರ್ವರಿಗೂ ಸಮಬಾಳು, ಸಮಪಾಲು ಎನ್ನುವ ತತ್ವಕ್ಕೆ ಸತ್ವ ನೀಡಿದವರು ಬಾಬಾ ಸಾಹೇಬರು
>
> –ಡಾ. ಸಿಎನ್ ಮಂಜುನಾಥ್, ಸಂಸದ

## ಮಿನಿ ನ್ಯೂಸ್

### ಚಿರತೆ ದಾಳಿಗೆ ಮೇಕೆಗಳ ಬಲಿ

• ಉದಯವಾಹಿನಿ, ಮಳವಳ್ಳಿ

ತಾಲ್ಲೂಕಿನ ಕಿರುಗಾವಲು ಹೋಬಳಿಯ ಮಾದಹಳ್ಳಿ ಗ್ರಾಮದ ಹೊರ ವಲಯದ ಕೊಟ್ಟಿಗೆಯಲ್ಲಿ ಕಟ್ಟಿಹಾಕಿದ್ದ ಮೇಕೆಗಳ ಹಿಂಡಿನ ಮೇಲೆ ಚಿರತೆ ದಾಳಿ ಮಾಡಿ ಎರಡು ಮೇಕೆಗಳನ್ನು ಕೊಂದು ಹಾಕಿದೆ. ಗ್ರಾಮದ ಟಿ.ಸಿ. ಸುಂದರ್ ಅವರು ಹೊರವಲಯದ ತಮ್ಮ ಮನೆಯ ಬಳಿ ಫಾರಂ ನಿರ್ಮಿಸಿ ಮೇಕೆಗಳನ್ನು ಸಾಕುತ್ತಿದ್ದರು. ಮಂಗಳವಾರ ಬೆಳಿಗ್ಗೆ ಮೇಕೆಗಳ ಹಿಂಡಿನ ಮೇಲೆ ದಾಳಿ ಮಾಡಿದ ಚಿರತೆ 20 ಸಾವಿರ ಬೆಲೆ ಬಾಳುವ ಎರಡು ಮೇಕೆಗಳನ್ನು ಕೊಂದು ಹಾಕಿವೆ.

ಸ್ಥಳಕ್ಕೆ ಅರಣ್ಯ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ರೈತ ಟಿ.ಸಿ. ಸುಂದರ್ ಮಾತನಾಡಿ, 'ಹಲವು ತಿಂಗಳಿಂದ ನಿರಂತರವಾಗಿ ಚಿರತೆ ದಾಳಿ ಮಾಡಿ ಐದಾರು ಮೇಕೆಗಳನ್ನು ತಿಂದು ಹಾಕಿವೆ. ಈ ಬಗ್ಗೆ ಅರಣ್ಯ ಇಲಾಖೆಯ ಅಧಿಕಾರಿಗಳ ಗಮನಕ್ಕೂ ತಂದರೂ ಯಾವುದೇ ಪ್ರಯೋಜನವಾಗಿಲ್ಲ, ಕೂಡಲೇ ಚಿರತೆಗಳ ಹಾವಳಿಗೆ ಕಡಿವಾಣ ಹಾಕಬೇಕು. ನಮಗೆ ಸೂಕ್ತ ಪರಿಹಾರ ನೀಡಬೇಕು' ಎಂದು ಒತ್ತಾಯಿಸಿದರು.

### ಆನ್ ಲೈನ್ ವಂಚನೆ ಅರಿವು




☛ ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ಬೇಗೂರು ಪೊಲೀಸ್ ಠಾಣೆ ವ್ಯಾಪ್ತಿಯ ಆರಳಿಕಟ್ಟೆ ಗ್ರಾಮದಲ್ಲಿ ರಸ್ತೆ ಸುರಕ್ಷತೆ ಹಾಗೂ ಆನ್ ಲೈನ್ ವಂಚನೆ ಬಗ್ಗೆ ಸಬ್ ಇನ್‌ಸ್ಪೆಕ್ಟರ್ ಚರಣ್ ಗೌಡ ನೇತೃತ್ವದಲ್ಲಿ ಮಂಗಳವಾರ ಅರಿವು ಮೂಡಿಸಲಾಯಿತು. ಈ ವೇಳೆ ಸಬ್ ಇನ್‌ಸ್ಪೆಕ್ಟರ್ ಚರಣ್ ಗೌಡ ಮಾತನಾಡಿ, ಪ್ರತಿ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಸಂಚಾರ ಮಾಡಬೇಕು. ಕಾರು ಸೇರಿದಂತೆ ಇನ್ನಿತರ ವಾಹನ ಚಾಲಕರು ಸೀಟ್ ಬೆಲ್ಟ್ ಹಾಕಿಕೊಂಡು ಚಾಲನೆ ಮಾಡಬೇಕು.

ಅತೀ ವೇಗ, ಮದ್ಯಪಾನ ಮಾಡಿ ವಾಹನ ಚಲಾಯಿಸುವುದು ಅಪರಾಧ. ಇದರಿಂದ ಅಪಘಾತಗಳು ಸಂಭವಿಸಿ ಸಾವು, ನೋವು ಸಂಭವಿಸುತ್ತವೆ. ಆದ್ದರಿಂದ ರಸ್ತೆ ನಿಯಮಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು' ಎಂದು ಸಲಹೆ ನೀಡಿದರು.

ಇತ್ತೀಚೆಗೆ ಆನ್‌ಲೈನ್ ವಂಚನೆ ಪ್ರಕರಣಗಳು ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಿನ ರೀತಿಯಲ್ಲಿ ಕಂಡು ಬರುತ್ತಿದೆ. ಇದಕ್ಕಾಗಿ ವಂಚಕರು ಅನಕ್ಷರಸ್ಥರನ್ನೇ ಹೆಚ್ಚಾಗಿ ಟಾರ್ಗೆಟ್ ಮಾಡುತ್ತಿದ್ದಾರೆ. ಅನ್ಯ ನಂಬರ್‌ನಿಂದ ಕರೆ ಬಂದರೆ ಯಾರು ಕೂಡ ಸ್ವೀಕರಿಸಬಾರದು. ಜೊತೆ ಹಣ ಪಾವತಿ ನೆಪದಲ್ಲಿ ಓಟಿಪಿ ಕೋಡ್, ಎಟಿಎಂ ನಂಬರ್ ಕೇಳಿದರೆ ಕೊಡಬಾರದು. ಅದಾಗ್ಯೂ ಆನ್‌ಲೈನ್ ವಂಚನೆಗೆ ಒಳಗಾದರೂ ಕೂಡಲೇ ಸಂಬಂಧ ಪಟ್ಟ ಠಾಣಾ ವ್ಯಾಪ್ತಿಗೆ ಬಂದು ದೂರು ನೀಡಬೇಕು ಎಂದು ತಿಳಿಸಿದರು.

### 950 ಕೋಟಿ ಕಬ್ಬಿನ ಬಾಕಿ ಬಿಡುಗಡೆ ಆಗ್ರಹ

• ಉದಯವಾಹಿನಿ, ಚಾಮರಾಜನಗರ

ಸಕ್ಕರೆ ಕಾರ್ಖಾನೆಗಳು ಕಬ್ಬಿನ ಉಪ ಉತ್ಪನ್ನಗಳ ಲಾಭಾಂಶ ನೀಡದೆ ವಂಚಿಸುತ್ತಿವೆ, ಕಳೆದ ವರ್ಷ ರೈತರಿಗೆ ಕೊಡಬೇಕಿರುವ 950 ಕೋಟಿ ಬಾಕಿ ಪಾವತಿಸಬೇಕು ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ಕಬ್ಬು ಬೆಳೆಗಾರರ ಸಂಘ ಒತ್ತಾಯಿಸಿತು. ಮಂಗಳವಾರ ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸಭೆಯಲ್ಲಿ ರೈತರ ಸಮಸ್ಯೆಗಳ ಕುರಿತು ಚರ್ಚಿಸಿದ ಮುಖಂಡರು ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಸರ್ಕಾರ ಕೂಡಲೇ ಬಗೆಹರಿಸಬೇಕು ಎಂದು ಆಗ್ರಹಿಸಿದರು.

ಜಿಲ್ಲೆಯಲ್ಲಿ ವಿದ್ಯುತ್ ಸಮಸ್ಯೆ ತಲೆದೋರಿದ್ದು ರೈತರು ಜಮೀನಿಗೆ ನೀರು ಹಾಯಿಸಲು ಸಾಧ್ಯವಾಗುತ್ತಿಲ್ಲ. ರಾತ್ರಿ ಹೊತ್ತು ಕಾಡುಪ್ರಾಣಿಗಳ ದಾಳಿ ಭಯದಿಂದ ಜಮೀನುಗಳಿಗೆ ತೆರಳಲಾಗುತ್ತಿಲ್ಲ. ರೈತರಿಗೆ ನಿರಂತರವಾಗಿ ವಿದ್ಯುತ್ ಪೂರೈಕೆ ಮಾಡಬೇಕು. ಬ್ಯಾಂಕ್, ಮೈಕ್ರೋ ಫೈನಾನ್ಸ್‌ಗಳಿಂದ ಸಾಲ ಪಡೆದಿರುವ ರೈತರಿಗೆ ನೀಡುತ್ತಿರುವ ಅನಗತ್ಯ ಕಿರುಕುಳವನ್ನು ತಪ್ಪಿಸಬೇಕು, ಕೃಷಿ ಸಾಲ ವಿತರಿಸುವಾಗ ಸಿಬಿಲ್ ಸ್ಕೋರ್ ಪರಿಗಣಿಸಬಾರದು, ಹೈನುಗಾರರಿಗೆ ಕೊಡಲು ಬಾಕಿ ಇರುವ 800 ಕೋಟಿ ಪ್ರೋತ್ಸಾಹಧನವನ್ನು ವಿತರಿಸಬೇಕು ಎಂದು ಒತ್ತಾಯಿಸಿದರು.

ಬಿತ್ತನೆ ಬೀಜ, ರಸಗೊಬ್ಬರ ದರ ಏರಿಕೆಯಿಂದ ರೈತರಿಗೆ ಆರ್ಥಿಕ ಹೊರೆಯಾಗಿದ್ದು ದರ ಕಡಿತಗೊಳಿಸಲು ಕ್ರಮ ಕೈಗೊಳ್ಳಬೇಕು, ರೈತರ ಬೆಳೆಗೆ ವೈಜ್ಞಾನಿಕ ಬೆಲೆ ಸಿಗದೆ ಸಂಕಷ್ಟದಲ್ಲಿ ಸಿಲುಕಿದ್ದು ಸೂಕ್ತ ಸಮಯದಲ್ಲಿ ಬೆಂಬಲ ಬೆಲೆ ನೀಡಬೇಕು ಎಂದು ಸಭೆಯಲ್ಲಿ ರೈತ ಮುಖಂಡರು ಒತ್ತಾಯಿಸಿದರು.

## ಅಗ್ನಿಶಾಮಕ ಸಿಬ್ಬಂದಿ ಸೇವೆ ನಿಸ್ವಾರ್ಥ ಸೇವೆ: ಶಾಸಕ ಮಂಜು

• ಉದಯವಾಹಿನಿ, ಕೆ.ಆರ್.ಪೇಟೆ.

ಅಗ್ನಿ ಸುರಕ್ಷಿತ ಭಾರತ ನಿರ್ಮಾಣಕ್ಕೆ ನಾವೆಲ್ಲರೂ ಒಂದಾಗೋಣ ದುರಂತದ ಸಂದರ್ಭಗಳಲ್ಲಿ ಜೀವದ ಹಂಗು ತೊರೆದು ಅಮೂಲ್ಯ ಜೀವಗಳ ಸಂರಕ್ಷಣೆಗೆ ತಮ್ಮನ್ನು ಸಮರ್ಪಿಸಿಕೊಳ್ಳುವ ಅಗ್ನಿ ಶಾಮಕ ಸಿಬ್ಬಂಧಿಗಳಿಗೆ ಎಲ್ಲರೂ ಒಗ್ಗೂಡಿ ಗೌರವ ಸಮರ್ಪಣೆ ಮಾಡೋಣ ಎಂದು ಶಾಸಕ ಹೆಚ್.ಟಿ.ಮಂಜು ಕರೆ ನೀಡಿದರು. ಪಟ್ಟಣದ ಅಗ್ನಿ ಶಾಮಕ ಠಾಣೆಯ ಆವರಣದಲ್ಲಿ ಇಲಾಖೆಯ ವತಿಯಿಂದ ಆಯೋಜಿಸಿದ್ದ ಅಗ್ನಿಶಾಮಕ ಸಪ್ತಾಹ, ಅಂಬೇಡ್ಕರ್ ಜಯಂತಿ, ಹುತಾತ್ಮರಿಗೆ ಗೌರವ ಸಮರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮುಂಬೈ ಮಹಾನಗರದಲ್ಲಿ ಘಟಿಸಿದ ಅಗ್ನಿ ದುರಂತ ಕಾರ್ಯಾಚರಣೆಯ ಸಂದರ್ಭದಲ್ಲಿ ಮೃತರಾದ 66 ಜನ ಅಗ್ನಿ ಶಾಮಕ ಸಿಬ್ಬಂಧಿಗಳ ಗೌರವಾರ್ಥ ಇಲಾಖೆ ಹುತಾತ್ಮರ ದಿನವನ್ನು ಆಚರಿಸುವ ಮೂಲಕ ಹುತಾತ್ಮರ ಸ್ಮರಣೆ ಮಾಡುತ್ತಿದೆ.

ಇಂತಹ ಪವಿತ್ರ ಕಾರ್ಯದಲ್ಲಿ ಭಾಗವಹಿಸುತ್ತಿರುವುದು ಪುಣ್ಯದ ಕೆಲಸ. ರಾಜ್ಯದ ಯಾವುದೇ ಮೂಲೆಯಲ್ಲಿ ಅಗ್ನಿ ದುರಂತಗಳು, ಜಲ ದುರಂತಗಳು, ಕಟ್ಟಡ ದುರಂತಗಳು ಸಂಭವಿಸಿದರೆ ಅಲ್ಲಿ ಅಗ್ನಿ ಶಾಮಕ ಸಿಬ್ಬಂಧಿಗಳ ಸೇವೆ ಅತ್ಯಗತ್ಯವಾಗಿರುತ್ತದೆ. ಹುತಾತ್ಮರ ದಿನದ ಜೊತೆಗೆ ಇಲಾಖೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತ್ಯೋತ್ಸವ, ಅಗ್ನಿ ಶಾಮಕ ಸಪ್ತಾಹ ಆಚರಿಸುವ ಮೂಲಕ ಏ. 14 ರಿಂದ 20 ರ ವರೆಗೆ ಏಳು ದಿನಗಳ ಕಾಲ ಅಗ್ನಿ ಅವಘಡಗಳ ಸುರಕ್ಷತೆಯ ಬಗ್ಗೆ ಸಾಮಾಜಿಕ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತಿದೆ. ಅಗ್ನಿಶಾಮಕ ಸಿಬ್ಬಂಧಿಗಳು ತಮ್ಮ ನಿಸ್ವಾರ್ಥ ಸೇವೆಯ ಮೂಲಕ ಇಲಾಖೆಯ ಘನತೆ ಗೌರವಗಳನ್ನು ಹೆಚ್ಚಿಸುವ ಕೆಲಸ ಮಾಡುತ್ತಿದ್ದಾರೆ. ಕಾರ್ಯಕ್ರಮಕ್ಕೆ ಮುನ್ನ ಇಲಾಖೆಯ ಗೌರವ ವಂದನೆಗಳನ್ನು ಸ್ವೀಕರಿಸಿದ ಶಾಸಕ ಹೆಚ್.ಟಿ.ಮಂಜು ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಹುತಾತ್ಮರ ಸ್ಮಾರಕಕ್ಕೆ ಗೌರವ ಸಮರ್ಪಣೆ ಮಾಡಿದರು.

ತಾಲ್ಲೂಕು ಅಗ್ನಿ ಶಾಮಕ ಅಧಿಕಾರಿ ಚಂದ್ರಶೇಖರ್ ಮಾತನಾಡಿ ಆಕಸ್ಮಿಕ ಬೆಂಕಿಯ ಬಗ್ಗೆ ನಾಗರೀಕ ತಿಳುವಳಿಕೆ ನೀಡಿದರು. ಬೆಂಕಿ ದೊಡ್ಡದಿರಲಿ, ಚಿಕ್ಕದಿರಲಿ ನಿರ್ಲಕ್ಷ್ಯ ಮಾಡದೆ ಅಗ್ನಿ ಶಾಮಕ ಮತ್ತು ತುರ್ತು ಸೇವೆಗೆ ದೂರವಾಣಿ ಸಂಖ್ಯೆ 101, 112, 080-22971500, 22071550, 22971600 ಗೆ ಕರೆ ಮಾಡಬೇಕು ಎಂದು ಮನವಿ ಮಾಡಿದರಲ್ಲದೆ ಅಗ್ನಿ ಸುರಕ್ಷತಾ ಕ್ರಮಗಳನ್ನು ವಿವರಿಸುವ 18 ಅಂಶಗಳ ಮಾಹಿತಿ ಕರಪತ್ರವನ್ನು ಸಾರ್ವ ಜನಿಕರಿಗೆ ಹಂಚಿಕೆ ಮಾಡಿದರು.



☛ ಉದಯವಾಹಿನಿ ಚಿತ್ರ

> ತಾಲ್ಲೂಕಿನ ಅಗ್ನಿಶಾಮಕ ಇಲಾಖೆಯಲ್ಲಿ ಹತ್ತಾರು ಮೂಲಭೂತ ಸೌಲಭ್ಯಗಳ ಕೊರತೆಯಿದೆ. ಇದರ ಪರಿಹಾರಕ್ಕಾಗಿ ನಾನು ಈಗಾಗಲೇ ಇಲಾಖಾ ಮುಖ್ಯಸ್ಥರೊಂದಿಗೆ ಚರ್ಚಿಸಿದ್ದೇನೆ. ತಾಲ್ಲೂಕಿನ ಸಂತೇಬಾಚಹಳ್ಳಿ ಗ್ರಾಮಕ್ಕೆ ಮತ್ತೊಂದು ಅಗ್ನಿ ಶಾಮಕ ಠಾಣೆ ಮಂಜೂರಾಗಿದೆ. ಇದಕ್ಕೆ ಗ್ರಾಮ ವ್ಯಾಪ್ತಿಯಲ್ಲಿ ಸೂಕ್ತ ಜಾಗದ ಕೊರತೆಯಿತ್ತು. ತಾಲ್ಲೂಕು ಆಡಳಿತದೊಂದಿಗೆ ಚರ್ಚಿಸಿ ಈಗಾಗಲೇ ಸೂಕ್ತ ಜಾಗವನ್ನು ಗುರುತಿಸಿದ್ದು ಇಲಾಖೆಗೆ ಹಸ್ತಾಂತರಿಸಲಾಗುವುದು
>
> – ಹೆಚ್.ಟಿ.ಮಂಜು, ಶಾಸಕ

## ಬೆಂಕಿಯೊಂದಿಗೆ ನಿರ್ಲಕ್ಷ್ಯ ಬೇಡ

• ಉದಯವಾಹಿನಿ, ನಾಗಮಂಗಲ



☛ ಉದಯವಾಹಿನಿ ಚಿತ್ರ

ಜನರು ತಮ್ಮ ಮನೆ ಮತ್ತು ಸುತ್ತಮುತ್ತಲ ಸನ್ನಿವೇಶಗಳಲ್ಲಿ ಸಂಭವಿಸುವ ಬೆಂಕಿ ಅವಘಡಗಳೊಂದಿಗೆ ಎಂದಿಗೂ ನಿರ್ಲಕ್ಷ್ಯ ತೋರದಿರಿ. ನಿರ್ಲಕ್ಷ್ಯದಿಂದ ಬದುಕು ಸಂಕಷ್ಟಕ್ಕೆ ದೂಡುತ್ತದೆ' ಎಂದು ಅಗ್ನಿಶಾಮಕ ಠಾಣಾಧಿಕಾರಿ ಮಂಜುನಾಥ ಹೇಳಿದರು. ಪಟ್ಟಣದ ಕೆ. ಮಲ್ಲೇನಹಳ್ಳಿ ಸಮೀಪದ ಅಗ್ನಿ ಶಾಮಕ ದಳದ ಕಚೇರಿಯಿಂದ ಬ್ರಹ್ಮದೇವರಹಳ್ಳಿ ಗ್ರಾಮದಲ್ಲಿ ಮತ್ತು ಪಟ್ಟಣದ ಪೆಟ್ರೋಲ್ ಬಂಕ್ ನಲ್ಲಿ ಸೋಮವಾರ ನಡೆದ ಅಗ್ನಿಶಾಮಕ ಸೇವಾ ಸಪ್ತಾಹ ಜಾಗೃತಿ ಜಾಥಾದಲ್ಲಿ ಅಗ್ನಿ ಸುರಕ್ಷತಾ ಸಾಧನ ನಿರ್ವಹಣೆ, ಅವಘಡ ತಗ್ಗಿಸುವ ಸಾಧನಗಳನ್ನು ಬಳಸುವ ಕುರಿತು ಅವರು ಉಪನ್ಯಾಸ ನೀಡಿದರು.

'ಅಗ್ನಿ ಅವಘಡ ಸಂಭವಿಸಿದಾಗ ಬೆಂಕಿಯ ತೀವ್ರತೆ ದೊಡ್ಡದಿರಲಿ, ಸಣ್ಣದಿರಲಿ ಅಗ್ನಿಶಾಮಕ ತುರ್ತು ಸೇವೆ ಸಂಪರ್ಕಿಸುವ ಕೆಲಸ ಮಾಡಬೇಕು. ಜೊತೆಗೆ ಬೆಂಕಿ ಬಿದ್ದ ಸಂದರ್ಭದಲ್ಲಿ ಬೆಂಕಿ ತಗುಲಿರುವ ಜಾಗ ಮತ್ತು ಅಲ್ಲಿನ ವಾತಾವರಣಕ್ಕೆ ಅನುಗುಣವಾಗಿ ಬೆಂಕಿ ನಂದಿಸಬೇಕಾಗುತ್ತದೆ. ವಿದ್ಯುತ್‌ನಿಂದ ಉಂಟಾದ ಬೆಂಕಿಗೆ ಮರಳನ್ನು ಎರಚುವುದು, ಸ್ವಿಚ್ ಆಫ್ ಮಾಡುವುದನ್ನು ಮಾಡಬೇಕು. ಪೆಟ್ರೋಲ್ ಮತ್ತು ಸೀಮೆಎಣ್ಣೆಯಿಂದ ತಗುಲಿದ ಬೆಂಕಿಗೆ ನೀರು ಸುರಿಯದೆ ಮರಳನ್ನು ಬಳಸಿ ಬೆಂಕಿ ನಂದಿಸಬೇಕು' ಎಂದು ತಿಳಿಸಿದರು. ಸಪ್ತಾಹದಲ್ಲಿ ಅಗ್ನಿಶಾಮಕ ದಳದ ಸಿಬ್ಬಂದಿ ಮತ್ತು ಸಾರ್ವಜನಿಕರು ಭಾಗವಹಿಸಿದ್ದರು. ಗ್ರಾಮಸ್ಥರು, ರೈತರಿಗೆ ಅಗ್ನಿಶಮನದ ಕುರಿತು ಜಾಗೃತಿ ಮೂಡಿಸಲಾಯಿತು.

## ಕೋರ್ಸ್ ಪುನರಾರಂಭಕ್ಕೆ ಕರವೇ ಮನವಿ

• ಉದಯವಾಹಿನಿ, ಮಂಡ್ಯ

ಮಂಡ್ಯ ವಿಶ್ವವಿದ್ಯಾಲಯದಲ್ಲಿ ಚಾಲ್ತಿಯಲ್ಲಿದ್ದ ಬಿ.ಎ. ಹಾನರ್ಸ್ (ಬ್ಯಾಚುರಲ್ ಆಫ್ ಬಿಸಿನೆಸ್ ಎಕನಾಮಿಕ್ಸ್) ಕೋರ್ಸ್ ಅನ್ನು ಮುಚ್ಚಿದ್ದು, ಪ್ರಸ್ತುತ ವರ್ಷದ ಸಾಲಿನಿಂದ ಮತ್ತೆ ಆರಂಭಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಕುಲಪತಿ ಕೆ.ಶಿವಚಿತ್ತಪ್ಪ ಅವರಿಗೆ ಮಂಗಳವಾರ ಮನವಿ ನೀಡಿದರು.

ಮಂಡ್ಯ ವಿವಿ ಆರಂಭವಾದಾಗಿನಿಂದಲೂ ಬಡವರ, ರೈತರ, ಕಾರ್ಮಿಕರ ಹಾಗೂ ಹಿಂದುಳಿದ ಸಮುದಾಯದ ಮಕ್ಕಳು ಸದರಿ ವಿವಿಯಲ್ಲಿ ಪ್ರವೇಶ ಪಡೆದು ಶಿಕ್ಷಣ ಪಡೆಯುತ್ತಿದ್ದಾರೆ. ಕರ್ನಾಟಕದಲ್ಲಿಯೇ ಮೊದಲ ಬಾರಿಗೆ ಬಿ.ಎ.ಹಾನರ್ಸ್ ಕೋರ್ಸ್ ಅನ್ನು 2017ರಲ್ಲಿ ಸರ್ಕಾರದ ಅನುಮತಿಯೊಂದಿಗೆ ಆರಂಭಿಸಲಾಯಿತು. ಅಂದಿನ ಕುಲಸಚಿವರ ವೈಯಕ್ತಿಕ ಪ್ರತಿಷ್ಠೆಯಿಂದ ಮುಚ್ಚಲಾಗಿದೆ ಎಂದು ಆರೋಪಿಸಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಕೋರ್ಸ್‌ಗೆ ಪ್ರವೇಶ ಪಡೆದು ಉನ್ನತ ಶಿಕ್ಷಣದ ಅನುಕೂಲತೆಯನ್ನು ಪಡೆಯುವ ನಿಟ್ಟಿನಲ್ಲಿ ನಾವುಗಳು ಸಹ ಕೈ ಜೋಡಿಸುತ್ತಿದ್ದು, ಇದಕ್ಕೆ ಪೂರಕವಾಗಿ ಮಂಡ್ಯ ವಿವಿಯಸದರಿ ಕೋರ್ಸ್ ಅನ್ನು ಪ್ರಸಕ್ತ ಸಾಲಿನಿಂದ ಮರು ಆರಂಭಿಸಬೇಕು. ಜೊತೆಗೆ ವಿದ್ಯಾರ್ಥಿಗಳು ಪ್ರವೇಶಾತಿ ಸಂಖ್ಯೆಯನ್ನು 60ಕ್ಕೆ ಹೆಚ್ಚಳ ಮಾಡಬೇಕು. ಗರಿಷ್ಠ ಪ್ರವೇಶಾತಿ ಎಂಬುದನ್ನು ಮಿತಿಗೊಳಿಸಬಾರದು ಎಂದು ಒತ್ತಾಯಿಸಿದರು.

ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷ ಎಚ್. ಡಿ. ಜಯರಾಂ, ಮುಖಂಡರಾದ ಬಿ.ಕೆ. ಸತೀಶ್, ವೆಂಕಟೇಶ್, ಜೋಸೆಫ್ ಭಾಗವಹಿಸಿದ್ದರು.



☛ ಉದಯವಾಹಿನಿ ಚಿತ್ರ

## ಮೀಸಲಾತಿಯಿಂದ ಸಾಮಾಜಿಕ ನ್ಯಾಯ

• ಉದಯವಾಹಿನಿ, ಚಿಂತಾಮಣಿ

ಬಿ.ಆರ್.ಅಂಬೇಡ್ಕರ್ ಯಾವುದೇ ಒಂದು ಜಾತಿ, ಸಮುದಾಯಕ್ಕೆ ಸೀಮಿತವಾಗಿಲ್ಲ. ಇಡೀ ವಿಶ್ವಕ್ಕೆ ಮಾದರಿಯಾಗಿರುವ ಅಂಬೇಡ್ಕರ್ ತತ್ವ, ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಪ್ರೌಢಶಾಲಾ ನಿವೃತ್ತ ಮುಖ್ಯ ಶಿಕ್ಷಕ ಕೆ.ಎನ್.ರಮಣಾರೆಡ್ಡಿ ಹೇಳಿದರು. ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ನಗರದ ವಿವೇಕ ಜಾಗೃತ ಬಳಗದ ಭಜನಾ ಮಂದಿರದಲ್ಲಿ ಆಯೋಜಿಸಿದ್ದ ಸಾಧಕರ ಸ್ಮರಣೆ ಕಾರ್ಯಕ್ರಮದಲ್ಲಿ ಬಿ.ಆರ್.ಅಂಬೇಡ್ಕರ್ ಕುರಿತು ಮಾತನಾಡಿದರು.

ಅಂಬೇಡ್ಕರ್ ಅವರಿಗಿದ್ದ ಜ್ಞಾನದ ಹಸಿವು, ಹೋರಾಟದ ಹಸಿವು ಎಲ್ಲರಿಗೂ ಇರಬೇಕು. ಸಂವಿಧಾನದಿಂದ ದೇಶದಲ್ಲಿ ಎಲ್ಲಾ ವರ್ಗದ ಜನರು ಶಾಂತಿ, ಸಮಾನತೆ, ನೆಮ್ಮದಿಯಿಂದ ಜೀವನ ನಡೆಸುತ್ತಿದ್ದಾರೆ. ಮೀಸಲಾತಿಯಿಂದ ಸಾಮಾಜಿಕ ನ್ಯಾಯ ಸಾಧನೆ ಆಗುತ್ತಿದೆ ಎಂದರು.

ಸಾಹಿತ್ಯ ಪರಿಷತ್ ಉಪಾಧ್ಯಕ್ಷ ಎನ್.ಬೇಟರಾಯಪ್ಪ ಮಾತನಾಡಿ, ಅಂಬೇಡ್ಕರ್ ಬಾಲ್ಯದ ಜೀವನ, ವಿದ್ಯಾಭ್ಯಾಸ, ಸಾಧನೆ, ಸಂವಿಧಾನದ ಅರಿವು ಮೂಡಿಸಿದರು. ಅಂಬೇಡ್ಕರ್ ಅವರೇ ಜ್ಞಾನದ ಗ್ರಂಥಾಲಯ, ವಿಶ್ವಕೋಶ. ಸಂವಿಧಾನದಿಂದ ವಿವಿಧ ತಳವರ್ಗದ ಸಮುದಾಯಗಳು ಇಂದು ಉದ್ಯೋಗ ಪಡೆದುಕೊಂಡು ಸಮಾನತೆಯ ಬದುಕನ್ನು ಕಟ್ಟಿಕೊಂಡಿದ್ದಾರೆ ಎಂದರು.

ಕಸಾಪ ಅಧ್ಯಕ್ಷ ಎನ್.ವಿ.ಶ್ರೀನಿವಾಸನ್, ಶಿಕ್ಷಕ ಮಂಜುನಾಥ್, ಸಾಹಿತಿ ನಂಜುಂಡಗೌಡ ಮಾತನಾಡಿದರು. ಎಸ್.ಎಫ್.ಎಸ್ ಸುರೇಶ್ ಭಾವಗೀತೆ ಹಾಡಿದರು.



☛ ಉದಯವಾಹಿನಿ ಚಿತ್ರ

> ಅಂಬೇಡ್ಕರ್ ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಕಾನೂನು ಮತ್ತು ತತ್ವಶಾಸ್ತ್ರಗಳ ಪ್ರವೀಣರಾಗಿದ್ದರು. ಅವರು ಭಾರತಕ್ಕೆ ಮಾತ್ರ ಸೀಮಿತರಾಗದೆ ವಿಶ್ವನಾಯಕ ಎನಿಸಿಕೊಂಡಿದ್ದರು. ಹಾಗಾಗಿ ವಿಶ್ವದ 150 ಕ್ಕೂ ಹೆಚ್ಚು ದೇಶಗಳಲ್ಲಿ ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಗುತ್ತದೆ
>
> – ಕೆ.ಓಬಯ್ಯ, ಮುಖ್ಯ ಶಿಕ್ಷಕ

### 62 ಪ್ರಮುಖ ಕೆರೆಗಳಿಗೆ ನೀರು ಹರಿಸುವ ಕಾಮಗಾರಿಗೆ ಶಂಕುಸ್ಥಾಪನೆ

## ಎತ್ತಿನಹೊಳೆ: ಏಪ್ರಿಲ್ 19ರಂದು ಭೂಮಿಪೂಜೆ

• ಉದಯವಾಹಿನಿ, ಕೊರಟಗೆರೆ

ಎತ್ತಿನಹೊಳೆ ಯೋಜನೆಯಡಿ ತಾಲ್ಲೂಕಿನ 62 ಪ್ರಮುಖ ಕೆರೆಗಳಿಗೆ ನೀರು ಹರಿಸುವ ಕಾಮಗಾರಿಗೆ ಏಪ್ರಿಲ್ 19ರಂದು ಭೂಮಿಪೂಜೆ ಮಾಡಲಾಗುವುದು ಎಂದು ಗೃಹಸಚಿವ ಜಿ.ಪರಮೇಶ್ವರ ತಿಳಿಸಿದರು. ತಾಲ್ಲೂಕಿನ ಗೊರವನಹಳ್ಳಿಯಲ್ಲಿ ಮಂಗಳವಾರ ಎತ್ತಿನಹೊಳೆ ಯೋಜನೆಯಡಿ ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಗೆ ಶಂಕುಸ್ಥಾಪನೆ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ತಾಲ್ಲೂಕಿನ 62 ಕೆರೆಗೆ ನೀರು ತುಂಬಿಸುವ ಕಾಮಗಾರಿಗೆ ಸರ್ಕಾರದಿಂದ 288 ಕೋಟಿ ಅನುಮೋದನೆ ದೊರೆತಿದೆ. ಶನಿವಾರ ಭೂಮಿಪೂಜೆ ನಡೆಯಲಿದೆ. ಅದೇ ದಿನ 453 ಕೋಟಿ ವೆಚ್ಚದ ವಿವಿಧ ಇಲಾಖೆಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಭೂಮಿಪೂಜೆ ಹಾಗೂ ಚಾಲನೆ ನೀಡಲಾಗುವುದು ಎಂದು ಹೇಳಿದರು.

ಸರ್ಕಾರದಲ್ಲಿ ದುಡ್ಡಿಲ್ಲ ಎಂಬ ಸುಳ್ಳು ಸುದ್ದಿ ಹಬ್ಬಿಸಲಾಗುತ್ತಿದೆ. ಆದರೆ ಈ ವರ್ಷದ ಆಯವ್ಯದಲ್ಲಿ ಕಳೆದ ವರ್ಷಕ್ಕಿಂತಲೂ ಹೆಚ್ಚು ಹಣ ರಾಜ್ಯದ ಅಭಿವೃದ್ಧಿಗೆ ಸರ್ಕಾರ ಮೀಸಲಿರಿಸಿದೆ. ಅದರಲ್ಲಿ ನೀರಾವರಿ ಯೋಜನೆಗೆ ಆದ್ಯತೆ ನೀಡಲಾಗಿದೆ. ಸರ್ಕಾರ ಅಧಿಕಾರಕ್ಕೆ ಬರುವಾಗ ಪ್ರಮಾಣ ಮಾಡಿದಂತೆ ಈ ಅವಧಿಯಲ್ಲಿ ಎತ್ತಿನಹೊಳೆ ಯೋಜನೆಯನ್ನು ಸಂಪೂರ್ಣ ಕಾರ್ಯಗತ ಮಾಡುತ್ತೇವೆ. ಇದು ಸರ್ಕಾರದ ಬದ್ಧತೆ ಎಂದರು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯಿತಿ ಸಿಇಒ ಜಿ.ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್, ಜಿಲ್ಲಾ ಪಂಚಾಯಿತಿ ಅಭಿವೃದ್ಧಿ ಕಾರ್ಯದರ್ಶಿ ಸಂಜೀವಪ್ಪ, ತಹಶೀಲ್ದಾರ್ ಕೆ.ಮಂಜುನಾಥ್, ತಾ.ಪಂ. ಕಾರ್ಯನಿರ್ವಹಣಾಧಿಕಾರಿ ಅಪೂರ್ವ ಸಿ. ಅನಂತರಾಮು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮೆಡಿಕಲ್ ಅಶ್ವತ್, ಅರಕೆರೆ ಶಂಕರ್ ಹಾಜರಿದ್ದರು.




☛ ಉದಯವಾಹಿನಿ ಚಿತ್ರ

**ಬಫರ್ ಡ್ಯಾಂ**

ಪುನರ್ ಪರಿಶೀಲನೆಗೆ ಒತ್ತಾಯ ಎತ್ತಿನಹೊಳೆ ಯೋಜನೆ ಬಫರ್ ಡ್ಯಾಂ ನಿರ್ಮಾಣ ತಾಲ್ಲೂಕಿನ ಬೈರಗೊಂಡ್ಲು ಗ್ರಾಮದ ಬಳಿ ಮಾಡಲು ಯೋಜಿಸಲಾಗಿತ್ತು. ಆದರೆ ಹಿಂದಿನ ಬಿಜೆಪಿ ಸರ್ಕಾರ ಅದನ್ನು ಬದಲಾಯಿಸಿ ದೊಡ್ಡಬಳ್ಳಾಪುರ ತಾಲ್ಲೂಕು ವ್ಯಾಪ್ತಿಯಲ್ಲಿ ಎರಡು ಕಡೆ ಮಾಡಲು ತೀರ್ಮಾನಿಸಿದೆ. ಇದರ ಪುನರ್ ಪರಿಶೀಲನೆಗೆ ಒತ್ತಾಯವಿದೆ. ಸದ್ಯ ನಾವು ಯಾವುದೇ ತೀರ್ಮಾನ ಮಾಡಿಲ್ಲ. ಹಳೆ ತೀರ್ಮಾನ ಹಾಗೆಯೇ ಇದೆ. ಮುಂದೆ ನೋಡಣ ಎಂದು ಜಿ.ಪರಮೇಶ್ವರ ಹೇಳಿದರು.

## ರೈತರ ರಸ್ತೆ ತಡೆ; ಪ್ರತಿಭಟನಾ ಮೆರವಣಿಗೆ

### ಬಗರ್ ಹುಕುಂ ಅಡಿ ಅರ್ಜಿ ಸಲ್ಲಿಸಿ ವರ್ಷಗಳು ಕಳೆದರೂ ಭೂಮಿ ಮಂಜೂರು ಮಾಡುವಲ್ಲಿ ವಿಳಂಬ

• ಉದಯವಾಹಿನಿ, ಪಾವಗಡ

ಬಗರ್ ಹುಕುಂ ಅಡಿ ಅರ್ಜಿ ಸಲ್ಲಿಸಿರುವ ರೈತರಿಗೆ ಕೂಡಲೇ ಭೂಮಿ ಮಂಜೂರು ಮಾಡಬೇಕು. ರೈತರ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಒತ್ತಾಯಿಸಿ ರಾಜ್ಯ ರೈತ ಸಂಘ, ಹಸಿರು ಸೇನೆ ನೇತೃತ್ವದಲ್ಲಿ ರೈತರು ಮಂಗಳವಾರ ಪಟ್ಟಣದ ತಹಶೀಲ್ದಾರ್ ಕಚೇರಿ ಮುಂಭಾಗ ರಸ್ತೆ ತಡೆ ನಡೆಸಿದರು. ಹಲವು ದಶಕಗಳಿಂದ ಸರ್ಕಾರಿ ಜಮೀನುಗಳಲ್ಲಿ ಉಳುಮೆ ಮಾಡಿಕೊಂಡು ಶೇಂಗಾ, ತೊಗರಿ ಸೇರಿದಂತೆ ವಿವಿಧ ಬೆಳೆಗಳನ್ನು ಬೆಳೆಯುತ್ತಿರುವ ರೈತರನ್ನು ಒಕ್ಕಲೆಬ್ಬಿಸಲಾಗುತ್ತಿದೆ. ಬಗರ್ ಹುಕುಂ ಅಡಿ ಅರ್ಜಿ ಸಲ್ಲಿಸಿ ವರ್ಷಗಳು ಕಳೆದರೂ ಅರ್ಹರಿಗೆ ಭೂಮಿ ಮಂಜೂರು ಮಾಡುವಲ್ಲಿ ವಿಳಂಬವಾಗುತ್ತಿದೆ ಎಂದು ಜಿಲ್ಲಾ ಘಟಕದ ಅಧ್ಯಕ್ಷ ಪೂಜಾರಪ್ಪ ಆರೋಪಿಸಿದರು.

ಅಕ್ರಮ ಸಕ್ರಮದಡಿ ಅರ್ಜಿ ಹಾಕಿದವರೂ ಕಚೇರಿ ಅಲೆಯುತ್ತಿದ್ದಾರೆಯೇ ಹೊರತು ಅವರ ಹೆಸರಿಗೆ ಖಾತೆ, ಪಹಣಿ ಆಗಿಲ್ಲ. ಸರ್ಕಾರಿ ಜಮೀನುಗಳಲ್ಲಿ ವ್ಯವಸಾಯ ಮಾಡಿಕೊಂಡು ಜೀವನ ನಡೆಸುತ್ತಿರುವವರಿಗೆ ಭೂಮಿಯೇ ಆಧಾರ. ಆದರೆ ರೈತರ ಸಮಸ್ಯೆಗಳ ಬಗ್ಗೆ ಅರಿವಿರದ ಅಧಿಕಾರಿಗಳು ಮಂಜೂರಾತಿ ಪತ್ರ, ಖಾತೆ, ಪಹಣಿ ಮಾಡಿಕೊಡದೆ ರೈತರ ಜೀವನದ ಜೊತೆ ಚೆಲ್ಲಾಟ ಆಡುತ್ತಿದ್ದಾರೆ ಎಂದು ದೂರಿದರು.

ತಾಲ್ಲೂಕಿನ ವೆಂಕಟಾಪುರ ಸರ್ವೆ ನಂಬರ್ 494 ಸರ್ಕಾರಿ ಜಮೀನಾಗಿದ್ದು, ಹಲವು ಮಂದಿ ರೈತರು ಈ ಜಮೀನಿನಲ್ಲಿ ತಾತ ಮುತ್ತಾತರ ಕಾಲದಿಂದಲೂ ಕೃಷಿ ಚಟುವಟಿಕೆ ನಡೆಸುತ್ತಿದ್ದಾರೆ. ಆದರೆ ಇತ್ತೀಚೆಗೆ ಅಧಿಕಾರಿಗಳು ಕೃಷಿ ಜಮೀನನ್ನು ನಿವೇಶನವನ್ನಾಗಿ ಪರಿವರ್ತಿಸಲು ಅಳತೆ ನಡೆಸಲು ಮುಂದಾಗಿದ್ದಾರೆ. ಇದರಿಂದ ಸಾಕಷ್ಟು ರೈತರ ಕುಟುಂಬಗಳು ಬೀದಿಗೆ ಬೀಳಲಿವೆ ಎಂದು ಪ್ರತಿಭಟನನಿರತ ರೈತರು ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಪ್ರಮುಖ ಬೀದಿಗಳಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿ, ತಹಶೀಲ್ದಾರ್ ಕಚೇರಿ ಮುಂಭಾಗ ರಸ್ತೆ ತಡೆ ನಡೆಸಲಾಯಿತು.




☛ ಉದಯವಾಹಿನಿ ಚಿತ್ರ

**ಸಮಸ್ಯೆ ಪರಿಹಾರಕ್ಕೆ ಒತ್ತಾಯ**

> ಯಾವುದೇ ಕಾರಣಕ್ಕೂ ರೈತರು ವ್ಯವಸಾಯ ಮಾಡುತ್ತಿರುವ ಭೂಮಿಗಳನ್ನು ನಿವೇಶನಗಳಾಗಿ ಪರಿವರ್ತಿಸಬಾರದು. ಬಗರ್ ಹುಕುಂ, ಅಕ್ರಮ ಸಕ್ರಮ ಸೇರಿದಂತೆ ವಿವಿಧ ಯೋಜನೆಗಳಲ್ಲಿ ಭೂಮಿಗಾಗಿ ಅರ್ಜಿ ಹಾಕಿರುವ ಅರ್ಹ ರೈತರಿಗೆ ಕೂಡಲೇ ಜಮೀನು ಮಂಜೂರು ಮಾಡಿ, ಖಾತೆ, ಪಹಣಿ ಮಾಡಿಕೊಡಬೇಕು ಎಂದು ರೈತರು ಒತ್ತಾಯಿಸಿದರು.

16 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು, ಜಿಲ್ಲೆಯಲ್ಲಿ ಒಟ್ಟು 6741 ಅಭ್ಯರ್ಥಿಗಳು ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದಾರೆ

# ಏ. 16, 17ರಂದು ಸಿಇಟಿ ಪರೀಕ್ಷೆ: ಕಟ್ಟುನಿಟ್ಟಾಗಿ ಸೂಚನೆಗಳನ್ನು ಪಾಲಿಸಲು ಸೂಚನೆ

• **ಉದಯವಾಹಿನಿ ಚಿತ್ರದುರ್ಗ**

ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಇದೇ ಏಪ್ರಿಲ್ 16 ಮತ್ತು 17 ರಂದು ಸಾಮಾನ್ಯ ಪ್ರವೇಶ ಪರೀಕ್ಷೆ ಚಿತ್ರದುರ್ಗ ನಗರದ 16 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು, ಜಿಲ್ಲೆಯಲ್ಲಿ ಒಟ್ಟು 6741 ಅಭ್ಯರ್ಥಿಗಳು ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದಾರೆ.

ಚಿತ್ರದುರ್ಗ ನಗರದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು, ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು, ಹೊಳಲ್ಕೆರೆ ರಸ್ತೆಯ ಎಸ್‌ಜೆಎಂ ಪದವಿಪೂರ್ವ ಕಾಲೇಜು, ಚೈತನ್ಯ ಪಿಯು ಕಾಲೇಜು, ಮಹಾರಾಣಿ ಪಿಯು ಕಾಲೇಜು, ಕಂಪಳರಂಗ ಪಿಯು ಕಾಲೇಜು, ಬೃಹನ್ಮಠ ಪಿಯು ಕಾಲೇಜು, ಪಿ.ಕೆ.ಹಳ್ಳಿಯ ಕೆಎಂಎಸ್ ಪಿಯು ಕಾಲೇಜು, ಡಾನ್ ಬೋಸ್ಕೋ ಪಿಯು ಕಾಲೇಜು, ಎಸ್‌ಆರ್‌ಎಸ್ ಪಿಯು ಕಾಲೇಜು, ವೆಸ್ಟರ್ನ್ ಹಿಲ್ಸ್ ಪಿಯು ಕಾಲೇಜು, ಎಂ.ಕೆ.ಹಟ್ಟಿ ಎಸ್‌ಜೆಎಂ ಪಿಯು ಕಾಲೇಜು, ಎಸ್‌ಜೆಎಂಐಟಿ, ಸರ್ಕಾರಿ ವಿಜ್ಞಾನ ಕಾಲೇಜು, ಸರ್ಕಾರಿ ಕಲಾ ಕಾಲೇಜು ಹಾಗೂ ನಮ್ಮ ಎಕ್ಸ್‌ಪರ್ಟ್ ಪಿಯು ಕಾಲೇಜು ಸೇರಿದಂತೆ ಒಟ್ಟು 16 ಪರೀಕ್ಷೆ ಕೇಂದ್ರಗಳಲ್ಲಿ ಒಟ್ಟು 6741 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಏಪ್ರಿಲ್ 16 ರಂದು ಬೆಳಿಗ್ಗೆ 10.30 ರಿಂದ 11.50ರವರೆಗೆ ಭೌತಶಾಸ್ತ್ರ, ಮಧ್ಯಾಹ್ನ 2.30 ರಿಂದ 3.50 ರವರೆಗೆ ರಸಾಯನಶಾಸ್ತ್ರ ಹಾಗೂ ಏಪ್ರಿಲ್ 17ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 11.50 ರವರೆಗೆ ಗಣಿತಶಾಸ್ತ್ರ, ಮಧ್ಯಾಹ್ನ 2.30 ರಿಂದ 3.50 ರವರೆಗೆ ಜೀವಶಾಸ್ತ್ರ ವಿಷಯದ ಪರೀಕ್ಷೆ ನಡೆಯಲಿದೆ. ಜಿಲ್ಲೆಯಲ್ಲಿ ಯಾವುದೇ ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಕೇಂದ್ರಗಳು ಇರುವುದಿಲ್ಲ. ಪರೀಕ್ಷಾ ಕೇಂದ್ರದ ಸುತ್ತಮುತ್ತಲಿರುವ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಿಸಲು ಕ್ರಮ ಕೈಗೊಳ್ಳಲಾಗಿದ್ದು, ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶ ಎಂದು ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ.

### ಅನುಮತಿಸಲಾದ ವಸ್ತುಗಳು

**ಪರೀಕ್ಷಾ ಕೇಂದ್ರದೊಳಗೆ ಪ್ರವೇಶ ಪತ್ರವನ್ನು ಕಡ್ಡಾಯವಾಗಿ ತರಬೇಕು. ಸರ್ಕಾರದಿಂದ ಮಾನ್ಯವಾದ ಫೋಟೋ ಗುರುತಿನ ಚೀಟಿ ಕಡ್ಡಾಯವಾಗಿ ತರಬೇಕು. ಪರೀಕ್ಷಾ ಕೊನೆಯ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರಗೆ ಹೋಗಲು ಅನುಮತಿ ಇರುವುದಿಲ್ಲ.**

**ಮಹಿಳಾ ಅಭ್ಯರ್ಥಿಗಳು:** ವಿಸ್ತಾರವಾದ ಕಸೂತಿ, ಹೂಗಳು, ಬ್ರೂಚ್‌ಗಳು ಅಥವಾ ಬಟನ್‌ಗಳನ್ನು ಹೊಂದಿರುವ ಬಟ್ಟೆಗಳ ಧರಿಸುವುದು ನಿಷಿದ್ದ, ಪೂರ್ಣ ತೋಳಿನ ಬಟ್ಟೆ, ಜೀನ್ಸ್ ಪ್ಯಾಂಟ್ ಧರಿಸಬಾರದು. ಅದರ ಬದಲಾಗಿ ಅರ್ಧ ತೋಳಿನ ಬಟ್ಟೆಗಳನ್ನು



☛ ಉದಯವಾಹಿನಿ ಚಿತ್ರ

ಮುಜುಗರವಾಗದಂತೆ ಮತ್ತು ವಸ್ತ್ರಸಂಹಿತೆಯಂತೆ ಬಟ್ಟೆ ಧರಿಸಬೇಕು. ಹೀಲ್ಡ್ ಚಪ್ಪಲಿ, ಶೂಗಳನ್ನು ಧರಿಸಬಾರದು, ತೆಳುವಾದ ಅಡಿಪಾಯವಿರುವ ಚಪ್ಪಲಿ ಧರಿಸಬೇಕು. ಮಂಗಳಸೂತ್ರ ಮತ್ತು ಕಾಲುಂಗುರ ಹೊರತುಪಡಿಸಿ ಯಾವುದೇ ಲೋಹದ ಆಭರಣ ಧರಿಸುವಂತಿಲ್ಲ.

**ಪರೀಕ್ಷಾ ಕೇಂದ್ರ ಪ್ರವೇಶ ಅವಧಿ:** ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದೊಳಗೆ ಕನಿಷ್ಠ ಮೊದಲ ಬೆಲ್ ಆಗುವ 2 ಗಂಟೆ ಮುಂಚಿತವಾಗಿ ಹಾಜರಿರಬೇಕು. ಕೇಂದ್ರದಲ್ಲಿ ಕೊಠಡಿ ಪ್ರವೇಶಕ್ಕೂ ಮುನ್ನ ಅಭ್ಯರ್ಥಿಗಳ ಮುಖವನ್ನಾಧರಿಸಿ ಆಫ್ ಮೂಲಕ ಗುರುತು ಪತ್ತೆ ಮಾಡುವ ಕಾರ್ಯ ನಡೆಯಲಿದೆ. ಮತ್ತು ಎಲ್ಲಾ ಅಭ್ಯರ್ಥಿಗಳ ಸಂಪೂರ್ಣ ತಪಾಸಣೆ ನಡೆಯುವುದರಿಂದ ಮೊದಲ ಬೆಲ್ ಆಗುವ ಮುನ್ನ 2 ಗಂಟೆಗಳ ಕಾಲ ಮುಂಚಿತವಾಗಿ ಕೇಂದ್ರದಲ್ಲಿರಬೇಕು. ಬೆಳಗ್ಗೆ 10.20 ಕ್ಕೆ ಮತ್ತು ಮಧ್ಯಾಹ್ನ 2.20 ಕ್ಕೆ ಮೊದಲ ಬೆಲ್ ಆಗಲಿದೆ. ಪರೀಕ್ಷೆಯನ್ನು ಅತ್ಯಂತ ಪಾರದರ್ಶಕವಾಗಿ ನಡೆಸಲು ಎಲ್ಲಾ ಕೇಂದ್ರಗಳ ಪ್ರಾಂಶುಪಾಲರು ಪರೀಕ್ಷಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು, ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯುವ ಅಭ್ಯರ್ಥಿಗಳಿಗೆ ಅಗತ್ಯ ಮೂಲಭೂತ ಸೌಕರ್ಯ ಸಮರ್ಪಕವಾಗಿ ದೊರೆಯಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ತಿಳಿಸಿದ್ದಾರೆ.

### ವಸ್ತ್ರ ಸಂಹಿತೆ ಪಾಲನೆಗೆ ಸೂಚನೆ

**ಸಿಇಟಿ ಪರೀಕ್ಷೆ ಬರೆಯುವ ಪುರುಷ, ಮಹಿಳಾ ಅಭ್ಯರ್ಥಿಗಳು ವಸ್ತ್ರಸಂಹಿತೆ ಪರಿಪಾಲನೆ ಮಾಡಬೇಕು. ಪುರುಷ ಅಭ್ಯರ್ಥಿಗಳಿಗೆ ಪರೀಕ್ಷೆಗೆ ಪೂರ್ಣತೋಳಿನ ಶರ್ಟ್‌ಗಳನ್ನು ಅನುಮತಿಸಲಾಗುವುದಿಲ್ಲ, ಅರ್ಧತೋಳಿನ ಶರ್ಟ್ ಧರಿಸಬೇಕು. ಸಾಧ್ಯವಾದಷ್ಟು ಕಾಲರ್ ರಹಿತ ಸಾಧಾರಣ ಶರ್ಟ್, ಟೀ ಶರ್ಟ್ ಧರಿಸಬೇಕು. ಕುರ್ತಾ ಪೈಜಾಮ, ಜೀನ್ಸ್ ಪ್ಯಾಂಟ್ ಧರಿಸುವಂತಿಲ್ಲ. ಜೇಬುಗಳು ಇಲ್ಲದಿರುವ, ಕಮ್ಮಿ ಜೇಬುಗಳಿರುವ ಪ್ಯಾಂಟ್ ಮತ್ತು ಸರಳ ಪ್ಯಾಂಟ್ ಧರಿಸಬೇಕು. ಬಟ್ಟೆಗಳು ಹಗುರವಾಗಿರಬೇಕು. ಜಿಪ್ ಪಾಕೆಟ್‌ಗಳು, ಪಾಕೆಟ್‌ಗಳು, ದೊಡ್ಡ ಬಟನ್‌ಗಳು ಮತ್ತು ವಿಸ್ತಾರವಾದ ಕಸೂತಿ ಬಟ್ಟೆಗಳಿರಬಾರದು. ಪರೀಕ್ಷಾ ಕೊಠಡಿಯಲ್ಲಿ ಶೂಗಳು ನಿಷಿದ್ದವಾಗಿದ್ದು ಸ್ಯಾಂಡಲ್ ಅಥವಾ ತೆಳುವಾದ ಅಡಿಭಾಗದ ಚಪ್ಪಲಿಗಳನ್ನು ಧರಿಸಬೇಕು. ಕುತ್ತಿಗೆಯ ಸುತ್ತ ಯಾವುದೇ ಲೋಹದ ಆಭರಣ ಧರಿಸುವುದು ಅಥವಾ ಕಿವಿಯೋಲೆ, ಉಂಗುರಗಳು, ಕಡಗಗಳನ್ನು ಧರಿಸುವುದನ್ನು ನಿಷೇಧಿಸಲಾಗಿದೆ.**

### ಎಲೆಕ್ಟ್ರಾನಿಕ್ಸ್ ವಸ್ತುಗಳ ನಿಷೇಧ

**ಡ್ರೆಸ್ ಕೋಡ್ ಜೊತೆಗೆ ಎಲೆಕ್ಟ್ರಾನಿಕ್ಸ್ ವಸ್ತುಗಳು, ಮೊಬೈಲ್, ಪೆನ್ ಡ್ರೈವ್, ಇಯರ್ ಫೋನ್, ಮೈಕ್ರೋಫೋನ್, ಬ್ಲೂಟೂಥ್, ಕೈ ಗಡಿಯಾರಗಳನ್ನು ಕೊಠಡಿಗೆ ತರುವಂತಿಲ್ಲ. ತಿನ್ನಬಹುದಾದ ವಸ್ತುಗಳನ್ನು ತರುವಂತಿಲ್ಲ, ಬಣ್ಣದ ಹಾಗೂ ಲೋಹದ ಕುಡಿಯುವ ನೀರಿನ ಬಾಟಲಿಗೂ ಅನುಮತಿ ಇಲ್ಲ, ಕೇಂದ್ರದಲ್ಲಿಯೇ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುತ್ತದೆ. ಪೆನ್ಸಿಲ್, ಪೇಪರ್, ಎರೇಸರ್, ಜಾಮಿಟ್ರಿ ಬಾಕ್ಸ್, ಲಾಗ್ ಟೇಬಲ್ ಕೇಂದ್ರದೊಳಗೆ ತರುವಂತಿಲ್ಲ. ತಲೆಯ ಮೇಲೆ ಟೋಪಿ ಧರಿಸುವಂತಿಲ್ಲ ಹಾಗೂ ಮುಖ ಮುಚ್ಚುವಂತೆ ಮಾಸ್ಕ್ ಧರಿಸುವಂತಿಲ್ಲ.**

## ಬಯಲಾಟ ಉತ್ತರ ಕರ್ನಾಟಕದ ಗಂಡು ಕಲೆಯಾಗಿದೆ: ತಹಶೀಲ್ದಾರ್

• **ಉದಯವಾಹಿನಿ ವಡಗೇರಾ**

ಬಯಲಾಟವು ಉತ್ತರ ಕರ್ನಾಟಕ ಭಾಗದ ಗಂಡು ಕಲೆಯಾಗಿದ್ದು ತನ್ನದೇ ಆದ ಮಹತ್ವವನ್ನು ಹೊಂದಿದೆ ಎಂದು ತಹಸೀಲ್ದಾರ್ ಶ್ರೀನಿವಾಸ್ ಚಾಪೇಲ್ ಹೇಳಿದರು.

ಶ್ರೀ ಮಾರಿಕಾಂಬ ದೇವಿ ಜಾತ್ರಾ ಮಹೋತ್ಸವ ಅಂಗವಾಗಿ ಪಟ್ಟಣದಲ್ಲಿ ಆಯೋಜಿಸಿದ್ದ ಕ್ರಾಂತಿ ವೀರ ಅರ್ಜುನ ಅರ್ಥಾರ್ಥ ರೇಣುಕಾ ದೇವಿ ಚರಿತ್ರೆ ಬಯಲಾಟ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಟಿವಿ ಮೊಬೈಲ್ ಸಿನಿಮಾ ಧಾರವಾಹಿಗಳ ಹಾವಳಿಯಿಂದ ಬಯಲಾಟ, ಡಪ್ಪಿನಾಟ, ಕೋಲಾಟ, ಅಂತಿ ಪದ ಗೀಗಿ ಪದ ಸೋಬಾನೆ ಪದಗಳು ಮರೆಯಾಗುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದರು. ಬಯಲಾಟಗಳು ದೇವಾನು ದೇವತೆಗಳ ಹಾಗೂ ನಿಜ ಜೀವನದ ಅರ್ಥ ಗರ್ಭಿತ ಪುರಾಣ ಕಥೆಗಳ ರೂಪವೇ ಬಯಲಾಟವಾಗಿದೆ ಅಳಿವಿನಂಚಿನಲ್ಲಿರುವ ಬಯಲಾಟವನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಮುಂದಾಗಿರುವ ಪಟ್ಟಣದ ಯುವಕರು ಮತ್ತು ರೈತರ ಕಾರ್ಯ ಶ್ಲಾಘನೀಯ ಎಂದು ಹೇಳಿದರು.



☛ ಉದಯವಾಹಿನಿ ಚಿತ್ರ

ಕಾಂಗ್ರೆಸ್ ಯುವ ಮುಖಂಡ ಸಂಗು ಗೌಡ ಮಾಲಿ ಪಾಟೀಲ್ ಬಯಲಾಟ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಈ ಕಾರ್ಯಕ್ರಮದ ಸಾನ್ನಿಧ್ಯವನ್ನು ರಾಚಯ್ಯ ಸ್ವಾಮಿ ಸ್ಥಾವರಮಠ ವಹಿಸಿಕೊಂಡಿದ್ದರು.

ಈ ಸಂದರ್ಭದಲ್ಲಿ ಮಲ್ಲುಗೌಡ ಪೊಲೀಸ್ ಪಾಟೀಲ್, ಸಿದ್ದಣ್ಣ ಮಾಸ್ತರ, ಬಸವರಾಜ್ ನೀಲಹಳ್ಳಿ, ಹಣಮಂತರಾಯ ಜಡಿ, ಮಲ್ಲಪ್ಪ ಇಟ್ಟಿಗಿ, ಹೃಷಿಕೇಶ್ ಕುಲ್ಕರ್ಣಿ, ವಿಶ್ವನಾಥ್ ರೆಡ್ಡಿ ಬಸರೆಡ್ಡಿ, ಸಿರೇಸ್ತೆದಾರ ರಾಮನಗೌಡ , ಕಂದಾಯ ನಿರೀಕ್ಷಕ ಬಸವರಾಜ, ಪ್ರಮೋದ್ ಸ್ವಾಮಿ, ನಿಂಗಣ್ಣ ಜಡಿ, ಶಂಕ್ರು ಕರಣಿಗಿ, ದೇವಪ ಗೌಡ, ಕಾಸಿಂ ಅಲಿ ಕಾರ್ಪೆಂಟರ್, ಅಬ್ದುಲ್ ಚಿಗಾನೂರ, ಸಿದ್ಲಿಂಗಪ್ಪ ಪಿಡ್ಡೆಗೌಡ, ಶಿವು ಕೊಂಕಲ, ರೆಡ್ಡಪ್ಪಗೌಡ, ಗುರು ನಾಟೇಕಾರ, ಮಲ್ಲು ಬೋಕ್, ಬಸಯ್ಯಸ್ವಾಮಿ ಉಳ್ಳೆಸೂಗುರ, ಭೀಮಣ್ಣ ಬೂದಿನಾಳ, ಮಲ್ಲಣ್ಣ ನೀಲಳ್ಳಿ, ಮಲ್ಲಣ್ಣ ಹೊರಟುರ, ಇಮಾಮ್ ಕಂಡಕ್ಟರ್, ಭೀಮಣ್ಣ ಮಡಿವಾಳ, ಸಣ್ಣ ತಿರಕಪ್ಪ ಬುಸ್ಸೇನಿ ,ದೇವು ಜಡಿ, ಗಡ್ಡೆಪ್ಪ, ಮತ್ತು ಬಯಲಾಟದ ಮಾಲೀಕರು ವ್ಯವಸ್ಥಾಪಕರು ಕಲಾ ಪೋಷಕರು ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಈ ಕಾರ್ಯಕ್ರಮವನ್ನು ಶಿಕ್ಷಕ ವಾಸುದೇವ್ ಮರಕಲ್ ನಿರೂಪಿಸಿದರು, ಫಕೀರ್ ಅಹ್ಮದ್ ಮರಡಿ ವಂದಿಸಿದರು.

## ಅವಳಿ ಪಟ್ಟಣಗಳಲ್ಲಿ 5ಕಡೆ ಕುಡಿಯುವ ನೀರಿನ ವ್ಯವಸ್ಥೆ

• **ಉದಯವಾಹಿನಿ, ಚಿಂಚೋಳಿ**

ಅವಳಿ ಪಟ್ಟಣ ಚಿಂಚೋಳಿ–ಚಂದಾಪೂರ ಸೇರಿದಂತೆ ಒಟ್ಟಾರೆ 5ಕಡೆ ಪುರಸಭೆ ವತಿಯಿಂದ ಸಾರ್ವಜನಿಕರಿಗೆ ತಂಪಾದ ಕುಡಿಯುವ ನೀರಿನ ಅರವಟಿಕೆ ವ್ಯವಸ್ಥೆ ಮಾಡಲಾಗಿದೆ ಜನರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್ ಹೇಳಿದರು.

ಪಟ್ಟಣದಲ್ಲಿ ಅಂಬೇಡ್ಕರ್ ಜಯಂತಿ ಪ್ರಯುಕ್ತವಾಗಿ ಗ್ರಾಮೀಣ ಪ್ರದೇಶದಿಂದ ಪಟ್ಟಣಕ್ಕೆ ಆಗಮಿಸುತ್ತಿರುವ, ಪಟ್ಟಣದ ಜನರಿಗೆ ಬೇಸಿಗೆಯ ನೀರಿನ ದಾಹಾ ನಿಗಿಸಲು ಪುರಸಭೆ ವತಿಯಿಂದ ತಂಪಾದ ಕುಡಿಯುವ ನೀರಿನ ಅರವಟಿಕೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಈಗಾಗಲೇ ಬಹಳಷ್ಟು ಬಿಸಿಲಿನ ತಾಪಮಾನವಿದ್ದು ಮುಂದೆ ಇನ್ನು ಸಾಕಷ್ಟು ಬಿಸಿಲಿನ ಇರಲಿದೆ ಎಂಬುವುದು ತಜ್ಞರು ಹೇಳಿದ್ದು ಸಾರ್ವಜನಿಕರಿಗೆ ಬಿಸಿಲಿನ ಧಾಹಾ ತಗ್ಗಿಸಲು ಜನರಿಗೆ ತಂಪಾದ ಕುಡಿಯುವ ನೀರಿನ ಅರವಟಿಕೆಯನ್ನು ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ,ಬಸವೇಶ್ವರ ವೃತ್ತದಲ್ಲಿ,ಬಸ್ ನಿಲ್ದಾಣ ಎದುರು, ತಾಂಡೂರ ವೃತ್ತ ಹಾಗೂ ಸರ್ಕಾರಿ ಆಸ್ಪತ್ರೆಯ ಹತ್ತಿರ ಹೀಗೆ ಐದು ಕಡೆ ತಂಪಾದ ನೀರಿನ ವ್ಯವಸ್ಥೆ ಮಾಡಲಾಗಿದೆ ಎಂದರು.



☛ ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ, ಡಿವೈಎಸ್ಪಿ ಸಂಗಮನಾಥ ಹಿರೇಮಠ,ಮುಖ್ಯಾಧಿಕಾರಿ ಕಾಶಿನಾಥ ಧನ್ನಿ, ಟಿಹೆಚ್‌ಓ ಮಹ್ಮದ್ ಗಫಾರ್, ಅಬ್ದುಲ್ ಬಾಷೀದ್, ರೂಪಕಲಾ ಕಟ್ಟಿಮನಿ, ಬಸವರಾಜ ಸಿರ್ಸಿ, ಜಗನ್ನಾಥ ಕಟ್ಟಿ, ಮಲ್ಲಿಕಾರ್ಜುನ ಪಾಲಾಮೋರ್, ಮಹ್ಮದ್ ಹಾದಿಸಾಬ, ಖಲೀಲ್ ಪಟೇಲ, ಶಶಿ ಕಳಸ್ಕರ, ಗೋಪಾಲರಾವ ಕಟ್ಟಿಮನಿ, ಬಸವರಾಜ ಕಡಬೂರ, ಸಂತೋಷ ಗುತ್ತೇದಾರ, ಅಮರ ಲೋಡನೂರ,ಮಾರುತಿ ಗಂಜಗಿರಿ, ಸುರೇಶ ದೇಶಪಾಂಡೆ, ನಾಗೇಂದ್ರಪ್ಪಾ ಗುರಂಪಳ್ಳಿ,ಅನೇಕರಿದ್ದರು.

## ನ್ಯಾಯಾಧೀಶರ ಮನೆ ಕಳವು; ಮೂವರ ಬಂಧನ

• **ಉದಯವಾಹಿನಿ ಬೀದರ**

ನ್ಯಾಯಾಧೀಶರ ಮನೆ ಕಳವು ಮಾಡಿದ ಮೂರು ಜನ ಆರೋಪಿತರನ್ನು ನೂತನ ನಗರ ಪೊಲೀಸರು ವಶಕ್ಕೆ ಪಡೆದು 1.77 ಲಕ್ಷ ರೂ ಮೌಲ್ಯದ ಸ್ವತ್ತನ್ನು ಜಪ್ತಿ ಮಾಡಿದ್ದಾರೆ ಎಂದು ಬೀದರ ಎಸ್ಪಿ ಪ್ರದೀಪ ಗುಂಟಿ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಕಳೆದ ಜ.20 ರಂದು 2ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ಸಿ–2 ನ್ಯಾಯಾಲಯದ ನ್ಯಾಯಾಧೀಶ ಎಮ್.ಡಿ ಶೈಜ್ ಚೌತಾಯಿ ಅವರು ವಾಸವಿದ್ದ ಜನವಾಡಾ ರೋಡಿನ ಪಕ್ಕದ ಸರ್ಕಾರಿ ವಸತಿ ಗೃಹದ ಬಾಗಿಲು ಕೀಲಿ ಮುರಿದು ಮನೆಯಲ್ಲಿದ್ದ 109 ಗ್ರಾಂ ಬಂಗಾರದ ಮತ್ತು 50 ಗ್ರಾಂ ಬೆಳ್ಳಿಯ ಆಭರಣಗಳನ್ನು ಕಳ್ಳರು ಕಳ್ಳತನ ಮಾಡಿಕೊಂಡು ಹೋಗಿದ್ದರು. ಈ ಕುರಿತು ನ್ಯಾಯಾಧೀಶರು ಸಲ್ಲಿಸಿದ ಲಿಖಿತ ದೂರಿನ ಆಧಾರದ ಮೇಲೆ ಪೊಲೀಸ್ ತನಿಖೆ ತೀವ್ರಗೊಳಿಸಲಾಗಿತ್ತು ಎಂದರು. ನಸುಕಿನ ಜಾವ 2.30 ಗಂಟೆಯ ಸುಮಾರಿಗೆ ಮಹಾರಾಷ್ಟ್ರ ಲಾತೂರ ಜಿಲ್ಲೆಯ ಉದಗೀರ ರೈಲ್ವೆ ಸ್ಟೇಷನ್ ಬಳಿಯಲ್ಲಿ ಅನುಮಾನಾಸ್ಪದವಾಗಿ ಕಂಡುಬಂದ ಮೂರು ಜನರಿಗೆ ವಶ ಪಡೆದು ಕೂಲಂಕಶವಾಗಿ ವಿಚಾರಿಸಲಾಗಿ ನ್ಯಾಯಾಧೀಶರ ಮನೆ ಕಳವು ಮಾಡಿದ ಬಗ್ಗೆ ಒಪ್ಪಿಕೊಂಡಿದ್ದಾರೆ. ಕಳವು ಮಾಡಿದ ಉಳಿದ ಸ್ವತ್ತು ಔರಂಗಬಾದನ ನಿವಾಸಿಯಾದ ಇನ್ನೊಬ್ಬ ಆರೋಪಿಯ ಹತ್ತಿರ ಇರುವ ಬಗ್ಗೆ ಹೇಳಿಕೆ ನೀಡಿದ್ದು, ತಲೆಮರೆಸಿಕೊಂಡ ಆರೋಪಿತನ ದಸ್ತಗಿರಿಗಾಗಿ ಬಲೆ ಬೀಸಲಾಗಿದೆ ಎಂದರು.



☛ ಉದಯವಾಹಿನಿ ಚಿತ್ರ

## ಸಂಡೂರು ಅರಣ್ಯ ರಕ್ಷಣೆಗೆ 'ನೋ ಗೋ ಝೋನ್' ಅಸ್ತ್ರ

• **ಉದಯವಾಹಿನಿ ಬಳ್ಳಾರಿ**

ಪಶ್ಚಿಮ ಘಟ್ಟದಂಥ ಪರಿಸರವನ್ನೇ ಹೋಲುವ ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ಅರಣ್ಯವನ್ನು ಗಣಿಗಾರಿಕೆಯಿಂದ ರಕ್ಷಿಸಲು ರಾಷ್ಟ್ರೀಯ ಖನಿಜ ನೀತಿ–19 ಅನ್ನು ಅಸ್ತ್ರವಾಗಿ ಬಳಸಿಕೊಳ್ಳಲು ಅರಣ್ಯ ಇಲಾಖೆ ಮತ್ತು ಸಂಘ ಸಂಸ್ಥೆಗಳು ಚಿಂತನೆ ನಡೆಸಿವೆ.

ಇದರ ಪ್ರಕಾರ, ಈಗಾಗಲೇ ಗಣಿಗಾರಿಕೆ ನಡೆದಿರುವ, ನಡೆಯುತ್ತಿರುವ ಪ್ರದೇಶವನ್ನು ಹೊರತುಪಡಿಸಿ, ಉಳಿದಿರುವ ಅರಣ್ಯವನ್ನು 'ನೋ ಗೋ ರೋನ್' (ನಿರ್ಬಂಧಿತ ಪ್ರದೇಶ)ಎಂದು ಘೋಷಿಸಲು ಪ್ರಯತ್ನಗಳು ಆರಂಭವಾಗಿವೆ.

ಜಾರ್ಖಂಡ್‌ನ ಕಲ್ಲಿದ್ದಲಿನ ಗಣಿಗಾರಿಕೆಯಿಂದ ಅರಣ್ಯ ಪ್ರದೇಶವನ್ನು ರಕ್ಷಿಕೊಳ್ಳಲು ಈಗಾಗಲೇ ಇಂಥ 'ನೋ ಗೋ ರೋನ್'ಗಳನ್ನು ಗುರುತಿಸಲಾಗಿದೆ. ಅದೇ ಮಾದರಿಯನ್ನು ಇಲ್ಲಿಯೂ ಬಳಸಿಕೊಳ್ಳುವುದು ಪರಿಸರ ಪ್ರೇಮಿಗಳು, ಹೋರಾಟಗಾರರು ಮತ್ತು ಅರಣ್ಯ ಇಲಾಖೆಯ ಉದ್ದೇಶವಾಗಿದೆ. ಸಂಡೂರಿನ ಅರಣ್ಯ ಒಟ್ಟಾರೆ 30 ಸಾವಿರ ಹೆಕ್ಟೇರ್ (74,131 ಎಕರೆ) ಪ್ರದೇಶವನ್ನು ವ್ಯಾಪಿಸಿದೆ. ಇಲ್ಲಿಯೇ ದೇಶದ ಅತ್ಯಂತ ಉತ್ಕೃಷ್ಟ ಕಬ್ಬಿಣ ಮತ್ತು ಮ್ಯಾಂಗನೀಸ್ ಅದಿರು ನಿಕ್ಷೇಪಗೊಂಡಿದೆ. ಇಲ್ಲಿ ಈಗಾಗಲೇ 4,200 ಹೆಕ್ಟೇರ್ ಪ್ರದೇಶದಲ್ಲಿ ಸಕ್ರಿಯ ಗಣಿಗಳಿವೆ. 2,000 ಹೆಕ್ಟೇರ್ ಅರಣ್ಯ ಪ್ರದೇಶ ಈಗಾಗಲೇ ಗಣಿಗಾರಿಕೆ ನಡೆದು ಬೋಕನ್ ಲ್ಯಾಂಡ್ ಆಗಿ ಪರಿವರ್ತನೆಗೊಂಡಿದೆ.



☛ ಉದಯವಾಹಿನಿ ಚಿತ್ರ

ಅಂದರೆ ಒಟ್ಟಾರೆ ಅರಣ್ಯದ ಶೇ 20ರಷ್ಟು ಈಗಾಗಲೇ ಗಣಿಗಾರಿಕೆಯಿಂದ ನಾಶವಾಗಿದೆ. ಇತ್ತೀಚೆಗೆ, ಸಂಡೂರಿನ ಅರಣ್ಯ ಪ್ರದೇಶದ ದಕ್ಷಿಣ ವಲಯದಲ್ಲಿರುವ ದಟ್ಟಾರಣ್ಯದ ಒಟ್ಟು 88 ಹೆಕ್ಟೇರ್ ವ್ಯಾಪ್ತಿಯ ಕುಮಾರಸ್ವಾಮಿ ಐರನ್ ಓರ್ ಹೆಸರಿನ ಅದಿರು ಬ್ಲಾಕ್ ಅನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಹರಾಜು ಹಾಕಿತ್ತು. ಈ ಬೆಳವಣಿಗೆ ಬಳಿಕ ನೋ ಗೋ ಝುನ್ ಚರ್ಚೆ ತೀವ್ರತೆ ಪಡೆದುಕೊಂಡಿದೆ.

### ಇಲಾಖೆ ಸಮ್ಮತಿ ಸಾಕು

**ಸಂಡೂರಿನ ಅರಣ್ಯವನ್ನು ಅಭಯಾರಣ್ಯವೆಂದು ಘೋಷಿಸುವ ಚಿಂತನೆ ಮೊದಲಿಗೆ ಇತ್ತು. ಆದರೆ, ಇದು ಸರ್ಕಾರದ ಹಂತದ ತೀರ್ಮಾನವಾದ ಕಾರಣ ಎಲ್ಲರನ್ನೂ ಒಮ್ಮತಕ್ಕೆ ತರುವುದು ಕಷ್ಟ. ಆದರೆ, 'ನೋ ಗೋ ಝುನ್' ಘೋಷಣೆಯು ಇಲಾಖಾ ಹಂತದ ತೀರ್ಮಾನವಾಗಿದ್ದು, ಸಚಿವರ ನಿರ್ಧಾರವೇ ಅಂತಿಮವಾಗಲಿದೆ ಎಂದು ಮೂಲಗಳು ಹೇಳಿವೆ.**

## ಕೂಡಲಸಂಗಮ -ಹೊಸಪೇಟೆ ರೈಲು ಮಾರ್ಗ ಅನುಷ್ಠಾನವಾಗಲಿ: ಕಾಶಪ್ಪನವರ

• **ಉದಯವಾಹಿನಿ ಹುನಗುಂದ**

ತಾಲ್ಲೂಕಿನ ಸಾರ್ವಜನಿಕರ ಬಹುದಿನಗಳ ಬೇಡಿಕೆಯಾದ ಕೂಡಲಸಂಗಮ ಹೊಸಪೇಟೆ ರೈಲು ಮಾರ್ಗವನ್ನು ಅನುಷ್ಠಾನಗೊಳಿಸಬೇಕು ಎಂದು ಶಾಸಕ ವಿಜಯಾನಂದ ಕಾಶಪ್ಪನವರ ಲೋಕಸಭಾ ಸದಸ್ಯ ಪಿ. ಸಿ. ಗದ್ದಿಗೌಡರ ಅವರಿಗೆ ಮನವಿ ಮಾಡಿದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ತಾಲ್ಲೂಕಿನ ಕೂಡಲಸಂಗಮ ಕ್ರಾಸ್ ಹತ್ತಿರ ವಿಜಯಪುರ – ಹುನಗುಂದ ರಾಷ್ಟ್ರೀಯ ಹೆದ್ದಾರಿಯಲ್ಲಿ 43.90 ಕೋಟಿ ವೆಚ್ಚದಲ್ಲಿ ಮೇಲೇತುವೆ ಕಾಮಗಾರಿಗೆ ಮಂಗಳವಾರ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಕೂಡಲಸಂಗಮ ಕ್ರಾಸ್ ಹತ್ತಿರ ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನ ಸಂಚಾರ ದಟ್ಟನೆಯಿಂದ ಅಪಘಾತಗಳು ಹೆಚ್ಚಾಗಿದ್ದರಿಂದ ಸ್ಥಳೀಯರ ಬೇಡಿಕೆಯಂತೆ ಮೇಲೇತುವೆ ನಿರ್ಮಾಣ ಮಾಡಲಾಗುತ್ತಿದೆ. ಕೂಡಲ ಸಂಗಮಕ್ಕೆ ನಿತ್ಯ ಸಾವಿರಾರು ಜನರು ಆಗಮಿಸುವರು. ಹೀಗಾಗಿ ಒಂದು ಕಿರು ವಿಮಾನ ನಿಲ್ದಾಣಕ್ಕೆ ಭೂಮಿ ಕೊಡಿಸುವೆ. ಕೇಂದ್ರದಿಂದ ಒಪ್ಪಿಗೆ ಕೊಡಿಸಿ ಎಂದರು. ಮುಖಂಡರಾದ ಗಂಗಾಧರ ದೊಡ್ಡಮನಿ, ಬಸವರಾಜ ಬಡ್ಡಿ ಇತರರಿದ್ದರು.



☛ ಉದಯವಾಹಿನಿ ಚಿತ್ರ

**ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ರಾಷ್ಟ್ರೀಯ ಹೆದ್ದಾರಿಗಳ ಸುಧಾರಣೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ನನ್ನ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ನೂತನ ಹೈದ್ರಾಬಾದ್–ಪಣಜಿ, ಪುಣೆ– ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ತೀವ್ರ ಗತಿಯಲ್ಲಿ ಸಾಗಿದೆ. ಜೊತಗೆ ಬಾಣಪುರ– ಶಿರೂರು ರಸ್ತೆ ವಿಸ್ತರಣೆ ಬಹುತೇಕ ಮುಗಿದಿದೆ. ಹಂತ ಹಂತವಾಗಿ ಇನ್ನಿತರ ಕಾರ್ಯಗಳನ್ನು ಆರಂಭಿಸಲಾಗುವುದು**

**–ಪಿ. ಸಿ. ಗದ್ದಿಗೌಡರ, ಲೋಕಸಭಾ ಸದಸ್ಯ**

## ಗ್ರಾಮಸ್ಥರ ವಲಸೆ ತಡೆಯುವ ನರೇಗಾ

• **ಉದಯವಾಹಿನಿ ಶಿರಹಟ್ಟಿ**

ನರೇಗಾ ಯೋಜನೆಯು ಉದ್ಯೋಗಕ್ಕಾಗಿ ವಲಸೆ ಹೋಗುವ ಜನರನ್ನು ತಡೆಯುವುದಲ್ಲದೆ, ಆ ಭಾಗದ ಜನರ ಜೀವನಕ್ಕೆ ಆಧಾರ ಸ್ತಂಭವಾಗಿದೆ' ಎಂದು ತಾಲ್ಲೂಕು ಪಂಚಾಯಿತಿ ಇಒ ರಾಮಣ್ಣ ದೊಡ್ಡಮನಿ ಹೇಳಿದರು.

ತಾಲೂಕಿನ ಮಾಚೇನಹಳ್ಳಿ ಗ್ರಾಮದಲ್ಲಿ 2025–26ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ನಡೆಯುತ್ತಿರುವ ಕಂದಕ ಬದು ನಿರ್ಮಾಣ ಕಾಮಗಾರಿಯನ್ನು ಪರಿಶೀಲನೆ ಮಾಡಿ ಮಾತನಾಡಿದ ಅವರು, ಕೂಲಿಕಾರರಿಗೆ ಕೆಲಸದ ಪ್ರಮಾಣ. ಕೂಲಿ ಮೊತ್ತ, ಎನ್‌ಎಂಎಂಎಸ್ ಹಾಜರಾತಿ ಕುರಿತು ಮಾಹಿತಿ ನೀಡಿದರು.

ಕಂದಕಗಳ ಅಳತೆ ಪ್ರಮಾಣ ಪರಿಶೀಲಿಸಿದ ಅವರು, ನರೇಗಾ ಯೋಜನೆಯಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಹಿಳೆಯರಿಗೆ ಮತ್ತು ಪುರುಷರಿಗೆ ತಾರತಮ್ಯವಿಲ್ಲದೆ ವೇತನವನ್ನು ನೀಡುವ ಮೂಲಕವಾಗಿ ನಿರಂತರ ಕೆಲಸವನ್ನು ಕೊಡಲಾಗುತ್ತಿದೆ' ಎಂದರು. ಜಾಬ್ ಕಾರ್ಡ್ ಇಲ್ಲದಿರುವ ಕೂಲಿ ಕಾರ್ಮಿಕರು ತಕ್ಷಣವೇ ದಾಖಲಾತಿ ನೀಡಿ, ಹೊಸ ಕಾರ್ಡ್‌ಗಳನ್ನು ಪಡೆದು ಯೋಜನೆಯ ಲಾಭ ಪಡೆಯಬೇಕು. ಪ್ರಸ್ತುತ ಬಿಸಿಲು ಹೆಚ್ಚಾಗಿರುವುದರಿಂದ ಕಾರ್ಮಿಕರು ಆರೋಗ್ಯದ ಕಡೆ ಹೆಚ್ಚು ಗಮನ ಹರಿಸಬೇಕು. ಎಂದು ಕಿವಿಮಾತು ಹೇಳಿದರು.

ಡ್ರಗ್ಸ್ ಹಾವಳಿಯಿಂದ ಯುವಕರನ್ನು ಕಾಪಾಡುವ ದೃಷ್ಟಿಯಿಂದ ಹಲವಾರು ಜಾಗೃತಿ ಕಾರ್ಯಕ್ರಮ

# ಡ್ರಗ್ಸ್ ಹಾವಳಿ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಕ್ರಮ: ಪ್ರಿಯಾಂಕ್ ಖರ್ಗೆ

• **ಉದಯವಾಹಿನಿ ಕಲಬುರಗಿ**

ಯುವಕರು ಡ್ರಗ್ಸ್ ಹಾಗೂ ಅಫೀಮುಗಳಂತ ದುಷ್ಚಟಗಳಿಗೆ ಬಲಿಯಾಗಿ ಅಡ್ಡದಾರಿ ಹಿಡಿಯದಂತೆ ತಡೆಯುವ ನಿಟ್ಟಿನಲ್ಲಿ ಸರ್ಕಾರ ದಿಟ್ಟ ಕ್ರಮವಹಿಸುತ್ತಿದ್ದು, ಪೊಲೀಸ್ ಇಲಾಖೆ ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿ ಸಾರ್ವಜನಿಕರ ಅರಿವು ಮೂಡಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಹೇಳಿದರು.

ಕಲಬುರಗಿ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಇಲಾಖೆಯ ಅಧಿಕಾರಿಗಳು ಸಾರ್ವಜನಿಕರಿಂದ, ಡ್ರಗ್ ಪೆಡ್ಲರ್ ಗಳಿಂದ ವಶಪಡಿಸಿಕೊಂಡ ಮಾದಕ ವಸ್ತು ಹಾಗೂ ಶೆಡ್ಯೂಲ್ ಹೆಚ್ ಡ್ರಗ್ಸ್‌ನ್ನು ವೀಕ್ಷಿಸಿ ನಂತರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿದ್ದರು. ಗೃಹ ಸಚಿವರ ನೇತೃತ್ವದ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಸಮಗ್ರ ಚರ್ಚೆ ನಡೆಸಲಾಗಿದ್ದು, ಡ್ರಗ್ಸ್ ಹಾವಳಿ ಸಂಪೂರ್ಣ ನಿಯಂತ್ರಣ ಮಾಡಲು ಸಂಬಂಧಿಸಿದ ಇಲಾಖೆಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು. ಕಳೆದ ವರ್ಷಕ್ಕೆ ಹೋಲಿಸಿದರೆ ಕಮೀಷನರೇಟ್ ವ್ಯಾಪ್ತಿಯಲ್ಲಿ ಪೊಲೀಸರು ನಿರಂತರ ದಾಳಿ ಮಾಡುವ ಮೂಲಕ ಮಾದಕ ದ್ರವ್ಯ ಪದಾರ್ಥ ಗಳಾದ ಗಾಂಜಾ, ಡ್ರಗ್ ಹಾಗೂ ಶೆಡ್ಯುಲ್ ಹೆಚ್ ಡ್ರಗ್ಸ್‌ನ್ನು ವಶಪಡಿಸಿಕೊಂಡು, ಮಾರಾಟಗಾರ ಹಾಗೂ ಖರೀದಿದಾರರ ಮೇಲೆ ದೂರು ದಾಖಲಿಸಿಕೊಂಡಿದ್ದಾರೆ. 2024 ರ ಸಾಲಿನಲ್ಲಿ 58 ಕೇಸು ದಾಖಲಿಸಿಕೊಂಡು, 59 ಆರೋಪಿಗಳನ್ನು ದಸ್ತಗಿರಿ ಮಾಡಿ ಅವರಿಂದ 20 ಕಿಲೋ ಗಾಂಜಾ ವಶಪಡಿಸಿಕೊಂಡಿದ್ದರು. ಆದರೆ 2025 ರ ಸಾಲಿನಲ್ಲಿ 172 ಕೇಸ್ ದಾಖಲಿಸಿಕೊಂಡು 176 ಆರೋಪಿಗಳನ್ನು ದಸ್ತಗಿರಿ ಮಾಡಿ ಅವರಿಂದ 100 ಕೆಜಿ ಗಾಂಜಾ ಹಾಗೂ 776 ಕೆಜಿ ಶೆಡ್ಯೂಲ್ ಡ್ರಗ್ ವಶಪಡಿಸಿಕೊಳ್ಳಲಾಗಿದೆ. ಒಟ್ಟಾರೆ ಇದೂವರೆಗೆ ವಶಪಡಿಸಿಕೊಂಡ ಡ್ರಗ್ಸ್ ಹಾಗೂ ಶೆಡ್ಯುಲ್ ಡ್ರಗ್ ಮೌಲ್ಯ ಅಂದಾಜು ರೂ 23 ಲಕ್ಷ ಮೌಲ್ಯದ್ದಾಗಿದೆ ಎಂದು ಸಚಿವರು ವಿವರಿಸಿದರು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಯನ್ನು ತುಂಬಲು ಕ್ರಮವಹಿಸಲಾಗುತ್ತಿದೆ ಎಂದ ಸಚಿವರು ಮೊದಲಿಗೆ ಪ್ರಾಥಮಿಕ ಶಾಲೆಗಳಿಗೆ ಒಟ್ಟು 5520 ಶಿಕ್ಷಕರ ಹುದ್ದೆ ತುಂಬಲಾಗುವುದು ಎಂದರು.ಮಹಾನಗರ ಪಾಲಿಕೆ ವ್ಯಾಪ್ತಿಯ ಅಪ್ಪನ ಕೆರೆ ಸೇರಿದಂತೆ 23 ಉದ್ಯಾನವನಗಳ ಸಮಗ್ರ ಅಭಿವೃದ್ದಿ ಪಡಿಸಲಾಗುತ್ತಿದೆ ಎಂದು ಪ್ರಿಯಾಂಕ್ ಖರ್ಗೆ ಇದೇ ಸಂದರ್ಭದಲ್ಲಿ ಹೇಳಿದರು.

ನಾಳೆ ನಡೆಯುವ ಉದ್ಯೋಗ ಮೇಳದಲ್ಲಿ ಸುಮಾರು 1 ಲಕ್ಷ ಉದ್ಯೋಗ ಒದಗಿಸುವ ಗುರಿ ಹೊಂದಲಾಗಿದ್ದು ಈಗಾಗಲೇ 22,000 ಕ್ಕೂ ಅಧಿಕ ಅಭ್ಯರ್ಥಿಗಳು ಹೆಸರು ನೋಂದಾಯಿಸಿದ್ದಾರೆ. ಒಟ್ಟು 280 ,ಕ್ಕೂ ಅಧಿಕ ಕಂಪನಿಗಳು ಭಾಗವಹಿಸಲಿದ್ದು ಅಭ್ಯರ್ಥಿಗಳ ವಿದ್ಯಾಭ್ಯಾಸ ಕ್ಕೆ ಅನುಗುಣವಾಗಿ ಅಯ್ಕೆ ಮಾಡಿ ಅಂತವರಿಗೆ ನೇಮಕಾತಿ ಆದೇಶ ನೀಡಲಾಗುವುದು ಎಂದು ಸಚಿವ ಶರಣಪ್ರಕಾಶ್ ಪಾಟೀಲ್ ಹೇಳಿದರು.




☛ ಉದಯವಾಹಿನಿ ಚಿತ್ರ

**ಡ್ರಗ್ಸ್ ಹಾವಳಿಯಿಂದ ಯುವಕರನ್ನು ಅದರಲ್ಲೂ ವಿದ್ಯಾರ್ಥಿಗಳನ್ನು ಕಾಪಾಡುವ ದೃಷ್ಟಿಯಿಂದ ಹಲವಾರು ಜಾಗೃತಿ ಕಾರ್ಯಕ್ರಮ ನಡೆಸಲಾಗುವುದು ಎಂದ ಸಚಿವರು, ಶಾಲಾ ಕಾಲೇಜು ಹಾಗೂ ಯೂನಿವರ್ಸಿಟಿ ಗಳಲ್ಲಿ ಜಾಗೃತಿ ಸಭೆ ಹಾಗೂ ಕಾರ್ಯಕ್ರಮ ನಡೆಸಲಾಗುವುದು. ನಂತರ, ಅಭಿಯಾನ ನಡೆಸಿ ಸಾರ್ವಜನಿಕ ಅರಿವು ಮೂಡಿಸಲಾಗುವುದು**

**–ಪ್ರಿಯಾಂಕ್ ಖರ್ಗೆ, ಸಚಿವ**

### ಉದ್ಘಾಟನೆ ಹಾಗೂ ಲೋಕಾರ್ಪಣೆ ಸಮಾರಂಭ

**ಕಲಬುರಗಿ ಜಿಲ್ಲೆಯ ಗುಲಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆವರಣದಲ್ಲಿ ಸುಪರ್ ಸ್ಪೇಷಾಲಿಟಿ ಆಸ್ಪತ್ರೆ, ಒಟ್ಟು ವೆಚ್ಚ: ರೂ. 216.53 ಕೋಟಿಗಳು ಹಾಗೂ ಬ್ರಾಕಿಥೆರಪಿ ವಿಕೀರಣ ಚಿಕಿತ್ಸೆ ಘಟಕದ ಒಟ್ಟು ವೆಚ್ಚ: ರೂ. 6.20 ಕೋಟಿಗಳು.**

### ವಿವಿಧ ಕಾಮಗಾರಿಗಳ ಅಡಿಗಲ್ಲು ಸಮಾರಂಭ

**200 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಕಟ್ಟಡ ನಿರ್ಮಾಣ ಕಾಮಗಾರಿ (ಅಂದಾಜು ಮೊತ್ತ ರೂ. 92.00 ಕೋಟಿಗಳು ) ಕಲಬುರಗಿ ಜಿಲ್ಲೆಯ ಗುಲಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಗುಲಬರ್ಗಾ ವಿಶ್ವವಿದ್ಯಾಲಯ ಆವರಣದಲ್ಲಿ 150 ಹಾಸಿಗೆಗಳ ಇಂದಿರಾಗಾಂಧಿ ಮಕ್ಕಳ ಆಸ್ಪತ್ರೆ ಆರೋಗ್ಯ ಘಟಕ ಕಟ್ಟಡ ನಿರ್ಮಾಣ ಕಾಮಗಾರಿ (ಅಂದಾಜು ಮೊತ್ತ ರೂ. 92.00 ಕೋಟಿಗಳು) ಕಲಬುರಗಿ ಜಿಲ್ಲೆಯ ಗುಲಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆವರಣದಲ್ಲಿ 210 ಹಾಸಿಗೆಗಳ ಹೊಸ ಕ್ಯಾನ್ಸರ್ ಆಸ್ಪತ್ರೆ ಕಟ್ಟಡ ನಿರ್ಮಾಣ ಕಾಮಗಾರಿ ಅಂದಾಜು ಮೊತ್ತ ರೂ. 76.00 ಕೋಟಿಗಳು).**

ಉದಯವಾಹಿನಿ

ಪ್ರಾದೇಶಿಕ

ಬುಧವಾರ 16 ಏಪ್ರಿಲ್ 2025 | 05

## ಮಿನಿ ನ್ಯೂಸ್

### ಲೈಂಗಿಕ ಕಿರುಕುಳ, ಹಲ್ಲೆ ಆರೋಪ: ಪ್ರಕರಣ ದಾಖಲು

• **ಉದಯವಾಹಿನಿ, ಮೂಡಿಗೆರೆ**

ತಾಲ್ಲೂಕಿನ ಬಣಕಲ್ ಪೊಲೀಸ್ ಠಾಣಾ ವ್ಯಾಪ್ತಿಯ ಕೊಟ್ಟಿಗೆಹಾರ ಅಜಾದ್ ನಗರದ ಮಹಿಳೆಯೊಬ್ಬರಿಗೆ ಲೈಂಗಿಕ ಕಿರುಕುಳ ನೀಡಿ ಹಲ್ಲೆ ನಡೆಸಿದ್ದಾರೆ ಎಂಬ ಆರೋಪದಲ್ಲಿ ಅಬ್ಬಾಸ್ ಎಂಬುವವರ ವಿರುದ್ಧ ಬಣಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

'ಮೂರು ದಿನಗಳ ಹಿಂದೆ ಪರಿಶಿಷ್ಟ ಸಮುದಾಯಕ್ಕೆ ಸೇರಿದ ಮಹಿಳೆಯು ಮನೆಯಲ್ಲಿ ಒಬ್ಬರೇ ಇರುವಾಗ, ರಾತ್ರಿ 11ರ ಸುಮಾರಿಗೆ ಅಬ್ಬಾಸ್ ಎಂಬಾತ ಬಂದು. ವಾಹನದ ಬಾಡಿಗೆ ಮೊತ್ತವನ್ನು ಕೂಡಲೇ ನೀಡುವಂತೆ ಒತ್ತಾಯಿಸಿದ್ದು, ಹಣ ಇಲ್ಲ ಎಂದಾಗ ಲೈಂಗಿಕ ಕಿರುಕುಳ ನೀಡಿ, ಹಲ್ಲೆ ನಡೆಸಿದ್ದಾರೆ. ಸ್ಥಳಕ್ಕೆ ಪುತ್ರಿ ಮೇಲೂ ಹಲ್ಲೆ ಮಾಡಿದ್ದಾರೆ. ಪಟ್ಟಣದ ಎಂಜಿಎಂ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದುಕೊಂಡಿದ್ದೇನೆ ಎಂದು ಮಹಿಳೆ ದೂರು ನೀಡಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

### ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

• **ಉದಯವಾಹಿನಿ, ಚನ್ನರಾಯಪಟ್ಟಣ**

ಶ್ರವಣಬೆಳಗೊಳದ 66/11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರದಲ್ಲಿ ನಿರ್ವಹಣೆ ಇರುವುದರಿಂದ ಏ.16ರಂದು ಬೆಳಿಗ್ಗೆ 10ರಿಂದ ಸಂಜೆ 5ರವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ಶ್ರವಣಬೆಳಗೊಳ, ಕಾಂತರಾಜಪುರ, ಬರಾಳು, ಬೆಕ್ಕ, ಹಿರಿಬೀಳ್ಳಿ, ವಡ್ಡರಹಳ್ಳಿ, ಚಿಕ್ಕಬಿಳ್ಳಿ, ಹಾಲುಮತಿಘಟ್ಟ, ಆಲದಹಳ್ಳಿ, ಗುರಿಗಾರನಹಳ್ಳಿ, ಸುಗ್ಗನಹಳ್ಳಿ, ರಾಗಿಬೊಮ್ಮೇನಹಳ್ಳಿ, ಶಿವಪುರ, ಬಿ. ಚೋಳೇನಹಳ್ಳಿ, ಹಳೆಬೆಳಗೊಳ, ಎನ್.ಜಿ. ಕೊಪ್ಪಲು, ಪರಮ, ಸುಂಡಹಳ್ಳಿ, ಹೊಸಹಳ್ಳಿ, ಬಸವನಹಳ್ಳಿ, ಮಂಜುನಾಥಪುರ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಗೊಳಪಡುವ ಕೊತ್ತನಘಟ್ಟ, ದಮ್ಮನಿಂಗಲ, ಡಿಂಕ, ಬಿ. ಹೊನ್ನೇನಹಳ್ಳಿ, ಜುಟ್ಟನಹಳ್ಳಿ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಗೆ ಬರುವ ಹೊಸಹಳ್ಳಿ, ಜಿನನಾಥಪುರ, ಸೋರೆಕಾಯಿಪುರ, ಜಿನನಾಥಪುರ ಕೊಪ್ಪಲು ಗ್ರಾಮದಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

### ದೂರು ನೀಡಿದ ದ್ವೇಷ, ಬೆಂಕಿ ಹಚ್ಚಿದ ದುಷ್ಕರ್ಮಿ: ಯುವತಿ ಸಾವು

• **ಉದಯವಾಹಿನಿ, ಕಾಸರಗೋಡು**

ಪೊಲೀಸರಿಗೆ ದೂರು ನೀಡಿದ ದ್ವೇಷದಿಂದ ದುಷ್ಕರ್ಮಿಯೋರ್ವ ಯುವತಿಗೆ ಬೆಂಕಿ ಹಚ್ಚಿದ್ದ, ಪರಿಣಾಮ ಗಂಭೀರ ಸುಟ್ಟ ಗಾಯಗಳಿಂದ ಮಂಗಳೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಯುವತಿ ಮೃತಪಟ್ಟ ಘಟನೆ ಬೇಡಕ್ಕದಲ್ಲಿ ನಡೆದಿದೆ.

ಬೇಡಕ್ಕದ ರಮಿತಾ (22) ಮೃತಪಟ್ಟ ಯುವತಿ, ಬೇಡಕ್ಕ ಮನ್ನಡ್ಕ ಎಂಬಲ್ಲಿ ಅವರು ಅಂಗಡಿ ನಡೆಸುತ್ತಿದ್ದರು. ಏಪ್ರಿಲ್ 8 ರಂದು ಈ ಘಟನೆ ನಡೆದಿತ್ತು. ಸಮೀಪದ ಪೀಠೋಪ ಕರಣ ಮಳಿಗೆ ಮಾಲಕ ತಮಿಳುನಾಡು ಮೂಲದ ರಾಮಕೃತ (57) ಎಂಬಾತ ಈ ಕೃತ್ಯ ಎಸಗಿದ್ದನು. ಪಾನಮತ್ತನಾಗಿ ಕಿರುಕುಳ ನೀಡಿದ ಬಗ್ಗೆ ರಮಿತಾ ಪೊಲೀಸರಿಗೆ ದೂರು ನೀಡಿದ್ದು, ಇದರಿಂದ ಈತ ಆಕೆಯ ದಿನಸಿ ಅಂಗಡಿಯೊಳಗೆ ನುಗ್ಗಿ ಟಿನ್ನರ್ ಸುರಿದು ಬೆಂಕಿ ಹಚ್ಚಿದ್ದ. ಪರಿಣಾಮ ಯುವತಿ ಗಂಭೀರ ಸುಟ್ಟ ಗಾಯಗಳಾಗಿದ್ದು, ಅವರನ್ನು ಮಂಗಳೂರಿನ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ರಮಿತಾ ರಾತ್ರಿ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ.

### ಅಂಬೇಡ್ಕರ್, ಬಾಬೂಜೀ ಚಿತ್ರ ಮೆರವಣಿಗೆ

• **ಉದಯವಾಹಿನಿ, ಹಾನಗಲ್**

ಇಲ್ಲಿನ ತಾಲ್ಲೂಕು ಪಂಚಾಯಿತಿ ಆವರಣದಲ್ಲಿನ ಅಂಬೇಡ್ಕರ್ ಪುತ್ಥಳಿಗೆ ಶಾಸಕ ಶ್ರೀನಿವಾಸ ಮಾನೆ ಮಾಲಾರ್ಪಣೆ ಮಾಡುವ ಮೂಲಕ ಅಂಬೇಡ್ಕರ್ ಮತ್ತು ಬಾಬು ಜಗಜೀವನ್‌ರಾಂ ಅವರ ಚಿತ್ರದ ಮೆರವಣಿಗೆಗೆ ಚಾಲನೆ ನೀಡಿದರು.

ಮುಖ್ಯ ರಸ್ತೆಯ ಮೂಲಕ ಅಂಬೇಡ್ಕರ್ ಭವನ ತಲುಪಿದ ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳು ಮತ್ತು ವಾದ್ಯ ವೈಭವ ಮೆರುಗು ನೀಡಿದವು. ವಿವಿಧ ಸಂಘ, ಸಂಸ್ಥೆಗಳ ಪ್ರಮುಖರು ಮತ್ತು ಸರ್ಕಾರಿ ಇಲಾಖೆಗಳ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಜರಿದ್ದರು.

ಅಂಬೇಡ್ಕರ್ ಭವನದಲ್ಲಿ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ಶ್ರೀನಿವಾಸ ಮಾನೆ, ದೇಶದ ಭವಿಷ್ಯ ಗಮನದಲ್ಲಿ ಟ್ಟುಕೊಂಡು ಬಾಬಾಸಾಹೇಬ ಅಂಬೇಡ್ಕರ್ ಸಂವಿಧಾನ ರಚಿಸಿದ್ದಾರೆ. ದೇಶ ಮತ್ತೆ ಗುಲಾಮಗಿರಿಯತ್ತ ಮರುಕಳಿಸದಂತೆ ಯುವ ಸಮೂಹ ಎಚ್ಚರ ವಹಿಸಬೇಕು' ಎಂದರು. ಹಾನಗಲ್ ಕುಮಾರೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರಾಧ್ಯಾಪಕ ಹೊನ್ನಪ್ಪ ಭೋವಿ ಮತ್ತು ಸರ್ಕಾರ ಪಿಯು ಕಾಲೇಜಿನ ಉಪನ್ಯಾಸಕ ಎಚ್. ಎಸ್. ಬಾರ್ಕಿ ಉಪನ್ಯಾಸ ನೀಡಿದರು. ಬಾಲಚಂದ್ರ ಅಂಬಿಗೇರ ಮತ್ತು ಸಂಗಡಿಗರು ಅಂಬೇಡ್ಕರ ಕುರಿತು ಭೀಮ ಗೀತೆ ಹಾಡಿದರು.

### ಪ್ರತಿ ವಾರ್ಡ್‌ಗಳಲ್ಲೂ ಸಭಾಭವನ ನಿರ್ಮಾಣಕ್ಕೆ ಒತ್ತು: ಬೇಳೂರು

• **ಉದಯವಾಹಿನಿ, ಸಾಗರ**

ನಗರ ವ್ಯಾಪ್ತಿಯ ಪ್ರತಿ ವಾರ್ಡ್‌ಗಳಲ್ಲೂ ಸಭಾಭವನ ನಿರ್ಮಾಣಕ್ಕೆ ಒತ್ತು ನೀಡಲಾಗುವುದು ಎಂದು ಶಾಸಕ ಗೋಪಾಲಕೃಷ್ಣ ಬೇಳೂರು ಹೇಳಿದರು. ನಗರದ ಅರಮನೆ ಕೇರಿಯಲ್ಲಿ ಬಿ.ಆರ್.ಅಂಬೇಡ್ಕರ್ ಸಭಾಭವನದ ಹೆಚ್ಚುವರಿ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಸಣ್ಣ ಗಾತ್ರದ ಸಭಾಭವನವಿದ್ದರೆ ಆರ್ಥಿಕವಾಗಿ ಹಿಂದುಳಿದವರಿಗೆ ಕಾರ್ಯಕ್ರಮ ನಡೆಸಲು ಸಹಾಯ ವಾಗುತ್ತದೆ ಎಂದರು. 29 ಲಕ್ಷ ವೆಚ್ಚದಲ್ಲಿ ಅರಮನೆ ಕೇರಿಯ ಸಭಾಭವನವನ್ನು ಉನ್ನತೀಕರಣಗೊಳಿಸಲಾಗುತ್ತಿದೆ. ಅದೇ ರೀತಿ ನಗರದ ವಿವಿಧ ವಾರ್ಡ್‌ಗಳಲ್ಲಿ ಅಪೂರ್ಣಗೊಂಡಿರುವ ಸಭಾಭವ ನಗಳ ಕಾಮಗಾರಿಯನ್ನು ಚುರುಕುಗೊಳಿಸಲಾಗುವುದು ಎಂದು ಮಾಹಿತಿ ನೀಡಿದರು. ನಗರದ ವಿವಿಧೆಡೆ ಎಲ್ಲೆಂದರಲ್ಲಿ ಕಸ ಎಸೆಯುವ ಪ್ರವೃತ್ತಿ ಹೆಚ್ಚುತ್ತಿದೆ. ಹೀಗೆ ಕಸ ಎಸೆಯುವ ಸ್ಥಳಗಳನ್ನು ಗುರುತಿಸಿ ಅಲ್ಲಿ ಸಿ.ಸಿ. ಟಿವಿ ಕ್ಯಾಮೆರಾ ಅಳವಡಿಸಲಾಗುವುದು. ಈ ಮೂಲಕ ಕಸ ಎಸೆಯುವವರನ್ನು ಗುರುತಿಸಿ ಅವರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದರು. ಕೆಲವು ಬಡಾವಣೆಗಳಲ್ಲಿ ನಗರೋತ್ಥಾನ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳು ಆಮೆಗತಿಯಲ್ಲಿ ಸಾಗಿವೆ. ಮಳೆಗಾಲ ಆರಂಭವಾಗುವುದರೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕು' ಎಂದು ನಗರಸಭೆ ಅಧ್ಯಕ್ಷೆ ಮೈತ್ರಿ ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಆರೋಗ್ಯದ ಬಗ್ಗೆ ಸ್ವಲ್ಪ ಕಾಳಜಿ ವಹಿಸಬೇಕು. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ನೀವು ಪಡೆಯಬಹುದು.

**ವೃಷಭ** ನೀವು ದೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ಹಣವನ್ನು ಯೋಚಿಸದೆ ಮತ್ತು ಪರಿಗಣಿಸದೆ ಖರ್ಚುಮಾಡುವುದು, ನಿಮಗೆ ಎಷ್ಟು ನಷ್ಟ ಮಾಡಬಹುದು ಎಂಬುದು ನಿಮಗೆ ಅರ್ಥವಾಗಬಹುದು.

**ಮಿಥುನ** ಅನಿರೀಕ್ಷಿತ ಪ್ರಣಯ ಪ್ರಸಂಗಗಳು ಎದುರಾಗಬಹುದು. ನಿಮಗೆ ಇತ್ತೀಚಿನ ತಂತ್ರಜ್ಞಾನಗಳನ್ನು ಮತ್ತು ಕೌಶಲಗಳನ್ನು ಕಲಿಯಲು ಸಹಾಯವಾಗುವ ಅಲ್ಪಾವಧಿ ಕಾರ್ಯಕ್ರಮಗಳಿಗೆ ದಾಖಲಾಗಿ.

**ಕರ್ಕಾಟಕ** ನಿಮ್ಮ ಪ್ರಿಯತಮೆಯ ಕಠಿಣ ಪದಗಳಿಂದ ನಿಮ್ಮ ಮನಸ್ಥಿತಿ ಹಾಳಾಗಬಹುದು. ನಿಮ್ಮ ವಿಶ್ವಾಸ ಬೆಳೆಯುತ್ತಿದೆ ಮತ್ತು ಪ್ರಗತಿ ಸ್ಪಷ್ಟವಾಗುತ್ತಿದೆ. ಉಚಿತ ಸಮಯದಲ್ಲಿ ಯಾವುದೇ ಪುಸ್ತಕವನ್ನು ಓದಬಹುದು.

**ಸಿಂಹ** ಎಲ್ಲರನ್ನೂ ನಿಮ್ಮ ದೊಡ್ಡ ಪಾರ್ಟಿಗೆ ಕರೆಯಿರಿ. ನೀವು ಇಂದು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ.

**ಕನ್ಯಾ** ನಿಮ್ಮ ಅಧಿಕ ಚೈತನ್ಯವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಹೆಚ್ಚು ಖರೀದಿಸಲು ಧಾವಿಸುವ ಮೊದಲು ಈಗಾಗಲೇ ಹೊಂದಿರುವುದನ್ನು ಬಳಸಿ. ಒಬ್ಬ ಹಿರಿಯ ವ್ಯಕ್ತಿಯ ಆರೋಗ್ಯ ಕೊಂಚ ಆತಂಕಕ್ಕೆ ಕಾರಣವಾಗುತ್ತದೆ.

**ತುಲಾ** ನೀವು ಹೆಚ್ಚೇನೂ ಮಾಡದೇ ಇತರರ ಗಮನ ಸೆಳೆಯಲು ಇದೊಂದು ಪರಿಪೂರ್ಣ ದಿನ. ಇಂದು ಪ್ರೇಮನಿವೇದನೆ ತಿರುಗೇಟು ನೀಡಬಹುದಾದ್ದರಿಂದ ನಿಮ್ಮ ಸೋಲುಗಳಿಂದ ನೀವು ಪಾಠ ಕಲಿಯಬೇಕು.

**ವೃಶ್ಚಿಕ** ಒತ್ತಡದ ಕೆಲಸದ ವೇಳಾಪಟ್ಟಿ ನಿಮ್ಮ ಸಹನೆಯನ್ನು ಕೆಣಕಬಹುದು. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ .

**ಧನಸ್ಸು** ಇಂದು ಎದುರಾಳಿಯನ್ನು ಹೊಂದಿರುತ್ತೀರಿ ಅವರು ನಿಮ್ಮನ್ನು ತಪ್ಪಾಗಿ ಸಾಬೀತುಪಡಿಸುವುದನ್ನು ಪ್ರೀತಿಸುತ್ತಾರೆ. ಈ ರಾಶಿಚಕ್ರದ ವಿದ್ಯಾರ್ಥಿಗಳು ಅಮೂಲ್ಯ ಸಮಯವನ್ನು ದುರುಪಯೋಗಪಡಿಸಿಕೊಳ್ಳಬಹುದು.

**ಮಕರ** ಎಲ್ಲರನ್ನೂ ನಿಮ್ಮ ದೊಡ್ಡ ಪಾರ್ಟಿಗೆ ಕರೆಯಿರಿ. ನೀವು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ.

**ಕುಂಭ** ಒಂದು ಅಚ್ಚರಿಯ ಸಂದೇಶ ನಿಮಗೆ ಸಿಹಿ ನೀಡುತ್ತದೆ. ನಿಮ್ಮ ಆದ್ಯತೆಗಳ ಮೇಲೆ ಗಮನವಿಡಿ. ಹತ್ತಿರದ ಸಹಯೋಗಿಗಳ ಜೊತೆ ಹಲವಾರು ಭಿನ್ನಾಭಿಪ್ರಾಯಗಳು ಉದ್ಭವಿಸಬಹುದಾದ ಒತ್ತಡ ತುಂಬಿದ ದಿನ.

**ಮೀನ** ದೂರು ನೀಡಲು ಯಾವುದೇ ಅವಕಾಶ ನೀಡಬೇಡಿ. ನೀವು ನಿಮ್ಮ ಅತ್ಯುತ್ತಮ ನಡವಳಿಕೆಯನ್ನು ಹೊಂದಿರಬೇಕು. ಏಕೆಂದರೆ ನಿಮ್ಮ ಪ್ರೇಮಿ ಅತ್ಯಂತ ಅನಿರೀಕ್ಷಿತ ಮನಸ್ಥಿತಿಯನ್ನು ಹೊಂದಿರುತ್ತಾರೆ.

## ಕಾನೂನು ಬಾಹಿರ ಚಟುವಟಿಕೆ ಕಂಡಲ್ಲಿ ತಕ್ಷಣವೇ ಮಾಹಿತಿ ನೀಡಿ :ಎಸ್ಪಿಪೃಥ್ವಿಕ್ ಶಂಕರ

• ಉದಯವಾಹಿನಿ ಹುಣಸಗಿ

ಕಾನೂನು ಬಾಹಿರವಾಗಿ ನಡೆಯುವ ಯಾವುದೇ ಚಟುವಟಿಕೆ ಬಗ್ಗೆ ಮಾಹಿತಿ ನೀಡಿದಲ್ಲಿ ತಕ್ಷಣವೇ ಕ್ರಮ ಕೈಗೊಳ್ಳಲಾಗುವುದು ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ ಹೇಳಿದರು.

ಪಟ್ಟಣದ ಪೊಲೀಸ್ ಠಾಣಾ ಆವರಣದಲ್ಲಿ ಹಮ್ಮಿಕೊಂಡ ಜನಸಂಪರ್ಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈಗಾಗಲೇ ಆನ್‌ಲೈನ್ ಬೆಟ್ಟಿಂಗ್ ದಂಧೆ ಮೇಲೆ ದಾಳಿ ಮಾಡಲಾದ ಪ್ರಕಾರ ಸುರಪುರ 8 ಪ್ರಕರಣ, ಹುಣಸಗಿಯಲ್ಲಿ 2 ಪ್ರಕರಣ ದಾಖಲಾಗಿದೆ. ಇದೊಂದು ಮೋಸದ ಜಾಲವಿದ್ದು ಕಷ್ಟಪಟ್ಟು ದುಡಿದ ಹಣವನ್ನು ಕಳೆಕೊಂಡು ಸಂಸಾರಗಳು ಹಾಳಾಗುತ್ತವೆ. ಆದಷ್ಟು ನಿಯಂತ್ರಣಕ್ಕೆ ತರಲು ತಂಡವನ್ನು ರಚಿಸಲಾಗಿದೆ ಎಂದು ತಿಳಿಸಿದರು. ಪ್ರತಿ ತಿಂಗಳ ನಾಲ್ಕನೇ ವಾರ ದಲಿತರ ದಿನ ಹಾಗೂ ಉಳಿದಂತೆ ಯುವಕರ ದಿನ ಕುರಿತು ಸಭೆ ಕೈಗೊಂಡು ಕುಂದುಕೊರತೆಗಳ ಬಗ್ಗೆ ವಿಚಾರಿಸಿ, ಕಾನೂನಿನ ತಿಳುವಳಿಕೆ ಕೊಡಲಾಗುತ್ತಿದೆ ಎಂದರು.


ಉದಯವಾಹಿನಿ ಚಿತ್ರ

ನಂತರ ದಲಿತ ಮುಖಂಡ ಶರಣಪ್ಪ ಗುಳಬಾಳ, ವಿರೇಶ ಗುಳಬಾಳ ಮಾತನಾಡಿ, ವ್ಯಾಪ್ತಿಯಲ್ಲಿ ಆನ್‌ಲೈನ್ ಬೆಟ್ಟಿಂಗ್ ಅಲ್ಲದೆಯೂ ಇಸ್ಪೀಟ್ ಜೂಜಾಟ್ ಅತೀ ಹೆಚ್ಚು ನಡೆಯುತ್ತಿವೆ. ಈ ಬಗ್ಗೆ ಕೂಡಲೇ ನಿಯಂತ್ರಿಸಬೇಕು ಎಂದು ಮನವಿ ಮಾಡಿದರು.

ಆನ್‌ಲೈನ್ ಬೆಟ್ಟಿಂಗ್ ದಂಧೆ

ಜಿಲ್ಲಾ ಬೇಡಜಂಗಮ ಸಮಾಜದ ಅಧ್ಯಕ್ಷ ನಾಗಯ್ಯಸ್ವಾಮಿ ದೇಸಾಯಿಗುರು, ಕರವೇ ತಾಲ್ಲೂಕು ಗೌರವ ಅಧ್ಯಕ್ಷ ಶಿವರಾಜ್ ಹೊಕ್ರಾಣಿ, ವಾಲ್ಮೀಕಿ ಸಮಾಜದ ತಾಲ್ಲೂಕು ಅಧ್ಯಕ್ಷ ಬಸನಗೌಡ ಪಾಟೀಲ್ ವಿವಿಧ ವಿಷಯದ ಕುರಿತು ಎಸ್ಪಿ ಅವರ ಗಮನಕ್ಕೆ ತಂದರು.

ಈ ಸಂದರ್ಭದಲ್ಲಿ ಡಿವೈಎಸ್‌ಪಿ ಜಾವೀದ್ ಇನಾಮದಾರ, ಸಿಪಿಐ ರವಿಕುಮಾರ.ಎಸ್.ಎನ್, ಪಿಎಸ್‌ಐ ಚಂದ್ರಶೇಖರ ನಾರಾಯಣಪುರ, ಅಪರಾಧ ವಿಭಾಗದ ಪಿಎಸ್‌ಐ ಭಾಗಣ್ಣ.ಕೆ ಹಾಗೂ ಸಾರ್ವಜನಿಕರಾದ ಹಮೀದ್ ಸಾಬ್ ಡೆಕ್ಕನ್, ಶಿವಲಿಂಗ ಪಟ್ಟಣಶೆಟ್ಟಿ, ಸಿದ್ದನಗೌಡ ಹೆಬ್ಬಾಳ, ರಾಜು ದೇಸಾಯಿ, ದೇವಿಂದ್ರಪ್ಪ ಬಳಿಚಕ್ರ, ಬಸವರಾಜ ಚನ್ನೂರ, ನಿಂಗಣ್ಣಗೌಡ.ಡಿ.ಸಿ, ರಾಮಣ್ಣ ಕಲ್ಲದೇವನಹಳ್ಳಿ, ನಂದಪ್ಪ ಪೀರಾಪುರ, ಬಸವರಾಜ ಹಳ್ಳಿ, ಸಂಗಮೇಶ ಹೊಸಮನಿ, ಭೀಮಣ್ಣ ಬಲಶೆಟ್ಟಿಹಾಳ, ಜುಮಣ್ಣ ಗುಡಿಮನಿ ಸೇರಿದಂತೆ ಇತರರು ಇದ್ದರು.

### ದ್ವೇಷ ಹರಡುವಿಕೆ ಭಾಷಣ ಯತ್ನಾಳ ಬಂಧಿಸಿ, ವಕ್ಫ್ ಬೋರ್ಡ್ ಕಾಯ್ದೆ ತಡೆಗಟ್ಟಿ ನ್ಯಾಯ ದೊರಕಿಸಿಕೊಡಿ: ಅಬ್ದುಲ್ ಬಾಷೀದ್

## ಯತ್ನಾಳ ಹೇಳಿಕೆಗಳ ಮೂಲಕ ಕೋಮು ಸೌಹಾರ್ದತೆಗೆ ಭಂಗ ತರಲು ಯತ್ನ

• ಉದಯವಾಹಿನಿ, ಚಿಂಚೋಳಿ

ಹುಬ್ಬಳ್ಳಿಯಲ್ಲಿ ನಡೆದ ರಾಮನವಮಿ ಕಾರ್ಯಕ್ರಮದಲ್ಲಿ ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಪ್ರವಾದಿ ಮಹ್ಮದ್ ಫೈಗಂಬರ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದು ಇಡೀ ಮುಸ್ಲಿಂ ಸಮುದಾಯಕ್ಕೆ ನೋವುಂಟಾಗಿದೆ.

ಯತ್ನಾಳ ಹೇಳಿಕೆಗಳ ಮೂಲಕ ಕೋಮು ಸೌಹಾರ್ದತೆಗೆ ಭಂಗ ತರಲು ಯತ್ನಿಸಿದ್ದಾರೆ ಅವರಿಗೆ ತಕ್ಷಣವೇ ರಾಜ್ಯ ಸರ್ಕಾರ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಮತ್ತು ಕೇಂದ್ರ ಸರ್ಕಾರ ವಕ್ಫ್ ಬೋರ್ಡ್ ಕಾಯ್ದೆ ಜಾರಿಗೊಳಿಸಿದ್ದು ಅದನ್ನು ತಡೆಗಟ್ಟಬೇಕು ಎಂದು ಪುರಸಭೆ ಮಾಜಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಅಬ್ದುಲ್ ಬಾಷೀದ್ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದಲ್ಲಿ ಮುಸ್ಲಿಂ ಸಮುದಾಯ ಹಾಗೂ ವಿವಿಧ ಸಂಘಟನೆಗಳಿಂದ ಮಹ್ಮದ್ ಫೈಗಂಬರ್ ವಿರುದ್ಧ ಯತ್ನಾಳ ಅವಹೇಳನಕಾರಿ ಹೇಳಿಕೆಯು ಖಂಡಿಸಿ ಮತ್ತು ಕೇಂದ್ರ ಸರ್ಕಾರ ವಕ್ಫ್ ಬೋರ್ಡ್ ಕಾಯ್ದೆ ತಿದ್ದುಪಡಿ ಮಾಡಿ ಜಾರಿ ಮಾಡಿರುವುದು ಖಂಡಿಸಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ರಾಷ್ಟ್ರಪತಿಗಳಿಗೆ ಹಾಗೂ ಮುಖ್ಯಮಂತ್ರಿಗಳಿಗೆ ಮನವಿಪತ್ರ ಸಲ್ಲಿಸಿ ಮಾತನಾಡಿದರು. ಒಮ್ಮೆ ಮಹ್ಮದ್ ಫೈಗಂಬರ್ ವಿರುದ್ಧ ಮತ್ತೊಮ್ಮೆ ವಿಶ್ವಗುರು ಬಸವೇಶ್ವರ ವಿರುದ್ಧ ಹೀಗೆ ಹತ್ತಾರು ಬಾರಿ ಬಿಜಾಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳರು ಅವಹೇಳನಕಾರಿ ಹೇಳಿಕೆ ನೀಡುತ್ತಿರುವುದರಿಂದ ಎಲ್ಲಾ ಸಮುದಾಯಗಳ ಶಾಂತಿಯುತ ಜೀವನಕ್ಕೆ ವಿರುದ್ಧವಾಗಿದೆ ಕೋಮು ಗಲಭೆಗೆ ಪ್ರಚೋದನೆ ನೀಡುತ್ತಿದ್ದಾರೆ, ಈ ರೀತಿಯ ವ್ಯಕ್ತಿಯನ್ನು ಬಂಧಿಸಿ ಶಿಕ್ಷೆಗೆ ಒಳಪ ಡಿಸದಿದ್ದರೆ ಅದು ಖಂಡಿತವಾಗಿಯೂ ದೇಶದ ಸಾಮರಸ್ಯವನ್ನು ಹಾಳು ಮಾಡುತ್ತಾರೆ.



ಉದಯವಾಹಿನಿ ಚಿತ್ರ

**ವಕ್ಫ್ ತಿದ್ದುಪಡಿ ಮಸೂದೆಯನ್ನು ಹಿಂಪಡೆಯಬೇಕು,ಕೇಂದ್ರ ಸರ್ಕಾರ ಮುಸ್ಲಿಮರ ವಿರುದ್ಧ ಪಕ್ಷಪಾತ ಅಸಂವಿಧಾನಿಕ ಮತ್ತು ತಾರತಮ್ಯವನ್ನು ಮಾಡಬಾರದು,ಮುಸ್ಲಿಮರು ಇಚ್ಚೆ ಆಶಯಕ್ಕೆ ವಿರುದ್ಧವಾಗಿ ವಕ್ಫ್ ಆಸ್ತಿಗಳನ್ನು ಕಸಿದುಕೊಳ್ಳುವ ದುರುದ್ದೇಶದಿಂದ ಸಂಸತ್ತಿನಲ್ಲಿ ಅಂಗಿಕರಿಸಿದ 14,15,25,26 ಮತ್ತು 29ನೇ ವಿಧಿಯಲ್ಲಿ ಮೂಲಭೂತ ಹಕ್ಕುಗಳ ಖಾತರಿಗೆ ಈ ಮಸೂದೆ ವಿರುದ್ಧವಾಗಿದೆ. ಈ ಮಸೂದೆ ಮಧ್ಯಸ್ಥಗಾರರಿಗೆ ಕೇಳಿಸದಂತೆ ಅಂಗಿಕರಿಸ್ಪಟ್ಟಿದೆ ಮತ್ತು ನ್ಯಾಯ ಮತ್ತು ಕಾನೂನಿನ ತತ್ವಕ್ಕೆ ವಿರುದ್ಧವಾಗಿ ಅಂಗೀಕರಿಸಲಾಗಿದ್ದು ತಕ್ಷಣವೇ ರಾಷ್ಟ್ರಪತಿಗಳು ನೂತನ ವಕ್ಫ್ ಬೋರ್ಡ್ ಕೇಂದ್ರ ಸರ್ಕಾರ ಜಾರಿಗೊಳಿಸಿದ್ದು ಕಾಯ್ದೆ ರದ್ದುಪಡಿಸಬೇಕು**
**-ಬಡಿದರ್ಗಾ ಸಜ್ಜಾದೆ ನಶೀನ್ ಸೈಯದ್ ಅಕ್ಬರ್ ಹುಸ್ಸೈನಿ**

ಕಾನೂನು ಕ್ರಮಕ್ಕೆ ಆಗ್ರಹ

ಆದ್ದರಿಂದ ಸಾರ್ವಜನಿಕ ಸೌಹಾರ್ದತೆಯ ಹಿತದೃಷ್ಟಿಯಿಂದ ಮೇಲ್ಕಂಡ ದುಷ್ಕರ್ಮಿಗಳ ವಿರುದ್ಧ ಕಾನೂನು ಕ್ರಮಕೈಗೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಸೈಯದ್ ಫಾಸಿಯುಲ್ಲಾ ಹುಸ್ಸೈನಿ ಸಾಹೇಬ್, ಇಬ್ರಾಹಿಂ ಸಾಬ್,ಪುರಸಭೆ ಸದಸ್ಯ ಅನ್ವರ್ ಖತೀಬ್, ಎಂಡಿ ಮುಸ್ತಫಾ,ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್, ಗಣಪತರಾವ, ಎಸ್ಕೆ ಮೋಖ್ತಾರ್, ಮಹ್ಮದ್ ಹಾಧಿಸಾಬ, ಶಬ್ಬೀರ ಅಹೇಮದ್, ಸಿರಾಜ್ ಪಟೇಲ್,ಖಲೀಲ್ ಪಟೇಲ, ಅಬ್ದುಲ್ ಮಾಜೀದ್,ಮಹ್ಮದ್ ಸಾಗೀರ್, ಹಾಫೀಜ್ ಅಬ್ದುಲ್ ಹಮೀದ್, ಅಹೇಮದ್ ಬಾಗಬಾನ್,ಮತೀನ್ ಸೌದಾಗಾರ,ಶೇಕ್ ಫರೀದ್,ರಹೇಮಾನ್,ಸಲಿಂ ಸೌದಾಗಾರ,ಅಲಾವೋದ್ದೀನ್ ಅನ್ಸಾರಿ,ಮಖ್ದೂಮ ಖಾನ್,ಅಸ್ಲಾಂ ಸೌದಾಗಾರ,ಹಸೇನ್ ಹಾಶ್ಮಿ,ಎಂಡಿ ಅಜರ್ ಅಲಿ,ಇರ್ಫಾನ್,ಮೋಯಿನ್ ಮೋಮಿನ್,ಚಾಂದಪಾಷ,ಮುಜ್ಜಾಮೀಲ್ ,ಅಹೇಮದ್ ಪಟೆಲ,ರಾಜ್ ಮಹ್ಮದ್,ಎಂಡಿ ಖಾಲಿದ್ ಹುಸ್ಸೈನ್,ಮೈನೋದ್ದೀನ್,ನಜೀರ್ ಅಹೇಮದ್,ಎಂಡಿ ಶಾರೂಖ್,ಎಂಡಿ ಅಮಜದ್ ,ತೈಯಾಬ್,ಎಂಡಿ ಖಾಸಿಂ,ಸೇರಿದಂತೆ ನೂರಾರು ಜನರು ಗಡಿ ಏರಿಯಾ ಮಸೀದಿಯಿಂದ ಬಸ್ ಘಟದ ವೃತ್ತದವರೆಗೆ ಪಾದಯಾತ್ರೆ ಬೃಹತ್ ಪ್ರತಿಭಟನೆ ನಡೆಸಿದರು.

## ಯತ್ನಾಳರವರಿಗೆ ಇಂಡಿ ವಕೀಲರ ಸಂಘದ ಬೆಂಬಲ

• ಉದಯವಾಹಿನಿ, ಇಂಡಿ

ಕಾಂಗ್ರೇಸ್ ಮುಖಂಡ ಮುಶ್ರೀಫ್‌ರವರು ಬಸನಗೌಡರ ಕುರಿತು ಬ್ಲಾಕ ಮೇಲ್ ತಂತ್ರ ಮಾಡುತ್ತಿರುವದು ಸರಿಯಲ್ಲ, ಇಂಡಿ ವಕೀಲರ ಸಂಘ ಸಂಪೂರ್ಣವಾಗಿ ಬಸನಗೌಡರ ಪರವಾಗಿ ನಿಲ್ಲುತ್ತದೆ ಎಂದು ಇಂಡಿ ವಕೀಲರ ಸಂಘದ ಅಧ್ಯಕ್ಷ ಎಸ್.ಬಿ. ಬೂದಿಹಾಳ ಹೇಳಿದರು.

ಪಟ್ಟಣದ ವಕೀಲರ ಸಂಘದ ಸಭಾಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಯತ್ನಾಳ ಅವರ ಅಧ್ಯಕ್ಷತೆಯಲ್ಲಿ ಅವರ ಸಿದ್ದೇಶ್ವರ ಸಂಸ್ಥೆಯ ಗೋ ರಕ್ಷಾ ಕೇಂದ್ರ ಮೇಲೆ ಮುಶ್ರೀಫ್ ಮಾಡಿರುವ ಆರೋಪ ಶುದ್ಧ ಸುಳ್ಳು , ಏನಾದರೂ ದಾಖಲೆ ಇದ್ದರೆ ವಾರದೊಳಗೆ ನೀಡಬೇಕು. ಇಲ್ಲವಾದರೆ ಅವರ ಮೇಲೆ ಮಾನ ನಷ್ಟ ಮೊಕದ್ದಮೆ ಮತ್ತು ಕ್ರಿಮಿನಲ್ ಕೇಸ್ ದಾಖಲಿಸುತ್ತೇವೆ ಎಂದರು.

ಹಿಂದುತ್ವ ವಿಚಾರ ಬಿಜೆಪಿಗೆ ವೋಟ್ ಬ್ಯಾಂಕ್ ಗಟ್ಟಿಗೊಳಿಸುವಲ್ಲಿ ಯತ್ನಾಳರ ಪಾತ್ರ ಪ್ರಮುಖವಾಗಿದೆ. ಅವರೆಂದೂ ಪಕ್ಷದ ಸಿದ್ಧಾಂತ ತತ್ವದ ವಿರುದ್ಧ ನಡೆದುಕೊಂಡಿಲ್ಲ. ಕುಟುಂಬ ರಾಜಕಾರಣ, ಭ್ರಷ್ಟಾಚಾರ ಇರಬಾರದೆಂದು ಧ್ವನಿ ಎತ್ತಿದರಲ್ಲಿ ತಪ್ಪೇನು ಇಲ್ಲ, ಎಂದರು.


ಉದಯವಾಹಿನಿ ಚಿತ್ರ

ಯತ್ನಾಳರ ಜೊತೆ ನಾವು ಇರುತ್ತೇವೆ. ಹೋರಾಟದ ಮೂಲಕ ಯತ್ನಾಳರ ಶಕ್ತಿ ಏನೆಂದು ತೋರಿಸುತ್ತೇವೆ ಎಂದರು. 20 ಸಭೆಗೆ ಬೆಂಬಲ - ಏ. 20ರಂದು ಕೂಡಲ ಸಂಗಮದಲ್ಲಿ ನಡೆಯುವ ಪಂಚಮ ಸಾಲಿ ಸಮಾಜದ ಸಭೆಯಲ್ಲಿ ಇಂಡಿ ತಾಲ್ಲೂಕಾ ಪಂಚಮಸಾಲಿ ವಕೀಲರ ಸಂಘ ತಮ್ಮ ಸಂಪೂರ್ಣ ಬೆಂಬಲ ಸೂಚಿಸಿದೆ. ಮತ್ತು ಕೂಡಲ ಸಂಗಮ ಪೀಠಾಧಿಪತಿಗಳು ಜಗದ್ಗುರು ಜಯ ಮೃತ್ಯುಂಜಯ ಶ್ರೀಗಳು ತೆಗೆದುಕೊಳ್ಳುವ ಯಾವದೇ ನಿರ್ಣಯಕ್ಕೆ ಬೆಂಬಲ ಸೂಚಿಸುತ್ತೇವೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸಂಘದ ಕಾರ್ಯದರ್ಶಿ ಎನ್.ಕೆ.ನಾಡಪುರೋಹಿತ, ಯಲ್ಲಾಲಿಂಗ ಪೂಜಾರಿ, ಎಂ.ಸಿ.ಬಿರಾದಾರ, ಬಿ.ಬಿ.ಬಿರಾದಾರ, ಡಿ.ಜಿ.ಜೋತಗೊಂಡ, ಅಜೀತ ಧನಶೆಟ್ಟಿ, ವಾಘಮೋರೆ ಮತ್ತಿತರಿದ್ದರು.

## ವಿಶ್ವದಲ್ಲಿಯೇ ಶ್ರೇಷ್ಠವಾದ ಸಂವಿಧಾನ ಭಾರತಕ್ಕೆ ನೀಡಿದ ಡಾ. ಅಂಬೇಡ್ಕರ್: ಲಕ್ಷ್ಮಣ ಸವದಿ

• ಉದಯವಾಹಿನಿ, ಅಥಣಿ

ಸಂವಿಧಾನ ಶಿಲ್ಪಿ ಡಾ. ಬಿಆರ್ ಅಂಬೇಡ್ಕರ್ ಅವರು ಕೇವಲ ದಲಿತ ಸಮುದಾಯದ ಉದ್ಧಾರಕ್ಕೆ ಮಾತ್ರ ಹೋರಾಡದೇ ಅಂದಿನ ಸಾಮಾಜಿಕ ವ್ಯವಸ್ಥೆಯಲ್ಲಿ ಶೋಷಿತ ವರ್ಗಗಳ ಪರವಾಗಿ ನಿಂತು ಹೋರಾಡಿದವರು.

ಅಂತಹ ಮಹಾನಾಯಕರನ್ನು ಕೇವಲ ಒಂದು ಸಮುದಾಯಕ್ಕೆ ಸೀಮಿತಗೊಳಿಸದೆ ಎಲ್ಲಾ ಸಮುದಾಯದವರು ಒಗ್ಗೂಡಿಕೊಂಡು ಅವರ ಜಯಂತಿ ಆಚರಿಸುವಂತಾಗಬೇಕು ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ಅಥಣಿ ಪಟ್ಟಣದ ತೋಟಗಾರಿಕೆ ಇಲಾಖೆ ಆವರಣದಲ್ಲಿ ತಾಲ್ಲೂಕ ಆಡಳಿತ, ತಾಲ್ಲೂಕಾ ಪಂಚಾಯತ್, ಪುರಸಭೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಆಶ್ರಯದಲ್ಲಿ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ್ ಅವರ 134 ನೇ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. 12ನೇ ಶತಮಾನದಲ್ಲಿ ವಿಶ್ವಗುರು ಬಸವಣ್ಣನವರು ಜಾತಿ ವ್ಯವಸ್ಥೆಯನ್ನ ತೊಡೆದು ಹಾಕಲು ಅಲ್ಲಮಪ್ರಭುಗಳ ನೇತೃತ್ವದಲ್ಲಿ ಅನುಭವ ಮಂಟಪವನ್ನು ಸ್ಥಾಪಿಸಿ ಸಮಾನತೆಯ ಸಮಾಕ್ಕಾಗಿ ಶ್ರಮಿಸಿದವರು. ಬಸವಣ್ಣನವರು ಮಾಡಿದ ಸಮಾಜ ಸುಧಾರಣೆಯ ಆ ಕಾರ್ಯಕ್ಕೆ ಅಂದಿನ ಕಾಲ ಘಟ್ಟದಲ್ಲಿಯೂ ಕೂಡ ಪರ ವಿರೋಧಿಗಳು ವ್ಯಕ್ತವಾಗಿ ಬಸವಣ್ಣನವರಿಗೂ ಅನೇಕ ಅವಮಾನ, ಸಂಕಷ್ಟಗಳನ್ನ ಎದುರಿಸುವಂತಿತ್ತು.


ಉದಯವಾಹಿನಿ ಚಿತ್ರ

ಬಸವಣ್ಣನವರ ಬದುಕು ಅಂಬೇಡ್ಕರ್ ಅವರ ಬದುಕಿನಲ್ಲಿ ಪ್ರಭಾವ ಬಿರಿತ್ತು. ಅಂಬೇಡ್ಕರ್ ಬಾಲ್ಯಾವಸ್ಥೆಯಲ್ಲಿ ಅನೇಕ ಅವಮಾನಗಳನ್ನು ಅನುಭವಿಸಿ ಅವು ಗಳ ವಿರುದ್ಧ ಹೋರಾಡುವ ಮನೋಭಾವ ಬೆಳೆಸಿಕೊಂಡರು. ಶಿಕ್ಷಣ ಸಂಘಟನೆ ಮತ್ತು ಹೋರಾಟದ ಮೂಲಕ ದೇಶದಲ್ಲಿನ ಜಾತಿ ವ್ಯವಸ್ಥೆಯ ವಿರುದ್ಧ ಹೋರಾಡಿ ಶೋಷಿತರ ವರ್ಗಗಳಿಗೆ ನ್ಯಾಯ ಒದಗಿಸುವಲ್ಲಿ ಶ್ರಮಿಸಿದ ಮಹಾನ್ ನಾಯಕರು.

**ಇತಿಹಾಸವನ್ನು ಅರಿತವರು ಮಾತ್ರ ಇತಿಹಾಸವನ್ನು ನಿರ್ಮಿಸಬಲ್ಲರು ಎಂಬ ಅಂಬೇಡ್ಕರ್ ಅವರ ಮಾತಿನಂತೆ ಬುದ್ಧ ಬಸವ ಅಂಬೇಡ್ಕರ್ ಅವರಂತ ಅನೇಕ ಮಹಾತ್ಮರ ಚರಿತ್ರೆಗಳನ್ನ ನಾವು ಓದಿ ಇತಿಹಾಸವನ್ನು ಅರಿತುಕೊಳ್ಳಬೇಕು. ಅವರ ತತ್ವ ಆದರ್ಶಗಳನ್ನು, ವಿಚಾರಧಾರೆಗಳನ್ನು ಕೇವಲ ಭಾಷಣದಲ್ಲಿ ಹೇಳಿದರೆ ಸಾಲದು, ನಮ್ಮ ಬದುಕಿನಲ್ಲಿ ನುಡಿದಂತೆ ನಡೆದು ತೋರಿಸಿದಾಗ ಮಹಾತ್ಮರ ಜನ್ಮದಿನಾಚರಣೆಗೆ ಒಂದು ಅರ್ಥ ಬರುತ್ತದೆ -ಲಕ್ಷ್ಮಣ ಸವದಿ**

## ಅಂಬೇಡ್ಕರ್ ಚಿಂತನೆಗಳು ಮಾನವಿತೆಯ ಮೌಲ್ಯಗಳಿಂದ ಕೂಡಿವೆ : ಶರಣಪ್ಪ

• ಉದಯವಾಹಿನಿ, ವಡಗೇರಾ

ಡಾ. ಬಿ.ಆರ್ ಅಂಬೇಡ್ಕರರ ವಿಚಾರ ಚಿಂತನೆಗಳು ಮಾನವಿತೆಯ ಮೌಲ್ಯಗಳಿಂದ ಕೂಡಿವೆ ಎಂದು ಊಳ್ಳೆಸೂಗುರ ಗ್ರಾಮ ಪಂಚಾಯಿತಿ ಅಧ್ಯಕ್ಷ ಶರಣಪ್ಪ ಪೂಜಾರಿ ಹೇಳಿದರು. ತಾಲ್ಲೂಕಿನ ಊಳ್ಳೆಸೂಗೂರು ಗ್ರಾಮ ಪಂಚಾಯಿತಿಯಲ್ಲಿ ಹಮ್ಮಿಕೊಂಡಿದ್ದ ಡಾ. ಬಿ ಆರ್ ಅಂಬೇಡ್ಕರರ ಜಯಂತೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಶೋಷಿತರ ಏಳಿಗೆಯನ್ನೆ ತಮ್ಮ ಜೀವನದ ಗುರಿಯಾಗಿಸಿಕೊಂಡು ಪವಿತ್ರ ಸಂವಿಧಾನವನ್ನು ರಚಿಸಿ ಸರ್ವರಿಗೂ ಸಮಪಾಲು ಸಮ ಬಾಳು ನೀಡಿದ ಕೀರ್ತಿ ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ ಅವರ ತತ್ವ ಆದರ್ಶಗಳನ್ನು ನಾವೆಲ್ಲರೂ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಪಿಡಿಓ ಬಿ.ಎಸ್ ಪಾಟೀಲ್ ಪಾಟೀಲ್ ಮಾತನಾಡಿ ರಾಷ್ಟ್ರದ ಪ್ರತಿಯೊಬ್ಬರಿಗೂ ಸಂವಿಧಾನದ ಅಡಿಯಲ್ಲಿನ ಪ್ರಧಾನ ಕರ್ತವ್ಯಗಳನ್ನು ಕಲ್ಪಿಸಿಕೊಟ್ಟ ಮಹಾನ್ ಚೇತನ ಭಾರತವು ಬಹುದೊಡ್ಡ ರಾಷ್ಟ್ರವಾಗಿದ್ದು ವಿವಿಧತೆಯಲ್ಲಿ ಏಕತೆಯ ಮಾರ್ಗವನ್ನು ಹಾಕಿ ಕೊಟ್ಟಿದ್ದಾರೆ ಅವರ ತತ್ವ ಆದರ್ಶಗಳು ಸರ್ವಕಾಲಿಕ ಶ್ರೇಷ್ಠ ಅವರ ಆಶಯದಂತೆ ಪ್ರತಿಯೊಬ್ಬರೂ ಕೂಡ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಶಿಕ್ಷಣದಿಂದಲೇ ಪ್ರಗತಿ ಸಾಧ್ಯ ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಚಾಂದ್ ಸಾಹುಕಾರ, ರವಿ ಪಾಟೀಲ್, ಬಸವರಾಜ್ ಕಾವಲಿ, ಹಣಮಂತರಾಯ ಗೌಡ ಮಾಲಿ ಪಾಟೀಲ್, ಚೆನ್ನಪ್ಪ, ದೇವಪ್ಪ, ಬಸಯ್ಯಸ್ವಾಮಿ, ಜಮೀರ್ ಮಾನೆಗಾರ, ಹಾಗೂ ಗ್ರಾಮ ಪಂಚಾಯಿತಿ ಸದಸ್ಯರು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಹಳ್ಳಿಗಳಿಗೆ ಟ್ಯಾಂಕರ್ ನೀರೆ ಗತಿ

• ಉದಯವಾಹಿನಿ, ಭಟ್ಕಳ

ಬಿಸಿಲ ಝಳ ಹೆಚ್ಚುತ್ತಿರುವಂತೆಯೆ ಪಟ್ಟಣವೂ ಸೇರಿದಂತೆ ತಾಲ್ಲೂಕಿನ ಗ್ರಾಮೀಣ ಭಾಗದ ವಿವಿಧೆಡೆಗಳಲ್ಲಿ ನೀರಿಗೆ ಹಾಹಾಕಾರ ಉಂಟಾಗಿದೆ. ಏ. ಮೊದಲ ವಾರದಲ್ಲೇ ಜಲಮೂಲಗಳು ಬತ್ತಿರುವುದು ಜನರನ್ನು ಚಿಂತೆಗೆ ತಳ್ಳಿದೆ.

ಬತ್ತಿದ ಕೊಳವೆ ಬಾವಿ

ಹೆಬಳೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಆರಂಭಿಸಲಾಗಿದ್ದು, ಉಳಿದ ಕಡೆಯೂ ಆದ್ಯತೆಯ ಮೇಲೆ ಗ್ರಾಮ ಪಂಚಾಯಿತಿ ವತಿಯಿಂದ ನೀರು ಸರಬರಾಜು ಮಾಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಬೆಳಕೆಯ ಮೊಗೇರಕೇರಿ, ಸರ್ಪನಕಟ್ಟೆಯ ಹಡೀನ್ ಗ್ರಾಮ, ಮುಂಡಳ್ಳಿಯ ಮೊಗೇರಕೇರಿ, ಹೆಬಳೆಯೆ ಹಾರ, ಹೊನ್ನಿಗದ್ದೆ, ಗಾಂಧಿನಗರ, ಶಿರಾಲಿಯ ಅಳ್ವೆಕೋಡಿ, ಮಾವಿನಕುರ್ವೆಯ ಬೆಳ್ಳಿ ಗ್ರಾಮ, ಬೆಂಗ್ರೆಯ ಸಣಬಾವಿ, ಮುಟ್ಟಳ್ಳಿಯ ಬಿಳಲಖಂಡ, ಮುರುಡೇಶ್ವರದ ಜನತಾ ಕಾಲೊನಿ ಹಾಗೂ ಬೈಲೂರು ಗ್ರಾ.ಪಂ ವ್ಯಾಪ್ತಿಯಲ್ಲಿ ಬೇಸಿಗೆಯಲ್ಲಿ ನೀರಿನ ಸಮಸ್ಯೆ ತಲೆದೋರುತ್ತದೆ. ಪುರಸಭೆಯ ಆಶ್ರಯ ಕಾಲೊನಿ, ಮಗ್ದುಂಕಾಲೊನಿ, ಜಾಲಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಜಾಲಿಕೋಡಿಯಲ್ಲಿ ಬೇಸಿಗೆಯಲ್ಲಿ ನೀರಿನ ಸಮಸ್ಯೆ ಕಾಡುತ್ತದೆ.

## ವೀರಭದ್ರಸ್ವಾಮಿ ರಥೋತ್ಸವ

• ಉದಯವಾಹಿನಿ, ಸಕಲೇಶಪುರ

ತಾಲ್ಲೂಕಿನ ಸುಳ್ಳಕ್ಕಿ ಗ್ರಾಮದ ಕುದುರಂಗಿ ವೀರಭದ್ರಸ್ವಾಮಿ ರಥೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆಯಿತು. ಬೆ.11.30ಕ್ಕೆ ದೇವರ ಉತ್ಸವ ಮೂರ್ತಿಗಳನ್ನು ದೇವಸ್ಥಾನ ಆವರಣದಿಂದ ವಾದ್ಯಗೋಷ್ಠಿಯೊಂದಿಗೆ ಪುಷ್ಪಾಲಂಕೃತ ರಥದ ಬಳಿ ತರಲಾಯಿತು. ಅಲ್ಲಿ ದೇವಸ್ಥಾನದ ಅರ್ಚಕರಿಂದ ಮುಹೂರ್ತ ಪೂಜಾ ಕಾರ್ಯಗಳು ನಡೆದವು.

ಕಂಕಣ ಧಾರಣೆ ಮಾಡಿಸಿಕೊಂಡಿದ್ದ ಇಬ್ಬಡಿ ಧರಣೇಶ್, ದೇವರ ಉತ್ಸವ ಮೂರ್ತಿಗಳನ್ನು ಶಾಸ್ತ್ರೋಕ್ತವಾಗಿ ರಥದ ಮೇಲಕ್ಕೆ ಹೊತ್ತು ರಥ ಪೀಠದ ಮೇಲೆ ಇಟ್ಟರು. ದೇವಸ್ಥಾನದ ಎಡದಿಂದ ಬಲಭಾಗಕ್ಕೆ ಭಕ್ತರು ರಥವನ್ನು ಎಳೆದರು. ರಥವನ್ನು ಕಾಮನಹಳ್ಳಿ ಗ್ರಾಮಸ್ಥರು ಬಿಸಿಲೆಯಿಂದ ತಂದಿದ್ದ ಬೆತ್ತದಿಂದ ಎಳೆಯಲಾಯಿತು. ರಥೋತ್ಸವದಲ್ಲಿ ಪಾಲ್ಗೊಂಡಿದ್ದ ಭಕ್ತರಿಗೆ ಊಟದ ವ್ಯವಸ್ಥೆ ಮಾಡಲಾಗಿತ್ತು. ಸುರತ್ಕಲ್ ಜೆ.ಡಿ. ವೀರಪ್ಪ ದೇವಸ್ಥಾನಕ್ಕೆ ಪುಷ್ಪಾಲಂಕಾರ ಮಾಡಿಸಿದ್ದರು.

## ಬ್ಯಾಡಗಿ ಮೆಣಸಿನಕಾಯಿ ಆವಕ ಇಳಿಕೆ: ದರ ಸ್ಥಿರ

• ಉದಯವಾಹಿನಿ, ಬ್ಯಾಡಗಿ

ಇಲ್ಲಿನ ಅಂತರರಾಷ್ಟ್ರೀಯ ಮಾರುಕಟ್ಟೆಗೆ ಮಂಗಳವಾರ 1,21,505 ಚೀಲ (30,376 ಕ್ವಿಂಟಲ್) ಮೆಣಸಿನ ಕಾಯಿ ಮಾರಾಟಕ್ಕೆ ತರಲಾಗಿತ್ತು. ಆವಕದಲ್ಲಿ ಮತ್ತೆ ಇಳಿಕೆ ಕಂಡು ಬಂದಿದೆ. ಆದರೆ, ಬೆಲೆಯಲ್ಲಿ ಸ್ಥಿರತೆ ಕಾಯ್ದುಕೊಂಡಿದೆ. ಹೆಚ್ಚಿನ ರೈತರು ಸೋಮವಾರ ಮತ್ತು ಗುರುವಾರ ಮಾತ್ರ ಮೆಣಸಿನಕಾಯಿ ಮಾರಾಟಕ್ಕೆ ತರುತ್ತಿದ್ದರು.

ಕಳೆದ ಗುರುವಾರ ಸರ್ಕಾರಿ ರಜೆ ಇದ್ದ ಹಿನ್ನೆಲೆಯಲ್ಲಿ ಶುಕ್ರವಾರದ ಮಾರುಕಟ್ಟೆಯಲ್ಲಿ 1,25,529 ಚೀಲ (31,382 ಕ್ವಿಂಟಲ್) ಮೆಣಸಿನಕಾಯಿ ಮಾರಾಟವಾಯಿತು. ಕಳೆದ ವಾರ ಒಟ್ಟು 3,52,416 ಚೀಲ (88,104 ಕ್ವಿಂಟಲ್) ಮೆಣಸಿನಕಾಯಿ ಮಾರಾಟವಾಯಿತು. ಮಂಗಳವಾರದಂದು ಮಾರುಕಟ್ಟೆಗೆ 10,365 ಲಾಟ್ ಮೆಣಸಿನಕಾಯಿ ಚೀಲಗಳನ್ನು ಟೆಂಡರ್‌ಗೆ ಇಡಲಾಗಿತ್ತು. ಈ ಪೈಕಿ ತೇವಾಂಶ ಹೆಚ್ಚಿರುವ ಹಾಗೂ ಗುಣಮಟ್ಟದ ಕೊರತೆ ಇರುವ 429 ಲಾಟ್‌ಗಳಿಗೆ ವರ್ತಕರು ಟೆಂಡರ್ ನಮೂದಿಸಿಲ್ಲ. 28 ಚೀಲ ಡಬ್ಬಿ ಮೆಣಸಿನ ಕಾಯಿ ಕ್ವಿಂಟಲ್‌ಗೆ 25,199, 14 ಚೀಲ ಕಡ್ಡಿ ಮೆಣಸಿನಕಾಯಿ 22,099 ಹಾಗೂ ಗುಂಟೂರು ತಳಿ ಮೆಣಸಿನಕಾಯಿ 12.909ಕ್ಕೆ ಗರಿಷ್ಠ ದರದಲ್ಲಿ ಮಾರಾಟವಾಗಿದೆ.

ಸರಾಸರಿ ಬೆಲೆಯಲ್ಲಿ ಸ್ಥಿರತೆ ಕಾಯ್ದುಕೊಂಡಿದ್ದು, ಬ್ಯಾಡಗಿ ಡಬ್ಬಿ ಮೆಣಸಿನಕಾಯಿ 21,759, ಬ್ಯಾಡಗಿ ಕಡ್ಡಿ ಮೆಣಸಿನಕಾಯಿ 19,609 ಹಾಗೂ ಗುಂಟೂರ ತಳಿ 11,909ಕ್ಕೆ ಮಾರಾಟವಾಯಿತು. ಟೆಂಡರ್ ಪ್ರಕ್ರಿಯೆಯಲ್ಲಿ ಒಟ್ಟು 345 ಖರೀದಿ ವರ್ತಕರು ಪಾಲ್ಗೊಂಡಿದ್ದರು ಎಂದು ಎಪಿಎಂಸಿ ಮೂಲಗಳು ತಿಳಿಸಿವೆ.

### ರುದ್ರಕಾಳಿಯಾದ ಪಿಎಸ್‌ಐ ಅನ್ನಪೂರ್ಣ, ಜನರಿಂದ ಲೇಡಿ ಸಿಂಗಂ ಎಮದು ಬಿರುದು

# ಐದು ವರ್ಷದ ಮಗುವಿನ ಕೊಂದ ಪಾಪಿ ಬೆನ್ನಿಗೆ ಗುಂಡು

• ಉದಯವಾಹಿನಿ ಹುಬ್ಬಳ್ಳಿ

ಐತಿಹಾಸದಲ್ಲಿಯೇ ಹುಬ್ಬಳ್ಳಿ ನಗರದಲ್ಲಿ ಮೊದಲ ಪೊಲೀಸ್ ಎನ್‌ಕೌಂಟ್ ನಡೆದಿದೆ. ಐದು ವರ್ಷದ ಹೆಣ್ಣು ಮಗುವನ್ನು ಅಪಹರಣ ಮಾಡಿ, ಅತ್ಯಾಚಾರಕ್ಕೆ ಯತ್ನಿಸಿ ಕೊಲೆ ಮಾಡಿದ ಆರೋಪಿಯು ಮಹಿಳಾ ಪಿಎಸ್‌ಐ ಗುಂಡೇಟಿಗೆ ಬಲಿಯಾಗಿದ್ದಾನೆ. ಎನ್ ಕೌಂಟರ್ ಮಾಡಿ ಶೀಘ್ರವೇ ನ್ಯಾಯ ಕೊಡಿಸಿದ ಪಿಎಸ್‌ಐ ಅನ್ನಪೂರ್ಣ ಅವರನ್ನು ಜನ ಲೇಡಿ ಸಿಂಗಂ ಎಂದು ಬಿರುದು ನೀಡಿದ್ದಾರೆ.

ಹುಬ್ಬಳ್ಳಿಯ ಅಶೋಕ ನಗರದಲ್ಲಿ ಐದು ವರ್ಷದ ಮಗುವನ್ನು ಅಪಹರಿಸಿ ಅತ್ಯಾಚಾರಕ್ಕೆ ಯತ್ನಿಸಿ ಕೊಲೆ ಮಾಡಿದ ಪ್ರಕರಣ ಇಡೀ ರಾಜ್ಯವನ್ನೇ ಬೆಚ್ಚಿಬೀಳಿಸಿತ್ತು. ಬಾಲಕಿಯನ್ನು ಕೊಲೆ ಮಾಡಿದ್ದ ಆರೋಪಿ ಬಿಹಾರ ಮೂಲದ ರಿತೇಶ್‌ನನ್ನು ಪ್ರಕರಣ ನಡೆದ ದಿನವೇ ಎನ್‌ಕೌಂಟರ್ ಮಾಡಲಾಗಿದೆ.

ಹುಬ್ಬಳ್ಳಿಯ ಅಶೋಕ ನಗರ ಮಹಿಳಾ ಪಿಎಸ್‌ಐ ಅನ್ನಪೂರ್ಣ ಅವರು ಆರೋಪಿಯ ಬೆನ್ನಿಗೆ ಗುಂಡಿಳಿಸಿದ್ದಾರೆ. ಹುಬ್ಬಳ್ಳಿ - ಧಾರವಾಡದ ಮಹಾನಗರದ ಇತಿಹಾಸದಲ್ಲಿ ಇದೇ ಮೊದಲ ಎನ್‌ಕೌಂಟರ್ ಎನ್ನಲಾಗುತ್ತಿದೆ. ಈ ಹಿಂದೆ ಹಲವು ಬಾರಿ ರೌಡಿಗಳ ಕಾಲಿಗೆ ಗುಂಡೇಟು ಬಿದ್ದಿದ್ದರು ಎನ್‌ಕೌಂಟರ್ ಆಗಿದ್ದಿಲ್ಲ. ಆದರೆ, ಪಿಎಸ್‌ಐ ಅನ್ನಪೂರ್ಣ ಆರೋಪಿಯ ಬೆನ್ನಿಗೆ ಗುಂಡಿಕ್ಕುವ ಮೂಲಕ ಹುಬ್ಬಳ್ಳಿ-ಧಾರವಾಡ ಅವಳಿ ನಗರದಲ್ಲಿ ಇತಿಹಾಸ ಸೃಷ್ಟಿಸಿದ್ದಾರೆ.

**ಉದಯ ವಾಹಿನಿ ಹೈಲೈಟ್ಸ್**
- **ಹುಬ್ಬಳ್ಳಿಯಲ್ಲಿ ಐದು ವರ್ಷದ ಮಗುವಿನ ಕೊಂದ ಪಾಪಿ ಬೆನ್ನಿಗೆ ಗುಂಡಿಟ್ಟ ಪಿಎಸ್‌ಐ ಅನ್ನಪೂರ್ಣ.**
- **ಎಂಎಸ್ಸಿಯಲ್ಲಿ ಚಿನ್ನದ ಪದಕದೊಂದಿಗೆ ಉತ್ತೀರ್ಣರಾಗಿರುವ ಪಿಎಸ್‌ಐ.**
- **ಅನ್ನಪೂರ್ಣ ಮೂಲತಃ ಬೆಳಗಾವಿ ಜಿಲ್ಲೆಯ ಗೋಕಾಕ್‌ನವರು.**

ಅನ್ನಪೂರ್ಣ ಅವರು ಈ ಮೊದಲು ಹುಬ್ಬಳ್ಳಿ ಶಹರ ಠಾಣೆ, ಸಿಇಎನ್ ಠಾಣೆಯಲ್ಲಿ ಪಿಎಸ್‌ಐ ಆಗಿ ಕರ್ತವ್ಯ ನಿರ್ವಹಿಸಿ ಸೈ ಎನಿಸಿಕೊಂಡಿದ್ದರು. ಅದಾದ ಬಳಿಕ ಅಶೋಕ ನಗರ ಪೊಲೀಸ್ ಠಾಣೆಗೆ ವರ್ಗಾವಣೆಗೊಂಡು ಅಲ್ಲಿಯೇ ಕೆಲಸವನ್ನು ಅನ್ನಪೂರ್ಣ ಮುಂದುವರೆಸಿದ್ದರು. ಈಗ ಐದು ವರ್ಷದ ಬಾಲಕಿಯ ಕೊಲೆ ಕೇಸ್‌ನ ಆರೋಪಿಯ ಎನ್‌ಕೌಂಟರ್ ಮೂಲಕ ರಾಜ್ಯದ ಜನರ ಗಮನವನ್ನು ಅನ್ನಪೂರ್ಣ ಸೆಳೆದಿದ್ದಾರೆ.


ಉದಯವಾಹಿನಿ ಚಿತ್ರ

ಎಂಎಸ್ಸಿಯಲ್ಲಿ ಚಿನ್ನದ ಪದಕ

ಆರೋಪಿ ಹಲ್ಲೆಯಿಂದ ಗಾಯಗೊಂಡಿರುವ ಲೇಡಿ ಸಿಂಗಂ ಅನ್ನಪೂರ್ಣ ಸೇರಿ ಇನ್ನಿಬ್ಬರು ಸಿಬ್ಬಂದಿ ಕೆಎಂಸಿಆರ್‌ಐನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

**ಮೂರು ಬಾರಿ ಗಾಳಿಯಲ್ಲಿ ಗುಂಡು, ಕಾಲಿಗೆ, ಬೆನ್ನಿಗೆ ಏಟು:** ಎನ್‌ಕೌಂಟರ್ ಹೇಗೆ ನಡೆಯಿತು ಎಂಬುದನ್ನು ನೋಡಿದರೆ, ಆರೋಪಿ ಮೇಲೆ ಬೇಕು ಅಂತಲೇ ಗುಂಡು ಹಾರಿಸಲಿಲ್ಲ ಎನ್ನಲಾಗಿದ್ದು, ಆತ್ಮರಕ್ಷಣೆಗೆ ಗುಂಡು ಹಾರಿಸಿದ ಗುಂಡಿಗೆ ಆರೋಪಿ ರಿತೇಶ್ ಸಾವನ್ನಪ್ಪಿದ್ದಾನೆ.

**ಎಂಎಸ್ಸಿ ಗೋಲ್ಡ್‌ಮೆಡಲಿಸ್ಟ್**

**ಸದ್ಯಕ್ಕೆ ಅಶೋಕ ನಗರ ಪೊಲೀಸ್ ಠಾಣೆಯ ಪಿಎಸ್‌ಐ ಆಗಿ ಕೆಲಸ ಮಾಡುತ್ತಿರುವ ಅನ್ನಪೂರ್ಣ ಆರ್ ಅವರು ಮೂಲತಃ ಬೆಳಗಾವಿ ಜಿಲ್ಲೆಯ ಗೋಕಾಕ್‌ನವರು. ಗೋಕಾಕ್ ತಾಲ್ಲೂಕಿನ ಗುಜನಗಟ್ಟಿ ಗ್ರಾಮದ ಅನ್ನಪೂರ್ಣ 2018ನೇ ಬ್ಯಾಚ್‌ನ ಪಿಎಸ್‌ಐ. ರೈತಾಪಿ ಕುಟುಂಬದಲ್ಲಿ ಹುಟ್ಟಿ ಬೆಳೆದಿದ್ದ ಅನ್ನಪೂರ್ಣ ಅವರು ಬಾಲ್ಯದಲ್ಲೇ ತಂದೆಯನ್ನು ಕಳೆದುಕೊಂಡು, ತಾಯಿಯ ನೆರಳಲ್ಲಿ ಬದುಕಿದ್ದರು. ಧಾರವಾಡದ ಕೃಷಿ ವಿಶ್ವವಿದ್ಯಾಲಯದಲ್ಲಿ ಬಿಎಸ್‌ಸಿ ಪದವಿ ಪಡೆದಿದ್ದ ಅನ್ನಪೂರ್ಣ ಅವರು ಬೆಂಗಳೂರಿನ ಜಿಕೆವಿಕೆಯಲ್ಲಿ ಎಂಎಸ್‌ಸಿ ಪದವಿಯಲ್ಲಿ ಗೋಲ್ಡ್ ಮೆಡಲ್ ಪಡೆದಿದ್ದರು. ಎಂಎಸ್‌ಸಿ ಪದವಿ ಪಡೆದರು ಬೇರೆ ನೌಕರಿಗಳತ್ತ ಮುಖಮಾಡದೇ ಪೊಲೀಸ್ ಇಲಾಖೆ ಸೇರಿದ್ದರು.**

ಹೀಗಾಗಿ ಇದು ಎನ್‌ಕೌಂಟರ್ ಆದಂತಾಗಿದೆ, ಅಡಗಿ ಕುಳಿತಿದ್ದ ಆರೋಪಿಯನ್ನು ಬಂಧಿಸಲು ಆತನ ಮನೆ ಬಳಿ ತೆರಳಿದಾಗ ಆತ ಪೊಲೀಸರ ಮೇಲೆ ಹಲ್ಲೆ ನಡೆಸಿದ್ದಾನೆ. ಜತೆಗೆ ಪೊಲೀಸರ ವಾಹನದ ಮೇಲೂ ಕಲ್ಲು ತೂರಿದ್ದಾನೆ. ಇದರಿಂದ ಪಿಎಸ್‌ಐ ಅನ್ನಪೂರ್ಣಾ ಸೇರಿದಂತೆ ಮೂವರು ಸಿಬ್ಬಂದಿ ಗಾಯಗೊಂಡಿದ್ದಾರೆ.

ಈ ವೇಳೆ ಎಚ್ಚರಿಕೆ ಸಂದೇಶ ನೀಡುವ ಉದ್ದೇಶದಿಂದ ಪಿಎಸ್‌ಐ ಅನ್ನಪೂರ್ಣ ಮೊದಲು ಮೂರು ಸುತ್ತು ಗಾಳಿಯಲ್ಲಿ ಗುಂಡು ಹಾರಿಸಿದ್ದಾರೆ. ಆದರೂ ಆತನ ದಾಳಿ ಮಾತ್ರ ಮುಂದುವರಿದಿತ್ತು. ಈ ವೇಳೆ ಆತ ತಪ್ಪಿಸಿಕೊಳ್ಳಲು ಪ್ರಯತ್ನಿಸಿದಾಗ ಆತನ ಕಾಲಿಗೆ ಮೊದಲು ಗುಂಡು ಹಾರಿಸಲಾಗಿದೆ. ಆಗಲೂ ಆತ ತನ್ನ ಪ್ರಯತ್ನ ಮುಂದುವರೆಸಿದಾಗ ಮತ್ತೊಮ್ಮೆ ಫೈರ್ ಮಾಡಲಾಗಿದ್ದು, ಬುಲೆಟ್ ಆತನ ಬೆನ್ನಿಗೆ ಬಿದ್ದು, ಸಾವನ್ನಪ್ಪಿದ್ದಾನೆ.

ಒಟ್ಟಿನಲ್ಲಿ, ಮಗುವಿನ ಮೇಲೆ ಪೈಶಾಚಿಕ ಕೃತ್ಯ ಎಸಗಿದ್ದ ಆರೋಪಿ ಮೇಲೆ ಆತ್ಮರಕ್ಷಣೆಗಾದರೂ ಹಾರಿಸಿರಲಿ ಅಥವಾ ಬೇಕಂತ ಹಾರಿಸಿರಲಿ, ಮಹಿಳಾ ಪಿಎಸ್‌ಐ ಕೈಗೊಂಡ ಕ್ರಮಕ್ಕೆ ಮಾತ್ರ ಕರ್ನಾಟಕದ ಜನ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಬಸ್-ಪಿಕ್ ಆಪ್ ಭೀಕರ ಅಪಘಾತ

• ಉದಯವಾಹಿನಿ ಕಾರ್ಕಳ

ಉಡುಪಿ-ಕಾರ್ಕಳ ರಸ್ತೆಯ ಕೊಟ್ನಕಟ್ಟೆಯ ಸಮೀಪ ಬಸ್ ಮತ್ತು ಪಿಕ್'ಆಪ್ ವಾಹನದ ನಡುವೆ ಭೀಕರ ಅಪಘಾತ ಸಂಭವಿಸಿದೆ. ಅಪಘಾತದಲ್ಲಿ ಪಿಕ್‌ಆಪ್ ವಾಹನದಲ್ಲಿದ್ದ ಒರ್ವ ವ್ಯಕ್ತಿ ಮೃತಪಟ್ಟಿರುವ ಕುರಿತು ಮಾಹಿತಿ ಲಭ್ಯವಾಗಿದೆ ಆದರೆ ಅದು ಇನ್ನು ಕೂಡ ಧೃಡಪಟ್ಟಿಲ್ಲ.

ಅಪಘಾತದಲ್ಲಿ ಬಸ್ ಚಾಲಕ ಸೇರಿದಂತೆ ಹಲವು ಮಂದಿ ಗಾಯಗೊಂಡಿದ್ದು ತಕ್ಷಣ ಕಾರ್ಯ ಪ್ರವೃತ್ತರಾದ ಸಾರ್ವಜನಿಕರು ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಿದರು. ಬಸ್ ಉಡುಪಿಯಿಂದ ಕಾರ್ಕಳ ಕಡೆಗೆ ಪ್ರಯಾಣಿಸುತ್ತಿತ್ತು.ಪಿಕ್'ಆಪ್ ಕಾರ್ಕಳದ ಕಡೆಯಿಂದ ಬರುವ ಸಂದರ್ಭದಲ್ಲಿ ಅಪಘಾತ ಸಂಭವಿಸಿದೆ.

## ಡಾ. ಅಂಬೇಡ್ಕರ್ ಜಯಂತಿ ಆಚರಣೆ

• ಉದಯವಾಹಿನಿ ಬೀದರ್

ನಗರದ ಶಿವನಗರದ ಕಾಂಗ್ರೆಸ್ ಜಿಲ್ಲಾ ಘಟಕದ ಕಚೇರಿಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಆಚರಿಸಲಾಯಿತು.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಡಾ. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್, ಮಾಜಿ ಸಂಸದ ನರಸಿಂಗರಾವ್ ಸೂರ್ಯವಂಶಿ, ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ರಾಜ್ಯ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಸಂಜಯ್ ಜಾಗೀರದಾರ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ಬೀದರ್ ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ರಾಜ್ಯ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಪಂಡಿತರಾವ್ ಚಿದ್ರಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಗೀತಾ ಚಿದ್ರಿ, ದತ್ತಾತ್ರಿ ಮೂಲಗೆ, ಮುಖಂಡ ಶಂಕರ ದೊಡ್ಡಿ ಮತ್ತಿತರರು ಇದ್ದರು.

ಹಿಂದೂಗಳ ರಕ್ಷಣೆಗಾಗಿ ಹಿಂದೂಫೋಬಿಯಾ ಅಪರಾಧಗಳ ನಿಗ್ರಹ ಕಾಯ್ದೆಯ ಮಸೂದೆ ಮಂಡಿಸಿದ ಜಾರ್ಜಿಯಾ

# ಅಮೆರಿಕದ ಹಿಂದೂಗಳ ರಕ್ಷಣೆಗಾಗಿ ಹೊಸ ಕಾನೂನು: ಸ್ವಾಗತ

**ವಾಷಿಂಗ್ಟನ್:** ಅಮೆರಿಕದಲ್ಲಿರುವ ಭಾರತೀಯರ ಮೇಲೆ ಅದರಲ್ಲೂ ವಿಶೇಷವಾಗಿ ಹಿಂದೂಗಳ ಮೇಲೆ ನಿರಂತರವಾಗಿ ನಡೆಯುತ್ತಿರುವ ದೌರ್ಜನ್ಯ ಗಳನ್ನು ಹತ್ತಿಕ್ಕುವ ಸಲುವಾಗಿ ಅಮೆರಿಕದಲ್ಲಿ ಹೊಸ ಕಾನೂನುಗಳು ಜಾರಿಯಾಗಬೇಕೆಂಬ ಕೂಗು ಅನೇಕ ವರ್ಷಗಳಿಂದ

- ಅಮೆರಿಕದಲ್ಲಿರುವ ಹಿಂದೂಗಳ ಮೇಲೆ ನಿರಂತರ ದಬ್ಬಾಳಿಕೆ.
- ಅಂಥ ಅಪರಾಧಗಳನ್ನು ತಡೆಗಟ್ಟಲು ಮೊದಲ ಹೆಜ್ಜೆಯಿಟ್ಟ ಅಮೆರಿಕದ ರಾಜ್ಯ ಜಾರ್ಜಿಯಾ.
- ಹಿಂದೂಗಳ ರಕ್ಷಣೆಗಾಗಿ ಹಿಂದೂಫೋಬಿಯಾ ಅಪರಾಧಗಳ ನಿಗ್ರಹ ಕಾಯ್ದೆಯ ಮಸೂದೆ ಮಂಡಿಸಿದ ಜಾರ್ಜಿಯಾ ಸರ್ಕಾರ.

ಕೇಳಿಬರುತ್ತಿದೆ. ಈ ನಿಟ್ಟಿನಲ್ಲಿ ದೃಢವಾದ ಹೆಜ್ಜೆಯಿಟ್ಟಿರುವ ಅಮೆರಿಕದ ಜಾರ್ಜಿಯಾ ರಾಜ್ಯವು, ಹಿಂದೂಗಳ ಮೇಲೆ ನಡೆಯುವ ಹಿಂಸೆ ಹಾಗೂ ದಬ್ಬಾಳಿಕೆಗಳನ್ನು ನಿಲ್ಲಿಸುವ ಸಲುವಾಗಿ ಹೊಸತೊಂದು ಮಸೂದೆಯನ್ನು ಸಿದ್ಧಪಡಿಸಿದೆ. ಈ ಮಸೂದೆ ಏ. 4ರಂದು ಅಲ್ಲಿನ ವಿಧಾನಸಭೆಯಲ್ಲಿ ಮಂಡಿಸಲಾಗಿದೆ. ಜಾರ್ಜಿಯಾದಲ್ಲಿಯೂ ಕರ್ನಾಟಕದಲ್ಲಿರುವಂತೆ ಎರಡು ಹಂತದ ಶಾಸನಸಭೆಯಿದೆ. ಅಲ್ಲಿನ ಕೆಳಮನೆಯಲ್ಲಿ ಏ. 4ರಂದೇ ಈ ಮಸೂದೆ ಮಂಡನೆಯಾಗಿದೆ. ಚರ್ಚೆಯು ನಡೆಯುತ್ತಿದೆ. ಜಾರ್ಜಿಯಾ ಇಟ್ಟ ಹೆಜ್ಜೆಯನ್ನೇ ಅಮೆರಿಕದ ಉಳಿದೆಲ್ಲಾ ರಾಜ್ಯಗಳು ಅನುಸರಿಸಿದರೆ, ಅಮೆರಿಕದ ಒಟ್ಟು ಜನಸಂಖ್ಯೆಯಲ್ಲಿ ಶೇ.1ರಷ್ಟಿರುವ ಭಾರತೀಯರಿಗೆ ಸೂಕ್ತ ರಕ್ಷಣೆ ಸಿಗಲಿದೆ. ಮಸೂದೆಯನ್ನು ಅಮೆರಿಕದಲ್ಲಿರುವ ಹಿಂದೂಪರ ಸಂಘಟನೆಗಳು ಸ್ವಾಗತಿಸಿವೆ. ಕೊಯಲಿಷನ್ ಆಫ್ ಹಿಂದೂಸ್ ಆಫ್ ನಾರ್ತ್ ಅಮೆರಿಕ' ಸಂಘಟನೆಯು ಈ ಮಸೂದೆಯನ್ನು ಸ್ವಾಗತಿಸಿದ್ದು, ಈ ಮಸೂದೆಗೆ ಸದನದ ಅಂಗೀಕಾರ ದೊರೆತು ಅದು ಕಾನೂನಾಗಿ ಜಾರಿಯಾದರೆ, ಭಾರತದಿಂದ ಬಂದವರಿಗೆ ಕಾನೂನಿನ ಬಲ ಸಿಕ್ಕಂತಾಗುತ್ತದೆ. ಇಲ್ಲವಾದರೆ, ಹಿಂದೂಗಳನ್ನು ಅವರ ಧಾರ್ಮಿಕ ಆಚರಣೆಯ ಕಾರಣದಿಂದಲೂ, ಕೀಳು ಎಂಬ ಭಾವನೆಯಿಂದಲೂ ಕೊಲ್ಲುವುದು, ಅವರ ಮೇಲೆ ದೌರ್ಜನ್ಯ ಮಾಡುವುದನ್ನು ಅದು ನಿರ್ಬಂಧಿಸುತ್ತದೆ ಎಂದು ಅಭಿಪ್ರಾಯಪಟ್ಟಿದೆ.



### ಕೇವಲ ಹಿಂದೂಗಳಲ್ಲ, ಸಮಗ್ರ ಭಾರತೀಯರ ರಕ್ಷಣೆಯಾಗಲಿ

ಆದರೆ, ಈ ಮಸೂದೆಯ ಬಗ್ಗೆ 'ಹಿಂದೂಸ್ ಫಾರ್ ಹ್ಯೂಮನ್ ರೈಟ್ಸ್' ಸಂಘಟನೆ ಅಪಸ್ವರ ಎತ್ತಿದೆ. ಅಸಲಿಗೆ, ಹಿಂದೂಗಳ ಮೇಲಾಗುವ ದೌರ್ಜನ್ಯಗಳನ್ನು ಹಿಂದೂಫೋಬಿಯಾ ಎಂದು ಕರೆಯಬಾರದು. ಹಾಗೆ ಕರೆದರೆ ಅದು ಭಾರತದಲ್ಲಿ ಚಾಲ್ತಿಯಲ್ಲಿರುವ ಇಸ್ಲಾಮೋಫೋಬಿಯಾ ಎಂಬ ಪದದ ಸರಿಸಮಾನವಾದ ಅರ್ಥ ಬಂದಂತಾಗುತ್ತದೆ. ಇದಲ್ಲದೆ, ಕೇವಲ ಹಿಂದೂಗಳು ಎಂಬ ಕಾರಣಕ್ಕಾಗಿ ಅಮೆರಿಕದಲ್ಲಿ ಭಾರತೀಯರ ಮೇಲೆ ಹಲ್ಲೆಗಳು ಅಥವಾ ದೌರ್ಜನ್ಯಗಳಾಗುತ್ತಿಲ್ಲ. ಭಾರತೀಯರು ಶ್ರಮಪಟ್ಟು ದುಡಿಯುವ ಜನ. ಕಷ್ಟಪಟ್ಟು ದುಡಿದು ಏಳಿಗೆಯಾಗುವುದನ್ನು ನೋಡಿ ಸಹಿಸದೇ ಭಾರತೀಯರ ಮೇಲೆ ದೌರ್ಜನ್ಯಗಳಾಗುತ್ತಿವೆ. ಹಾಗಾಗಿ, ಇಂಥ ಎಲ್ಲಾ ಪ್ರಕರಣಗಳಿಗೂ ಸೂಕ್ತವಾದ ಕಾನೂನು ಜಾರಿಗೆ ಬರಲಿ ಎಂದು ಹೇಳಿದೆ.

### ಹಿಂದೂಫೋಬಿಯಾ ಎಂದು ವರ್ಗೀಕರಣ

ಅಮೆರಿಕದಲ್ಲಿನ ಹಿಂದೂಗಳ ಮೇಲೆ ನಡೆಯುವ ದೌರ್ಜನ್ಯಗಳನ್ನು 'ಹಿಂದೂಫೋಬಿಯಾ ಅಪರಾಧಗಳೆಂದು ಪರಿಗಣಿಸಲು ಮಸೂದೆಯಲ್ಲಿ ತಿಳಿಸಲಾಗಿದೆ. ಅಲ್ಲದೆ, ಹಿಂದೂಫೋಬಿಯಾ ಅಂದರೆ ಹಿಂದೂ ವಿರೋಧಿ ಮನಸ್ಥಿತಿಗಳು, ಹಿಂದೂವಿರೋಧಿ ಧೋರಣೆಗಳಿಂದಾಗಿ ಅಮಾಯಕ ಹಿಂದೂಗಳ ಮೇಲೆ ದೌರ್ಜನ್ಯ, ಕೊಲೆಯಂಥ ಗಂಭೀರ ಪ್ರಕರಣಗಳು ನಡೆಯುತ್ತಿವೆ ಎಂದು ಮಸೂದೆಯಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಲಾಗಿದೆ. ಅಲ್ಲದೆ, ಇಂಥ ಅಪರಾಧಗಳನ್ನು ಹತ್ತಿಕ್ಕುವ ಸಲುವಾಗಿ ಕಾನೂನಿನಲ್ಲಿ ಹೊಸದಾಗಿ ಹಿಂದೂಫೋಬಿಯಾ ಅಪರಾಧಗಳು ಎಂಬ ಪ್ರತ್ಯೇಕ ಕಲಂ ಸೇರಿಸಬೇಕು ಎಂದು ಮಸೂದೆಯಲ್ಲಿ ಉಲ್ಲೇಖಿಸಲಾಗಿದೆ. ಹಿಂದೂ ಧರ್ಮದವರ ಮೇಲೆ ನಡೆಸಲಾಗುವ ಯಾವುದೇ ರೀತಿಯ ದೌರ್ಜನ್ಯಗಳನ್ನು ಹಿಂದೂ ಧರ್ಮದ ಕಡೆಗೆ ವಿರೋಧಾತ್ಮಕ, ವಿನಾಶಕಾರಿ ಮತ್ತು ಅವಹೇಳನಕಾರಿ ವರ್ತನೆಗಳು ಮತ್ತು ನಡವಳಿಕೆಗಳು ಎಂದು ಪರಿಗಣಿಸಬೇಕು ಎಂದು ಮಸೂದೆಯಲ್ಲಿ ಉಲ್ಲೇಖಿಸಲಾಗಿದೆ.

# ಡೊನಾಲ್ಡ್ ಟ್ರಂಪ್‌ಗೆ ಲೋಹದ ಆಘಾತ ನೀಡಿದ ಚೀನಾ

## ಅಪರೂಪದ ಲೋಹಗಳ ರಫ್ತು ಸ್ಥಗಿತ; ಶಸ್ತ್ರಾಸ್ತ್ರ, ಡ್ರೋನ್ ಉತ್ಪಾದನೆಗೆ ಸಮಸ್ಯೆ

**ಬೀಜಿಂಗ್ :** ಅಮೆರಿಕ ಹಾಗೂ ಚೀನಾ ನಡುವೆ ಟ್ರೇಡ್ ವಾರ್ ಜೋರಾಗಿದೆ. ಡ್ರ್ಯಾಗನ್ ರಾಷ್ಟ್ರ ಚೀನಾಗೆ ಏಟು ಕೊಡಲು ಹೋದ ಟ್ರಂಪ್‌ಗೆ ಜಿನ್‌ಪಿಂಗ್ ದೊಡ್ಡ ಆಘಾತವನ್ನೇ ನೀಡಿದ್ದಾರೆ. ಚೀನಾ ಮೇಲಿನ ಸುಂಕವನ್ನು ಅಮೆರಿಕ ಶೇ.145ಕ್ಕೆ ಏರಿಸಿದ ಬೆನ್ನಲ್ಲೇ ಚೀನಾ ಸರ್ಕಾರ ಅಪರೂಪದ ಪ್ರಮುಖ ಲೋಹಗಳು ಮತ್ತು ವಿಶೇಷ ಅಯಸ್ಕಾಂತಗಳ ರಫ್ತನ್ನು ಸ್ಥಗಿತಗೊಳಿಸಿದೆ. ಇದು ಅಮೆರಿಕ ಸೇರಿ ಪಾಶ್ಚಿಮಾತ್ಯ ರಾಷ್ಟ್ರಗಳಿಗೆ ದೊಡ್ಡ ಹೊಡೆತ ನೀಡಿದಂತಾಗಿದ್ದು, ಶಸ್ತ್ರಾಸ್ತ್ರ, ಎಲೆಕ್ಟ್ರಾನಿಕ್ಸ್ ಉಪಕರಣ, ವಾಹನ, ವಿಮಾನ, ಸೆಮಿ ಕಂಡಕ್ಟರ್ ಮತ್ತು ಹಲವು ಗ್ರಾಹಕ ವಸ್ತುಗಳ ತಯಾರಿಕೆಗೆ ಸಮಸ್ಯೆಯಾಗಲಿದೆ. ವಿಶ್ವದಲ್ಲಿ ಕೆಲವು ಪ್ರಮುಖ ಲೋಹಗಳು ಚೀನಾದಲ್ಲಿ ಮಾತ್ರ ದೊರೆಯುತ್ತಿದ್ದು, ಅವುಗಳ ರಫ್ತು ನಿಂತರೆ ಜಗತ್ತಿಗೆ ಭಾರೀ ಸಮಸ್ಯೆಯಾಗಲಿದೆ ಎನ್ನಲಾಗುತ್ತಿದೆ.

ಚೀನಾ ಮೇಲೆ ಮುಗಿಬಿದ್ದಿರುವ ಟ್ರಂಪ್‌ಗೆ ತಿರುಗೇಟು ನೀಡಿರುವ ಅಧ್ಯಕ್ಷ ಕ್ಷಿ ಜಿನ್‌ಪಿಂಗ್ ಅಪರೂಪದ ಲೋಹಗಳು, ವಿಶೇಷ ಅಯಸ್ಕಾಂತಗಳ ರಫ್ತಿಗೆ ಬ್ರೇಕ್ ಹಾಕಿದೆ. ಈ ಲೋಹಗಳ ರಫ್ತಿಗೆ ಹೊಸ ನಿಯಂತ್ರಣ ವ್ಯವಸ್ಥೆ ರೂಪಿಸಲು ಚೀನಾ ಸರ್ಕಾರ ಮುಂದಾಗಿದ್ದು, ಅದಕ್ಕೆ



ಸಂಬಂಧಿಸಿದಂತೆ ನೀತಿ-ನಿಯಮಗಳು ಸಿದ್ಧವಾಗುತ್ತಿವೆ. ಇದರ ನಡುವೆಯೇ, ಕಾರ್‌ನಿಂದ ಕ್ಷಿಪಣಿವರೆಗೆ ವಿವಿಧ ವಸ್ತುಗಳ ತಯಾರಿಕೆಗೆ ಬೇಕಾಗುವ ಲೋಹಗಳು ಮತ್ತು ಸ್ಪೆಷಲ್ ಮ್ಯಾಗ್ನೆಟ್ ರಫ್ತಾಗದಂತೆ ಬಂದರುಗಳಲ್ಲಿ ತಡೆಹಿಡಿಯಲಾಗಿದೆ ಎಂದು ಹೇಳಲಾಗುತ್ತಿದೆ.

ಹೊಸ ನಿಯಮವನ್ನು ರೂಪಿಸಿದ ಬಳಿಕ ಅಮೆರಿಕದ ಮಿಲಿಟರಿ ಗುತ್ತಿಗೆದಾರರು ಸೇರಿ ನಿರ್ದಿಷ್ಟ ಕಂಪನಿಗಳಿಗೆ ಈ ಲೋಹಗಳು ಸಿಗದಂತೆ ಶಾಶ್ವತ ವ್ಯವಸ್ಥೆ ಜಾರಿಗೆ ಬರಲಿದೆ ಎನ್ನಲಾಗಿದೆ. ಚೀನಾದ ಈ ನಿರ್ಧಾರದಿಂದ ಪ್ರಮುಖವಾಗಿ ಅಮೆರಿಕ ಉದ್ಯಮಿಗಳಿಗೆ ಸಂಕಷ್ಟ ಅನುಭವಿಸಲಿದ್ದಾರೆ. ಅಮೆರಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿಧಿಸಿರುವ ಭಾರೀ ಪ್ರಮಾಣದ ಪರಸ್ಪರ ತೆರಿಗೆಗೆ ಪ್ರತೀಕಾರವಾಗಿ ಚೀನಾ ಈ ಕ್ರಮ ಕೈಗೊಂಡಿದೆ.

### ಯಾವ್ಯಾವ ಲೋಹಗಳ ರಫ್ತಿಗೆ ಚೀನಾ ಬ್ರೇಕ್?

ಸಮೇರಿಯಂ, ಗಾಡೋಲಿನಿಯಂ, ಟರ್ಬಿಯಂ, ಡೈಸ್ಪ್ರೋಸಿಯಂ, ಲುಟಿನಿಯಂ, ಸ್ಕ್ಯಾಂಡಿಯಂ, ಇಟ್ರಿಯಂ ಸೇರಿ 17 ಲೋಹಧಾತುಗಳು ಚೀನಾದ ರಫ್ತು ನಿಯಂತ್ರಣ ಪಟ್ಟಿಯಲ್ಲಿವೆ. ಭೂಮಿಯಲ್ಲಿ ಲಭ್ಯವಾಗುವ ಅಪರೂಪದ ಧಾತುಗಳ ಪೈಕಿ ಶೇ. 90ರಷ್ಟನ್ನು ಚೀನಾವೊಂದೇ ಉತ್ಪಾದಿಸುತ್ತದೆ. ಅಮೆರಿಕದಲ್ಲಿ ಇಂತಹ ಒಂದೇ ಒಂದು ಗಣಿ ಇದೆ. ಹಾಗಾಗಿ ಈ ಲೋಹಧಾತುಗಳಿಗಾಗಿ ಚೀನಾ ಮೇಲೆ ಅಮೆರಿಕ ಅವಲಂಬಿತವಾಗಿದೆ. ಇವು ಅಮೆರಿಕಕ್ಕೆ ಬೇರೆ ದೇಶಗಳಿಂದ ಸಿಗುವುದೂ ದುಸ್ತರ ಎನ್ನಲಾಗಿದೆ. ಈಗ ಎಲ್ಲಾ ದೇಶಗಳಿಗೂ ಇವುಗಳ ರಫ್ತನ್ನು ಚೀನಾ ನಿರ್ಬಂಧಿಸಿದೆ.

# ರಾಮಮಂದಿರಕ್ಕೆ ಬಾಂಬ್ ಸ್ಫೋಟದ ಬೆದರಿಕೆ

**ಅಯೋಧ್ಯೆ:** ಕೋಟ್ಯಂತರ ಹಿಂದೂಗಳ ಶತಮಾನಗಳ ಕನಸು ಸಾಕಾರವಾಗಿ, ಭಕ್ತಿಭಾವಗಳ ಪ್ರತೀಕವಾಗಿ ಅಯೋಧ್ಯೆಯಲ್ಲಿ ರಾಜಾಜಿಸುತ್ತಿರುವ ಹೊಸ ರಾಮಮಂದಿರಕ್ಕೆ ಬಾಂಬ್ ಇಟ್ಟು ಸ್ಫೋಟಿಸುವ ಬೆದರಿಕೆ ಇ-ಮೇಲ್ ಒಂದು ರಾಮಮಂದಿರದ ಉಸ್ತುವಾರಿ ಹೊಂದಿರುವ ಶ್ರೀ ರಾಮಜನ್ಮಭೂಮಿ ಟ್ರಸ್ಟ್‌ಗೆ ಬಂದಿದೆ.

ಈ ಕುರಿತಂತೆ ಅಯೋಧ್ಯೆಯಲ್ಲಿ ದೂರು ದಾಖಲಾಗಿದೆ. ತನಿಖಾಧಿಕಾರಿಗಳು ಬೆದರಿಕೆ ಇ ಮೇಲ್ ಮೂಲ ಹುಡುಕಿದ್ದು ಅದು ತಮಿಳುನಾಡಿನಿಂದ ಬಂದಿರುವುದಾಗಿ ಪ್ರಾಥಮಿಕ ವರದಿಗಳು ಹೇಳಿವೆ. ಇದರ ಜೊತೆಯಲ್ಲೇ, ಮುನ್ನೆಚ್ಚರಿಕೆ ಕ್ರಮವಾಗಿ ಶ್ರೀರಾಮಮಂದಿರಕ್ಕೆ ಒದಗಿಸಲಾಗಿದ್ದ ಬಿಗಿ ಭದ್ರತೆಯನ್ನು ಮತ್ತಷ್ಟು ಹೆಚ್ಚಿಸಲಾಗಿದೆ.

**ಇದೇ ಮೊದಲೇನಲ್ಲ:** ಶ್ರೀರಾಮ ಮಂದಿರ ನಿರ್ಮಾಣವಾದಾಗಿನಿಂದಲೂ ಇಂಥ ಬೆದರಿಕೆಗಳು ಆಗಾಗ್ಗೆ ಬಂದೇ ಬರುತ್ತಿವೆ. ಆದರೆ, ಪ್ರತಿ ಬಾರಿಯೂ ಅಲರ್ಟ್ ಆಗಿರುವ ಶ್ರೀರಾಮಜನ್ಮಭೂಮಿ ಟ್ರಸ್ಟ್, ಯಾವುದೇ ಬೆದರಿಕೆಯನ್ನು ನಿರ್ಲಕ್ಷ್ಯ ಮಾಡದೇ ಕೂಡಲೇ



ಪೊಲೀಸರಲ್ಲಿ ದೂರು ದಾಖಲಿಸುತ್ತಿದೆ.

ಈಗಾಗಲೇ ಶ್ರೀರಾಮಮಂದಿರವನ್ನು ಸ್ಫೋಟಿಸುವುದಾಗಿ ಜೈಶ್-ಎ-ಮೊಹಮ್ಮದ್ ಸಂಘಟನೆಯು ಅನೇಕ ಬಾರಿ ಬೆದರಿಕೆ ಇ-ಮೇಲ್ ಕಳುಹಿಸಿದೆ. ಈ ಎಲ್ಲಾ ಇ-ಮೇಲ್‌ಗಳನ್ನು ತನಿಖೆಗೆ ಒಳಪಡಿಸಿರುವ ತನಿಖಾಧಿಕಾರಿಗಳು ಇವುಗಳ ಮೂಲವನ್ನು ಪತ್ತೆ ಮಾಡಿದೆ.

ಸಂಶಯಾಸ್ಪದ ವ್ಯಕ್ತಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದೆ. ಈಗ ತಮಿಳುನಾಡಿನಿಂದ ಬಂದಿದೆ ಎಂದು ಹೇಳಲಾಗಿರುವ ಇ-ಮೇಲ್ ಬಗ್ಗೆಯೂ ತನಿಖೆ ನಡೆಸಲಾಗುತ್ತಿದೆ. 2024ರಲ್ಲಿ ಅಯೋಧ್ಯೆಯ ಶ್ರೀರಾಮಮಂದಿರವು ಉತ್ತರ ಪ್ರದೇಶದಲ್ಲಿ ಅತಿ ಹೆಚ್ಚು ಮಂದಿ ಭಕ್ತರು ಭೇಟಿ ನೀಡಿದ ದೇಗುಲ ಎಂಬ ಹೆಗ್ಗಳಿಕೆಗೆ ಪಾತ್ರವಾಗಿತ್ತು.

## ಮಿನಿ ನ್ಯೂಸ್

### 9 ತಿಂಗಳ ತುಂಬು ಗರ್ಭಿಣಿ ಕೊಲೆ ಮಾಡಿದ ಪಾಪಿ ಪತಿ

**ವಿಶಾಖಪಟ್ಟಣಂ:** 9 ತಿಂಗಳ ತುಂಬು ಗರ್ಭಿಣಿ ಮಹಿಳೆಯನ್ನು ಆಕೆಯ ಪತಿಯೇ ಭೀಕರವಾಗಿ ಹತ್ಯೆ ಮಾಡಿರುವ ಘಟನೆ ಆಂಧ್ರ ಪ್ರದೇಶದಲ್ಲಿ ನಡೆದಿದೆ. ಆಂಧ್ರ ಪ್ರದೇಶದ ವಿಶಾಖಪಟ್ಟಣಂ ಜಿಲ್ಲೆಯ ಮಧುರವಾಡ ಆರ್‌ಟಿಸಿ ಡಿಪೋ ಬಳಿ ಈ ಘಟನೆ ನಡೆದಿದ್ದು, ಮೃತ ಮಹಿಳೆಯನ್ನು ಅನಕಪಲ್ಲಿ ಜಿಲ್ಲೆಯ ನರಸೀಪಟ್ಟಣಿಯ 27 ವರ್ಷದ ಕೇದಾರಿಶೆಟ್ಟಿ ಅನುಷಾ (27) ಎಂದು ಗುರುತಿಸಲಾಗಿದ್ದು, ಆಕೆಯನ್ನು ಕೊಂದ ಪಾಪಿ ಪತಿಯನ್ನು 28 ವರ್ಷದ ಗೆದ್ದಾಡ ಜ್ಞಾನೇಶ್ವರ್ ಎಂದು ಹೇಳಲಾಗಿದೆ.

2023ರಲ್ಲಿ ಅನುಷಾ ಮತ್ತು ಜ್ಞಾನೇಶ್ವರ್ ಪ್ರೀತಿಸಿ ವಿವಾಹವಾಗಿದ್ದರು. ಒಂದು ವರ್ಷದ ಹಿಂದೆ, ದಂಪತಿಗಳು ಮಿಥಿಲಾಪುರಿಯ ವುಡಾ ಕಾಲೋನಿಯಲ್ಲಿ ಮನೆ ಬಾಡಿಗೆ ಪಡೆದು ವಾಸಿಸುತ್ತಿದ್ದರು.

ಜ್ಞಾನೇಶ್ವರ ರಾವ್ ಸ್ಕೌಟ್ಸ್ ಮತ್ತು ಗೈಡ್ಸ್ ಎಂಬ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದ. ಈ ಜೋಡಿ ಆಗಾಗ ಜಗಳವಾಡುತ್ತಿದ್ದರು. ಒಂದು ವರ್ಷದಿಂದ ಜ್ಞಾನೇಶ್ವರ್ ಅನುಷಾಳನ್ನು ಬಿಟ್ಟು ಬಿಡಲು ನಿರ್ಧರಿಸಿದ್ದ. ಇದಕ್ಕಾಗಿ ಸಾಕಷ್ಟು ನಾಟಕ ಮಾಡುತ್ತಿದ್ದ ಎಂದು ಅನುಷಾ ಪೋಷಕರು ಹೇಳಿದ್ದಾರೆ.

### ಆಸ್ಪತ್ರೆಯಲ್ಲಿ ಬೆಂಕಿ ಅವಘಡ

**ಲಕ್ನೋ:** ಸರ್ಕಾರಿ ಸ್ವಾಮ್ಯದ ಲೋಕಬಂಧು ರಾಜ್ ನಾರಾಯಣ್ ಸಂಯೋಜಿತ ಆಸ್ಪತ್ರೆಯಲ್ಲಿ ನಿನ್ನೆ ತಡರಾತ್ರಿ ಸಂಭವಿಸಿದ ಬೆಂಕಿ ಅವಘಡದಲ್ಲಿ ಒಬ್ಬ ರೋಗಿ ಮೃತಪಟ್ಟು, ಸುಮಾರು 200 ಜನರನ್ನು ತುರ್ತು ಸ್ಥಳಾಂತರ ಮಾಡಲಾಗಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ತೀವ್ರ ನಿಗಾ ಘಟಕ ಮತ್ತು ಹೈ ಡಿಪೆಂಡೆನ್ಸಿ ಯೂನಿಟ್ ಇರುವ ಆಸ್ಪತ್ರೆ ಕಟ್ಟಡದ ಎರಡನೇ ಮಹಡಿಯಲ್ಲಿ ಬೆಂಕಿ ಕಾಣಿಸಿಕೊಂಡಿದೆ.

ಘಟನೆಯ ಸಮಯದಲ್ಲಿ, ಸುಮಾರು 50 ರೋಗಿಗಳು ಬೆಂಕಿ ಪೀಡಿತ ವಾರ್ಡ್‌ಗಳಲ್ಲಿದ್ದರು. ಉತ್ತರ ಪ್ರದೇಶ ಸರ್ಕಾರದಲ್ಲಿ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಖಾತೆಯನ್ನು ಹೊಂದಿರುವ ಉಪ ಮುಖ್ಯಮಂತ್ರಿ ಬ್ರಜೇಶ್ ಪಾಠಕ್ ಅವರು ರಕ್ಷಣಾ ಕಾರ್ಯಗಳ ಮೇಲ್ವಿಚಾರಣೆಗಾಗಿ ಆಸ್ಪತ್ರೆಗೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು,ಎರಡನೇ ಮಹಡಿಯಿಂದ ಹೊಗೆ ಹೊರಹೊಮ್ಮುತ್ತಿರುವುದು ಕಂಡುಬಂದ ನಂತರ, ತಕ್ಷಣವೇ ರೋಗಿಗಳನ್ನು ಸ್ಥಳಾಂತರಿಸಲು ಪ್ರಾರಂಭಿಸಲಾಯಿತು.

# ನ್ಯಾಷನಲ್ ಹೆರಾಲ್ಡ್ ಹಗರಣ: ಸೋನಿಯಾ, ರಾಹುಲ್ ವಿರುದ್ಧ ಜಾರ್ಜ್‌ಶೀಟ್ ಸಲ್ಲಿಕೆ



**ಹೊಸದಿಲ್ಲಿ:** ನ್ಯಾಷನಲ್ ಹೆರಾಲ್ಡ್ ಹಣ ವರ್ಗಾವಣೆ ಕೇಸ್‌ಗೆ ಸಂಬಂಧಿಸಿದಂತೆ ಕಾಂಗ್ರೆಸ್ ರಾಜ್ಯಸಭೆ ಸದಸ್ಯೆ ಸೋನಿಯಾ ಗಾಂಧಿ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಪಕ್ಷದ ಸಾಗರೋತ್ತರ ಘಟಕದ ಮುಖ್ಯಸ್ಥ ಸ್ಯಾಮ್ ಪಿತ್ರೋಡಾ ವಿರುದ್ಧ ಜಾರಿ ನಿರ್ದೇಶನಾಲಯ ಮಂಗಳವಾರ ಚಾರ್ಜ್‌ಶೀಟ್ (ಆರೋಪ ಪಟ್ಟಿ) ಸಲ್ಲಿಸಿದೆ.

ಈ ಬೆನ್ನಲ್ಲೇ ಪ್ರಕರಣದ ವಿಚಾರಣೆ ನಡೆಸುತ್ತಿರುವ ವಿಶೇಷ ನ್ಯಾಯಾಲಯವು ಮುಂಬರುವ ಏಪ್ರಿಲ್ 25 ರಂದು ವಿಚಾರಣೆಯ ದಿನಾಂಕವನ್ನು ನಿಗದಿಪಡಿಸಿದೆ. ಇನ್ನು ಇದೇ ಮೊದಲ ಬಾರಿ ನ್ಯಾಷನಲ್ ಹೆರಾಲ್ಡ್ ಹಗರಣದಲ್ಲಿ ಸೋನಿಯಾ, ರಾಹುಲ್ ವಿರುದ್ಧ ಜಾರ್ಜ್‌ಶೀಟ್ ದಾಖಲಾಗಿದೆ.

2014 ರಲ್ಲಿ ನವದೆಹಲಿಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ಪಟಿಯಾಲ ಹೌಸ್ ನ್ಯಾಯಾಲಯಗಳು ಹೊರಡಿಸಿದ ಆದೇಶದ ಆಧಾರದ ಮೇಲೆ ಪ್ರಕರಣದ ತನಿಖೆಯನ್ನು ಇಡಿ 2021 ರಲ್ಲಿ ಪ್ರಾರಂಭಿಸಿತು. ಈ ಪ್ರಕರಣವು ಬಿಜೆಪಿಯ ಸುಬ್ರಮಣಿಯನ್ ಸ್ವಾಮಿ ಸಲ್ಲಿಸಿದ ಖಾಸಗಿ ದೂರನ್ನು ಆಧರಿಸಿದೆ. ದೆಹಲಿ ಮುಂಬೈನ ಬಾಂದ್ರಾ ಪ್ರದೇಶ ಮತ್ತು ಲಕ್ನೋದ ಬಿಶೇಶ್ವರ್ ನಾಥ್ ರಸ್ತೆಯಲ್ಲಿರುವ ಎಜೆಎಲ್ ಕಟ್ಟಡದಲ್ಲಿರುವ ಆಸ್ತಿಗಳ ಮೇಲೆ ನೋಟಿಸ್‌ಗಳನ್ನು ಅಂಟಿಸಲಾಗಿದೆ.

# ಹೆಲಿಕಾಪ್ಟರ್ ನದಿಗೆ ಬಿದ್ದು 6 ಮಂದಿ ದುರಂತ ಸಾವು



**ನ್ಯೂಯಾರ್ಕ್:** ಹಡ್ಸನ್ ನದಿಯಲ್ಲಿ ಹೆಲಿಕಾಪ್ಟರ್ ಪತನವಾಗಿ 6 ಮಂದಿ ದುರಂತ ಸಾವಿಗೀಡಾದ ಬೆನ್ನಲ್ಲೇ ಅಪಘಾತಕ್ಕೆ ಕಾರಣವಾದ ಹೆಲಿಕಾಪ್ಟರ್ ಟೂರ್ಸ್ ಕಂಪನಿ ಬಾಗಿಲು ಮುಚ್ಚಿದೆ. ನ್ಯೂಯಾರ್ಕ್ ಹೆಲಿಕಾಪ್ಟರ್ ಟೂರ್ಸ್ ನಿರ್ವಹಿಸುತ್ತಿದ್ದ ಹೆಲಿಕಾಪ್ಟರ್ ಅಸಮರ್ಪಕವಾಗಿ ಕಾರ್ಯನಿರ್ವಹಿಸಿ ಹಡ್ಸನ್ ನದಿಗೆ ಬಿದ್ದಾಗ, ಖ್ಯಾತ ಎಂಎನ್‌ಸಿ ಕಂಪನಿಯ ಸಿಇಒ, ಅವರ ಪತ್ನಿ ಮತ್ತು ಮೂವರು ಮಕ್ಕಳು ಪೈಲಟ್ ಜೊತೆಗೆ ಸಾವನ್ನಪ್ಪಿದ್ದರು. ಆ ಕುಟುಂಬವು ಮ್ಯಾನ್‌ಹ್ಯಾಟನ್ ಮೇಲೆ ಪ್ರವಾಸೋದ್ಯಮ ಹೆಲಿಕಾಪ್ಟರ್‌ನಲ್ಲಿ ಪ್ರಯಾಣಿಸುತ್ತಿತ್ತು.

ನ್ಯೂಯಾರ್ಕ್ ಹೆಲಿಕಾಪ್ಟರ್ ಟೂರ್ಸ್ ತನ್ನ ಕಾರ್ಯಾಚರಣೆಗಳನ್ನು ತಕ್ಷಣವೇ ಸ್ಥಗಿತಗೊಳಿಸುತ್ತಿದೆ ಎಂದು ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ ಎಕ್ಸ್‌ನಲ್ಲಿ ಪೋಸ್ಟ್ ಹಾಕಿ ತಿಳಿಸಿದೆ. ರಾಷ್ಟ್ರೀಯ ಸಾರಿಗೆ ಸುರಕ್ಷತಾ ಮಂಡಳಿ ತನಿಖೆ ನಡೆಸುತ್ತಿದೆ.

# ಹುಟ್ಟು ಒಮ್ಮೆ, ಸಾವು ಒಮ್ಮೆ, ಗಲಭೆ ಯಾಕೆ: ದೀದಿ ಬೇಸರ


## ಕೆಲವರು ನಿಮ್ಮನ್ನು ದಾರಿ ತಪ್ಪಿಸಲು ಪ್ರಯತ್ನಿಸುತ್ತಿದ್ದಾರೆ, ಅವರತ್ತ ಗಮನ ಹರಿಸಬೇಡಿ

**ಕೋಲ್ಕತ್ತಾ:** ಪಶ್ಚಿಮ ಬಂಗಾಳದಲ್ಲಿ ವಕ್ಫ್ ಕಾನೂನು ತಿದ್ದುಪಡಿ ವಿರೋಧಿಸಿ ಹಿಂಸಾಚಾರ ಭುಗಿಲೆದ್ದಿದೆ. ಮುಸ್ಲಿಂ ಪ್ರಾಬಲ್ಯದ ಮುರ್ಷಿದಾಬಾದ್ ಜಿಲ್ಲೆಯಲ್ಲಿ ವಕ್ಫ್ (ತಿದ್ದುಪಡಿ) ಕಾಯ್ದೆಯ ವಿರುದ್ಧ ನಡೆದ ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿದ ಪರಿಣಾಮ ಮೂವರು ಮೃತಪಟ್ಟಿದ್ದರು. ಸದ್ಯ ಅದೇ ರಾಜ್ಯದ ಮತ್ತೊಂದು ಜಿಲ್ಲೆ ದಕ್ಷಿಣ 24 ಪರಗಣ ಜಿಲ್ಲೆಯಲ್ಲಿ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಂಡಿದೆ.

ಪರಗಣ ಜಿಲ್ಲೆಯಲ್ಲಿ ಇಂಡಿಯನ್ ಸೆಕ್ಯುಲರ್ ಫ್ರಂಟ್ ಬೆಂಬಲಿಗರು ಮತ್ತು ಪೊಲೀಸರ ನಡುವೆ ಘರ್ಷಣೆ ನಡೆದಿದೆ. ಪ್ರತಿಭಟನಾಕಾರರು ವಾಹನಗಳಿಗೆ ಬೆಂಕಿ ಹಚ್ಚಿ, ಪೊಲೀಸರ ಬಸ್‌ಗಳನ್ನು ಜಖಂಗೊಳಿಸಿದ್ದಾರೆ. ಪೊಲೀಸರು ಲಾಠಿ ಚಾರ್ಜ್ ಮಾಡಿ ಪ್ರತಿಭಟನಾಕಾರರನ್ನು ಚದುರಿಸಿದರು. ಇಂಡಿಯನ್ ಸೆಕ್ಯುಲರ್ ಫ್ರಂಟ್ ಶಾಸಕ ನೌಶಾದ್ ಸಿದ್ದಿಕ್ ನೇತೃತ್ವದಲ್ಲಿ ರಾಮ್ಲೀಲಾ ಮೈದಾನದಲ್ಲಿ ಪ್ರತಿಭಟನೆ ನಡೆಯಬೇಕಿತ್ತು. ಆದರೆ, ಪೊಲೀಸರು ಅನುಮತಿ ನಿರಾಕರಿಸಿದರು.

### ಎಲೆಕ್ಷನ್ ಮುಂದಿಟ್ಟುಕೊಂಡು ಕಾಯ್ದೆ ಜಾರಿ

ಮುಂದಿನ ವರ್ಷದ ಪಶ್ಚಿಮ ಬಂಗಾಳದ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು, ರಾಜ್ಯ ಸರ್ಕಾರದ ಕಾನೂನು ಸುವ್ಯವಸ್ಥೆ ವೈಫಲ್ಯದ ಬಗ್ಗೆ ಬಿಜೆಪಿ ಪ್ರಶ್ನೆ ಎತ್ತಿದೆ. ಇತ್ತೀಚೆಗೆ ಸಂಸತ್ತು ವಕ್ಫ್ ತಿದ್ದುಪಡಿ ಮಸೂದೆಯನ್ನು ಅಂಗೀಕರಿಸಿದೆ. ಈ ಮಸೂದೆಯು ತೃಣಮೂಲ ಕಾಂಗ್ರೆಸ್ ನಡುವೆ ತೀವ್ರ ವಾಗ್ವಾದಕ್ಕೆ ಕಾರಣವಾಗಿತ್ತು.




**ಕಾನೂನನ್ನು ಕೈಗೆತ್ತಿಕೊಳ್ಳಬೇಡಿ:** ಮುರ್ಷಿದಾಬಾದ್ ಪರಗಣ ಜಿಲ್ಲೆಯಲ್ಲಿ ನಡೆದ ಹಿಂಸಾಚಾರದ ಬಗ್ಗೆ ಮಾತನಾಡಿರುವ ಬಂಗಾಳ ಸಿಎಂ ಮಮತಾ ಬ್ಯಾನರ್ಜಿ ನಾವು ಒಮ್ಮೆ ಬದುಕುತ್ತೇವೆ ಒಮ್ಮೆ ಸಾಯುತ್ತೇವೆ. ಹಾಗಾದರೆ ಗಲಭೆ ಏಕೆ? ಪ್ರತಿಯೊಂದು ಜಾತಿ ಮತ್ತು ಧರ್ಮಕ್ಕೂ ಪ್ರತಿಭಟಿಸುವ ಹಕ್ಕಿದೆ, ಆದರೆ ಕಾನೂನನ್ನು ಕೈಗೆತ್ತಿಕೊಳ್ಳಬೇಡಿ. ಕೆಲವರು ನಿಮ್ಮನ್ನು ದಾರಿ ತಪ್ಪಿಸಲು ಪ್ರಯತ್ನಿಸುತ್ತಿದ್ದಾರೆ, ಅವರತ್ತ ಗಮನ ಹರಿಸಬೇಡಿ ಎಂದು ಹೇಳಿದ್ದಾರೆ. ಹೊಸ ಕಾನೂನು ಮುಸ್ಲಿಮ್ ಮತ್ತು ಸಂವಿಧಾನದ ಮೇಲೆ ದಾಳಿ ಎಂದು ಟೀಕಿಸಿದರು. ಪ್ರತಿಭಟನಾಕಾರರು ಬ್ಯಾರಿಕೇಡ್‌ಗಳನ್ನು ಮುರಿಯಲು ಯತ್ನಿಸಿದಾಗ ಉದ್ವಿಗ್ನತೆ ಹೆಚ್ಚಾಯಿತು. ಘರ್ಷಣೆಯಲ್ಲಿ ಕೆಲವು ಪೊಲೀಸರು ಗಾಯಗೊಂಡಿದ್ದಾರೆ. ಮಮತಾ ಬ್ಯಾನರ್ಜಿ ಅವರು ಹೊಸ ವಕ್ಫ್ ಕಾನೂನುಗಳನ್ನು ಜಾರಿಗೊಳಿಸುವುದಿಲ್ಲ ಎಂದು ಹೇಳಿದ್ದಾರೆ. ಹಾಗಾದರೆ ನಮ್ಮ ಪ್ರತಿಭಟನೆಯನ್ನು ಏಕೆ ತಡೆಯಲಾಗಿದೆ ಎಂದು ನೌಶಾದ್ ಸಿದ್ದಿಕ್ ಹೇಳಿದ್ದಾರೆ.

# ಗಾಜಾ ಆಸ್ಪತ್ರೆ ಮೇಲೆ ಇಸ್ರೇಲ್ ವೈಮಾನಿಕ ದಾಳಿ: ವೈದ್ಯ ಸಾವು, ಒಂಬತ್ತು ಜನರಿಗೆ ಗಾಯ

**ದೀರ್ ಅಲ್-ಬಲಾಹ್:** ಗಾಜಾ ಪಟ್ಟಿಯ ಫೀಲ್ಡ್ ಆಸ್ಪತ್ರೆಯ ಉತ್ತರ ದ್ವಾರದ ಮೇಲೆ ಇಸ್ರೇಲ್ ಮಂಗಳವಾರ ನಡೆಸಿದ ವಾಯುದಾಳಿಯಲ್ಲಿ ಒಬ್ಬ ವೈದ್ಯರು ಸಾವನ್ನಪ್ಪಿದ್ದು, ಒಂಬತ್ತು ಜನ ಗಾಯಗೊಂಡಿದ್ದಾರೆ ಎಂದು ಆಸ್ಪತ್ರೆಯ ವಕ್ತಾರರು ತಿಳಿಸಿದ್ದಾರೆ. ಮುವಾಸಿ ಪ್ರದೇಶದ ಕುವೈತ್ ಫೀಲ್ಡ್ ಆಸ್ಪತ್ರೆಯ ಮೇಲೆ ಈ ದಾಳಿ ನಡೆದಿದ್ದು, ಲಕ್ಷಾಂತರ ಜನರು ವಿಶಾಲವಾದ ಟೆಂಟ್ ನಲ್ಲಿ ಆಶ್ರಯ ಪಡೆದಿದ್ದಾರೆ.

ಗಾಯಾಳುಗಳೆಲ್ಲರೂ ರೋಗಿಗಳು ಮತ್ತು ವೈದ್ಯರಾಗಿದ್ದು, ಇಬ್ಬರು ರೋಗಿಗಳ ಸ್ಥಿತಿ ಗಂಭೀರವಾಗಿದೆ ಎಂದು ಆಸ್ಪತ್ರೆಯ ವಕ್ತಾರ ಸಬರ್ ಮೊಹಮ್ಮದ್ ಹೇಳಿದ್ದಾರೆ.



18 ತಿಂಗಳ ಯುದ್ಧದ ಸಮಯದಲ್ಲಿ ಇಸ್ರೇಲ್ ಮಿಲಿಟರಿ ಹಲವಾರು ಬಾರಿ ಆಸ್ಪತ್ರೆಗಳ ಮೇಲೆ ದಾಳಿ ನಡೆಸಿದ್ದು, ಹಮಾಸ್ ಉಗ್ರಗಾಮಿಗಳು ಅವುಗಳಲ್ಲಿ ಅಡಗಿಕೊಂಡಿದ್ದಾರೆ ಅಥವಾ ಮಿಲಿಟರಿ ಉದ್ದೇಶಗಳಿಗಾಗಿ ಅವುಗಳನ್ನು ಬಳಸುತ್ತಿದ್ದಾರೆ ಎಂದು ಆರೋಪಿಸಿದೆ. ಇಸ್ರೇಲ್ ಆರೋಪವನ್ನು ಆಸ್ಪತ್ರೆ ಸಿಬ್ಬಂದಿ ತಳ್ಳಿಹಾಕಿದ್ದು, ಇಸ್ರೇಲ್ ಅಜಾಗರೂಕತೆಯಿಂದ ನಾಗರಿಕರನ್ನು ಅಪಾಯಕ್ಕೆ ತಳ್ಳಿದೆ ಮತ್ತು ಈ ಪ್ರದೇಶದ ಆರೋಗ್ಯ ವ್ಯವಸ್ಥೆಯನ್ನು ನಾಶ ಮಾಡಿದೆ ಎಂದು ಹೇಳಿದ್ದಾರೆ.

ಆಸ್ಪತ್ರೆಯನ್ನು ನಡೆಸುತ್ತಿರುವ ಜೆರುಸಲೆಮ್‌ನ ಎಪಿಸ್ಕೋಪಲ್ ಡಯೋಸಿಸ್ ಇಸ್ರೇಲ್ ನ ಈ ದಾಳಿಯನ್ನು ಖಂಡಿಸಿದೆ.

# ಮಾಜಿ ಸಿಎಂ ಬಿಜು ಪಟ್ನಾಯಕ್ ಪ್ರತಿಮೆಗೆ ಬೆಂಕಿ, ಭುಗಿಲೆದ್ದ ರಾಜಕೀಯ ವಿವಾದ

**ಬಲಂಗೀರ್:** ಒಡಿಶಾದ ಮಾಜಿ ಸಿಎಂ ಬಿಜು ಪಟ್ನಾಯಕ್ ಅವರ ಪ್ರತಿಮೆಗೆ ಬೆಂಕಿ ಹಚ್ಚಲಾಗಿದೆ. ಪಟ್ನಾಗಢ್ ಮಾಜಿ ಶಾಸಕ ಸರೋಜ್ ಕುಮಾರ್ ಮೆಹರ್ ಸ್ಥಾಪಿಸಿದ್ದ ಪ್ರತಿಮೆಗೆ

ಬೆ. 6 ಗಂಟೆ ಸುಮಾರಿಗೆ ಬೆಂಕಿ ಹಚ್ಚಲಾಗಿದೆ. ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಪೊಲೀಸರು ಬೆಂಕಿ ನಂದಿಸಿದ್ದಾರೆ.

ಘಟನೆಗೆ ಸಂಬಂಧಿಸಿದಂತೆ ಬತರ್ಲಾ ಗ್ರಾಮದ ನಿವಾಸಿ ಜುಗಲ್ ಕಿಶೋರ್ ಸಾಹು ಎಂಬಾತನನ್ನು ಬಂಧಿಸಲಾಗಿದೆ. ಘಟನೆಯ ಸಂಪೂರ್ಣ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ ಎಂದು ಪಟ್ನಾಗಢ್ ಎಸ್‌ಡಿಪಿಒ ಸದಾನಂದ ಪೂಜಾರಿ ಮಾಧ್ಯಮಗಳಿಗೆ ತಿಳಿಸಿದ್ದಾರೆ. ಸಾಹು ಇದನ್ನು ಮಾಡಿದ್ದಾನೆ ಎಂದು ಆರೋಪಿಸಲಾಗಿದೆ. ಆದರೆ ಆತ ಮಾನಸಿಕವಾಗಿ ಅಸ್ವಸ್ಥರಾಗಿದ್ದಾರೆ. ಇದುವರೆಗೆ ನಡೆದ ತನಿಖೆಯಲ್ಲಿ ಘಟನೆಯ ಹಿಂದೆ ಯಾವುದೇ ರಾಜಕೀಯ ಸಂಬಂಧ ಕಂಡುಬಂದಿಲ್ಲ. ತನಿಖೆ ನಡೆಯುತ್ತಿದೆ ಎಂದು ಅವರು ಹೇಳಿದರು.

ಬಿಜು ಜನತಾ ದಳ ಘಟನೆಯನ್ನು ತೀವ್ರವಾಗಿ ಖಂಡಿಸುವುದರೊಂದಿಗೆ ವಿಷಯವು ರಾಜಕೀಯ ತಿರುವು ಪಡೆದುಕೊಂಡಿತು. ಮಾಜಿ ಶಾಸಕ ಸಂಜಯ್ ದಾಸ್ ಬರ್ಮಾ ಮಾತನಾಡಿ, ಬಿಜೆಪಿ ಸರ್ಕಾರದಲ್ಲಿ ಬಿಜು ಪಟ್ನಾಯಕ್‌ಗೆ ಅಗೌರವದ ಘಟನೆಗಳು ಹೆಚ್ಚುತ್ತಿವೆ ಎಂದು ಆರೋಪಿಸಿದರು.

ತಪ್ಪಿತಸ್ಥರನ್ನು ಕೂಡಲೇ ಬಂಧಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಎಂದು ಬಿಜೆಡಿ ಆಗ್ರಹಿಸಿದೆ. ಸಂಜೆ ಭುವನೇಶ್ವರ ವಿಮಾನ ನಿಲ್ದಾಣದ ಬಳಿಯ ಬಿಜು ಪಟ್ನಾಯಕ್ ಅವರ ಪ್ರತಿಮೆ ಬಳಿ ಧರಣಿ ನಡೆಸಲು ಪಕ್ಷ ಯೋಜಿಸಿದೆ.

● 15ನೇ ಸಾರ್ವತ್ರಿಕ ಚುನಾವಣೆಗೆ ನಾಮ ಪತ್ರ ಸಲ್ಲಿಸಲು ಏ.23 ಕಡೆಯ ದಿನ ● ಭಾರಿ ಪೈಪೋಟಿ

# ಮೇ 3ಕ್ಕೆ ಸಿಂಗಪುರದ ಸಾರ್ವತ್ರಿಕ ಚುನಾವಣೆ: ಭಾರತೀಯರಿಗೂ ಟಿಕೆಟ್ ಭರವಸೆ

**ಸಿಂಗಾಪುರ:** ಮೇ 3ಕ್ಕೆ ಸಿಂಗಾಪುರದ ಸಾರ್ವತ್ರಿಕ ಚುನಾವಣೆ ನಿಗದಿಯಾಗಿದೆ. 15ನೇ ಸಾರ್ವತ್ರಿಕ ಚುನಾವಣೆಗೆ ನಾಮಪತ್ರ ಸಲ್ಲಿಸಲು ಏಪ್ರಿಲ್ 23 ಕಡೆಯ ದಿನವಾಗಿದ್ದು ಭಾರತೀಯ ಮೂಲದವರಾದ ಸಿಂಗಾಪುರ ನಿವಾಸಿಗಳಲ್ಲಿ ಭಾರಿ ಪೈಪೋಟಿ ನಡೆದಿದೆ.

ಸಿಂಗಪುರ ಪ್ರಧಾನಿ ಲಾರೆನ್ಸ್ ವಾಂಗ್ ಅವರ ಸಲಹೆ ಮೇರೆಗೆ ಇಂದು ಆ ದೇಶದ ಅಧ್ಯಕ್ಷರಾದ ಥಾರ್ಮನ್ ಷಣ್ಮುಗಂ ಅವರು ಸಂಸತ್ ಅನ್ನು ವಿಸರ್ಜಿಸಿ ಆದೇಶ ಹೊರಡಿಸಿದರು. ಈ ಹಿನ್ನೆಲೆ ಚುನಾವಣಾ ಆಯೋಗ ಸಾರ್ವತ್ರಿಕ ಚುನಾವಣೆಯನ್ನು ಘೋಷಣೆ ಮಾಡಿದೆ.

ಪ್ರಧಾನ ಮಂತ್ರಿ ಲಾರೆನ್ಸ್ ವೊಂಗ್ ಅವರ ನಾಯಕತ್ವಕ್ಕೆ ಈ ಚುನಾವಣೆ ಒಂದು ಪರೀಕ್ಷೆಯಾಗಿದೆ.

ಅಮೆರಿಕದ ತೆರಿಗೆ ನೀತಿಗಳಿಂದಾಗಿ ಜಾಗತಿಕ ಆರ್ಥಿಕತೆಯು ತಲ್ಲಣಗೊಂಡಿದೆ. ಈ ಹಿನ್ನೆಲೆಯಲ್ಲಿ ಸಿಂಗಾಪುರದ ಚುನಾವಣೆ ಮಹತ್ವ ಪಡೆದುಕೊಂಡಿದೆ. ಲೀ ಕುವಾನ್ ಯೂ ಅವರ ಪುತ್ರ ಲೀ ಸಿಯೆನ್ ಲೂಂಗ್ ಅವರಿಂದ ವೊಂಗ್ ಅಧಿಕಾರ ವಹಿಸಿಕೊಂಡ ನಂತರ ಆಡಳಿತಾರೂಢ ಪೀಪಲ್ಸ್ ಆಕ್ಷನ್ ಪಾರ್ಟಿ (ಪಿಎಪಿ) ಪಕ್ಷವು ಮೊದಲ ಬಾರಿಗೆ ಚುನಾವಣೆಯನ್ನು ಎದುರಿಸುತ್ತಿದೆ.

ಪಿಎಪಿ ಪಕ್ಷವು 1959 ರಿಂದ ಅಧಿಕಾರದಲ್ಲಿದೆ. ಇದು ಜಗತ್ತಿನಲ್ಲೇ ಅತಿ ಹೆಚ್ಚು ಕಾಲ ಆಡಳಿತ ನಡೆಸಿದ ರಾಜಕೀಯ ಪಕ್ಷವಾಗಿದೆ.1965 ರಲ್ಲಿ ಸಂಪೂರ್ಣ ಸ್ವಾತಂತ್ರ್ಯ ಘೋಷಿಸಿಕೊಂಡ ಸಿಂಗಪುರ 'ಪಾರ್ಲಿಮೆಂಟ್ ಆಫ್ ಸಿಂಗಪುರ' ಎಂಬ ಏಕಶಾಸನಸಭೆಯನ್ನು



ಅಳವಡಿಸಿಕೊಂಡಿದೆ. 104 ಸದಸ್ಯ ಬಲವನ್ನು ಸಿಂಗಪುರ ಪಾರ್ಲಿಮೆಂಟ್ ಹೊಂದಿದೆ. 96 ಸ್ಥಾನಗಳಿಗೆ ಮಾತ್ರ ಅಲ್ಲಿ ಐದು ವರ್ಷಕ್ಕೊಮ್ಮೆ ಸಾರ್ವತ್ರಿಕ ಚುನಾವಣೆ ನಡೆಯುತ್ತದೆ.

ಎಸ್‌ಎಂಯುನ ಟಾನ್ ಪ್ರಕಾರ, ಮಿಲೇನಿಯಲ್ ಮತ್ತು ಡಬ್ಲ್ಯುಪಿ ಮತದಾರರು ಸಂಸತ್ತಿನಲ್ಲಿ ವಿರೋಧ ಪಕ್ಷವನ್ನು ಬೆಂಬಲಿಸಲು ಸಿದ್ಧರಿದ್ದಾರೆ. 2020 ರಲ್ಲಿ ವಿರೋಧ ಪಕ್ಷವಾದ ವರ್ಕರ್ಸ್ ಪಾರ್ಟಿ (ಡಬ್ಲ್ಯುಪಿ) ಐತಿಹಾಸಿಕ ಗೆಲುವು ಸಾಧಿಸಿತ್ತು. 93 ಸ್ಥಾನಗಳಲ್ಲಿ 10 ಸ್ಥಾನಗಳನ್ನು ಗೆದ್ದುಕೊಂಡಿತು.

ಈ ಹಿಂದೆ ಅವರಲ್ಲಿದ್ದ ಕೇವಲ ನಾಲ್ಕು ಸ್ಥಾನಗಳಿಗೆ ಹೋಲಿಸಿದರೆ ಇದು ದೊಡ್ಡ ಜಯವಾಗಿತ್ತು.

ಹಾರ್ವರ್ಡ್ ತರಬೇತಿ ಪಡೆದ ಹಿರಿಯ ವಕೀಲ ಹರ್‌ಪ್ರೀತ್ ಸಿಂಗ್ ಅವರಂತಹ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ವರ್ಕರ್ಸ್ ಪಾರ್ಟಿ ಸಿದ್ಧವಾಗಿದೆ. ಹೀಗಾಗಿ ಈ ಬಾರಿಯ ಚುನಾವಣೆಯಲ್ಲಿ ಭಾರಿ ಪೈಪೋಟಿ ಇರಲಿದೆ.

ಈ ಚುನಾವಣೆಯಲ್ಲಿ ಒಟ್ಟು 97 ಸ್ಥಾನಗಳು ಲಭ್ಯವಿವೆ. 2020 ಕ್ಕಿಂತ ನಾಲ್ಕು ಹೆಚ್ಚು ಸ್ಥಾನಗಳು ಇವೆ. ಕೆಲವು ವಿರೋಧ ಪಕ್ಷಗಳು ಇದನ್ನು ಗಡಿಗಳನ್ನು ಮರುವಿನ್ಯಾಸ ಮಾಡುವ ಮೂಲಕ ಕಂಕ ಗೆ ಅನುಕೂಲ ಮಾಡಿಕೊಡುವ ತಂತ್ರ ಎಂದು ಟೀಕಿಸಿವೆ. ಬಹುತೇಕ ಸ್ಥಾನಗಳು ಬ್ಲಾಕ್ ಮತದಾನ ವ್ಯವಸ್ಥೆಯಿಂದ ನಿರ್ಧಾರವಾಗುತ್ತವೆ. ಇದು ಡಬ್ಲ್ಯುಪಿ ಗೆ ಅನುಕೂಲಕರವಾಗಿದೆ ಎಂದು ವಿರೋಧ ಪಕ್ಷಗಳು ಹೇಳುತ್ತವೆ. ಹರ್‌ಪ್ರೀತ್ ಸಿಂಗ್, ಯಾವ ಸರ್ಕಾರಗಳು ಹೆಚ್ಚು ನಿಯಂತ್ರಣವನ್ನು ಹೊಂದಿವೆಯೋ ಮತ್ತು ಸವಾಲುಗಳನ್ನು ಎದುರಿಸುವುದಿಲ್ಲವೋ ಅವು ಉತ್ತಮ ಸರ್ಕಾರಗಳಲ್ಲ. ಉತ್ತಮ ಸರ್ಕಾರಗಳೆಂದರೆ, ಉತ್ತಮವಾಗಲು ಪ್ರೇರೇಪಿಸಲ್ಪಡುವ ಸರ್ಕಾರಗಳು. ಸಿಂಗಾಪುರವು ಆ ಹಾದಿಯಲ್ಲಿ ಸಾಗಬೇಕಿದೆ ಎಂದು ಹೇಳಿದ್ದಾರೆ. ವಿರೋಧ ಪಕ್ಷಗಳು ಜನರ ಬೆಂಬಲವನ್ನು ಗಳಿಸುವ ಭರವಸೆಯಲ್ಲಿವೆ.


**ನಾಮ ಪತ್ರ ಸಲ್ಲಿಸಲು ಏಪ್ರಿಲ್ 23 ಕಡೆಯ ದಿನ**

### ಭಾರತೀಯರಿಗೆ ಟಿಕೆಟ್ ನೀಡುವ ಭರವಸೆ

ಈ ಬಾರಿ ನಡೆಯುವ ಚುನಾವಣೆಯಲ್ಲಿ ಭಾರತೀಯರಿಗೂ ಟಿಕೆಟ್ ನೀಡಲಾಗುತ್ತದೆ ಎಂದು ಪ್ರಧಾನಿ ಲಾರೆನ್ಸ್ ವಾಂಗ್ ಹೇಳಿದ್ದಾರೆ. ಸಿಂಗಪುರದಲ್ಲಿ ಭಾರತೀಯರು ಅಲ್ಪ ಪ್ರಮಾಣದಲ್ಲೇ ಇದ್ದರೂ, ಕೈಗಾರಿಕಾ, ಸೇವಾ ವಲಯಕ್ಕೆ ಭಾರಿ ಕೊಡುಗೆ ನೀಡಿದ್ದಾರೆ ಎಂದು ಶ್ಲಾಘಿಸಿದರು.

### ಸಿಂಗಪುರವು ಜಗತ್ತಿನ ದೊಡ್ಡ ವ್ಯಾಪಾರ ಕೇಂದ್ರಗಳಲ್ಲಿ ಒಂದು

ಸದ್ಯ ಆಡಳಿತಾರೂಢ ಪೀಪಲ್ಸ್ ಆಕ್ಷನ್ ಪಾರ್ಟಿ ಪಕ್ಷವು ದೀರ್ಘಕಾಲದಿಂದ ಸಿಂಗಾಪುರವನ್ನು ಆಳುತ್ತಿದೆ. ಡೊನಾಲ್ಡ್ ಟ್ರಂಪ್ ಅವರ ನೀತಿಗಳಿಂದಾಗಿ ಜಾಗತಿಕ ವ್ಯಾಪಾರ ವ್ಯವಸ್ಥೆಯು ತೊಂದರೆಗೆ ಸಿಲುಕಿದೆ. ಇದು ಸಿಂಗಾಪುರದ ಆರ್ಥಿಕತೆಯ ಮೇಲೆ ಪರಿಣಾಮ ಬೀರಿದೆ. ಸಿಂಗಪುರವು ಜಗತ್ತಿನ ದೊಡ್ಡ ವ್ಯಾಪಾರ ಕೇಂದ್ರಗಳಲ್ಲಿ ಒಂದು. ಟ್ರಂಪ್ ಅನೇಕ ದೇಶಗಳ ಮೇಲೆ ತೆರಿಗೆ ವಿಧಿಸಿದ್ದರಿಂದ ಜಾಗತಿಕ ಸರಬರಾಜು ಸರಪಳಿ ಅಸ್ತವ್ಯಸ್ತಗೊಂಡಿದೆ. ಇದರಿಂದಾಗಿ ಚೀನಾ ಮತ್ತು ಅಮೆರಿಕ ನಡುವೆ ವ್ಯಾಪಾರ ಯುದ್ಧ ನಡೆಯುವ ಭೀತಿ ಎದುರಾಗಿದೆ. ಸೋಮವಾರ ಸಿಂಗಾಪುರದ ವ್ಯಾಪಾರ ಸಚಿವಾಲಯವು 2025 ರ ಆರ್ಥಿಕ ಬೆಳವಣಿಗೆಯ ಮುನ್ಸೂಚನೆಯನ್ನು ಶೇ 1.0-3.0 ರಿಂದ ಶೇ 0 ಮತ್ತು 2.0 ಕ್ಕೆ ಇಳಿಸಿದೆ. ಕಳೆದ ವಾರ ಸಂಸತ್ತಿಗೆ ಎಚ್ಚರಿಕೆ ನೀಡಿದ ಪ್ರಧಾನಿ ವೊಂಗ್, ನಿಯಮಗಳ ಆಧಾರದ ಮೇಲೆ ನಡೆಯುತ್ತಿದ್ದ ಜಾಗತಿಕ ವ್ಯಾಪಾರ ಮತ್ತು ಮುಕ್ತ ವ್ಯಾಪಾರದ ಯುಗ ಮುಗಿದಿದೆ ಎಂದು ಹೇಳಿದರು. ನಾವು ಹೊರಗುಳಿಯುವ, ಕಡೆಗಣಿಸಲ್ಪಡುವ ಮತ್ತು ಹಿಂದೆ ಉಳಿಯುವ ಅಪಾಯವಿದೆ ಎಂದು ಅವರು ಅಭಿಪ್ರಾಯಪಟ್ಟರು.




# ಐಪಿಎಲ್‌ಗೆ ಮತ್ತೋರ್ವ ಕನ್ನಡಿಗ ಎಂಟ್ರಿ

ಇಂಡಿಯನ್ ಪ್ರೀಮಿಯರ್ ಲೀಗ್‌ಗೆ ಮತ್ತೋರ್ವ ಕನ್ನಡಿಗನ ಎಂಟ್ರಿಯಾಗಿದೆ. ಈ ಬಾರಿ ಎಂಟ್ರಿ ಕೊಟ್ಟಿರುವುದು ಕರ್ನಾಟಕದ ಸ್ಫೋಟಕ ಎಡಗೈ ದಾಂಡಿಗ ಸ್ಮರಣ್ ರವಿಚಂದ್ರನ್ . ಸನ್‌ರೈಸರ್ಸ್ ಹೈದರಾಬಾದ್ ಫ್ರಾಂಚೈಸಿ ಸ್ಮರಣ್ ಅವರನ್ನು ಬದಲಿ ಆಟಗಾರನಾಗಿ ತಂಡಕ್ಕೆ ಆಯ್ಕೆ ಮಾಡಿಕೊಂಡಿದೆ. ಸನ್‌ರೈಸರ್ಸ್ ಹೈದರಾಬಾದ್ ತಂಡದಲ್ಲಿದ್ದ ಆಸ್ಟ್ರೇಲಿಯಾ ಸ್ಪಿನ್ನರ್ ಆಡಂ ಝುಂಪಾ ಗಾಯಗೊಂಡಿದ್ದು, ಹೀಗಾಗಿ ಅವರು ಐಪಿಎಲ್‌ನ ಮುಂದಿನ ಪಂದ್ಯಗಳಿಗೆ ಅಲಭ್ಯರಾಗಿದ್ದಾರೆ. ಅವರ ಬದಲಿಗೆ ಇದೀಗ ಕರ್ನಾಟಕದ ಎಡಗೈ ದಾಂಡಿಗ ಸ್ಮರಣ್ ರವಿಚಂದ್ರನ್ ಅವರನ್ನು ಸನ್‌ರೈಸರ್ಸ್ ಹೈದರಾಬಾದ್ ಫ್ರಾಂಚೈಸಿ ಆಯ್ಕೆ ಮಾಡಿದೆ. 21 ವರ್ಷದ ಸ್ಮರಣ್ ರವಿಚಂದ್ರನ್ ಕಳೆದ ವರ್ಷ ನಡೆದ ಮಹಾರಾಜ ಟಿ20 ಲೀಗ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ್ದರು. ಗುಲ್ಬರ್ಗ ಮಿಸ್ಟಿಕ್ಸ್ ಪರ ಕಣಕ್ಕಿಳಿದಿದ್ದ ಸ್ಮರಣ್ ಕೇವಲ 9 ಇನ್ನಿಂಗ್ಸ್‌ಗಳಿಂದ 43.14 ರ ಸರಾಸರಿಯಲ್ಲಿ 302 ರನ್ ಬಾರಿಸಿದ್ದರು. ಅದು ಸಹ 145.19 ರ ಅದ್ಭುತ ಸ್ಟ್ರೈಕ್ ರೇಟ್‌ನಲ್ಲಿ ಎಂಬುದು ವಿಶೇಷ. ಅಲ್ಲದೆ 2024ರ ಮಹಾರಾಜ ಟಿ20 ಟೂರ್ನಿಯಲ್ಲಿ ಒಂದು ಶತಕ ಹಾಗೂ 2 ಅರ್ಧಶತಕಗಳನ್ನು ಸಹ ಬಾರಿಸಿ ಮಿಂಚಿದ್ದಾರೆ.

ಹಾಗೆಯೇ ಕರ್ನಾಟಕದ ಪರ ಆಡಿದ 10 ಲಿಸ್ಟ್ ಎ ಪಂದ್ಯಗಳಲ್ಲಿ 72.16 ಸರಾಸರಿಯಲ್ಲಿ 322 ರನ್ ಹಾಗೂ 6 ಟಿ20 ಪಂದ್ಯಗಳಲ್ಲಿ 34 ಸರಾಸರಿಯಲ್ಲಿ 170 ರನ್ ಕಲೆಹಾಕಿದ್ದಾರೆ. ಇನ್ನು ಕರ್ನಾಟಕ ಪರ ಏಳು ಪ್ರಥಮ ದರ್ಜೆ ಪಂದ್ಯಗಳನ್ನು ಆಡಿರುವ ಸ್ಮರಣ್ ರವಿಚಂದ್ರನ್ 64.50 ಸರಾಸರಿಯಲ್ಲಿ 516 ರನ್ ಗಳಿಸಿದ್ದಾರೆ. ಈ ವರ್ಷದ ಆರಂಭದಲ್ಲಿ ಅವರು ಪಂಜಾಬ್ ಮತ್ತು ಹರಿಯಾಣ ವಿರುದ್ಧ ಸತತ ಶತಕಗಳನ್ನು ಸಿಡಿಸಿ ಮಿಂಚಿದ್ದರು.



# ಇತಿಹಾಸ ಸೃಷ್ಟಿಸಿದ ಪಂಜಾಬ್ ಕಿಂಗ್ಸ್!

## ಕೆಕೆಆರ್ ವಿರುದ್ಧ 112 ರನ್‌ಗಳ ಗುರಿಯನ್ನು ಡಿಫೆಂಡ್ ಮಾಡಿ ಗೆದ್ದ ಶ್ರೇಯಸ್ ಪಡೆ



**4 ವಿಕೆಟ್ ಪಡೆದ ಚಹಲ್**

ಐಪಿಎಲ್‌ನ 31ನೇ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಹೀನಾಯವಾಗಿ ಸೋಲು ಕಂಡಿದೆ. ಪಂಜಾಬ್ ಕಿಂಗ್ಸ್ ನೀಡಿದ್ದ 112 ರನ್‌ಗಳ ಸುಲಭದ ಗುರಿ ಬೆನ್ನಟ್ಟಲಾಗದೇ ಕೋಲ್ಕತ್ತಾ ನೈಟ್ ರೈಡರ್ಸ್ ತಂಡ 15.1 ಓವರ್‌ಗಳಲ್ಲಿ 95ಕ್ಕೆ ಆಲೌಟ್ ಆಗುವ ಮೂಲಕ 16 ರನ್‌ಗಳ ಹೀನಾಯ ಸೋಲು ಕಂಡಿದೆ.

112 ರನ್‌ಗಳ ಚೇಸಿಂಗ್ ವೇಳೆ ಆರಂಭದಲ್ಲೇ ಕೆಕೆಆರ್ ಆರಂಭಿಕರ ವಿಕೆಟ್ ಕಳೆದುಕೊಂಡು ಆಘಾತಕ್ಕೆ ಒಳಗಾಗಿತ್ತು. ನರೈನ್ (6) ಹಾಗೂ ಕ್ವಿಂಟನ್ ಡಿಕಾಕ್ ಕೇವಲ 2 ರನ್‌ಗಳಿಸಿ ವಿಕೆಟ್ ಒಪ್ಪಿಸಿದರು. ನಂತರ 3ನೇ ವಿಕೆಟ್‌ಗೆ ಒಂದಾದ ನಾಯಕ ರಹಾನೆ ಹಾಗೂ ಅಂಗ್‌ಕ್ರಿಸ್ ರಘುವಂಶಿ 55 ರನ್‌ಗಳ ಜೊತೆಯಾಟ ನಡೆಸಿದರು. ರಹಾನೆ 17 ಎಸೆತಗಳಲ್ಲಿ 17 ರನ್‌ಗಳಿಸಿ ಚಹಲ್ ಬೌಲಿಂಗ್‌ನಲ್ಲಿ ಎಲ್‌ಬಿಡಬ್ಲ್ಯೂ ಬಲೆಗೆ ಬಿದ್ದರು. 10 ರನ್‌ಗಳ ಅಂತರದಲ್ಲಿ ರಘುವಂಶಿ ಕೂಡ ಔಟ್ ಆದರು. ಅವರು 28 ಎಸೆತಗಳಲ್ಲಿ 5 ಬೌಂಡರಿ, 1 ಸಿಕ್ಸರ್ ಸಹಿತ 37 ರನ್‌ಗಳಿಸಿ ಚಹಲ್‌ಗೆ 2ನೇ ಬಲಿಯಾದರು. ಇವರಿಬ್ಬರು ಔಟ್ ಆಗುತ್ತಿದ್ದಂತೆ ಕೆಕೆಆರ್ ದಿಢೀರ್ ಕುಸಿತ ಕಂಡು ಸೋಲಿನತ್ತಾ ಮುಖ ಮಾಡಿತು.

23 ಕೋಟಿಯ ವೆಂಕಟೇಶ್ ಅಯ್ಯರ್ 4 ಎಸೆತಗಳಲ್ಲಿ 7 ರನ್‌ಗಳಿಸಿ ಮ್ಯಾಕ್ಸ್‌ವೆಲ್ ಬೌಲಿಂಗ್‌ನಲ್ಲಿ ಎಲ್‌ಬಿಡಬ್ಲ್ಯೂ ಬಲೆಗೆ ಬಿದ್ದರು. ಆಪತ್ಬಾಂಧವ ಎನಿಸಿಕೊಂಡಿದ್ದ ರಿಂಕು ಸಿಂಗ್ (2) ಹಾಗೂ ರಮಣ್ ದೀಪ್ ಸಿಂಗ್ (0) ಸತತ 2 ಎಸೆತಗಳಲ್ಲಿ ಚಹಲ್ ಬೌಲಿಂಗ್‌ನಲ್ಲಿ ವಿಕೆಟ್ ಒಪ್ಪಿಸಿದರು. ಹರ್ಷಿತ್ ರಾಣಾರನ್ನ ಜಾನ್ಸನ್ ಬೌಲ್ಡ್ ಮಾಡುವ ಮೂಲಕ ಪಂದ್ಯವನ್ನ ರೋಚಕ ಘಟಕ್ಕೆ ಕೊಂಡೊಯ್ದರು. ಆದರೆ ರಸೆಲ್ ಚಹಲ್ ಎಸೆದ ಅವರ ಕೊನೆಯ ಓವರ್‌ನಲ್ಲಿ 2 ಸಿಕ್ಸರ್ ಹಾಗೂ 1 ಬೌಂಡರಿ ಸಿಡಿಸಿ ಪಂದ್ಯದಲ್ಲಿ ಕೆಕೆಆರ್ ಉಳಿಯುವಂತೆ ಮಾಡಿದರು. ಆದರೆ ಆ ಓವರ್‌ನಲ್ಲಿ ರಸೆಲ್ ಸಿಂಗಲ್ ತಗೆದುಕೊಳ್ಳುವಲ್ಲಿ ವಿಫಲರಾದರು.



# ಸ್ಫೋಟಕ ಸೆಂಚುರಿ ವಿಶ್ವ ದಾಖಲೆ ಬರೆದ ಪಾಕ್ ಬ್ಯಾಟರ್

ಪಾಕಿಸ್ತಾನ್ ಸೂಪರ್ ಲೀಗ್‌ನ 5ನೇ ಪಂದ್ಯದಲ್ಲಿ ಭರ್ಜರಿ ಶತಕ ಬಾರಿಸಿ ಸಾಹಿಬ್‌ಝಾದ ಫರ್ಹಾನ್ ವಿಶ್ವ ದಾಖಲೆ ಬರೆದಿದ್ದಾರೆ. ರಾವಲ್ಪಿಂಡಿ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಇಸ್ಲಾಮಾಬಾದ್ ಯುನೈಟೆಡ್ ಹಾಗೂ ಪೇಶಾವರ್ ಝುಲ್ಮಿ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಟಾಸ್ ಗೆದ್ದ ಇಸ್ಲಾಮಾಬಾದ್ ಯುನೈಟೆಡ್ ತಂಡದ ನಾಯಕ ಶಾದಾಬ್ ಖಾನ್ ಬ್ಯಾಟಿಂಗ್ ಆಯ್ದುಕೊಂಡರು. ಅದರಂತೆ ಇನಿಂಗ್ಸ್ ಆರಂಬಿಸಿದ ಯುನೈಟೆಡ್ ತಂಡಕ್ಕೆ ಸಾಹಿಬ್‌ಝಾದ ಫರ್ಹಾನ್ ಸ್ಫೋಟಕ ಆರಂಭ ಒದಗಿಸಿದರು. ಮೊದಲ ಓವರ್‌ನಿಂದಲೇ ಬಿರುಸಿನ ಬ್ಯಾಟಿಂಗ್ ಪ್ರದರ್ಶಿಸಿದ ಫರ್ಹಾನ್ ಕೇವಲ 49 ಎಸೆತಗಳಲ್ಲಿ ಶತಕ ಪೂರೈಸಿದರು.

ಈ ಶತಕದೊಂದಿಗೆ ಒಂದೇ ವರ್ಷದಲ್ಲಿ ಟಿ20 ಕ್ರಿಕೆಟ್‌ನಲ್ಲಿ ಅತ್ಯಧಿಕ ಸೆಂಚುರಿ ಸಿಡಿಸಿದ ವಿಶ್ವ ದಾಖಲೆಯನ್ನು ಸಾಹಿಬ್‌ಝಾದ ಫರ್ಹಾನ್ ತಮ್ಮದಾಗಿಸಿಕೊಂಡರು. ಅಲ್ಲದೆ ಈ ದಾಖಲೆ ಬರೆದ ಪಾಕಿಸ್ತಾನದ ಮೊದಲ ಬ್ಯಾಟರ್ ಹಾಗೂ ವಿಶ್ವದ 5ನೇ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಇದಕ್ಕೂ ಮುನ್ನ ಕ್ರಿಸ್ ಗೇಲ್ (2011), ವಿರಾಟ್ ಕೊಹ್ಲಿ (2016), ಜೋಸ್ ಬಟ್ಲರ್ (2022), ಶುಭ್‌ಮನ್ ಗಿಲ್ (2023) ಒಂದೇ ವರ್ಷದಲ್ಲಿ 4 ಟಿ20 ಶತಕ ಬಾರಿಸಿ ವಿಶ್ವ ದಾಖಲೆ ಬರೆದಿದ್ದರು. ಇದೀಗ ಈ ದಾಖಲೆಯನ್ನು ಸರಿಗಟ್ಟುವ ಮೂಲಕ ಸಾಹಿಬ್‌ಝಾದ ಫರ್ಹಾನ್ ಈ ಸಾಧನೆ ಮಾಡಿದ ಪಾಕಿಸ್ತಾನದ ಮೊದಲ ಬ್ಯಾಟರ್ ಎನಿಸಿಕೊಂಡಿದ್ದಾರೆ. ಸಾಹಿಬ್‌ಝಾದ ಫರ್ಹಾನ್ ಈ ವರ್ಷ ಒಟ್ಟು 4 ಟಿ20 ಶತಕಗಳನ್ನು ಬಾರಿಸಿದ್ದಾರೆ. ಫರ್ಹಾನ್ ಬ್ಯಾಟ್‌ನಿಂದ ಈ 4 ಸೆಂಚುರಿಗಳು ಮೂಡಿಬಂದಿರುವುದು ಕೇವಲ 9 ಇನಿಂಗ್ಸ್‌ಗಳಲ್ಲಿ ಎಂಬುದೇ ವಿಶೇಷ. ಇನ್ನು ರಾವಲ್ಪಿಂಡಿಯಲ್ಲಿ ಬಾರಿಸಿದ ಶತಕದ ನೆರವಿನಿಂದ ಇಸ್ಲಾಮಾಬಾದ್ ಯುನೈಟೆಡ್ ತಂಡ 20 ಓವರ್‌ಗಳಲ್ಲಿ 243 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಪೇಶಾವರ ಝುಲ್ಮಿ ತಂಡವು 141 ರನ್‌ಗಳಿಗೆ ಆಲೌಟ್ ಆಗಿದೆ.

# 30 ಪಂದ್ಯ ಪೂರ್ಣ

## ಪ್ಲೇಆಫ್‌ಗೇರಲು ಯಾವ ತಂಡ ಎಷ್ಟು ಪಂದ್ಯ ಗೆಲ್ಲಬೇಕು

**ಗುಜರಾತ್ ಟೈಟಾನ್ಸ್:** ಶುಭ್‌ಮನ್ ಗಿಲ್ ಮುಂದಾಳತ್ವದ ಗುಜರಾತ್ ಟೈಟಾನ್ಸ್ ತಂಡವು 6 ಪಂದ್ಯಗಳಲ್ಲಿ 4 ರಲ್ಲಿ ಜಯ ಸಾಧಿಸಿ ಅಂಕ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿದೆ. ಜಿಟಿ ಪಡೆಗೆ ಇನ್ನುಳಿದಿರುವುದು ಕೇವಲ 8 ಮ್ಯಾಚ್‌ಗಳು ಮಾತ್ರ. ಈ 8 ಪಂದ್ಯಗಳಲ್ಲಿ 4 ರಲ್ಲಿ ಜಯ ಸಾಧಿಸಿದರೆ 16 ಅಂಕಗಳನ್ನು ಪಡೆದು ಮುಂದಿನ ಹಂತಕ್ಕೇರಬಹುದು.


**ಡೆಲ್ಲಿ ಕ್ಯಾಪಿಟಲ್ಸ್:** ಅಕ್ಷರ್ ಪಟೇಲ್ ನಾಯಕತ್ವದ ಡೆಲ್ಲಿ ಕ್ಯಾಪಿಟಲ್ಸ್ ತಂಡವು 5 ಪಂದ್ಯಗಳನ್ನಾಡಿದ್ದು, ಈ ವೇಳೆ 4 ಮ್ಯಾಚ್‌ಗಳಲ್ಲಿ ಜಯ ಸಾಧಿಸಿದೆ. ಹೀಗಾಗಿ ಮುಂದಿನ 9 ಪಂದ್ಯಗಳಲ್ಲಿ 4 ರಲ್ಲಿ ಜಯ ಸಾಧಿಸಿದರೆ ಡೆಲ್ಲಿ ಕ್ಯಾಪಿಟಲ್ಸ್ ತಂಡವು 16 ಅಂಕಗಳೊಂದಿಗೆ ಪ್ಲೇಆಫ್ ಆಡುವುದನ್ನು ಬಹುತೇಕ ಖಚಿತಪಡಿಸಿಕೊಳ್ಳಲಿದೆ.

**ರಾಯಲ್ ಚಾಲೆಂಜರ್ಸ್ ಬೆಂಗಳೂರು:** ರಜತ್ ಪಾಟಿದಾರ್ ಸಾರಥ್ಯದಲ್ಲಿ ಕಣಕ್ಕಿಳಿಯುತ್ತಿರುವ ಆರ್‌ಸಿಬಿ ತಂಡವು 6 ಪಂದ್ಯಗಳಲ್ಲಿ 4 ರಲ್ಲಿ ಗೆಲುವು ದಾಖಲಿಸಿದೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಇನ್ನೂ 8 ಪಂದ್ಯಗಳಿದ್ದು, ಈ ಮ್ಯಾಚ್‌ಗಳಲ್ಲಿ 4 ಜಯ ಸಾಧಿಸಿದರೆ ಪ್ಲೇಆಫ್ ಹಂತಕ್ಕೇರಲಿದೆ.

**ಲಕ್ನೋ ಸೂಪರ್ ಜೈಂಟ್ಸ್:** ರಿಷಭ್ ಪಂತ್ ನೇತೃತ್ವದಲ್ಲಿ ಕಣಕ್ಕಿಳಿಯುತ್ತಿರುವ ಲಕ್ನೋ ಸೂಪರ್ ಜೈಂಟ್ಸ್ ತಂಡವು ಆಡಿದ 7 ಪಂದ್ಯಗಳಲ್ಲಿ 4 ರಲ್ಲಿ ಗೆಲುವು ಸಾಧಿಸಿದೆ. ಇನ್ನುಳಿದ 7 ಪಂದ್ಯಗಳಲ್ಲಿ 4 ರಲ್ಲಿ ಗೆಲುವು ಸಾಧಿಸಿದರೆ, 16 ಅಂಕಗಳೊಂದಿಗೆ ಪ್ಲೇಆಫ್‌ಗೇರಲಿದೆ.

**ಕೊಲ್ಕತ್ತಾ ನೈಟ್ ರೈಡರ್ಸ್:** ಅಂಜಿಕ್ಯ ರಹಾನೆ ನಾಯಕತ್ವದಲ್ಲಿ ಕಣಕ್ಕಿಳಿಯುತ್ತಿರುವ ಕೆಕೆಆರ್ ತಂಡವು ಈವರೆಗೆ ಆಡಿದ 6 ಪಂದ್ಯಗಳಲ್ಲಿ 3 ರಲ್ಲಿ ಜಯ ಸಾಧಿಸಿದೆ. ಇನ್ನುಳಿದ 8 ಪಂದ್ಯಗಳಲ್ಲಿ 5 ರಲ್ಲಿ ಜಯ ಸಾಧಿಸಿದರೆ 16 ಅಂಕಗಳನ್ನು ಪಡೆದುಕೊಳ್ಳಬಹುದು. ಈ ಮೂಲಕ ಟಾಪ್-4 ನಲ್ಲಿ ಕಾಣಿಸಿಕೊಳ್ಳಬಹುದು.

**ಪಂಜಾಬ್ ಕಿಂಗ್ಸ್:** ಶ್ರೇಯಸ್ ಅಯ್ಯರ್ ಮುಂದಾಳತ್ವದಲ್ಲಿ ಕಣಕ್ಕಿಳಿಯುತ್ತಿರುವ ಪಂಜಾಬ್ ಕಿಂಗ್ಸ್ 5 ಪಂದ್ಯಗಳಲ್ಲಿ ಮೂರರಲ್ಲಿ ಜಯ ಸಾಧಿಸಿದೆ. ಇನ್ನುಳಿದಿರುವ 9 ಮ್ಯಾಚ್‌ಗಳಲ್ಲಿ 5 ಗೆಲುವು ದಾಖಲಿಸಿದರೆ, 16 ಅಂಕಗಳೊಂದಿಗೆ ಪ್ಲೇಆಫ್‌ಗೆ ಪ್ರವೇಶಿಸಲಿದೆ.



**ಜಿಟಿ ತಂಡ ಅಗ್ರಸ್ಥಾನ**

**ರಾಜಸ್ಥಾನ್ ರಾಯಲ್ಸ್:** ಸಂಜು ಸ್ಯಾಮ್ಸನ್ ನಾಯಕತ್ವದಲ್ಲಿ ಕಣಕ್ಕಿಳಿಯುತ್ತಿರುವ ರಾಜಸ್ಥಾನ್ ರಾಯಲ್ಸ್ ತಂಡವು 6 ಪಂದ್ಯಗಳಲ್ಲಿ 2 ಗೆಲುವು ದಾಖಲಿಸಿದೆ. ಆರ್ ಆರ್ ತಂಡಕ್ಕೆ ಇನ್ನೂ 8 ಪಂದ್ಯಗಳಿದ್ದು, ಈ ಮ್ಯಾಚ್‌ಗಳಲ್ಲಿ 6 ಜಯ ಸಾಧಿಸಿದರೆ ಪ್ಲೇಆಫ್‌ಗೆ ಪ್ರವೇಶಿಸಬಹುದು.

**ಮುಂಬೈ ಇಂಡಿಯನ್ಸ್:** ಹಾರ್ದಿಕ್ ಪಾಂಡ್ಯ ಮುಂದಾಳತ್ವದ ಮುಂಬೈ ಇಂಡಿಯನ್ಸ್ ತಂಡವು ಈವರೆಗೆ 6 ಪಂದ್ಯಗಳನ್ನಾಡಿದ್ದು, ಈ ವೇಳೆ 2 ಜಯ ಸಾಧಿಸಿದೆ. ಇನ್ನುಳಿದ 8 ಪಂದ್ಯಗಳಲ್ಲಿ 6 ಗೆಲುವು ದಾಖಲಿಸಿದರೆ 16 ಅಂಕಗಳೊಂದಿಗೆ ಪ್ಲೇಆಫ್ ಹಂತಕ್ಕೇರಬಹುದು.

**ಸನ್‌ರೈಸರ್ಸ್ ಹೈದರಾಬಾದ್:** ಪ್ಯಾಟ್ ಕಮಿನ್ಸ್ ಸಾರಥ್ಯದಲ್ಲಿ ಕಣಕ್ಕಿಳಿಯುತ್ತಿರುವ ಸನ್‌ರೈಸರ್ಸ್ ಹೈದರಾಬಾದ್ ತಂಡವು ಈವರೆಗೆ ಆಡಿದ 6 ಪಂದ್ಯಗಳಲ್ಲಿ ಗೆದ್ದಿರುವುದು 2 ಮ್ಯಾಚ್ ಮಾತ್ರ. ಇನ್ನುಳಿದ 8 ಪಂದ್ಯಗಳಲ್ಲಿ ಎಸ್‌ಆರ್‌ಹೆಚ್ ತಂಡ 6 ಗೆಲುವು ದಾಖಲಿಸಿದರೆ ಪ್ಲೇಆಫ್‌ಗೆ ಪ್ರವೇಶಿಸಬಹುದು.


**ಚೆನ್ನೈ ಸೂಪರ್ ಕಿಂಗ್ಸ್:** ಮಹೇಂದ್ರ ಸಿಂಗ್ ಧೋನಿ ನಾಯಕತ್ವದ ಚೆನ್ನೈ ಸೂಪರ್ ಕಿಂಗ್ಸ್ ತಂಡವು ಆಡಿದ 7 ಪಂದ್ಯಗಳಲ್ಲಿ ಗೆದ್ದಿರುವುದು ಕೇವಲ 2 ಪಂದ್ಯಗಳಲ್ಲಿ ಮಾತ್ರ. ಸಿಎಸ್‌ಕೆ ತಂಡಕ್ಕೆ ಇನ್ನೂ 7 ಪಂದ್ಯಗಳಿದ್ದು, ಈ ಮ್ಯಾಚ್‌ಗಳಲ್ಲಿ 6 ಗೆಲುವು ದಾಖಲಿಸಿದರೆ ಪ್ಲೇಆಫ್‌ಗೆ ಅರ್ಹತೆ ಪಡೆಯಬಹುದು.

# ಕುಬೇರ ಚಿತ್ರದ ಪೋಸ್ಟರ್ ಔಟ್

**ಧನುಷ್ ಸಿನಿಮಾ ಬಗ್ಗೆ ಸಿಕ್ತು ಅಪ್‌ಡೇಟ್**

ತಮಿಳಿನ ನಟ ಧನುಷ್ ‘ಕುಬೇರ’ ಸಿನಿಮಾ ರಿಲೀಸ್‌ಗೆ ಎದುರು ನೋಡ್ತಿದ್ದಾರೆ. ಸದ್ಯ ಈ ಸಿನಿಮಾದ ಪೋಸ್ಟರ್‌ವೊಂದು ರಿಲೀಸ್ ಆಗಿದೆ. ಈ ಚಿತ್ರದ ಮೊದಲ ಸಾಂಗ್ ರಿಲೀಸ್ ಬಗ್ಗೆ ಚಿತ್ರತಂಡ ಬಿಗ್ ಅಪ್‌ಡೇಟ್‌ವೊಂದು ಕೊಟ್ಟಿದೆ. ಧನುಷ್, ರಶ್ಮಿಕಾ ಮಂದಣ್ಣ, ನಾಗಾರ್ಜುನ ಅಕ್ಕಿನೇನಿ ನಟನೆಯ ‘ಕುಬೇರ’ ಸಿನಿಮಾದ ಮೊದಲ ಹಾಡನ್ನು ಏ.20ರಂದು ರಿಲೀಸ್ ಮಾಡೋದಾಗಿ ಚಿತ್ರತಂಡ ತಿಳಿಸಿದೆ. ಧನುಷ್ ನಟನೆಯ ಜೊತೆ ಡ್ಯಾನ್ಸ್‌ನಲ್ಲಿಯೂ ಮುಂದು. ಹಾಗಾಗಿ ಅವರು ಸಖತ್ ಮಾಸ್ ಮತ್ತು ಕ್ಲಾಸ್ ಆಗಿ ಡ್ಯಾನ್ಸ್ ಮಾಡಿದ್ದಾರೆ ಎಂಬುದು ಪೋಸ್ಟರ್ ಲುಕ್‌ನಿಂದ ಸುಳಿವು ಸಿಕ್ಕಿದೆ. ಸಾಂಗ್ ನೋಡಲು ಫ್ಯಾನ್ಸ್ ಕಾತರದಿಂದ ಕಾಯುತ್ತಿದ್ದಾರೆ. ಈಗಾಗಲೇ ಧನುಷ್ ಭಿಕ್ಷುಕನ ರೋಲ್‌ನಲ್ಲಿ ಕಾಣಿಸಿಕೊಂಡಿರುವ ಪೋಸ್ಟರ್ ಚಿತ್ರತಂಡ ರಿಲೀಸ್ ಮಾಡಿತ್ತು. ನಿಜಕ್ಕೂ ಸಿನಿಮಾದಲ್ಲಿ ಧನುಷ್ ಭಿಕ್ಷುಕನಾ ಅಥವಾ ಚಿತ್ರದ ಟೈಟಲ್ ತಕ್ಕಂತೆ ‘ಕುಬೇರ’ನಾ ಎಂಬುದನ್ನು ಸಿನಿಮಾ ರಿಲೀಸ್ ಆಗುವವರೆಗೂ ಕಾಯಬೇಕಿದೆ.

‘ಪುಷ್ಪ 2’ ಸಕ್ಸಸ್ ಬಳಿಕ ರಶ್ಮಿಕಾ ಮಂದಣ್ಣ ನಟಿಸಿರುವ ‘ಕುಬೇರ’ ಸಿನಿಮಾ ಮೇಲೆ ಫ್ಯಾನ್ಸ್‌ಗೆ ಬೆಟ್ಟದಷ್ಟು ನಿರೀಕ್ಷೆಯಿದೆ. ಜೂನ್ 20ರಂದು ಬಹುಭಾಷೆಗಳಲ್ಲಿ ಸಿನಿಮಾ ರಿಲೀಸ್ ಆಗಲಿದೆ.





# ಶ್ರೀಲೀಲಾ ಜೊತೆ ಹೋಲಿಕೆ ನಿಧಿ ತಿರುಗೇಟು

**ನನ್ನ ಬಗ್ಗೆ ನೀವು ಚಿಂತಿಸಬೇಡಿ**

ತೆಲುಗು ನಟಿ ನಿಧಿ ಅಗರ್ವಾಲ್ ಅವರು ಪ್ರಭಾಸ್ ಜೊತೆಗಿನ ‘ದಿ ರಾಜಾ ಸಾಬ್’ ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಡ್ಯಾನ್ಸಿಂಗ್ ಕ್ವೀನ್ ಶ್ರೀಲೀಲಾ ಜೊತೆ ಹೋಲಿಕೆ ಮಾಡಿದ ನೆಟ್ಟಿಗನಿಗೆ ಖಡಕ್ ಆಗಿ ಸೋಷಿಯಲ್ ಮೀಡಿಯಾದಲ್ಲಿ ತಿರುಗೇಟು ನೀಡಿದ್ದಾರೆ.

‘ಕಿಸ್ಸಿಕ್’ ಬೆಡಗಿ ಶ್ರೀಲೀಲಾ ಜೊತೆ ಹೋಲಿಕೆ ಮಾಡಿ ನಿಧಿ ಅವರನ್ನು ಕೆಣಕಿದ್ದಾರೆ. 2019ರಲ್ಲಿ ‘ಇಸ್ಮಾಟ್ ಶಂಕರ್’ ಬಳಿಕ ನಿಧಿ ಎಷ್ಟು ಸಿನಿಮಾ ಮಾಡಿದ್ದಾರೆ. ಆದರೆ ಅದೇ 2021ರಲ್ಲಿ ಬಂದ ಶ್ರೀಲೀಲಾ 20 ಸಿನಿಮಾಗಳಲ್ಲಿ ನಟಿಸಿದ್ದಾರೆ ಎಂದು ನೆಟ್ಟಿಗನೊಬ್ಬ ಎಕ್ಸ್ ಖಾತೆಯಲ್ಲಿ ಕಾಮೆಂಟ್ ಮಾಡಿದ್ದಾನೆ. ಅದಕ್ಕೆ ನಿಧಿ ತಕ್ಕ ಉತ್ತರ ಕೊಟ್ಟಿದ್ದಾರೆ.

‘ಇಸ್ಮಾರ್ಟ್ ಶಂಕರ್’ ಚಿತ್ರ ಆದ್ಮೇಲೆ ‘ಹೀರೋ’ ಸಿನಿಮಾ ಮಾಡಿದ್ದೀನಿ. ಬಳಿಕ 3 ತಮಿಳು ಸಿನಿಮಾದಲ್ಲಿ ನಟಿಸಿದ್ದೇನೆ. ನಾನು ನನ್ನ ಸಮಯ ತೆಗೆದುಕೊಂಡು ಒಳ್ಳೆಯ ಸ್ಕ್ರಿಪ್ಟ್ ಎಂದು ನನಗೆ ಅನಿಸುವ ಚಿತ್ರಗಳಿಗೆ ಸಹಿ ಹಾಕುತ್ತೇನೆ. ಕೆಲವೊಮ್ಮೆ ನನ್ನ ಆಯ್ಕೆ ತಪ್ಪಾಗಿರಬಹುದು. ಆದರೆ ನನ್ನ ಉದ್ದೇಶ ಒಳ್ಳೆಯ ಸಿನಿಮಾದ ಭಾಗವಾಗುವುದು. ನನಗೆ ಯಾವುದೇ ಆತುರವಿಲ್ಲ. ನಾನು ಇಲ್ಲೇ ಉಳಿಯಬೇಕು ಎಂದುಕೊಂಡಿದ್ದೇನೆ ಸಹೋದರ. ನನ್ನ ಬಗ್ಗೆ ನೀವು ಚಿಂತಿಸಬೇಡಿ ಎಂದು ನಯವಾಗಿ ತಿರುಗೇಟು ಕೊಟ್ಟಿದ್ದಾರೆ ನಿಧಿ ಅಗರ್ವಾಲ್. ನಟಿಯ ನಡೆಗೆ ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ.

ಅಂದಹಾಗೆ, ಪ್ರಭಾಸ್ ನಟನೆಯ ‘ದಿ ರಾಜಾ ಸಾಬ್’, ಪವನ್ ಕಲ್ಯಾಣ್ ಜೊತೆ ‘ಹರಿಹರ ವೀರ ಮಲ್ಲು’ ಸೇರಿದಂತೆ ಹಲವು ಚಿತ್ರಗಳಲ್ಲಿ ನಿಧಿ ಬ್ಯುಸಿಯಾಗಿದ್ದಾರೆ.



# ಅದೃಷ್ಟ ಪರೀಕ್ಷೆಗಿಳಿದ ರುಕ್ಮಿಣಿ ವಸಂತ್

‘ಅಮರನ್’ ಸಿನಿಮಾ ಬಳಿಕ ಶಿವಕಾರ್ತಿಕೇಯನ್ ಕೈಗೆತ್ತಿಕೊಂಡಿರುವ ಬಹುನಿರೀಕ್ಷಿತ ಪ್ರಾಜೆಕ್ಟ್ ಮದರಾಸಿ. ಆಕ್ಷನ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಈ ಚಿತ್ರದ ಗ್ಲಿಂಪ್ಸ್ ಭಾರೀ ಸದ್ದು ಮಾಡುತ್ತಿದೆ. ಈ ಚಿತ್ರಕ್ಕೆ ಎ.ಆರ್. ಮುರುಗದಾಸ್ ಆಕ್ಷನ್ ಕಟ್ ಹೇಳಿದ್ದು, ‘ಸಪ್ತ ಸಾಗರದಾಚೆ ಎಲ್ಲೋ’ ನಾಯಕಿ ರುಕ್ಮಿಣಿ ವಸಂತ್ ಅವರು ಶಿವಕಾರ್ತಿಕೇಯನ್‌ಗೆ ಜೋಡಿಯಾಗಿ ಸಾಥ್ ಕೊಟ್ಟಿದ್ದಾರೆ. ಸದ್ಯ ಚಿತ್ರದ ಶೂಟಿಂಗ್ ಭರದಿಂದ ಸಾಗುತ್ತಿದ್ದು, ಇದೀಗ ಚಿತ್ರತಂಡ ‘ಮದರಾಸಿ’ ಸಿನಿಮಾದ ಬಿಡುಗಡೆ ದಿನಾಂಕ ಘೋಷಣೆ ಮಾಡಿದೆ. ಈ ವರ್ಷ ಸೆಪ್ಟೆಂಬರ್ 5ರಂದು ‘ಮದರಾಸಿ’ ಸಿನಿಮಾ ರಿಲೀಸ್ ಆಗಲಿದೆ. ಸ್ಪೆಷಲ್ ಪೋಸ್ಟರ್ ಮೂಲಕ ಚಿತ್ರತಂಡ ಬಿಡುಗಡೆ ದಿನಾಂಕ ರಿವೀಲ್ ಮಾಡಿದೆ. ಪೋಸ್ಟರ್‌ನಲ್ಲಿ ಶಿವಕಾರ್ತಿಕೇಯನ್ ಸಖತ್ ರಗಡ್ ಆಗಿ ಕಾಣಿಸಿಕೊಂಡಿದ್ದಾರೆ. ವಿದ್ಯುತ್ ಜಮ್ವಾಲ್ ಖಳನಾಯಕನಾಗಿ ಅಬ್ಬರಿಸಿದ್ದಾರೆ. ಬಿಜು ಮೆನನ್, ಶಬೀರ್ ಮತ್ತು ವಿಕ್ರಾಂತ್ ಹಲವರು ತಾರಾಬಳಗದಲ್ಲಿದ್ದಾರೆ. ಶ್ರೀಕರ್ ಪ್ರಸಾದ್ ಸಂಕಲನ, ಅರುಣ್ ವೆಂಜರಮೂಡು ಕಲಾ ನಿರ್ದೇಶನ, ಕೆವಿನ್ ಮಾಸ್ಟರ್ ಮತ್ತು ದಿಲೀಪ್ ಮಾಸ್ಟರ್ ಆಕ್ಷನ್ ಚಿತ್ರಕ್ಕಿದೆ. ಎನ್. ಶ್ರೀಲಕ್ಷ್ಮಿ ಪ್ರಸಾದ್ ಶ್ರೀ ಲಕ್ಷ್ಮಿ ಮೂವೀಸ್ ಬ್ಯಾನರ್ ಅಡಿಯಲ್ಲಿ ಚಿತ್ರ ನಿರ್ಮಾಣ ಮಾಡುತ್ತಿದ್ದು, ಪ್ಯಾನ್ ಇಂಡಿಯಾ ಲೆವೆಲ್‌ನಲ್ಲಿ ‘ಮದರಾಸಿ’ ಸಿನಿಮಾ ಮೂಡಿ ಬರುತ್ತಿದೆ.



# ಶ್ರೀಲೀಲಾ ಜೊತೆ ಮಾಸ್ ಮಹಾರಾಜನ ಜಬರ್‌ದಸ್ತ್ ಡ್ಯಾನ್ಸ್

ಮಾಸ್ ಮಹಾರಾಜ ರವಿ ತೇಜ ಹಾಗೂ ಶ್ರೀಲೀಲಾ ನಟನೆಯ ‘ಮಾಸ್ ಜಾತ್ರಾ’ ಸಿನಿಮಾ ರಿಲೀಸ್‌ಗೆ ಸಜ್ಜಾಗಿದೆ. ಈ ಹಿನ್ನೆಲೆ ‘ತೂ ಮೇರಾ ಲವರ್’ ಎಂಬ ಹಾಡಿಗೆ ಕಿಸ್ಸಿಕ್ ಬೆಡಗಿ ಜೊತೆ ರವಿ ತೇಜ ಸಖತ್ ಆಗಿ ಹೆಜ್ಜೆ ಹಾಕಿದ್ದಾರೆ. ‘ಧಮಾಕ’ ಸಿನಿಮಾ ಬಳಿಕ ಮತ್ತೆ ‘ಮಾಸ್ ಜಾತ್ರಾ,’ ಚಿತ್ರಕ್ಕಾಗಿ ರವಿ ತೇಜ ಮತ್ತು ಶ್ರೀಲೀಲಾ ಜೊತೆಯಾಗಿದ್ದಾರೆ. ‘ತೂ ಮೇರಾ ಲವರ್’ ಎಂಬ ಹಾಡಿಗೆ ಸಖತ್ ಆಗಿ ಶ್ರೀಲೀಲಾ ಮತ್ತು ರವಿ ತೇಜ ಡ್ಯಾನ್ಸ್ ಮಾಡಿ ಧೂಳ್ ಎಬ್ಬಿಸಿದ್ದಾರೆ. ಡ್ಯಾನ್ಸಿಂದಲೇ ಹೆಚ್ಚು ಹೈಲೆಟ್ ಆಗಿರೋ ಶ್ರೀಲೀಲಾ ಅವರು ‘ಮಾಸ್ ಜಾತ್ರಾ,’ ಸಾಂಗ್‌ನಿಂದ ಮತ್ತಷ್ಟು ಸದ್ದು ಮಾಡ್ತಿದ್ದಾರೆ. ಮತ್ತೆ ರವಿ ತೇಜ ಮತ್ತು ಶ್ರೀಲೀಲಾ ಡ್ಯಾನ್ಸ್ ಮಗದೊಮ್ಮೆ ಮೋಡಿ ಮಾಡ್ತಿದೆ. ‘ಮಾಸ್ ಜಾತ್ರಾ,’ ಇದೇ ಮೇ 9ರಂದು ರಿಲೀಸ್ ಸಜ್ಜಾಗಿದೆ. ‘ಧಮಾಕ’ ಸಕ್ಸಸ್ ಬಳಿಕ ಮತ್ತೆ ಅದೇ ಜೋಡಿ ಒಂದಾಗಿರೋದ್ರಿಂದ ಈ ಸಿನಿಮಾ ಮೇಲೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.

# ಜೀವ ಬೆದರಿಕೆಗೂ ಡೋಂಟ್ ಕೇರ್!

ಬಾಲಿವುಡ್‌ನ ಸೂಪರ್ ಸ್ಟಾರ್ ಎಂದೆನಿಸಿಕೊಂಡಿರುವ ಸಲ್ಮಾನ್ ಖಾನ್‌ಗೆ ಜೀವ ಬೆದರಿಕೆಗಳು ತಪ್ಪುವಂತೆ ಕಾಣುತ್ತಿಲ್ಲ, ಜೀವ ಭಯದಲ್ಲಿಯೇ ಬದುಕುವಂತೆ ಆಗಿದೆ. ಈಗಾಗ್ಲೇ ಸುಮಾರು ಬಾರಿ ಸಲ್ಲುಗೆ ಜೀವ ಬೆದರಿಕೆ ಬಂದಿದೆ.

ಬಾಲಿವುಡ್ ನಟ ಸಲ್ಮಾನ್ ಖಾನ್‌ಗೆ ಮತ್ತೊಂದು ಜೀವ ಬೆದರಿಕೆ ಬಂದಿದೆ ಎಂಬ ಸುದ್ದಿಯ ಬೆನ್ನಲ್ಲೇ ಜಿಮ್‌ನಲ್ಲಿ ಸಖತ್ತಾಗಿ ಬೆವರಿಳಿಸುತ್ತಿರುವ ವರ್ಕೌಟ್ ಫೋಟೋಗಳನ್ನು ಹಂಚಿಕೊಂಡಿದ್ದಾರೆ. ಜಿಮ್‌ನಲ್ಲಿ ವರ್ಕೌಟ್ ಮಾಡುತ್ತಿರುವ ಫೋಟೋಗಳನ್ನು ಅಭಿಮಾನಿಗಳೊಟ್ಟಿಗೆ ಹಂಚಿಕೊಂಡಿರುವ ಸಲ್ಲು ಭಾಯ್ ಮೋಟಿವೇಷನ್ ಕೊಟ್ಟಿದ್ದಕ್ಕೆ ಧನ್ಯವಾದಗಳು ಎಂಬ ಕ್ಯಾಪ್ಷನ್ ಜೊತೆ ರಗಡ್ ಫೋಟೋಗಳನ್ನು ಶೇರ್ ಮಾಡಿದ್ದಾರೆ. ಜೀವ ಬೆದರಿಕೆ ಹಾಕಿದವರಿಗೆ ಮುಟ್ಟಿ ನೋಡಿಕೊಳ್ಳುವಂತೆ ಸಲ್ಮಾನ್ ಖಾನ್ ಫೋಟೋಗಳು, ಕ್ಯಾಪ್ಷನ್ ಮೂಲಕ ಉತ್ತರಿಸಿದ್ದಾರೆ.

ಸಲ್ಮಾನ್ ಖಾನ್ ಹಂಚಿಕೊಂಡಿರುವ ಹೊಸ ಫೋಟೋಗಳು ವೈರಲ್ ಆಗಿವೆ. ಅವರ ಫಿಟ್ನೆಸ್ ಹಾಗೂ ಸಿಕ್ಸ್ ಪ್ಯಾಕ್ ನೋಡಿ ಫ್ಯಾನ್ಸ್ ಅಂತೂ ಸೂಪರ್ ಭಾಯಿ ಜಾನ್ ಎಂದಿದ್ದಾರೆ.



**ಜಿಮ್‌ನಲ್ಲಿ ಸಲ್ಲು ಭಾಯ್ ಸಖತ್ ವರ್ಕೌಟ್!**

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966